ಸಂಪುಟ : 13 Volume ಸಂಚಿಕೆ : 220 Issue ಪುಟಗಳು : 08 Pages ಗುರುವಾರ 16 ಅಕ್ಟೋಬರ್ 2025 ₹2
RNINO:KARKAN/2011/48371
BDR/054/2026-20274
www.mallammanudi.in
mallammanudi@gmail.com
9448604450

ಬೀದರ | ಕಲಬುರಗಿ | ಯಾದಗಿರಿ | ರಾಯಚೂರು | ಬಳ್ಳಾರಿ | ವಿಜಯನಗರ | ಕೊಪ್ಪಳ & ಬಾಗಲಕೋಟೆ ಜಿಲ್ಲೆಗಳಲ್ಲಿ ಏಕಕಾಲಕ್ಕೆ ಪ್ರಕಟ

# ಮಲ್ಲಮ್ಮ ನುಡಿ

ಕನ್ನಡ ಕಿರಣ

Mallammanudi Regional News Paper
ಪ್ರಾದೇಶಿಕ ಕನ್ನಡ ದೈನಿಕ

ಸಂಪಾದಕರು: ರಮೇಶ ರೆಡ್ಡಿ

**ಬೆಳಗು**

ಒಂದು ಗ್ರಂಥಾಲಯದ ಎಲ್ಲಾ ತಿಳುವಳಿಕೆಗಳನ್ನು ತಲೆಯಲ್ಲಿರಿಸಿ ಅಹಂಕರಿಸಿ ನಡೆಯುವ ಒಬ್ಬ ವ್ಯಕ್ತಿಗಿಂತ ಒಳ್ಳೆಯ ಸ್ವಭಾವ ಮತ್ತು ನಡವಳಿಕೆಯಿರುವ ಒಬ್ಬ ಸಾಧಾರಣ ವ್ಯಕ್ತಿ ಮೇಲು

. ಸ್ವಾಮಿ ವಿವೇಕಾನಂದ .

2. 18ರಂದು ಬೃಹತ್ ಪ್ರತಿಭಟನೆ

4.ಹಿರಿಯ ಜೀವಿ 'ಆದಪ್ಪ ಅವಂಟಿ 'ಅಂಗೈಕ್ಯ

8.ಪಾನ ಅಂಗಡಿಯಲ್ಲಿ ಗುಟುಕಾ, ಸಿಗರೇಟ

# ಜನರಿಗೆ ತೊಂದರೆ ನೀಡುವ ಎಲ್ಲಾ ಸಂಘಟನೆಗಳ ವಿರುದ್ಧ ಕ್ರಮ: ಸಿಎಂ

ಮಲ್ಲಮ್ಮ ನುಡಿ ವಾರ್ತೆ

ಹಾಸನ:ಅ.15:ಆರ್.ಎಸ್.ಎಸ್ ಮಾತ್ರವಲ್ಲ ಸಾರ್ವಜನಿಕ ಸ್ಥಳಗಳಲ್ಲಿ ಜನರಿಗೆ ತೊಂದರೆ ಕೊಟ್ಟು ನಡೆಸುತ್ತಿರುವ ಎಲ್ಲಾ ಸಂಘಟನೆಗಳನ್ನು ನಿರ್ಬಂಧಿಸುವ ಬಗ್ಗೆ ಯೋಜನೆ ನಡೆದಿದೆ ಎಂದು ಮುಖ್ಯಮಂತ್ರಿ ಸಿದ್ದರಾಮಯ್ಯ ಬುಧವಾರ ಹೇಳಿದರು.

ಹೆಲಿಪ್ಯಾಡ್‌ನಲ್ಲಿ ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ಕೆಲ ಸಂಘಟನೆಗಳ ನಿರ್ಬಂಧದ ಬಗ್ಗೆ ಈಗಾಗಲೇ ತಮಿಳುನಾಡು ಸರ್ಕಾರ ಕ್ರಮ ಕೈಗೊಂಡಿದ್ದು ಅದರ ಬಗ್ಗೆ ಮಾಹಿತಿ ಪಡೆಯುತ್ತಿದ್ದೇವೆ. ಅದರ ಪರಿಶೀಲನೆ ನಡೆಸಿ ಮುಂದಿನ



ಕ್ರಮ ಕೈಗೊಳ್ಳಲಿದ್ದೇವೆ ಎಂದರು.

ಜೆಡಿಎಸ್ ಶಾಸಕರಿಂದ ಬಂದಿರುವ ಅನುದಾನ ತಾರತಮ್ಯ ಆರೋಪ ಕುರಿತು ಪ್ರತಿಕ್ರಿಯೆ ನೀಡಿದ ಸಿಎಂ, ಅವರು ಅಧಿಕಾರದಲ್ಲಿದ್ದಾಗ ಎಷ್ಟು ಅನುದಾನ ನೀಡಿದರು? ಬಿಜೆಪಿ-ಜೆಡಿಎಸ್ ಸಮ್ಮಿಶ್ರ ಸರ್ಕಾರ ಇದ್ದಾಗ ನಮ್ಮ ಶಾಸಕರಿಗೆ ಎಷ್ಟು ಹಣ ಕೊಟ್ಟರು? ಈಗ ಸುಖಾಸುಮ್ಮನೆ ಆರೋಪ ಮಾಡುವುದು ಸರಿಯಲ್ಲ. ಸುಳ್ಳು ಹೇಳಿ ಜನರನ್ನು ದಾರಿ ತಪ್ಪಿಸುತ್ತಿದ್ದಾರೆ ಎಂದು ಅಸಮಾಧಾನ ವ್ಯಕ್ತಪಡಿಸಿದರು.

ಜೆಡಿಎಸ್ ಅಧಿಕಾರದಲ್ಲಿದ್ದಾಗ

2ನೇ ಪುಟನೋಡಿ

## ಸರ್ಕಾರಿ ನೌಕರರ ತುಟ್ಟಿ ಭತ್ಯೆ ಹೆಚ್ಚಳ

ಬೆಂಗಳೂರು: ದೀಪಾವಳಿ ಹಬ್ಬದ ಸಂದರ್ಭದಲ್ಲಿ ರಾಜ್ಯದ ಸರ್ಕಾರಿ ನೌಕರರಿಗೆ ಸಿಹಿ ಸುದ್ದಿ ಸಿಕ್ಕಿದೆ. ತುಟ್ಟಿ ಭತ್ಯೆಯನ್ನು ಶೇ. 2ರಷ್ಟು ಹೆಚ್ಚಿಸಿ ರಾಜ್ಯ ಸರ್ಕಾರ ಆದೇಶ ಪ್ರಕಟಿಸಿದೆ.

ರಾಜ್ಯ ಸರ್ಕಾರಿ ನೌಕರರುಗಳಿಗೆ 1ನೇ ಜುಲೈ 2025 ರಿಂದ ಜಾರಿಗೆ ಬರುವಂತೆ ತುಟ್ಟಿಭತ್ಯೆಯ ದರಗಳನ್ನು ಪ್ರಸ್ತುತ ಮೂಲ ವೇತನದ ಶೇ.12.25 ರಿಂದ ಶೇ.14.25 ಗೆ ಏರಿಕೆ ಮಾಡಿದೆ.

ಕೇಂದ್ರ ಸರ್ಕಾರವು ತನ್ನ ನೌಕರರಿಗೆ ತುಟ್ಟಿ ಭತ್ಯೆ ಘೋಷಿಸಿದ ಬೆನ್ನಲ್ಲೇ ಸಾಮಾನ್ಯವಾಗಿ ರಾಜ್ಯ ಸರ್ಕಾರವೂ ಏರಿಕೆ ಮಾಡುತ್ತದೆ. ವಿಜಯದಶಮಿಯ ಮುನ್ನ ದಿನ ಕೇಂದ್ರ ಸರ್ಕಾರಿ ನೌಕರರಿಗೆ ಮೋದಿ ಸರ್ಕಾರ ಹೆಚ್ಚುವರಿ 3% ತುಟ್ಟಿ ಭತ್ಯೆ ನೀಡಲು ಒಪ್ಪಿಗೆ ನೀಡಿತ್ತು.

ಬೆಲೆ ಏರಿಕೆಯನ್ನು ಸರಿದೂಗಿಸಲು, ಕೇಂದ್ರ ಸರ್ಕಾರಿ ನೌಕರರಿಗೆ ಹೆಚ್ಚುವರಿ ಕಂತು ತುಟ್ಟಿಭತ್ಯೆ ಮತ್ತು ಪಿಂಚಣಿದಾರರಿಗೆ ತುಟ್ಟಿ ಪರಿಹಾರ ನೀಡಲು ಅನುಮೋದನೆ ನೀಡಿತ್ತು.

## ಮಳೆ ಹಾನಿ: ಅ.30ರೊಳಗೆ 300 ಕೋಟಿ ರೂ. ಪರಿಹಾರ ಪಾವತಿ: ಈಶ್ವರ ಖಂಡ್ರೆ



ಮಲ್ಲಮ್ಮ ನುಡಿ ವಾರ್ತೆ

ಬೀದರ, ಅ.15 : ಬೀದರ್ ಜಿಲ್ಲೆಯಲ್ಲಿ ಸೆಪ್ಟೆಂಬರ್‌ನಲ್ಲಿ ಸುರಿದ ಧಾರಾಕಾರ ಮಳೆಯಿಂದ ಆಗಿರುವ ಬೆಳೆಹಾನಿಗೆ ಮುಖ್ಯಮಂತ್ರಿಗಳು ಘೋಷಿಸಿರುವ ಪ್ರತಿ ಹೆಕ್ಟೇರ್ ಗೆ ಹೆಚ್ಚುವರಿ 8500 ರೂ. ಪರಿಹಾರವೂ ಸೇರಿದಂತೆ ಒಟ್ಟಾರೆ 300 ಕೋಟಿ ರೂ. ಬೆಳೆಹಾನಿ ಪರಿಹಾರವನ್ನು ಅ.30ರೊಳಗೆ ಪಾವತಿಸಲಾಗುವುದು ಎಂದು ಅರಣ್ಯ, ಜೀವಿಶಾಸ್ತ್ರ ಮತ್ತು ಪರಿಸರ ಹಾಗೂ ಜಿಲ್ಲಾ ಉಸ್ತುವಾರಿ ಸಚಿವ ಈಶ್ವರ ಬಿ ಖಂಡ್ರೆ ಸೂಚಿಸಿದ್ದಾರೆ.

ಅವರು ಬುಧವಾರ ಜಿಲ್ಲಾಧಿಕಾರಿಗಳ ಕಚೇರಿ ಸಭಾಂಗಣದಲ್ಲಿ ನಡೆದ ವಿಪತ್ತು ನಿರ್ವಹಣಾ ಸಭೆಯ ಅಧ್ಯಕ್ಷತೆ ವಹಿಸಿ ಮಾತನಾಡಿದರು.

ನಾಳೆ ಸಂಜೆಯೊಳಗೆ ಮಳೆ ಹಾನಿ ಪ್ರದೇಶದ ತಹಶೀಲ್ದಾರರು ಪರಿಹಾರದ ಪೋರ್ಟಲ್‌ನಲ್ಲಿ ಹಾನಿಯ ಪ್ರಮಾಣವನ್ನು ಕಡ್ಡಾಯವಾಗಿ ದಾಖಲಿಸಿ, ಪರಿಹಾರ ನೀಡಿಕೆಗೆ ತುರ್ತು ಕ್ರಮ ವಹಿಸಬೇಕು ಎಂದು ಸ್ಪಷ್ಟ ಸೂಚನೆ ನೀಡಿದರು. ಎನ್.ಡಿ.ಆರ್.ಎಫ್. ಮತ್ತು ಎಸ್.ಡಿ.ಆರ್.ಎಫ್. ನಿಯಮದಂತೆ 170 ಕೋಟಿ ರೂಪಾಯಿ ಪರಿಹಾರವನ್ನು ಈಗಾಗಲೇ ಪಾವತಿಸಲಾಗುತ್ತಿದೆ. ಅಕ್ಟೋಬರ್ 30ರೊಳಗೆ 300 ಕೋಟಿ ರೂ. ಪರಿಹಾರ ಮೊತ್ತ ಪಾವತಿಸಲಾಗುವುದು ಎಂದು ಸ್ಪಷ್ಟಪಡಿಸಿದರು.

2ನೇ ಪುಟನೋಡಿ

## ರೈತರು ಕೃಷಿ ಸಂಸ್ಕರಣಾ ಘಟಕ ತರಬೇತಿಯ ಸದುಪಯೋಗ ಪಡೆದುಕೊಳ್ಳಬೇಕು: ಸಚಿವೆ ಸೀತಾರಾಮನ್



ಮಲ್ಲಮ್ಮ ನುಡಿವಾರ್ತೆ

ಕೊಪ್ಪಳ :ಅ.15: ಕೊಪ್ಪಳ ಜಿಲ್ಲೆಯ ರೈತ ಸಹೋದರ ಮತ್ತು ಸಹೋದರಿಯರು ಕೃಷಿ ಸಂಸ್ಕರಣಾ ಘಟಕ ತರಬೇತಿ ಕೇಂದ್ರದ ಸದುಪಯೋಗವನ್ನು ಪಡೆದುಕೊಳ್ಳಬೇಕು. ಇದರ ಉದ್ದೇಶ ರೈತರನ್ನು ಆರ್ಥಿಕವಾಗಿ ಸಬಲರನ್ನಾಗಿಸುವುದರ ಜೊತೆಗೆ ಅವರು ಬೆಳೆದ ಬೆಳೆಗಳಿಗೆ ಮೌಲ್ಯವರ್ಧಿತ ಬೆಲೆ ಸಿಗಬೇಕಿದೆ ಎಂದು ಭಾರತ ಸರ್ಕಾರದ ಹಣಕಾಸು ಮತ್ತು ಕಾರ್ಪೊರೇಟ್ ವ್ಯವಹಾರಗಳ ಸಚಿವರಾದ ನಿರ್ಮಲಾ ಸೀತಾರಾಮನ್ ಹೇಳಿದರು. ಅವರು ಬುಧವಾರ ಕೃಷಿ ಮತ್ತು ಗ್ರಾಮೀಣಾಭಿವೃದ್ಧಿ ರಾಷ್ಟ್ರೀಯ ಬ್ಯಾಂಕ್ (ನಬಾರ್ಡ್)

2ನೇ ಪುಟನೋಡಿ

## 33 ಅಂಕ ಪಡೆದರೆ ಎಸ್ ಎಸ್ ಎಲ್ ಸಿ ಪಾಸ್



ಮಲ್ಲಮ್ಮ ನುಡಿ ವಾರ್ತೆ

ಬೆಂಗಳೂರು, ಅ.15: ರಾಜ್ಯದಲ್ಲಿ ಈ ವರ್ಷದಿಂದ ಎಸ್‌ಎಸ್‌ಎಲ್‌ಸಿ ಪರೀಕ್ಷೆಯಲ್ಲಿ ಶೇಕಡಾ 33 ರಷ್ಟು ಅಂಕ ಪಡೆದರೆ ಉತ್ತೀರ್ಣ ಎಂದು ಘೋಷಿಸಲು ರಾಜ್ಯ ಸರ್ಕಾರ ನಿರ್ಧರಿಸಿದೆ. ಇದು 35 ಅಂಕ ಪಡೆಯಲು ಪರದಾಡುವ ಅನೇಕ ವಿದ್ಯಾರ್ಥಿಗಳಿಗೆ ಅನುಕೂಲವಾಗಲಿದೆ.

ರಾಜ್ಯ ಸರ್ಕಾರದ ಹೊಸ ನಿಯಮ ಈ ವರ್ಷದಿಂದಲೇ ಖಾಸಗಿ ಶಾಲೆಗಳಿಗೂ ಇದು ಅನ್ವಯ ಆಗಲಿದೆ ಎಂದು ಶಾಲಾ ಶಿಕ್ಷಣ ಸಚಿವ ಮಧು ಬಂಗಾರಪ್ಪ ತಿಳಿಸಿದ್ದಾರೆ

ಸುದ್ದಿಗೋಷ್ಠಿಯಲ್ಲಿ ಮಾತನಾಡಿದ ಅವರು ಪ್ರಸಕ್ತ ವರ್ಷದಿಂದ ಶೇಕಡಾ 33 ರಷ್ಟು ಅಂಕ ಪಡೆದರೆ ಎಸ್‌ಎಸ್‌ಎಲ್‌ಸಿ ಪಾಸ್ ಎಂದು ಘೋಷಿಸಲಾಗುವುದು. 625ಕ್ಕೆ 206 ಅಂಕ ಪಡೆದರೆ ವಿದ್ಯಾರ್ಥಿಗಳು ಉತ್ತೀರ್ಣ ಆಗಲಿದ್ದಾರೆ

ಎಂದು ಮಾಹಿತಿ ನೀಡಿದ್ದಾರೆ.ಆಂತರಿಕ ಅಂಕ, ಬಾಹ್ಯ ಅಂಕ ಎರಡು ಸೇರಿ ಶೇಕಡಾ 33 ರಷ್ಟು ಅಂಕ ಪಡೆಯಬೇಕಾಗುತ್ತದೆ. ಇದರಿಂದ ಅನೇಕ ವಿದ್ಯಾರ್ಥಿಗಳಿಗೆ ಅನುಕೂಲವಾಗಲಿದೆ ಎಂದು ಮಾಹಿತಿ ನೀಡಿದ್ದಾರೆ.ಸುಧಾರಣೆಗೆ 3 ಪರೀಕ್ಷೆ ವ್ಯವಸ್ಥೆ ಜಾರಿ

2ನೇ ಪುಟನೋಡಿ

## ರಾಜ್ಯಕ್ಕೆ ಸುಭಿಕ್ಷೆ, ಶಾಂತಿ, ನೆಮ್ಮದಿ, ಮಳೆ- ಬೆಳೆ-ರೈತರ ಸಮೃದ್ಧಿಗಾಗಿ ದೇವಿಗೆ ಪ್ರಾರ್ಥನೆ : ಮುಖ್ಯಮಂತ್ರಿ ಸಿದ್ದರಾಮಯ್ಯ

ಮಲ್ಲಮ್ಮ ನುಡಿ ವಾರ್ತೆ

ಹಾಸನ ಅ.15: ಹಾಸನಾಂಭ ಜಾತ್ರೆಯಲ್ಲಿ ಯಾವುದೇ ರೀತಿಯ ಗಣ್ಯರ ಪ್ರತಿಷ್ಠೆಗೆ ಮಣೆಹಾಕದೆ, ಶ್ರೀಸಾಮಾನ್ಯರ ದರ್ಶನಕ್ಕೆ ಆದ್ಯತೆ ನೀಡಿದ ಸರ್ಕಾರದ ಪ್ರಯತ್ನದ ಯಶಸ್ಸಿಗೆ ಸಹಕರಿಸಿದ ಜಿಲ್ಲೆಯ ಎಲ್ಲಾ ಪಕ್ಷದ ಜನಪ್ರತಿನಿಧಿಗಳಿಗೆ, ಅಧಿಕಾರಿ ವರ್ಗಕ್ಕೆ ಮುಖ್ಯಮಂತ್ರಿ ಸಿದ್ದರಾಮಯ್ಯ ಅವರು ಅಭಿನಂದನೆಗಳನ್ನು ಸಲ್ಲಿಸಿದರು.

ಹಾಸನಾಂಭ ದೇವಿ ಮತ್ತು ಸಿದ್ದೇಶ್ವರ ಸ್ವಾಮಿಯ ದರ್ಶನ ಪಡೆದು, ವಿಶೇಷ ಪೂಜೆ ಸಲ್ಲಿಸಿದ ಬಳಿಕ ಮಾಧ್ಯಮದವರ ಜೊತೆ ಮಾತನಾಡಿದ ಮುಖ್ಯಮಂತ್ರಿಗಳು ನಾನು ಕಳೆದ ವರ್ಷವೂ ದರ್ಶನ ಪಡೆದಿದ್ದೆ. ಈ ವರ್ಷವೂ ದರ್ಶನ ಪಡೆದಿದ್ದೇನೆ. ಇಡೀ ರಾಜ್ಯಕ್ಕೆ ಸುಭಿಕ್ಷೆ, ಶಾಂತಿ, ನೆಮ್ಮದಿಗಾಗಿ, ಮಳೆ-ಬೆಳೆ-ರೈತರ ಸಮೃದ್ಧಿಗಾಗಿ ದೇವಿಗೆ ಪ್ರಾರ್ಥನೆ ಸಲ್ಲಿಸಿದ್ದೇನೆ ಎಂದರು.



ಈ ಬಾರಿ ಅಗತ್ಯಕ್ಕಿಂತ ಹೆಚ್ಚು ಮಳೆ ಬಿದ್ದು ರೈತರಿಗೆ ಆಗಿರುವ ನಷ್ಟ ಭರಿಸಲು ಎನ್.ಡಿ.ಆರ್.ಎಫ್ ನಿಧಿ ಜೊತೆಗೆ ರಾಜ್ಯ ಸರ್ಕಾರವೂ ಹೆಚ್ಚುವರಿ ಪರಿಹಾರ ನೀಡುತ್ತಿದ್ದೇವೆ. ಹಿಂದೆಂದೂ ಯಾರೂ ನೀಡದಷ್ಟು ಬೆಳೆ ಹಾನಿ ಪರಿಹಾರವನ್ನು ನಾವು ನೀಡಿದ್ದೇವೆ. ಮುಂದಿನ ವರ್ಷ ಬೆಳೆ ಹಾನಿ ಪರಿಸ್ಥಿತಿ ಬರದಿರಲಿ ಎಂದು ಹಾಸನಾಂಭ ಮತ್ತು ಸಿದ್ದೇಶ್ವರ ಸ್ವಾಮಿಯಲ್ಲಿ ಪ್ರಾರ್ಥಿಸಿದ್ದೇನೆ ಎಂದರು.

ನಮ್ಮದು ಕುವೆಂಪು ಅವರ ಆಶಯದ ಸರ್ವ ಜನಾಂಗದ ಶಾಂತಿಯ ತೋಟ ಆಗಿದೆ. ಇದನ್ನು ಇನ್ನಷ್ಟು ಗಟ್ಟಿಗೊಳಿಸೋಣ.

2ನೇ ಪುಟನೋಡಿ

## ಆರ್‌ಎಸ್‌ಎಸ್‌ನಿಂದ ಕಲ್ಮಶ ತುಂಬುವ ಕೆಲಸ: ಸಚಿವ ಖರ್ಗೆ ಆರೋಪ

ಮಲ್ಲಮ್ಮ ನುಡಿ ವಾರ್ತೆ



ಕಲಬುರಗಿ:ಅ.15: ರಾಷ್ಟ್ರೀಯ ಸ್ವಯಂ ಸೇವಕ ಸಂಘವು ಯುವಕರ, ಮಕ್ಕಳ ಮನಸುಗಳಲ್ಲಿ ಕಲ್ಮಶ ತುಂಬುವ ಕೆಲಸ ಮಾಡುತ್ತಿದೆ ಎಂದಿದ್ದೆ, ಅವರು ತುಂಬಿದ ಕಲ್ಮಶವು ಹೇಗಿರುತ್ತದೆ ಎಂಬುದಕ್ಕೆ ಸಣ್ಣ ಉದಾಹರಣೆಯನ್ನು ರಾಜ್ಯದ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯಿತಿರಾಜ್, ಐಟಿಬಿಟಿ ಮತ್ತು ಜಿಲ್ಲಾ ಉಸ್ತುವಾರಿ ಸಚಿವ ಪ್ರಿಯಾಂಕ್ ಖರ್ಗೆ ಅವರು ಸಾಮಾಜಿಕ ಜಾಲತಾಣಗಳ ಮೂಲಕ ವಿಡಿಯೋವನ್ನು ಹರಿಬಿಟ್ಟು ತಿಳಿಸಿದ್ದಾರೆ.

ಕೆಲವು ದಿನಗಳಿಂದ ನನಗೆ ನಿರಂತರವಾಗಿ ಬರುತ್ತಿದ್ದ ಬೆದರಿಕೆ ಮತ್ತು ನಿಂದನೆಯ ಕರೆಗಳಲ್ಲಿ ಇದೊಂದು ಸ್ಯಾಂಪಲ್ ಅಷ್ಟೇ. ತಾಯಿ, ಸಹೋದರಿಯರ ಹೆಸರು ಹಿಡಿದು ಅತ್ಯಂತ ತುಚ್ಚವಾಗಿ ನಿಂದಿಸುವುದೇ ಶಾಖೆಗಳಲ್ಲಿ ನೀಡುವ ಸಂಸ್ಕಾರವೇ?, ಮೋದಿ ಹಾಗೂ ಮೋಹನ್ ಭಾಗವತ್ ಅವರ ತಾಯಿಯಂದಿರಿಗೆ ಇದೇ ಬಗೆಯಲ್ಲಿ ನಿಂದಿಸುವುದನ್ನು ಬಿಜೆಪಿ ನಾಯಕರು ಒಪ್ಪುತ್ತಾರೆಯೇ? ಎಂದು ಅವರು ಖಾರವಾಗಿ ಪ್ರಶ್ನಿಸಿದ್ದಾರೆ.

ಬಿಜೆಪಿ ನಾಯಕರ ಮಕ್ಕಳು ತಮ್ಮ ಭವ್ಯ ಭವಿಷ್ಯ ರೂಪಿಸಿಕೊಳ್ಳುತ್ತಿದ್ದಾರೆ, ಬಡವರ ಮಕ್ಕಳನ್ನು ಹೀಗೆ ನಿಂದಿಸುವುದಕ್ಕೆ, ಬೆದರಿಸುವುದಕ್ಕೆ ಮತ್ತು ಬಲಿಯಾಗುವುದಕ್ಕೆ ಬಳಸಿಕೊಳ್ಳುತ್ತಿದ್ದಾರೆ. ನಾನು ದೂರು ನೀಡಿದರೆ ಆ ವ್ಯಕ್ತಿಯ ಬದುಕಿನಲ್ಲಿ ಹಾನಿಯಾಗುತ್ತದೆಯೇ ಹೊರತು ಆತನನ್ನು ಇಂತಹ ಮನಸ್ಥಿತಿಗೆ ತಳ್ಳಿದವರಿಗೆ ಯಾವ ಹಾನಿಯೂ ಆಗುವುದಿಲ್ಲ ಎಂದು ಅವರು ತಿಳಿಸಿದ್ದಾರೆ.

ನಮ್ಮದು ವ್ಯಕ್ತಿಗಳ ವಿರುದ್ಧದ ಹೋರಾಟವಲ್ಲ, ಆರ್‌ಎಸ್‌ಎಸ್ ಪಸರಿಸುತ್ತಿರುವ ಈ ಕೊಳಕು ಮನಸ್ಥಿತಿಯ ವಿರುದ್ಧದ ಹೋರಾಟ, ಮುಗ್ದರನ್ನು ಬ್ರೈನ್ ವಾಶ್ ಮಾಡಿ ಅವರ ಚಿಂತನೆಗಳನ್ನು ಕಲುಷಿತಗೊಳಿಸುತ್ತಿರುವ ಕ್ಷುದ್ರ ಶಕ್ತಿಗಳ ವಿರುದ್ಧದ ಹೋರಾಟ. ಆರ್‌ಎಸ್‌ಎಸ್ ಕಾಲಾಳುಗಳಾಗಿರುವ ಜನರನ್ನು ವಿಕಾರಧಾರೆಯಿಂದ ವಿಚಾರಧಾರೆಯೆಡೆಗೆ ಕರೆತರಬೇಕಿದೆ, ಬುದ್ಧ, ಬಸವ, ಅಂಬೇಡ್ಕರ್ ಅವರ ಮೌಲ್ಯಯುತ ಚಿಂತನೆಗಳನ್ನು ಪರಿಚಯಿಸಬೇಕಿದೆ. ಮುಗ್ದ ಮಕ್ಕಳು, ಯುವ ಸಮುದಾಯವನ್ನು ಇಂತಹ ಕಲುಷಿತ ವ್ಯವಸ್ಥೆಗೆ ಬಲಿಯಾಗದಂತೆ ತಡೆಯುವ ಸಲುವಾಗಿಯೇ ನಾನು ಹೋರಾಡುತ್ತೇನೆ ಮತ್ತು ದೃಢವಾದ ಹೆಜ್ಜೆಗಳನ್ನು ಇಡುತ್ತೇನೆ ಎಂದು ಅವರು ಘೋಷಿಸಿದ್ದಾರೆ.

ಈ ಬೆದರಿಕೆಗಳು, ಬೈಗುಳಗಳಿಂದ ನಾನು ವಿಚಲಿತನಾಗುತ್ತೇನೆ ಎಂದು ಭಾವಿಸಿದ್ದರೆ ಅದು ಅವರ ಭ್ರಮೆಯಷ್ಟೇ. ನನ್ನದು ಕೇವಲ ಅಧಿಕಾರ ಕೇಂದ್ರಿತ ರಾಜಕಾರಣವಲ್ಲ, ಸೈದ್ಧಾಂತಿಕ ರಾಜಕಾರಣ, ಮುಗ್ದ ಯುವಸಮುದಾಯವನ್ನು ವಿಷವರ್ತುಲದಿಂದ ಹೊರತರುವ ಜನಕೇಂದ್ರಿತ ರಾಜಕಾರಣ ಮಾಡುವುದಾಗಿ ಅವರು ತಿಳಿಸಿದ್ದಾರೆ.

## ಇಪಿಎಫ್ ಖಾತೆಯಿಂದ ಶೇ.75 ರಷ್ಟು ಹಣ ತಕ್ಷಣವೇ ಡ್ರಾ ಮಾಡಬಹುದು: ಸರ್ಕಾರ

ಮಲ್ಲಮ್ಮ ನುಡಿ ವಾರ್ತೆ

ನವದೆಹಲಿ: ಯಾವುದೇ ಇಪಿಎಫ್ ಹಿಂಪಡೆಯುವಿಕೆ ಸಾಧ್ಯವಿಲ್ಲ ಎಂಬ ನಂಬಿಕೆ, ಗೊಂದಲ ಮತ್ತು ತಪ್ಪು ಮಾಹಿತಿಯನ್ನು ಹೋಗಲಾಡಿಸಲು ಕೇಂದ್ರ ಕಾರ್ಮಿಕ ಸಚಿವಾಲಯ ಬುಧವಾರ ಸ್ಪಷ್ಟೀಕರಣ ಬಿಡುಗಡೆ ಮಾಡಿದ್ದು, ಹೊಸ ನಿಯಮಗಳು, ಉದ್ಯೋಗವನ್ನು ತೊರೆದ ನಂತರ ತಕ್ಷಣವೇ ಶೇ. 75 ಇಪಿಎಫ್ ಹಿಂಪಡೆಯುವಿಕೆಗೆ ಅವಕಾಶ ನೀಡುತ್ತವೆ ಎಂದು ಹೇಳಿದೆ.

ವ್ಯಕ್ತಿಯು ಒಂದು ವರ್ಷ ನಿರುದ್ಯೋಗಿಯಾಗಿ ಉಳಿದಿದ್ದರೆ, ಸಂಪೂರ್ಣ ಇಪಿಎಫ್ ಬಾಕಿ ಹಣವನ್ನು ಹಿಂಪಡೆಯಬಹುದು ಎಂದು ಸಚಿವಾಲಯ ಸ್ಪಷ್ಟಪಡಿಸಿದೆ.

ಈ ಹೊಸ ನಿಬಂಧನೆಗಳು ಸೇವೆಯ ನಿರಂತರತೆ, ಆರೋಗ್ಯಕರ ಅಂತಿಮ ಪಿಎಫ್ ಇತ್ಯರ್ಥ ಮೊತ್ತ ಮತ್ತು ಕುಟುಂಬಕ್ಕೆ ಯಾವುದೇ ಆರ್ಥಿಕ ತೊಂದರೆಯಾಗದಂತೆ ಖಚಿತಪಡಿಸುತ್ತದೆ ಎಂದು ಸಚಿವಾಲಯ ತಿಳಿಸಿದೆ.

ಇಪಿಎಫ್ ಚಂದಾದಾರರಿಗೆ ಹೆಚ್ಚಿನ ಅನುಕೂಲವನ್ನು ಒದಗಿಸಲು ಕೇಂದ್ರ ಟ್ರಸ್ಟಿಗಳ ಮಂಡಳಿ (ಸಿಬಿಟಿ) 13 ಸಂಕೀರ್ಣ ನಿಯಮಗಳನ್ನು ಒಂದೇ ನಿಯಮಕ್ಕೆ ತಂದಿದೆ. ಇದರ ಪ್ರಕಾರ ಅನಾರೋಗ್ಯ, ಶಿಕ್ಷಣ, ಮದುವೆ, ವಸತಿ ಅಗತ್ಯತೆಗಳು ಮತ್ತು ವಿಶೇಷ ಸಂದರ್ಭಗಳಂತಹ ತುರ್ತು ಪರಿಸ್ಥಿತಿಗಳಲ್ಲಿ ಪಿಎಫ್ ಹಣವನ್ನು ಶೇ. 100 ರಷ್ಟು ಹಿಂಪಡೆಯಲು ಅವಕಾಶವನ್ನು ಒದಗಿಸಲಾಗಿದೆ.

ಈಗ ಉದ್ಯೋಗಿಗಳು ತಮ್ಮ ಪಾಲು ಸೇರಿದಂತೆ ಉದ್ಯೋಗದಾತರು ಠೇವಣಿ ಇಟ್ಟಿರುವ ಪಿಎಫ್ ಹಣವನ್ನು ಹಿಂಪಡೆಯಬಹುದು.

ಈ ಹಿಂದೆ ಮದುವೆ ಮತ್ತು ಶಿಕ್ಷಣ ಎರಡಕ್ಕೂ ಪಿಎಫ್ ಖಾತೆಯಿಂದ ಭಾಗಶಃ ಹಿಂಪಡೆಯುವಿಕೆಯನ್ನು ಕೇವಲ 3 ಬಾರಿ ಮಾತ್ರ ಅನುಮತಿಸಲಾಗಿತ್ತು. ಆದರೆ, ಈಗ ಅದನ್ನು ಮತ್ತಷ್ಟು ಸರಳೀಕರಿಸಲಾಗಿದೆ. ಈಗ ಶಿಕ್ಷಣಕ್ಕಾಗಿ 10 ಬಾರಿ ಮತ್ತು ಮದುವೆಗೆ 5 ಬಾರಿ ಭವಿಷ್ಯ ನಿಧಿಯನ್ನು ಹಿಂಪಡೆಯಲು ಅನುಮತಿಸಲಾಗಿದೆ. ಯಾವುದೇ ಉದ್ಯೋಗಿ ಪಿಎಫ್ ಹಿಂಪಡೆಯಲು ಬಯಸಿದರೆ ಅವರು ಕನಿಷ್ಠ 12 ತಿಂಗಳ ಸೇವೆಯನ್ನು ಹೊಂದಿರಬೇಕು ಎಂದು ಷರತ್ತು ವಿಧಿಸಲಾಗಿದೆ.

## ಪ್ರಿಯಾಂಕ್ ಖರ್ಗೆಗೆ ಬೆದರಿಕೆ: ಟೈರ್ ಸುಟ್ಟು ಆಕ್ರೋಶ

ಮಲ್ಲಮ್ಮ ನುಡಿ ವಾರ್ತೆ

ಕಲಬುರಗಿ: ಅ.15: ಸರ್ಕಾರಿ ಪ್ರದೇಶದಲ್ಲಿ ಆರ್‌ಎಸ್‌ಎಸ್ ಕಾರ್ಯಕ್ರಮ ನಿಷೇಧಿಸುವಂತೆ ಒತ್ತಾಯಿಸಿ ಮುಖ್ಯಮಂತ್ರಿ ಸಿದ್ಧರಾಮಯ್ಯ ಅವರಿಗೆ ಪತ್ರ ಬರೆದಿದ್ದ ಸಚಿವ ಪ್ರಿಯಾಂಕ್ ಖರ್ಗೆ ಅವರಿಗೆ ಅಶ್ಲೀಲ ಪದ ಬಳಿಸಿ ಸಚಿವ ಪ್ರಿಯಾಂಕ್ ಖರ್ಗೆ ಅವರಿಗೆ ಕೊಲೆ ಬೇದರಿಕೆ ಹಾಕಿದ ಹಿನ್ನಲೆಯಲ್ಲಿ ನಗರದ ಜಿಲ್ಲಾಧಿಕಾರಿಗಳ ಕಚೇರಿ ಎದುರುಗಡೆ ಟೈರಿಗೆ ಬೆಂಕಿ ಹಚ್ಚಿ ರಸ್ತೆ ತಡೆದು ಕಾಂಗ್ರೆಸ್ ಕಾರ್ಯಕರ್ತರು ಆರ್‌ಎಸ್‌ಎಸ್ ವಿರುದ್ಧ ಘೋಷಣೆ ಕೂಗಿ ಆಕ್ರೋಶ ವ್ಯಕ್ತಪಡಿಸಿದರು. ಕಾಂಗ್ರೆಸ್ ಪಕ್ಷದ ಯುವ ಘಟಕದ ಅಧ್ಯಕ್ಷ ಶಕೀಲ್ ಅಹಮದ್ ಸರಡಗಿ ಅವರು ಮಾತನಾಡಿ, ಸಚಿವ ಪ್ರಿಯಾಂಕ್ ಖರ್ಗೆ ಅವರಿಗೆ ಬೆದರಿಕೆ ಕರೆ ಬಂದಿರುವ ಪೋನ್ ನಂಬರ್‌ಗಳನ್ನು ಪತ್ತೆ ಹಚ್ಚಿ ತಪ್ಪಿತಸ್ಥರ ವಿರುದ್ಧ ಸೂಕ್ತ ಕ್ರಮ ಕೈಗೊಳ್ಳುವಂತೆ ಆಗ್ರಹಿಸಿದರು.



ಆಯುಕ್ತರಿಗೆ ದೂರು; ಸಚಿವ ಪ್ರಿಯಾಂಕ್ ಖರ್ಗೆ ಅವರಿಗೆ ಜೀವ ಬೆದರಿಕೆ ಹಾಕಿರುವ ಕಿಡಿಗೇಡಿಗಳ ವಿರುದ್ಧ ಕಾನೂನು ಕ್ರಮ ಕೈಗೊಳ್ಳಬೇಕು ಎಂದು ಒತ್ತಾಯಿಸಿ ಬುಧವಾರ ಪಕ್ಷದ ಜಿಲ್ಲಾಧ್ಯಕ್ಷ ಹಾಗೂ ರಾಜ್ಯ ವಿಧಾನ ಪರಿಷತ್ ಸದಸ್ಯ ಜಗದೇವ್ ಗುತ್ತೇದಾರ್ ಕಾಳಗಿ ಅವರು ನಗರ ಪೋಲಿಸ್ ಆಯುಕ್ತ ಡಾ. ಶರಣಪ್ಪ ಎಸ್.ಡಿ., ಅವರಿಗೆ ಮನವಿ ಪತ್ರ ಸಲ್ಲಿಸಿದರು. ಈ ಸಂದರ್ಭದಲ್ಲಿ ಕಾಂಗ್ರೆಸ್ ಮುಖಂಡರಾದ ಜೆಸ್ಕಾಂ ಅಧ್ಯಕ್ಷ ಪ್ರವೀಣ್ ಪಾಟೀಲ್ ಹರವಾಳ್, ಡಾ. ಕಿರಣ್ ದೇಶಮುಖ್, ಫಾರೂಕ್ ಮಾನಿಯಾಳ್, ರಾಜೀವ್ ಜಾನೆ, ಶಿವಾನಂದ್ ಹೊನಗುಂಟಿ, ಈರಣ್ಣ ಪಾಟೀಲ್ ಝಳಕಿ, ಓವೈಸ್ ಶೇಖ್, ಕುಸರೋ ಜಾಗಿರದಾರ್, ಪ್ರಕಾಶ್ ಕಪನೂರ್, ರೇಣುಕಾ ಸಿಂಗೆ, ದಿನೇಶ್ ದೊಡ್ಡಮನಿ, ದೇವೇಂದ್ರ ಸಿನ್ನೂರ್, ಅಶ್ವಿನ್ ಸಂಕಾ, 2ನೇ ಪುಟನೋಡಿ

ಶೇಖ್ ಸಮರಿನ್ ,ಮಾಜಿಮೇಯರ್ ಗಳಾದ ಚಂದ್ರಿಕಾ ಪರಮೇಶ್ವರ್, ಯಲ್ಲಪ್ಪ ನಾಯ್ಕೋಡಿ, ಡಾ. ಕಿರಣ್ ದೇಶಮುಖ್, ಜೆಸ್ಕಾಂ ಅಧ್ಯಕ್ಷ ಪ್ರವೀಣ್ ಪಾಟೀಲ್ ಹರವಾಳ್, ಮಹಿಳಾ ಘಟಕದ ಅಧ್ಯಕ್ಷೆ ರೇಣುಕಾ ಸಿಂಗೆ ಮುಂತಾದವರು ಉಪಸ್ಥಿತರಿದ್ದರು.

## ಅಸಂಘಟಿತ ವಲಯದ ಕಾರ್ಮಿಕರ ಸಾಮಾಜಿಕ ಭದ್ರತೆಗಾಗಿ ಹಲವು ಕ್ರಮ:ಸಚಿವ ಲಾಡ್

ಮಲ್ಲಮ್ಮ ನುಡಿ ವಾರ್ತೆ

ಯಾದಗಿರಿ, ಅ.15: ರಾಜ್ಯದ ಅಸಂಘಟಿತ ವಲಯದ ಎಲ್ಲ ವರ್ಗಗಳ ಕಾರ್ಮಿಕರ ಸಾಮಾಜಿಕ ಭದ್ರತೆಗಾಗಿ, ರಾಜ್ಯ ಅಸಂಘಟಿತ ಕಾರ್ಮಿಕರ ಸಾಮಾಜಿಕ ಭದ್ರತಾ ಮಂಡಳಿ ಸ್ಥಾಪಿಸಲಾಗಿದೆ. ರಾಜ್ಯದಲ್ಲಿ ಈಗಾಗಲೇ ಗುರುತಿಸಿರುವ 101 ಅಸಂಘಟಿತ ಕಾರ್ಮಿಕ ವರ್ಗಗಳ ಕಾರ್ಮಿಕರು ತಕ್ಷಣ ನೋಂದಣಿ ಮಾಡಿಕೊಂಡು ಸ್ಮಾರ್ಟ್ ಕಾರ್ಡ್ ಮೂಲಕ ಸವಲತ್ತುಗಳ ಲಾಭ ಪಡೆದುಕೊಳ್ಳುವಂತೆ ರಾಜ್ಯ ಕಾರ್ಮಿಕ ಖಾತೆ ಸಚಿವರಾದ ಶ್ರೀ ಸಂತೋಷ್ ಲಾಡ್ ಅವರು ಹೇಳಿದರು.



ನಗರದ ಶುಭಂ ಪೆಟ್ರೋಲ್ ಪಂಪ್ ಹಿಂಭಾಗದ, ಪಾಟೀಲ್ ಕನ್ವೆನ್ಷನ್ ಹಾಲ್‌ದಲ್ಲಿ ಇಂದು ಜಿಲ್ಲಾಡಳಿತ, ಜಿಲ್ಲಾ ಪಂಚಾಯತ, ಕಾರ್ಮಿಕ ಇಲಾಖೆ, ಕರ್ನಾಟಕ ರಾಜ್ಯ ಅಸಂಘಟಿತ ಕಾರ್ಮಿಕರ ಸಾಮಾಜಿಕ ಭದ್ರತಾ ಮಂಡಳಿ ಇವರ ಸಂಯುಕ್ತಾಶ್ರಯದಲ್ಲಿ ಆಯೋಜಿಸಲಾಗಿದ್ದ ಯಾದಗಿರಿ ಜಿಲ್ಲೆಯ ವಿವಿಧ ವರ್ಗದ ಅಸಂಘಟಿತ ಕಾರ್ಮಿಕರಿಗೆ ಸ್ಮಾರ್ಟ್ ಕಾರ್ಡ್ ವಿತರಣೆ ಹಾಗೂ ವಿವಿಧ ಯೋಜನೆಗಳ ಕುರಿತು ಅರಿವು ಮೂಡಿಸುವ ಕಾರ್ಯಕ್ರಮ ಉದ್ಘಾಟಿಸಿ ಅವರು ಮಾತನಾಡಿದರು.

ನೂರಾರು ಸಮಸ್ಯೆಗಳನ್ನು ಎದುರಿಸುತ್ತಿರುವ ರಾಜ್ಯದ ಅಸಂಘಟಿತ ಕಾರ್ಮಿಕರಿಗೆ ಸಾಮಾಜಿಕ ಭದ್ರತೆ ಒದಗಿಸಲು ಸುಮಾರು 101 ಅಸಂಘಟಿತ ಕಾರ್ಮಿಕ ವರ್ಗಗಳ ಕಾರ್ಮಿಕರಿಗೆ ಹಲವು ಸೌಲಭ್ಯಗಳನ್ನು ಒದಗಿಸಲಾಗುತ್ತಿದ್ದು ತಕ್ಷಣ ಉಚಿತವಾಗಿ ನೋಂದಾಯಿಸಿಕೊಂಡು, ಸ್ಮಾರ್ಟ್ ಕಾರ್ಡ್ ಪಡೆದು ಸವಲತ್ತುಗಳ ಲಾಭ ಪಡೆಯುವಂತೆ ಸಲಹೆ ನೀಡಿದರು.

ರಾಜ್ಯದ ದುಡಿಯುವ ಜನರಲ್ಲಿ ಅಸಂಘಟಿತ ವಲಯದ ಪ್ರತಿಶತ 85 ರಷ್ಟು ಕಾರ್ಮಿಕರಿದ್ದಾರೆ. ವಿವಿಧ ವಲಯದಲ್ಲಿ ಕಾರ್ಯ ನಿರ್ವಹಿಸುವುದರ ಮೂಲಕ ರಾಜ್ಯಕ್ಕೆ ದೊಡ್ಡ ಕೊಡುಗೆ ನೀಡುತ್ತಿದ್ದಾರೆ.

ರಾಜ್ಯದಲ್ಲಿ ಅಸಂಘಟಿತ ವಲಯದಲ್ಲಿ ದುಡಿಯುತ್ತಿರುವ ಕಾರ್ಮಿಕರಿಗೆ ಭದ್ರತೆ ಒದಗಿಸುವ ನಿಟ್ಟಿನಲ್ಲಿ ಕರ್ನಾಟಕ ರಾಜ್ಯ ಅಸಂಘಟಿತ ಕಾರ್ಮಿಕರ ಸಾಮಾಜಿಕ ಭದ್ರತಾ ಮಂಡಳಿಯ ಮೂಲಕ 'ಅಂಬೇಡ್ಕರ್ ಕಾರ್ಮಿಕ ಸಹಾಯ ಹಸ್ತ ಯೋಜನೆ' ಯನ್ನು ಅನುಷ್ಠಾನಗೊಳಿಸಲಾಗಿದೆ ಎಂದರು.

ಈ ಯೋಜನೆಯಡಿ 101 ಅಸಂಘಟಿತ ವರ್ಗಗಳ ಕಾರ್ಮಿಕರನ್ನು ಗುರುತಿಸಲಾಗಿದ್ದು, ಸುಮಾರು 35 ಲಕ್ಷ ಕಾರ್ಮಿಕರು ಒಳಗೊಂಡಿದ್ದಾರೆ. ಅವರಿಗೆ ಉಚಿತವಾಗಿ ನೊಂದಾಯಿಸಿ ಸ್ಮಾರ್ಟ್

2ನೇ ಪುಟನೋಡಿ

**ರಣಜಿ ಟ್ರೋಫಿ:ಒಂದೇ ಓವರ್ ನಲ್ಲಿ 3 ವಿಕೆಟ್ ಉರುಳಿಸಿ ಬಿಸಿಸಿಐಗೆ ತಿರುಗೇಟು ನೀಡಿದ ಶಮಿ**

# ಒಂದನೇಪುಟದಿಂದ

## ಪರಿಹಾರ ಪಾವತಿ: ಈಶ್ವರ ಖಂಡ್ರೆ

ಸಭೆಯಲ್ಲಿ ಅಕಾಲಿಕಮಳೆಯಿಂದ ಉಂಟಾಗಿರುವ ಜೀವಹಾನಿ, ಬೆಳೆಹಾನಿ, ಮನೆಹಾನಿ, ಜಾನುವಾರು ಹಾನಿಗೆ ದೀಪಾವಳಿಯೊಳಗೆ ಪರಿಹಾರ ನೀಡುವುದಾಗಿ ಪ್ರಕಟಿಸಲಾಗಿದೆ. ಈ ನಿಟ್ಟಿನಲ್ಲಿ ಅಧಿಕಾರಿಗಳು ಮಾನವೀಯ ನೆಲೆಗಟ್ಟಿನಲ್ಲಿ ಹಗಲಿರುಳು ಶ್ರಮಿಸಿ, ವಿಕೋಪದಿಂದ ಸಂಕಷ್ಟಕ್ಕೆ ಸಿಲುಕಿರುವ ಕುಟುಂಬದವರ ನೆರವಿಗೆ ಧಾವಿಸಬೇಕು ಎಂದು ಆದೇಶ ನೀಡಿದರು.

ಬಸವಕಲ್ಯಾಣದಲ್ಲಿ 47, ಭಾಲ್ಕಿ 38, ಬೀದರ್ ತಾಲೂಕಿನಲ್ಲಿ ಮನೆಹಾನಿಗೊಳಗಾದವರಿಗೆ ಪರಿಹಾರ ನೀಡಿಕೆಯಲ್ಲಿ ವಿಳಂಭವಾಗಿರುವ ಕುರಿತಂತೆ ತಹಶೀಲ್ದಾರರನ್ನು ತರಾಟೆಗೆ ತೆಗೆದುಕೊಂಡ ಈಶ್ವರ ಖಂಡ್ರೆ, ಇಂದು ಅಥವಾ ನಾಳೆ ಸಂಜೆಯೊಳಗೆ ಮನೆಹಾನಿಯ ಪರಿಹಾರ ಸಂತ್ರಸ್ತರಿಗೆ ದೊರಕುವುದನ್ನು ಖಾತ್ರಿಪಡಿಸಿಕೊಳ್ಳುವಂತೆ ತಿಳಿಸಿ, ವಿಳಂಬ, ಕರ್ತವ್ಯಲೋಪ, ನಿರ್ಲಕ್ಷ್ಯ ತೋರಿರುವ ಅಧಿಕಾರಿ, ಸಿಬ್ಬಂದಿಗೆ ಕಾರಣ ಕೇಳಿ ನೋಟಿಸ್ ನೀಡುವಂತೆ ಸೂಚಿಸಿದರು.

ಮಳೆ ಹಾನಿಗೆ ಸಂಬಂಧಿಸಿದಂತೆ ಪರಿಹಾರ ಪೋರ್ಟಲ್ ನಲ್ಲಿ ದಾಖಲಿಸುವ ಪ್ರತಿಯೊಂದು ಮಾಹಿತಿಯನ್ನೂ ಗ್ರಾಮಪಂಚಾಯತಿ, ತಹಶೀಲ್ದಾರರ ಕಚೇರಿ ಮತ್ತು ರೈತ ಸಂಪರ್ಕ ಕೇಂದ್ರಗಳಲ್ಲಿ ಬಹಿರಂಗವಾಗಿ ಪ್ರಕಟಿಸಿ, ಡಂಗೂರ ಹೊಡೆಸಿ, ಆಕ್ಷೇಪಣೆ ಆಹ್ವಾನಿಸಿ, ಯಾವುದೇ ಸಂತ್ರಸ್ತರ ಮಾಹಿತಿ ಕಣ್ತಪ್ಪಿನಿಂದ ಬಿಟ್ಟುಹೋಗಿದ್ದರೆ ಆಗ ಅವರ ಹೆಸರು ಸೇರ್ಪಡೆ ಮಾಡಲು ಸಹಕಾರಿ ಆಗುತ್ತದೆ ಎಂದು ಈಶ್ವರ ಖಂಡ್ರೆ, ತಿಳಿಸಿದರು.

ಬೆಳೆ ವಿಮೆಯಡಿ ಬೆಳೆ ಋತುವಿನ ಮಧ್ಯದಲ್ಲಿ ವಿಕೋಪ ಉಂಟಾದರೆ ಪರಿಹಾರದ ಅವಕಾಶ ಕಲ್ಪಿಸಿದರೆ (ಮಿಡ್ ಸೀಸನ್ ಅಡ್ವರ್ಸಿಟಿ ಇನ್ವೋಕ್) ರೈತರಿಗೆ ಸೂಕ್ತ ಪರಿಹಾರ ಸಿಗುತ್ತದೆ. ಇನ್ವೋಕ್ ಆಗದಿದ್ದರೆ ರೈತರಿಗೆ ಅನ್ಯಾಯ ಆಗುತ್ತಿದೆ. ಕೂಡಲೇ ಈ ಬಗ್ಗೆ ಕ್ರಮವಹಿಸಿ ಎಂದು ಕೃಷಿ ಇಲಾಖೆಯ ಅಧಿಕಾರಿಗಳಿಗೆ ಸೂಚಿಸಿದರು.

ಕಡಿದು ನೆಲದ ಮೇಲೆ ಬಿದ್ದಿದ್ದ ವಿದ್ಯುತ್ ಪ್ರವಹಿಸುತ್ತಿದ್ದ ತಂತಿ ತುಳಿದು ವ್ಯಕ್ತಿಯೊಬ್ಬರು ಮೃತಪಟ್ಟಿರುವ ಬಗ್ಗೆ ಶಾಸಕ ಡಾ. ಶೈಲೇಂದ್ರ ಬೆಲ್ದಾಳೆ ಅವರು ಪ್ರಸ್ತಾಪಿಸಿದಾಗ, ಆಘಾತ ವ್ಯಕ್ತಪಡಿಸಿದ ಈಶ್ವರ ಖಂಡ್ರೆ, ಜಿಲ್ಲೆಯಲ್ಲಿ ಇಂತಹ ಘಟನೆಗಳು ಮರುಕಳಿಸದಂತೆ ಸೂಚಿಸಿ, ವಿದ್ಯುತ್ ತಂತಿಗಳು ಜಾಯಿಂಟ್ ಹಾಕಿರುವ ಕಡೆ ಕತ್ತರಿಸಿ ಬೀಳದಂತೆ ಕವರ್ ಕಂಡಕ್ಟರ್‌ಗಳನ್ನು ಅಳವಡಿಸಲು ಸೂಚಿಸಿದರು.

ಜಿಲ್ಲೆಯಲ್ಲಿ ಮಳೆಯಿಂದ ಎಷ್ಟು ಜೀವಹಾನಿ ಆಗಿದೆ, ಎಷ್ಟು ಬೆಳೆಹಾನಿ ಆಗಿದೆ, ಎಷ್ಟು ಮನೆ ಹಾನಿ ಆಗಿದೆ, ರಸ್ತೆಗಳಿಗೆ ಹಾನಿ ಆಗಿದೆ ಮತ್ತು ಕೈಗೊಂಡಿರುವ ಕ್ರಮಗಳೇನು ಎಂಬ ಸಂಪೂರ್ಣ ಮಾಹಿತಿಯನ್ನು ತತ್‌ಕ್ಷಣವೇ ಆಯಾ ಕ್ಷೇತ್ರ ವ್ಯಾಪ್ತಿಯ ಶಾಸಕರಿಗೆ ಮಾಹಿತಿ ನೀಡುವಂತೆ ಎಲ್ಲಾ ತಹಶೀಲ್ದಾರರುಗಳಿಗೆ ಸೂಚನೆ ನೀಡಿದರು.

ಈ ಸಭೆಯಲ್ಲಿ ಪೌರಾಡಳಿತ ಸಚಿವರಾದ ರಹೀಂಖಾನ್, ಬೀದರ ದಕ್ಷಿಣ ಶಾಸಕರಾದ ಡಾ. ಶೈಲೇಂದ್ರ ಬೆಲ್ದಾಳೆ, ವಿಧಾನ ಪರಿಷತ್ ಶಾಸಕರಾದ ಭೀಮರಾವ್ ಪಾಟೀಲ್, ಚಂದ್ರಶೇಖರ ಪಾಟೀಲ್, ನಗರಸಭೆ ಅಧ್ಯಕ್ಷ ಮಹಮ್ಮದ ಗೌಸ್, ಜಿಲ್ಲಾಧಿಕಾರಿಗಳಾದ ಶಿಲ್ಪಾ ಶರ್ಮಾ, ಜಿಲ್ಲಾ ಪಂಚಾಯತ ಮುಖ್ಯ ಕಾರ್ಯನಿರ್ವಹಣಾಧಿಕಾರಿ ಡಾ. ಗಿರೀಶ್ ದಿಲೀಪ್ ಬದೋಲೆ, ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ ಪ್ರದೀಪ್ ಗಂಟಿ, ಬೀದರ ಮಹಾನಗರ ಪಾಲಿಕೆ ಆಯುಕ್ತೆ ರಮ್ಯಾ ರಂಗಸ್ವಾಮಿ, ವಿವಿಧ ಸ್ಥಳೀಯ ಸಂಸ್ಥೆಯ ಅಧ್ಯಕ್ಷರು ಹಾಗೂ ತಾಲ್ಲೂಕಿನ ಎಲ್ಲಾ ತಹಸೀಲ್ದಾರರು ಸೇರಿದಂತೆ ಜಿಲ್ಲಾಮಟ್ಟದ ಅಧಿಕಾರಿಗಳು ಉಪಸ್ಥಿತರಿದ್ದರು.

## ಎಲ್ಲಾ ಸಂಘಟನೆಗಳ ವಿರುದ್ಧ ಕ್ರಮ: ಸಿಎಂ

ಏನನ್ನೂ ಮಾಡಲಿಲ್ಲ. ನಾವು ಕೆಲಸ ಮಾಡ್ತಿದ್ದೇವೆ. ರಾಜ್ಯದ ಅಭಿವೃದ್ಧಿ ನಮ್ಮ ಗುರಿ ಎಂದು ಸ್ಪಷ್ಟಪಡಿಸಿದರು.

ಸ್ಥಳೀಯ ಸಂಸ್ಥೆಗಳ ಚುನಾವಣೆ ಕುರಿತು ಮಾತನಾಡಿದ ಮುಖ್ಯಮಂತ್ರಿ, ತಾಲೂಕು ಪಂಚಾಯತ್, ಜಿಲ್ಲಾ ಪಂಚಾಯತ್ ಸೇರಿದಂತೆ ಎಲ್ಲ ಸ್ಥಳೀಯ ಸಂಸ್ಥೆಗಳ ಚುನಾವಣೆ ನಡೆಸಲು ಸರ್ಕಾರ ಸಿದ್ಧವಾಗಿದೆ. ಕೋರ್ಟ್ ಹೇಳಿದ ತಕ್ಷಣ ಚುನಾವಣೆ ಮಾಡುತ್ತೇವೆ. ಎಲ್ಲ ಚುನಾವಣೆಗಳನ್ನು ಹಂತ ಹಂತವಾಗಿ ನಡೆಸಲಾಗುವುದು. ಪ್ರಜಾಪ್ರಭುತ್ವ ಗಟ್ಟಿಯಾಗೋದು ಚುನಾವಣೆಗಳಿಂದ ಎಂದರು.

ಔತಣ ಕೂಟದ ವಿಚಾರದಲ್ಲಿ ರಾಜಕೀಯ ಬೆಳೆಸುವುದು ಬೇಡ, ನಾನು ಆಗಾಗ ಫೋಟೋ ಪ್ರಚಾರದ ವ್ಯವಸ್ಥೆ ಮಾಡುತ್ತಿರುತ್ತೇನೆ. ಇದಕ್ಕೂ ರಾಜಕೀಯ ಬೆಳವಣಿಗೆಗಳಿಗೂ ಯಾವುದೇ ರೀತಿಯ ಸಂಬಂಧವಿಲ್ಲ ಎಂದು ಹೇಳಿದರು.

## ಪಡೆದುಕೊಳ್ಳಬೇಕು: ಸಚಿವೆ ಸೀತಾರಾಮನ್

ಇವರ ಸಹಯೋಗದಲ್ಲಿ ಕೊಪ್ಪಳ ಜಿಲ್ಲೆಯ ಗಂಗಾವತಿ ವಿಧಾನಸಭಾ ಕ್ಷೇತ್ರದ ಆದಿಬಸವೇಶ್ವರ ದೇವಸ್ಥಾನ ಹತ್ತಿರದ ಮೆತ್ತಗಲ್ಲ ಗ್ರಾಮದಲ್ಲಿ ಕೃಷಿ ಸಂಸ್ಕರಣಾ ಘಟಕಕ್ಕಾಗಿ ತರಬೇತಿ ಮತ್ತು ಸಾಮಾನ್ಯ ಸೌಲಭ್ಯ ಕೇಂದ್ರದ ಉದ್ಘಾಟನೆ ನೆರವೇರಿಸಿ ಮಾತನಾಡಿದರು. ರೈತ ತರಬೇತಿ ಕೇಂದ್ರದಿಂದ ಸಾವಿರಾರು ರೈತರಿಗೆ ಉಪಯೋಗವಾಗುತ್ತದೆ. ಒಳ್ಳೆಯ ಮಾರುಕಟ್ಟೆ ಸಂಪರ್ಕ, ಅವರು ಬೆಳೆದ ಬೆಳೆಗಳ ಮೌಲ್ಯವರ್ಧನೆ ಹೇಗೆ ಮಾಡಬೇಕು ಎಂಬುದು ಸೇರಿದಂತೆ ಇತರೆ ಹಲವಾರು ಮಾಹಿತಿಯನ್ನು ನೀಡಲಾಗುತ್ತದೆ. ಮಳೆ ಸರಿಯಾಗಿ ಆಗದಿದ್ದರೆ ಈ ಭಾಗದ ಜನರು ಬೆಂಗಳೂರು, ಮಂಗಳೂರಿಗೆ ಗುಳೆ ಹೋಗುತ್ತಾರೆ ಇಂತಹ ತರಬೇತಿ ಕೇಂದ್ರಗಳಿಂದ ಅವರಿಗೆ ಅನುಕೂಲವಾಗಲಿದೆ. ನಮ್ಮ ಪ್ರಧಾನ ಮಂತ್ರಿಗಳು ಹೇಳುವ ಹಾಗೆ ವೋಕಲ್ ಫಾರ್ ಲೋಕಲಗೆ ಇದೊಂದು ಒಳ್ಳೆಯ ಉದಾಹರಣೆಯಾಗಿದೆ ಎಂದರು. ಪ್ರಧಾನ ಮಂತ್ರಿಗಳ ನಿರ್ದೇಶನದಂತೆ ರೈತರ ಕೃಷಿ ಉಪಕರಣ ತೆರಿಗೆ ಈ ಹಿಂದೆ ಇದ್ದ 12 ಪ್ರತಿಶತದಿಂದ ಈಗ 5 ಪ್ರತಿಶತ ಮಾಡಲಾಗಿದೆ. ಇದರಿಂದ ಅವರ ಟ್ರ್ಯಾಕ್ಟರ್, ಟಿಲ್ಲರ್ ಸೇರಿದಂತೆ ಇತರೆ ಕೃಷಿ ಉಪಕರಣಗಳ ಖರೀದಿಗೆ ಅನುಕೂಲವಾಗಲಿದೆ. ರೈತರ ಬಲವರ್ಧನೆಗಾಗಿ ಇವುಗಳನ್ನು ಕಡಿಮೆ ಮಾಡಿದ್ದೇವೆ. ಪ್ರಧಾನಮಂತ್ರಿಗಳ ಧನ ಧಾನ್ಯ ಯೋಜನೆಯಿಂದ ಆಹಾರ ಸಂಸ್ಕರಣೆ, ಮೌಲ್ಯವರ್ಧನೆ ಜೊತೆಗೆ ರೈತರ ಆರ್ಥಿಕ ಬೆಳವಣಿಗೆಗೆ ಸಹಕಾರಿಯಾಗಲಿದೆ. ಈ ಯೋಜನೆ ಅಡಿಯಲ್ಲಿ ದೇಶದ 100 ಜಿಲ್ಲೆಗಳು ಆಯ್ಕೆಯಾಗಿದ್ದು, ಅವುಗಳಲ್ಲಿ ಕೊಪ್ಪಳ ಜಿಲ್ಲೆಯು ಒಂದಾಗಿದೆ ಇದಕ್ಕಾಗಿ ಬಜೆಟನಲ್ಲಿ 255 ಕೋಟಿ ಅನುದಾನ ನೀಡಲಾಗಿದೆ. ಇದರ ಉದ್ದೇಶ ರೈತರಿಗೆ ಗುಣಮಟ್ಟದ ಬೀಜದ ಜೊತೆಗೆ ಹೊಸ ತಂತ್ರಜ್ಞಾನ ಅವರಿಗೆ ತಲುಪಿಸುವುದಾಗಿದೆ ಎಂದರು. ಈ ಕಾರ್ಯಕ್ರಮದಲ್ಲಿ ಭಾಗವಹಿಸಿರುವುದಕ್ಕೆ ನನಗೆ ಅತ್ಯಂತ ಸಂತೋಷವಾಗುತ್ತಿದೆ. ಕೊಪ್ಪಳ ಜಿಲ್ಲೆ ಹನುಮ ಜನ್ಮಸ್ಥಳ ಅಂಜನಾದ್ರಿ, ಕಿನ್ನಾಳ ಕಲೆಗಳ ತವರು, ಕೊಪ್ಪಳದ ಜನರಿಗೆ ಇಂದು ಒಳ್ಳೆಯ ಅವಕಾಶ ಸಿಕ್ಕಿದೆ. ಕರ್ನಾಟಕದಿಂದಲೇ ನಾನು ರಾಜ್ಯಸಭಾ ಸದಸ್ಯಯಾಗಿದ್ದೇನೆ. ಕಲ್ಯಾಣ ಕರ್ನಾಟಕದ 7 ಜಿಲ್ಲೆಗಳಲ್ಲಿ ಈ ತರಬೇತಿ ಕೇಂದ್ರಗಳನ್ನು ಮಾಡಲಾಗಿದೆ. ಇದರಿಂದ ರೈತರಿಗೆ ಫುಡ್ ಪ್ರೊಸೆಸಿಂಗ್, ಪ್ಯಾಕೇಜ್ ಜೊತೆಗೆ ಮಾರ್ಕೆಟಿಂಗ್ ಸೌಲಭ್ಯಕ್ಕೆ ಅನುಕೂಲವಾಗಲಿದೆ. ನಮ್ಮೊಂದಿಗೆ ನಬಾರ್ಡ್ ಪರಿಣಿತರು ಇದ್ದಾರೆ. ಅನ್ನದಾತರ ಭವಿಷ್ಯಕ್ಕಾಗಿ ನಾವು ಈ ಕೆಲಸ ಮಾಡಬೇಕಿದೆ. ಕಲ್ಯಾಣ ಕರ್ನಾಟಕ ಭಾಗವನ್ನು ಕರ್ನಾಟಕದ ಅಕ್ಷಯ ಪಾತ್ರೆ ಎಂದು ಕರೆಯುತ್ತಾರೆ. ಗಂಗಾವತಿ ಭಾಗದಲ್ಲಿ ತುಂಗಭದ್ರಾ ನದಿಯಿಂದ ಹೆಚ್ಚಿನ ನೀರಾವರಿ ಇದೆ. ಈ ತರಬೇತಿ ಕೇಂದ್ರಗಳ ಸದುಪಯೋಗವನ್ನು ರೈತರು, ಮಹಿಳೆಯರು ಹಾಗೂ ಸಾರ್ವಜನಿಕರು ಪಡೆದುಕೊಳ್ಳಬೇಕು. ಅವಶ್ಯಕತೆ ಇರುವಲ್ಲಿ ಇಂತಹ ಇನ್ನಷ್ಟು ತರಬೇತಿ ಕೇಂದ್ರಗಳನ್ನು ನಬಾರ್ಡ್ ನವರು ಸ್ಥಾಪಿಸಬೇಕು. ರಾಜ್ಯ ಸರ್ಕಾರಕ್ಕು ಧನ್ಯವಾದಗಳನ್ನು ತಿಳಿಸುತ್ತೇನೆ. ಜಿಲ್ಲಾಡಳಿತದಿಂದಲು ಒಳ್ಳೆಯ ಸಹಕಾರ ಸಿಕ್ಕಿದೆ. ರೈತರ ಲಾಭಕ್ಕಾಗಿ ಈ ಕೆಲಸ ಆಗಬೇಕಿದೆ ಎಂದು ಹೇಳಿದರು. ಗಂಗಾವತಿ ವಿಧಾನಸಭಾ ಕ್ಷೇತ್ರದ ಶಾಸಕರಾದ ಜಿ.ಜನಾರ್ಧನರೆಡ್ಡಿ ಅವರು ಮಾತನಾಡಿ, ಇಂದು ಇಡೀ ಕಲ್ಯಾಣ ಕರ್ನಾಟಕ ಭಾಗಕ್ಕೆ ಹಬ್ಬದ ದಿನವಾಗಿದ್ದು, ಬೀದರ್, ಕಲಬುರಗಿ, ರಾಯಚೂರು, ಯಾದಗಿರಿ, ಕೊಪ್ಪಳ, ಬಳ್ಳಾರಿ ಮತ್ತು ವಿಜಯನಗರ ಸೇರಿ ಏಳು ಜಿಲ್ಲೆಗಳಲ್ಲಿ ಕೇಂದ್ರ ಸರ್ಕಾರದ ಹಣಕಾಸು ಮತ್ತು ಕಾರ್ಪೊರೇಟ್ ವ್ಯವಹಾರಗಳ ಸಚಿವರು ಈ ಕಾರ್ಯಕ್ರಮ ಹಮ್ಮಿಕೊಂಡಿರುವುದಾಗಿದೆ. ವಿಶೇಷವಾಗಿ ಇದರ ಭಾಗವಾಗಿ ಕೊಪ್ಪಳ ಜಿಲ್ಲೆಯ ಗಂಗಾವತಿ ವಿಧಾನಸಭಾ ಕ್ಷೇತ್ರದ ಅತ್ಯಂತ ಹಿಂದುಳಿದ ಭಾಗವಾದ ಮೆತಗಲ್ಲ ಗ್ರಾಮದಲ್ಲಿ ಕೃಷಿ ಸಂಸ್ಕರಣಾ ಘಟಕಕ್ಕಾಗಿ ತರಬೇತಿ ಮತ್ತು ಸಾಮಾನ್ಯ ಸೌಲಭ್ಯ ಕೇಂದ್ರವು ಉದ್ಘಾಟನೆಯಾಗಿದೆ. ರೈತರ ಹಿತಕ್ಕಾಗಿ, ರೈತರ ಆದಾಯವನ್ನು ಹೆಚ್ಚಿಸುವ ಸಲುವಾಗಿ ಈ ತರಬೇತಿ ಮತ್ತು ಸಾಮಾನ್ಯ ಸೌಲಭ್ಯ ಕೇಂದ್ರವು ಸಹಕಾರಿಯಾಗಲಿದೆ. ಇದರಿಂದ ರೈತರ ಕೌಶಲ್ಯಾಭಿವೃದ್ಧಿ, ಸಬಲೀಕರಣ, ಉದ್ಯೋಗ ಸೃಷ್ಟಿ ಮತ್ತು ಮಹಿಳಾ ಸಬಲೀಕರಣವಾಗಲಿದೆ. ಜಿಲ್ಲೆಯಲ್ಲಿ ಅವಕಾಶವಿರುವ ಕಡೆ ಇಂತಹ ತರಬೇತಿ ಕೇಂದ್ರಗಳನ್ನು ಸ್ಥಾಪನೆ ಮಾಡಬೇಕು ಎಂದರು. ಕೇಂದ್ರ ಸಚಿವರಾದ ನಿರ್ಮಲಾ ಸೀತಾರಾಮನ್ ರವರು ನಮ್ಮ ದೇಶದಲ್ಲಿ ಸತತವಾಗಿ 8 ಬಾರಿ ಬಜೆಟ್ ಮಂಡಿಸಿ, ಇತಿಹಾಸ ಸೃಷ್ಟಿಸಿರುವ ನಮ್ಮ ದೇಶದ ಹೆಮ್ಮೆಯ ಮಹಿಳೆಯಾಗಿದ್ದಾರೆ. ಪ್ರಧಾನಿ ನರೇಂದ್ರ ಮೋದಿಜಿಯವರ ಕನಸನ್ನು ನನಸಾಗಿಸುವ ದಿಶೆಯಲ್ಲಿ ಮತ್ತು ದೇಶದ ಆರ್ಥಿಕತೆಗೆ ಶಕ್ತಿಯಾಗಿ ಅವರು ಶ್ರಮಿಸುತ್ತಿದ್ದಾರೆ. ಹನುಮನ ಜನ್ಮಸ್ಥಳವಾದ ಅಂಜನಾದ್ರಿ ಬೆಟ್ಟಕ್ಕೆ ದೇಶದ ವಿವಿಧೆಡೆಯಿಂದ ಜನರು ಬರುತ್ತಾರೆ. ಇದರ ಅಭಿವೃದ್ಧಿಗಾಗಿ 1350 ಕೋಟಿ ರೂ. ಮೊತ್ತದ ಪ್ರಸ್ತಾವನೆಯನ್ನು ಸಿದ್ಧಪಡಿಸಿ ರಾಜ್ಯ ಸರ್ಕಾರದ ಮೂಲಕ ಕೇಂದ್ರಕ್ಕೆ ಸಲ್ಲಿಸಲಾಗುವುದು. ಇದಕ್ಕಾಗಿ ಅನುಮೋದನೆ ನೀಡಿ, ರಾಜ್ಯ ಮತ್ತು ಕೇಂದ್ರ ಸರ್ಕಾರದ ಸಹಭಾಗಿತ್ವದಲ್ಲಿ ಅಂಜನಾದ್ರಿ,

## ಎಸ್ಎಸ್ಎಲ್‌ಸಿ ಪಾಸ್

ರಾಜ್ಯದಲ್ಲಿ ಪರೀಕ್ಷಾ ವ್ಯವಸ್ಥೆ ಸುಧಾರಣೆಗೆ ಮೂರು ಪರೀಕ್ಷಾ ವ್ಯವಸ್ಥೆ ಜಾರಿ ಮಾಡಲಾಗುವುದು ಎಂದು ಹೇಳಿದ ಅವರು, ಪಾರದರ್ಶಕವಾಗಿ ಇರಲಿ ಎನ್ನುವ ಕಾರಣಕ್ಕೆ ಒತ್ತು ನೀಡಲಾಗಿದೆ ಎಂದು ತಿಳಿಸಿದ್ದಾರೆ.

ಪರೀಕ್ಷೆಗಳು ಉತ್ತಮವಾಗಿ ನಡೆಸಲು ವ್ಯವಸ್ಥೆ ಮಾಡಲಾಗಿದೆ. ವಿಶೇಷ ತರಗತಿ ಪಡೆದು ವಿದ್ಯಾರ್ಥಿಗಳನ್ನ ತಯಾರು ಮಾಡಲಾಗಿದೆ. ಹೀಗಾಗಿ ಉತ್ತಮ ಫಲಿತಾಂಶ ಬಂದಿದೆ ಎಂದು ಹೇಳಿದರು. ಇದೀಗ ಪರೀಕ್ಷಾ ವ್ಯವಸ್ಥೆಯಲ್ಲಿ ಸುಧಾರಣೆ ತರಲು ಶೇಕಡಾ 33 ರಷ್ಟು ಪಾಸಿಂಗ್ ಅಂಕ ನಿಗದಿ ಮಾಡಲಾಗಿದೆ. 625ಕ್ಕೆ 206 ಅಂಕ ಪಡೆದರೆ ಅಥವಾ ಆಯಾ ವಿಷಯದ ಒಟ್ಟು ಅಂಕಗಳಲ್ಲಿ 30 ಅಂಕ ಪಡೆದಿರಬೇಕು. ಆಂತರಿಕ ಮತ್ತು ಬಾಹ್ಯ ಅಂಕ ಸೇರಿ ಒಟ್ಟು ಶೇಕಡಾ 33 ರಷ್ಟು ಅಂಕ ಪಡೆದ ವಿದ್ಯಾರ್ಥಿಯನ್ನು ಉತ್ತೀರ್ಣ ಎಂದು ಘೋಷಿಸಲಾಗುತ್ತದೆ ತಿಳಿಸಿದರು. 2025-26ನೇ ಸಾಲಿನಿಂದ ಈ ನಿಯಮ ಜಾರಿಗೆ ಬರಲಿದೆ. ಈ ವರ್ಷ ಹಾಜರಾಗಿರುವ ಎಲ್ಲಾ ವಿದ್ಯಾರ್ಥಿಗಳು, ರಿಪೀಟರ್ಸ್, ಖಾಸಗಿ ಅಭ್ಯರ್ಥಿಗಳಿಗೂ ಈ ನಿಯಮ ಜಾರಿಯಾಗಲಿದೆ ಎಂದು ಮಾಹಿತಿ ನೀಡಿದ್ದಾರೆ.

## ದೇವಿಗೆ ಪ್ರಾರ್ಥನೆ : ಮುಖ್ಯಮಂತ್ರಿ

ಎಲ್ಲಾ ಧರ್ಮದ ದೇವರ ಆಶಯವೂ ಮನುಷ್ಯ ಪ್ರೀತಿ ಮತ್ತು ಸೌಹಾರ್ದದ ಬದುಕು. ಇದಕ್ಕೆ ತಕ್ಕಂತೆ ನಾವೆಲ್ಲರೂ ಸಹೃದತೆಯಿಂದ ಮನುಷ್ಯ ಧರ್ಮವನ್ನು ಪಾಲಿಸಬೇಕು ಎಂದರು. ಅಗತ್ಯ ಬಿದ್ದರೆ ಹೆಚ್ಚುವರಿ ಅನುದಾನ: ಹಾಸನಾಂಭ ಜಾತ್ರೆಗೆ ಹೆಚ್ಚುವರಿ ಅನುದಾನವನ್ನು ರಾಜ್ಯ ಬಜೆಟ್ ನಲ್ಲಿ ಘೋಷಿಸುತ್ತೀರಾ ಎನ್ನುವ ಪತ್ರಕರ್ತರ ಪ್ರಶ್ನೆಗೆ ಉತ್ತರಿಸಿದ ಮುಖ್ಯಮಂತ್ರಿಗಳು ಜಿಲ್ಲಾಳಿತದ ಜೊತೆ ಚರ್ಚಿಸುತ್ತೇನೆ. ಅಗತ್ಯ ಬಿದ್ದರೆ ಅನುದಾನ, ಹಣಕಾಸಿನ ನೆರವು ನೀಡಲಾಗುವುದು ಎಂದರು. ಈ ಸಂದರ್ಭದಲ್ಲಿ ಮುಜರಾಯಿ ಸಚಿವರಾದ ರಾಮಲಿಂಗಾರೆಡ್ಡಿ, ಕಂದಾಯ ಸಚಿವರು ಹಾಗೂ ಜಿಲ್ಲಾ ಉಸ್ತುವಾರಿ ಸಚಿವರಾದ ಕೃಷ್ಣಬೈರೇಗೌಡ, ಸಂಸದರಾದ ಶ್ರೇಯಸ್ ಎಂ ಪಟೇಲ್, ಕರ್ನಾಟಕ ರಾಜ್ಯ ಗೃಹ ಮಂಡಳಿ ಅಧ್ಯಕ್ಷರು ಹಾಗೂ ಶಾಸಕರಾದ ಕೆ.ಎಂ. ಶಿವಲಿಂಗೇಗೌಡ, ಜಿಲ್ಲಾಧಿಕಾರಿ ಲತಾ ಕುಮಾರಿ, ಜಿಲ್ಲಾ ಪೊಲೀಸ್ ವರಿಷಾ??ಧಿಕಾರಿ ಮೊಹಮ್ಮದ್ ಸುಜೀತ, ಜಿಲ್ಲಾ ಪಂಚಾಯಿತಿ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ ಬಿ.ಆರ್.ಪೂರ್ಣಿಮಾ ಮತ್ತಿತರರು ಹಾಜರಿದ್ದರು.

## ಹಲವು ಕ್ರಮ:ಸಚಿವ ಲಾಡ್

ಕಾರ್ಡ್ ನೀಡಲಾಗಿದೆ ಎಂದರು. ಯಾದಗಿರಿ ಜಿಲ್ಲೆಯಲ್ಲಿ 59,493 ಕಾರ್ಮಿಕರು ನೊಂದಣಿಯಾಗಿದ್ದು ಅವರಿಗೆ ಸ್ಮಾರ್ಟ್ ಕಾರ್ಡ್ ನೀಡಲಾಗುತ್ತಿದೆ. ಇಂತಹ ಅಸಂಘಟಿತ ಕಾರ್ಮಿಕರ ಅಪಘಾತ ಸಂಭವಿಸಿದಲ್ಲಿ 1 ಲಕ್ಷ ಪರಿಹಾರ ನೀಡಲಾಗುವುದು. ಕರ್ನಾಟಕ ರಾಜ್ಯ ಗಿಗ್ ಕಾರ್ಮಿಕರ ವಿಮಾ ಯೋಜನೆಯಡಿ 4 ಲಕ್ಷದವರೆಗೆ ವಿಮಾ ಸೌಲಭ್ಯ ನೀಡಲಾಗುವುದು. ಆಶಾದೀಪ ಯೋಜನೆಯಡಿಯಲ್ಲಿ ಪರಿಶಿಷ್ಟ ಜಾತಿ ಮತ್ತು ಪರಿಶಿಷ್ಟ ಪಂಗಡಕ್ಕೆ ಸೇರಿದ ಜನರಿಗೆ ಉದ್ಯೋಗದಾತರು, ಉದ್ದಿಮೆದಾರರು ಉದ್ಯೋಗ ನೀಡಿದಲ್ಲಿ ಶೇ.50 ರಷ್ಟು ವೇತನ ಕಾರ್ಮಿಕ ಇಲಾಖೆಯಿಂದಲೇ ಭರಿಸಲಾಗುವುದೆಂದರು.

ಮೋಟಾರು ಸಾರಿಗೆ ಹಾಗೂ ಸಂಬಂಧಿತ ಕಾರ್ಮಿಕರಿಗೆ ಮತ್ತು ಸಿನಿ ಪರದೆ ಹಿಂದದುಡಿಯುವ ಹಾಗೂ ಸಾಂಸ್ಕೃತಿಕ ಚಟುವಟಿಕೆಗಳಲ್ಲಿ ತೊಡಗಿದ ಕಾರ್ಮಿಕರಿಗೆ, ಕಲಾವಿದರಿಗೆ, ಸಾಮಾಜಿಕ ಭದ್ರತೆ ಸೌಲಭ್ಯಗಳನ್ನು ಒದಗಿಸಲಾಗುತ್ತಿದೆ ಎಂದು ಹೇಳಿದರು.

ಕರ್ನಾಟಕ ಗೃಹಕಾರ್ಮಿಕರ (ಸಾಮಾಜಿಕ ಭದ್ರತಾ ಮತ್ತು ಕಲ್ಯಾಣ) ಅಧಿನಿಯಮ ರೂಪಿಸುವ ಪ್ರಕ್ರಿಯೆ ಜಾರಿಯಲ್ಲಿದೆ ಎಂದು ತಿಳಿಸಿದರು.

ದೇಶದಲ್ಲಿ ಅದರಲ್ಲಿಯೂ ಕರ್ನಾಟಕದಲ್ಲಿ ಬದಲಾವಣೆ ತರಲು ಸರ್ಕಾರ ಪಂಚಗ್ಯಾರಂಟಿ ಯೋಜನೆ ಜಾರಿಗೆ ತಂದಿದೆ. ಪ್ರತಿ ವರ್ಷ 60 ಸಾವಿರ ಕೋ ರೂ ಗಳಂತೆ ಒಟ್ಟು 5 ವರ್ಷದಲ್ಲಿ 5 ಲಕ್ಷ.ಕೋ.ರೂ ಒದಗಿಸುತ್ತಿದೆ. ಅಭಿವೃದ್ಧಿ, ಯೋಜನೆ, ಯೋಜನೆತರ, ಪೆನ್ಷನ್ ಯೋಜನೆಗಳಿಗೂ ಅನುದಾನ ಒದಗಿಸುತ್ತಿದೆ. ಈ ಹಿನ್ನೆಲೆಯಲ್ಲಿ ಪರ್ ಕ್ಯಾಪಿಟಾ ಇನ್ಕಮ್ ಹಾಗೂ ಜಿಡಿಪಿ ಯಲ್ಲಿ ರಾಷ್ಟ್ರದಲ್ಲಿ ಮುಂಚೂಣಿ ರಾಜ್ಯವಾಗಿ ಕರ್ನಾಟಕ ಹೊರಹೊಮ್ಮಿದೆ. 500 ಕೋ.ಜನರಿಗೆ ಉಚಿತ ಪ್ರಯಾಣದ ಅವಕಾಶ ನೀಡಿದ ವಿಶ್ವದ ಏಕೈಕ ರಾಜ್ಯ ಕರ್ನಾಟಕ ವಾಗಿದೆ ಎಂದು ಹೇಳಿದರು.

ಸಣ್ಣ ಕೈಗಾರಿಕೆ ಹಾಗೂ ಸಾರ್ವಜನಿಕ ಉದ್ದಿಮೆಗಳ ಖಾತೆ ಸಚಿವರು ಹಾಗೂ ಜಿಲ್ಲಾ ಉಸ್ತುವಾರಿ ಸಚಿವರಾದ ಶ್ರೀ ಶರಣಬಸಪ್ಪ ದರ್ಶನಾಪುರ ಅವರು ಮಾತನಾಡಿ, ಅಸಂಘಟಿತ ಕಾರ್ಮಿಕರಿಗೆ ಸಹಾಯಹಸ್ತ ಚಾಚಿ ಅವರಿಗೆ ಮುಖ್ಯ ವಾಹಿನಿಗೆ ತರಲು ಸರ್ಕಾರ ಪ್ರಯತ್ನಿಸುತ್ತಿದೆ. ಸರ್ಕಾರದ ವಿವಿಧ ಯೋಜನೆಗಳ ಲಾಭ ಪಡೆಯಲು ನೋಂದಣಿ ಮಾಡಿಕೊಳ್ಳುವದು ಮುಖ್ಯ ಎಂದ ಅವರು ಈ ಭಾಗದ ಕಾರ್ಮಿಕರ ಮಕ್ಕಳ ಅನುಕೂಲಕ್ಕಾಗಿ ಭೀ.ಗುಡಿಗೆ ವಸತಿ ಶಾಲೆಯೊಂದು ಮಂಜೂರು ಆಗಿರುವುದಕ್ಕೆ ಹರ್ಷ ವ್ಯಕ್ತಪಡಿಸಿದರು.

# ಕಪಪಮೀವಿವಿವು ಸ್ವಾವಲಂಬನೆಗೆ ಪ್ರೋತ್ಸಾಹ ನೀಡುತ್ತಿದೆ:ಪ್ರೊ.ಕೆ.ಸಿ.ವೀರಣ್ಣ




ಮಲ್ಲಮ್ಮ ನುಡಿ ವಾರ್ತೆ

ಬೀದರ, ಅ.15: ಕರ್ನಾಟಕ ಪಶುವೈದ್ಯಕೀಯ, ಪಶು ಹಾಗೂ ಮೀನುಗಾರಿಕೆ ವಿಜ್ಞಾನಗಳ ವಿಶ್ವವಿದ್ಯಾಲಯವು ಹಲವಾರು ವರ್ಷಗಳಿಂದ ರೈತರಿಗೆ ನವೀನ ತಂತ್ರಜ್ಞಾನ, ಪಶುಪಾಲನೆ, ಹಾಲು ಉತ್ಪಾದನೆ, ಮೀನುಗಾರಿಕೆ ಹಾಗೂ ಕೃಷಿ ಉದ್ಯಮಶೀಲತೆಯ ಬಗ್ಗೆ ತರಬೇತಿ ನೀಡಿ ಸ್ವಾವಲಂಬನೆಗೆ ಪ್ರೋತ್ಸಾಹ ನೀಡುತ್ತಿದೆ ಎಂದು ಕರ್ನಾಟಕ ಪಶುವೈದ್ಯಕೀಯ, ಪಶು ಹಾಗೂ ಮೀನುಗಾರಿಕೆ ವಿಜ್ಞಾನಗಳ ವಿಶ್ವವಿದ್ಯಾಲಯದ ಕುಲಪತಿ ಪ್ರೊ. ಕೆ.ಸಿ.ವೀರಣ್ಣ ಹೇಳಿದರು.

ಅವರು ಇತ್ತೀಚಿಗೆ ಕಪಪಮೀವಿವಿ ಬೀದರನಲ್ಲಿ ಐಸಿಎಆರ್ - ರಾಷ್ಟ್ರೀಯ ಕೃಷಿ ಸಂಶೋಧನಾ ನಿರ್ವಹಣಾ ಅಕಾಡೆಮಿ (ಅಂಖ- ಓಂಂಖಒ), ಹೈದರಾಬಾದನ ಎ- ಐಡಿಯಾ (ಚಿ- ಆಇಂ) ಕೇಂದ್ರದ ಪ್ರಾಯೋಜಕತ್ವದಲ್ಲಿ ನಬಾರ್ಡ್ ಬೆಂಗಳೂರು ಹಾಗೂ ಬೀದರ ತೋಟಗಾರಿಕೆ ಪ್ರೊಡ್ಯುಸರ ಕಂಪನಿ ಲಿಮಿಟೆಡ್ ಸಂಸ್ಥೆಗಳ ಸಹಯೋಗದಲ್ಲಿ ಆಯೋಜಿಸಲಾಗಿದ್ದ ನವಉದ್ಯಮಿಗಳು (ಸ್ಟಾರ್ಟ್ ಅಪ್ಸ್) ಹಾಗೂ ರೈತ ಉತ್ಪಾದಕರ ಸಂಸ್ಥೆ/ಸಂಘಗಳೊಂದಿಗೆ ಸಂವಾದ (ಇಮರ್ಷನ್) ಕಾರ್ಯಕ್ರಮದಲ್ಲಿ ಭಾಗವಹಿಸಿ ಮಾತನಾಡಿದರು.

ಇತ್ತೀಚಿನ ವರ್ಷಗಳಲ್ಲಿ ಕೇಂದ್ರ ಸರಕಾರ ಹಾಗೂ ನಬಾರ್ಡ್ ಸಂಸ್ಥೆಗಳ ಮುಖಾಂತರ ಯುವಕರು, ಮಹಿಳೆಯರು ಹಾಗೂ ಇನ್ನಿತರ ರೈತಬಾಂಧವರು ತಮ್ಮದೇ ಆದ ನವ ಉದ್ಯಮಗಳನ್ನು (ಸ್ಟಾರ್ಟ್ ಅಪ್ಸ್) ಪ್ರಾರಂಭಿಸಿದ್ದಾರೆ. ಈ ನವಉದ್ಯಮಿಗಳು ತಮ್ಮ ತಂತ್ರಜ್ಞಾನದ ಬಗ್ಗೆ ಮಾಹಿತಿ, ಪ್ರಾತ್ಯಕ್ಷಿಕೆ ಹಾಗೂ ಅವರು ನಡೆದು ಬಂದ ದಾರಿಯ ಬಗ್ಗೆ ನಮಗೆ ತಿಳಿಸಲಿದ್ದಾರೆ ಎಂದು ಸಂತಸ ವ್ಯಕ್ತಪಡಿಸಿದರು. ಈ ಕಾರ್ಯಕ್ರಮವು ರೈತ ಉದ್ಯಮಿಗಳಿಗೆ ಹಾಗೂ ಇನ್ನಿತರ ರೈತರಿಗೆ ವಿವಿಧ ರೀತಿಯ ವಿಚಾರ-ವಿನಿಮಯ ಹಾಗೂ ಸಂವಾದ ನಡೆಸಲು ಒಳ್ಳೆಯ ವೇದಿಕೆಯಾಗಿ ಕಾರ್ಯನಿರ್ವಹಿಸುವುದು. ಅಷ್ಟೇ ಅಲ್ಲದೇ, ಈ ಕಾರ್ಯಕ್ರಮವು ತಂತ್ರಜ್ಞಾನ ಹಾಗೂ ಸಲಹಾ ಸೇವೆಗಳ ಮೂಲಕ ಮೌಲ್ಯವರ್ಧನೆಯಿಂದ ಆದಾಯ ಹೆಚ್ಚಿಸಲು ಪೊ?ತ್ಸಾ ಹಿಸುತ್ತದೆ. ಈ ಇಮರ್ಷನ್ ಕಾರ್ಯಕ್ರಮವು ಪಾಲ್ಗೊಂಡಿರುವ ರೈತರು, ಈಔಗಳು ಹಾಗೂ ಸ್ಟಾರ್ಟಪ್ ಗಳಿಗೆ ಹೊಸ ಚಿಂತನೆ, ಹೊಸ ಬಾಂಧವ್ಯ ಮತ್ತು ಹೊಸ ಅವಕಾಶಗಳನ್ನು ನೀಡುತ್ತದೆ ಎಂದರು.

ಕರ್ನಾಟಕ ಪಶುವೈದ್ಯಕೀಯ, ಪಶು ಹಾಗೂ ಮೀನುಗಾರಿಕೆ ವಿಜ್ಞಾನಗಳ ವಿಶ್ವವಿದ್ಯಾಲಯದ ಆಡಳಿತ ಮಂಡಳಿಯ ಸದಸ್ಯ ಬಸವರಾಜ ಭತಮುರ್ಗೆ ಮಾತನಾಡಿ, ದೇಶದ ವಿವಿಧ ಭಾಗಗಳನ್ನು ಪ್ರತಿನಿಧಿಸುವ ಸುಮಾರು 18 ನವ ಉದ್ಯಮಿಗಳು (ಸ್ಟಾರ್ಟ್ ಅಪ್ಸ್) ಭಾಗವಹಿಸಿ, ರೈತರ ಸಮಸ್ಯೆಗಳಿಗೆ ಪರಿಹಾರವಾಗುವಂತಹ ವಿವಿಧ ಉತ್ಪನ್ನ/ಸೇವೆಗಳ ಬಗ್ಗೆ ರೈತರಿಗೆ ಹಾಗೂ ರೈತ ಸಂಘ/ಸಂಸ್ಥೆಗಳ ಸದಸ್ಯರಿಗೆ ಪ್ರಾತ್ಯಕ್ಷಿಕೆ ಹಾಗೂ ಮಾಹಿತಿ ನೀಡಲಿದ್ದಾರೆ ಎಂದು ತಿಳಿಸಿದರು.

ಕಾರ್ಯಕ್ರಮದಲ್ಲಿ ದೇಶದ ವಿವಿಧ ಭಾಗಗಳನ್ನು ಪ್ರತಿನಿಧಿಸುವ 18 ನವ ಉದ್ಯಮಿಗಳು (ಸ್ಟಾರ್ಟ್ ಅಪ್ಸ್) ಭಾಗವಹಿಸಿ, ರೈತರ ಸಮಸ್ಯೆಗಳಿಗೆ ಪರಿಹಾರವಾಗುವಂತಹ ವಿವಿಧ ಉತ್ಪನ್ನ/ಸೇವೆಗಳ ಬಗ್ಗೆ ರೈತರಿಗೆ ಹಾಗೂ ರೈತ ಸಂಘ/ಸಂಸ್ಥೆಗಳ ಸದಸ್ಯರಿಗೆ ಪ್ರಾತ್ಯಕ್ಷಿಕೆ ಹಾಗೂ ಮಾಹಿತಿ ನೀಡಿದರು.

ಈ ಸಂದರ್ಭದಲ್ಲಿ ವಿಸ್ತರಣಾ ನಿರ್ದೇಶಕ ಡಾ. ಬಸವರಾಜ ಅವಟಿ, ಬೀದರ ಪಶುವೈದ್ಯಕೀಯ ಮಹಾವಿದ್ಯಾಲಯ ಡೀನ್ ಡಾ.ಎಮ್.ಕೆ.ತಾಂದಳೆ,.ಡಿಡಿಎಮ್ ನಬಾರ್ಡನ ವಿಷ್ಣುವರ್ಧನ ರಾಂಪುರ, ಬೀದರ ತೋಟಗಾರಿಕೆ ಪೊ??ಡ್ಯುಸರ ಕಂಪನಿ ಲಿಮಿಟೆಡ್ನ ಚೇತನ ದಬಕೆ, ಡಾ. ಪ್ರಕಾಶಕುಮಾರ ರಾಠೋಡ ಸಹಪ್ರಾಧ್ಯಾಪಕರು, ಡಾ. ಆಕಾಶ, ಸಹಾಯಕ ಪ್ರಾಧ್ಯಾಪಕರು, ವಿಶ್ವವಿದ್ಯಾಲಯದ ಸಿಬ್ಬಂದಿ ಸೇರಿದಂತೆ ವಿದ್ಯಾರ್ಥಿಗಳು ಉಪಸ್ಥಿತರಿದ್ದರು.

## 18ರಂದು ಬೃಹತ್ ಪ್ರತಿಭಟನೆ

ಮಲ್ಲಮ್ಮ ನುಡಿ ವಾರ್ತೆ

ಔರಾಧ:ಅ.15: ಅತಿವೃಷ್ಟಿಯಿಂದ ಬೆಳೆ ಹಾನಿಗೀಡಾಗಿ ತೀವ್ರ ಸಂಕಷ್ಟದಲ್ಲಿರುವ ರೈತರಿಗೆ ಪರಿಹಾರ ವಿತರಿಸಲು ವಿಳಂಬ ಮಾಡುತ್ತಿರುವ ರಾಜ್ಯ ಸರ್ಕಾರದ ವಿರುದ್ಧ ಬಿಜೆಪಿ ಜಿಲ್ಲಾ ರೈತ ಮೋರ್ಚಾ ನೇತೃತ್ವದಲ್ಲಿ ಅ.18ರಂದು ಔರಾದ(ಬಿ) ಪಟ್ಟಣದಲ್ಲಿ ಬೃಹತ್ ಪ್ರತಿಭಟನೆ ನಡೆಸಲಾಗುತ್ತಿದೆ ಎಂದು ಮಾಜಿ ಸಚಿವರು ಹಾಗೂ ಔರಾದ(ಬಿ) ಶಾಸಕರಾದ ಪ್ರಭು ಬಿ.ಚವ್ಹಾಣ ಅವರು ತಿಳಿಸಿದ್ದಾರೆ. ಈ ಕುರಿತು ಪತ್ರಿಕಾ ಪ್ರಕಟಣೆ ನೀಡಿರುವ ಅವರು, ಅಂದು ಬೆಳಗ್ಗೆ 10 ಗಂಟೆಗೆ ಪಟ್ಟಣದಲ್ಲಿ ಪ್ರತಿಭಟನಾ ರ್‍ಯಾಲಿ ನಡೆಯಲಿದೆ. ರ್‍ಯಾಲಿಯು ಎಪಿಎಂಸಿ ವೃತ್ತದಿಂದ ಆರಂಭಗೊಂಡು ಕನ್ನಡಾಂಬೆ ವೃತ್ತ, ಬಸ್ ನಿಲ್ದಾಣದ ಮಾರ್ಗವಾಗಿ ಬಸವೇಶ್ವರ ವೃತ್ತದ ಹತ್ತಿರ ಸಮಾವೇಶಗೊಳ್ಳಲಿದೆ. ಬಿಜೆಪಿ ಜಿಲ್ಲಾಧ್ಯಕ್ಷರಾದ ಸೋಮನಾಥ ಪಾಟೀಲ, ಜಿಲ್ಲಾ ರೈತ ಮೋರ್ಚಾ ಅಧ್ಯಕ್ಷ ಶಿವರಾಜ ಅಲ್ಮಾಜೆ ಸೇರಿದಂತೆ ಬಿಜೆಪಿಯ ಎಲ್ಲ ಶಾಸಕರು ಹಾಗೂ ಮುಖಂಡರು ಆಗಮಿಸುವರು ಎಂದಿದ್ದಾರೆ.

ಜಿಲ್ಲೆಯಲ್ಲಿ ದಾಖಲೆ ಪ್ರಮಾಣದಲ್ಲಿ ಮಳೆಯಾಗಿರುವುದರಿಂದ ರೈತರು ಕಷ್ಟಪಟ್ಟು ಬೆಳೆಸಿದ ಉದ್ದು, ಹೆಸರು, ಸೋಯಾ, ಜೋಳ, ಹತ್ತಿ, ಕಬ್ಬು ಸೇರಿದಂತೆ ಎಲ್ಲ ಬೆಳೆಗಳು ಸಂಪೂರ್ಣ ನೀರುಪಾಲಾಗಿವೆ.

# ಗ್ಯಾರಂಟಿ ಅನುಷ್ಠಾನ ಸಮಿತಿಯಿಂದ ಜಾಗೃತಿ ಅಭಿಯಾನ



ಮಲ್ಲಮ್ಮ ನುಡಿ ವಾರ್ತೆ

ಬೀದರ.ಅ.15: ರಾಜ್ಯ ಸರ್ಕಾರದ ಜನಪರ ಕಾರ್ಯಕ್ರಮಗಳಾದ ಗ್ಯಾರಂಟಿ ಯೋಜನೆಗಳನ್ನು ಪ್ರತಿ ಮನೆಗೂ ತಲುಪಿಸುವ ನಿಟ್ಟಿನಲ್ಲಿ ಮಾನ್ಯ ಮಾಜಿ ಶಾಸಕರಾದ ಸನ್ಮಾನ್ಯ ಶ್ರೀ ಅಶೋಕ ಖೇಣಿ ಸರ್ ರವರ ಮಾರ್ಗದರ್ಶನದಲ್ಲಿ ಬೀದರ ದಕ್ಷಿಣ ಕ್ಷೇತ್ರದ ತಾಲ್ಲೂಕ ಪಂಚಗ್ಯಾರಂಟಿ ಉಪಾಧ್ಯಕ್ಷರಾದ ಶ್ರೀ ರಾಜಕುಮಾರ ಮಡಕಿ ಹಾಗೂ ಸದಸ್ಯರ ನೇತೃತ್ವದಲ್ಲಿ ನಮ್ಮ ನಡೆ ಹಳ್ಳಿ ಕಡೆ

ಕಾರ್ಯಕ್ರಮವನ್ನು ಬೀದರ ದಕ್ಷಿಣ ವಿಧಾನಸಭಾ ಕ್ಷೇತ್ರದ ರೇಕುಳಗಿ ಗ್ರಾಮದ ವಾರ್ಡ್ 1-2 ರಲ್ಲಿ ಕರ್ನಾಟಕ ಸರ್ಕಾರದ ಪಂಚ್ ಗ್ಯಾರಂಟಿ ಯೋಜನೆಗಳಾದ, ಯುವನಿಧಿ:

ಈ ಯೋಜನೆ ಪದವೀಧರರು ಮತ್ತು ಡಿಪ್ಲೋಮಾ ಮುಗಿಸಿದ ಯುವಕರಿಗೆ ಯೋಜನೆಯ ಕುರಿತು ಪೂರ್ಣ ಮಾಹಿತಿ ಇಲ್ಲದಿರುವ ಕಾರಣ, ಸಮಿತಿಯು ಕಾಲೇಜುಗಳಲ್ಲಿ ಮತ್ತು ಗ್ರಾಮ ಮಟ್ಟದಲ್ಲಿ ವಿಶೇಷ ಪ್ರಚಾರ

ಆಂದೋಲನಗಳನ್ನು ನಡೆಸುತ್ತಿದೆ. ನೋಂದಣಿ ಪ್ರಕ್ರಿಯೆಯಲ್ಲಿ ಸಹಾಯ ಮಾಡುತ್ತಿದೆ. ಮತ್ತು ಗೃಹ ಲಕ್ಷ್ಮಿ, ಅನ್ನಭಾಗ್ಯ, ಶಕ್ತಿ ಯೋಜನೆ, ಗೃಹ ಜ್ಯೋತಿ, ಯೋಜನಗಳ ಮಹತ್ವದ ಬಗ್ಗೆ ಮನೆ ಮನೆಗೆ ತೆರಳಿ ಜನರಲ್ಲಿ ತಿಳಿಸಲಾಯಿತು.

ಈ ಸಂದರ್ಭದಲ್ಲಿ ಕಮಿಟಿಯ ಸದಸ್ಯರಾದ ಉದಯಕುಮಾರ ಚಟನಳ್ಳಿ, ಶಿವಕುಮಾರ ಕುತ್ತಾಬಬಾದ್, ಸೇವಾದಳ್ ಅಧ್ಯಕ್ಷರಾದ ಮೋಹಿನ್ ಪಠಾಣ್, ಪವನ ಬಾಪೂರೆ ಸೇರಿ ಅನೇಕ ಗ್ರಾಮಸ್ಥರು ಪಾಲ್ಗೊಂಡಿದರು.

# ಅಧ್ಯಕ್ಷ ಉಪಾಧ್ಯಕ್ಷ ಸ್ಥಾನಕ್ಕೆ ಅವಿರೋಧ ಆಯ್ಕೆ



ಮಲ್ಲಮ್ಮ ನುಡಿ ವಾರ್ತೆ

ಭಾಲ್ಕಿ:ಅ.15: ತಾಲೂಕಿನ ಹುಣಜಿ(ಎ) ಸಮೀಪದ ಮಹಾತ್ಮ ಗಾಂಧಿ ಸಹಕಾರ ಸಕ್ಕರೆ ಕಾರ್ಖಾನೆ ಆಡಳಿತ ಮಂಡಳಿಗೆ ನಿರೀಕ್ಷೆಯಂತೆ ನೂತನ ಅಧ್ಯಕ್ಷರಾಗಿ ಅಮರಕುಮಾರ ಭೀಮಣ್ಣ ಖಂಡ್ರೆ ಮತ್ತು ಉಪಾಧ್ಯಕ್ಷರಾಗಿ ನಳಿನಿ ಸುನಿಲಕುಮಾರ ಪಾಟೀಲ್ ಅವಿರೋಧ ಆಯ್ಕೆಯಾಗಿದ್ದಾರೆ. ಮಹಾತ್ಮ ಸಹಕಾರ ಸಕ್ಕರೆ ಕಾರ್ಖಾನೆಯಲ್ಲಿ ಬುಧವಾರ ಅಧ್ಯಕ್ಷ ಮತ್ತು ಉಪಾಧ್ಯಕ್ಷ ಸ್ಥಾನಕ್ಕೆ ಚುನಾವಣೆ ನಡೆಯಿತು. ಕಾರ್ಖಾನೆಗೆ ಒಟ್ಟು 13 ನಿರ್ದೇಶಕರ ಬಲ ಹೊಂದಿದ್ದು ಅಧ್ಯಕ್ಷ ಸ್ಥಾನಕ್ಕೆ ಅಮರಕುಮಾರ ಖಂಡ್ರೆ ಮತ್ತು ಉಪಾಧ್ಯಕ್ಷ ಸ್ಥಾನಕ್ಕೆ ನಳಿನಿ ಸುನಿಲ ಪಾಟೀಲ್ ನಾಮಪತ್ರ ಸಲ್ಲಿಸಿದರು.

ಈ ಎರಡು ಸ್ಥಾನಗಳಿಗೆ ತಲಾ ಒಂದೊಂದೆ ನಾಮಪತ್ರ ಸಲ್ಲಿಕೆಯಾಗಿದ್ದರಿಂದ ಚುನಾವಣಾಧಿಕಾರಿಗಳಾದ ತಹಸೀಲ್ದಾರ ಮಲ್ಲಿಕಾರ್ಜುನ ವಡ್ಡನಕೇರಿ, ಮಲ್ಲಿಕಾರ್ಜುನ ಕನ್ನಾಳೆ ಸೇರಿ ಅಧ್ಯಕ್ಷರನ್ನಾಗಿ ಅಮರಕುಮಾರ ಖಂಡ್ರೆ, ಉಪಾಧ್ಯಕ್ಷರಾಗಿ ನಳಿನಿ ಸುನಿಲ ಪಾಟೀಲ್ ಅವರನ್ನು ಘೋಷಣೆ ಮಾಡಿದರು.

ಈ ಸಂದರ್ಭದಲ್ಲಿ ನಿರ್ದೇಶಕರಾದ ಅಂಕೋಶ ಪಾಟೀಲ್, ಮಲ್ಲಿಕಾರ್ಜುನ ಪಾಟೀಲ್ ಮುಗನೂರ, ಸಂತೋಷಕುಮಾರ ಪಾಟೀಲ್, ಸಂದೀಪ ಮಾನೆ, ಶಂಕರ ಚವ್ಹಾಣ, ಸುರೇಖಾ ಶೆಟಕಾರ್, ಸಂಜುಕುಮಾರ ಬಾಬುರಾವ, ಸಂಜೀವರೆಡ್ಡಿ ಗೊಂಡೆ, ವಿನಾಯಕ ಬಿರಾದಾರ್, ಅಶೋಕಕುಮಾರ ಕೋಟೆ, ಮೋಹನಪ್ಪ ಶಂಕರೆಪ್ಪ, ಕಾರ್ಖಾನೆ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ ಬಿ.ಶಿವಣ್ಣ, ಕಚೇರಿ ಅಧೀಕ್ಷಕ ರಮೇಶ ಚಿದ್ರಿ, ಸಿಬ್ಬಂದಿಗಳಾದ ಗಣೇಶ ಪಾಟೀಲ್, ಶ್ರೀನಿವಾಸ ನೆಲವಾಡೆ, ವೀರಶೆಟ್ಟಿ ಉಚ್ಚೆಕರ್, ಉಮಾಕಾಂತ ಚಿಟ್ಮೆ ಸೇರಿದಂತೆ ಹಲವರು ಹಾಜರಿದ್ದರು.


ಕರ್ನಾಟಕ ನೀರಾವರಿ ನಿಗಮ ನಿಯಮಿತ

(ಕರ್ನಾಟಕ ಸರ್ಕಾರದ ಉದ್ಯಮ)

ಕಾರ್ಯಪಾಲಕ ಇಂಜಿನೀಯರ್, ಕ.ನೀ.ನಿ.ನಿ. ರವರ ಕಛೇರಿ,ಕೆ.ಪಿ.ಸಿ. ವಿಭಾಗ ನಂ-1 ಬೀದರ-585401

No. KNNL/EE/KPC1 /BDR /PB/TND/2025-26/ 1083    Date:09/10/2025

::"ಇ"ಪ್ರೊಕ್ಯೂರಮೇಂಟ್ ಅಲ್ಪಾವಧಿ ಟೆಂಡರ ಪ್ರಕಟಣೆ::

ವ್ಯವಸ್ಥಾಪಕ ನಿರ್ದೇಶಕರು ಕನೀನಿನಿ.ಬೆಂಗಳೂರು ಇವರ ಪರವಾಗಿ ಕೆಳಗೆ ಸಹಿ ಮಾಡಿರುವವರಿಂದ ಕಾರಂಜಾ ಯೋಜನೆ ನಿರ್ಮಾಣ ವಿಭಾಗ ನಂ-1 ಬೀದರ ಅಡಿಯಲ್ಲಿ 2701 ಲೆಕ್ಕ ಶಿರ್ಷಿಕೆ ಅಡಿಯಲ್ಲಿ ಬರುವ ಅಣೆಕಟ್ಟು ಸುರಕ್ಷತಾ ಕಾಮಗಾರಿಗಳಿಗೆ ಅರ್ಹ ಗುತ್ತಿಗೆದಾರರಿಂದ "ಇ"ಪ್ರೊಕ್ಯೂರಮೇಂಟ್‌ನಲ್ಲಿ ಸೇವಾ ಟೆಂಡರ್ ಏಕ ಲಕೋಟೆಯಲ್ಲಿ ಕರೆಯಲಾಗಿದ್ದು, ವಿವರ ಈ ಕೆಳಗಿನಂತಿದೆ. ಈ ಕಾಮಗಾರಿಯ ಟೆಂಡರ್‌ಗಿಟ್ಟ ಮೊತ್ತ **ರೂ.39,28,406.10** (ಮೂವತ್ತೊಂಬತ್ತು ಲಕ್ಷ ಇಪ್ಪತ್ತೆಂಟು ಸಾವಿರದ ನಾಲ್ಕು ನೂರಾ ಆರು ರೂಪಾಯಿ ಮತ್ತು ಒಂದು ಶೂನ್ಯ ಪೈಸೆ ಮಾತ್ರ ಇದ್ದು), ಇ.ಎಂ.ಡಿ. ಮೊತ್ತ **ರೂ. 78600/-** (ಎಪ್ಪತ್ತೆಂಟು ಸಾವಿರ ಆರು ನೂರಾ ಮಾತ್ರ ಇರುತ್ತದೆ). 1) "ಇ"ಪ್ರೊಕ್ಯೂರಮೇಂಟ್‌ನಲ್ಲಿ Karnataka Public Procurement Portal ಖಾಲಿ ಇಂಡೆಂಟ್ ನಂ: **SE0286** ಟೆಂಡರ ಫಾರ್ಮಗೆ ವಿನಂತಿ ಮತ್ತು ಪೇಪರಗಳನ್ನು ಡೌನಲೋಡ್ ಮಾಡಿಕೊಳ್ಳುವುದು ಮತ್ತು ಇ-ಪೋರ್ಟಲ್ ಮೂಲಕ ಭರ್ತಿ ಮಾಡಿ \ ಟೆಂಡರ ಸಲ್ಲಿಸುವ **ದಿನಾಂಕ: 13/10/2025 ರಿಂದ 23/10/2025 ರ 16.00 ಘಂಟೆಯವರೆಗೆ.** 2) **ದಿನಾಂಕ: 24-10-2025 ರಂದು 16.15 ಘಂಟೆಯ** ನಂತರ ತೆರೆಯಲಾಗುವುದು. (ಆರ್ಥಿಕ ಬಿಡ್ಡು) ಹೆಚ್ಚಿನ ವಿವರಗಳಿಗಾಗಿ ಕೆಳಗೆ ಸಹಿ ಮಾಡಿದವರ ಕಛೇರಿಗೆ ಕಛೇರಿ ವೇಳೆಯಲ್ಲಿ ಸಂಪರ್ಕಿಸಬಹುದು.

ಸಹಿ/- ಕಾರ್ಯಪಾಲಕ ಅಭಿಯಂತರರು
ಕನೀನಿನಿ, ಕೆ.ಪಿ.ಸಿ.ವಿಭಾಗ ನಂ.1, ಬೀದರ.

ವಾ.ಸಾ.ಸಂ.ಇ/ಬೀದರ/204/ಕೆ.ಎಸ್.ಎಂ.ಸಿ.&ಎ/2025-26


# ನಿಮ್ಮ ಮತ್ತು ನಿಮ್ಮವರ ಆರೋಗ್ಯ ರಕ್ಷಣೆಗೆ ಉತ್ತಮವಾಗಿ ಕೈ ತೊಳೆಯಿರಿ



**ಸುರಕ್ಷಿತ ಜೀವನಕ್ಕೆ ಸಪ್ತ ಸೂತ್ರಗಳು.**

1. ಕೆಮ್ಮು ಅಥವಾ ಸೀನಿದ ನಂತರ
2. ಅನಾರೋಗ್ಯ ವ್ಯಕ್ತಿಯ ಆರೈಕೆಯ ಮೊದಲು ಮತ್ತು ನಂತರ
3. ಸೋಂಕಿತ ಮೇಲ್ಮೈಗಳನ್ನು ಸ್ಪರ್ಶಿಸಿದ ನಂತರ
4. ಹೊರಗಿನಿಂದ ಹಿಂದಿರುಗಿದ ನಂತರ
5. ಆಹಾರ ತಯ್ಯಾರಿಸುವ ಮೊದಲು ಮತ್ತು ತಿನ್ನುವ ಆಹಾರ ಬಡಿಸುವ ಮೊದಲು
6. ಶೌಚಾಲಯ ಬಳಸಿದ ನಂತರ ಹಾಗು ಮಗುವಿನ ಮಲವನ್ನು ನಿರ್ವಹಿಸಿದ ನಂತರ
7. ಕಸ ಮತ್ತು ತ್ಯಾಜ್ಯ ನಿರ್ವಹಿಸಿದ ನಂತರ ಉತ್ತಮವಾಗಿ ಕೈ ತೊಳೆದುಕೊಳ್ಳಬೇಕು.

ಮಲ್ಲಮ್ಮ ನುಡಿ ವಾರ್ತೆ

ಭಾಲ್ಕಿ:ಅ.15: ನಿಮ್ಮ ಹಾಗು ನಿಮ್ಮವರ ಆರೋಗ್ಯದ ರಕ್ಷಣೆಗಾಗಿ ಉತ್ತಮವಾಗಿ ಕೈ ತೊಳೆಯುವ ಕಾರ್ಯ ಮಾಡಬೇಕು ಎಂದು ಶ್ರೀಕ್ಷೇತ್ರ ಧರ್ಮಸ್ಥಳ ಗ್ರಾಮಾಭಿವೃದ್ಧಿ ಯೋಜನೆಯ ಜಿಲ್ಲಾ ನಿರ್ದೇಶಕ ಮುರಳಿಧರ.ಎಚ್.ಎಲ್ ಹೇಳಿದರು.

ಪಟ್ಟಣದ ಶ್ರೀಕ್ಷೇತ್ರ ಧರ್ಮಸ್ಥಳ ಗ್ರಾಮಾಭಿವೃದ್ಧಿ ಯೋಜನೆಯ ಕಚೇರಿಯಲ್ಲಿ ಬುಧವಾರ ಶ್ರೀಕ್ಷೇತ್ರ ಗ್ರಾಮಾಭಿವೃದ್ಧಿ ಯೋಜನೆ ಬಿ.ಸಿ.ಟ್ರಸ್ಟ್ ಹಾಗು ಯುನಿಸೆಫ್ ಸಹಯೋಗದಲ್ಲಿ ನಡೆದ ವಿಶ್ವ ಕೈತೊಳೆಯುವ ದಿನಾಚರಣೆ ಕಾರ್ಯಕ್ರಮದ ಅಧ್ಯಕ್ಷತೆ ವಹಿಸಿ ಅವರು ಮಾತನಾಡಿದರು. ದೇಹದ ಎಲ್ಲಾ ಅಂಗಾಂಗಳಲ್ಲಿ ಕೈ ಉತ್ತಮವಾದ ಅಂಗಾಂಗವಾಗಿದೆ. ಒಳ್ಳೆಯದು ಮತ್ತು ಕೆಟ್ಟದು ಸೇರಿದಂತೆ ಎಲ್ಲಾ ಕೆಲಸಗಳಿಗೂ ಕೈ ಸಹಾಯಕವಾಗಿದೆ. ಕೈಯಿಂದಲೇ ಎಲ್ಲವನ್ನೂ ಮಾಡಲಾಗುವುದು. ಹೀಗಾಗಿ ನಮ್ಮ ಹಾಗು ನಮ್ಮವರ ಆರೋಗ್ಯ ರಕ್ಷಣೆಗಾಗಿ ಉತ್ತಮವಾಗಿ ಕೈ ತೊಳೆದುಕೊಳ್ಳಬೇಕು ಎಂದು ಹೇಳಿದರು.

ಕಾರ್ಯಕ್ರಮ ಉದ್ಘಾಟಿಸಿ ಮಾತನಾಡಿದ ಆರೋಗ್ಯ ಇಲಾಖೆಯ ಡಾ.ಶ್ವೇತಾ. ಎಸ್.ಬಿರಾದಾರ, 2008 ರಿಂದ ಇಲ್ಲಿಯವರೆಗೆ ವಿಶ್ವ ಕೈ ತೊಳೆಯುವ ದಿನ ಆಚರಿಸಲಾಗುತ್ತಿದೆ. ಕರೋನಾ ಕಾಲದಲ್ಲಿ ನಾವು ಕೈ ತೊಳೆಯಲು ಸ್ಯಾನಿಟೈಸರ್ ಉಪಯೋಗಿಸುತ್ತಿದ್ದೇವು. ಇದು ಒಳ್ಳೆಯ ಕೆಲಸ, ಸ್ಯಾನಿಟೈಸರ್ ನಲ್ಲಿ ಅಲ್ಕೊಹಾಲ್ ಇರುವುದರಿಂದ ಕೈಯಲ್ಲಿರುವ ಕ್ರಿಮಿಗಳು ನಾಶವಾಗಿ ಕೈ ಸ್ವಚ್ಛವಾಗಿರುತ್ತಿದ್ದವು. ನಾವು ಆಹಾರ ಸೇವಿಸುವ ಮೊದಲು ಉತ್ತಮವಾಗಿ ಕೈ ತೊಳೆದುಕೊಳ್ಳಬೇಕು ಎಂದು ಹೇಳಿದರು.

ಕರ್ನಾಟಕ ಕಾರ್ಯನಿರತ ಪತ್ರಕರ್ತರ ಸಂಘದ ತಾಲೂಕು ಅಧ್ಯಕ್ಷ ಜಯರಾಜ ದಾಬಶೆಟ್ಟಿ ಮಾತನಾಡಿ, ಉತ್ತಮವಾಗಿ ಕೈ ತೊಳೆಯುವುದರಿಂದ ಆರೋಗ್ಯ ರಕ್ಷಣೆ ಮತ್ತು ರೋಗಗಳಿಂದ ಮುಕ್ತಿ ಹೊಂದಬಹುದು. ಸಾಬೂನು ಹಚ್ಚಿ ಸುಮಾರು 20 ಸೆಕೆಂಡ್‌ಗಳ ಕಾಲ ಕೈಗಳನ್ನು ಚನ್ನಾಗಿ ಉಜ್ಜಿಕೊಂಡು ಕೈ ತೊಳೆಯಬೇಕು ಎಂದು ಹೇಳಿದರು.

ಈ ಸಂದರ್ಭದಲ್ಲಿ ಪ್ರಮುಖರಾದ ಶ್ರೀಕ್ಷೇತ್ರ ಧರ್ಮಸ್ಥಳ ಗ್ರಾಮಾಭಿವೃದ್ಧಿ ಬಿ.ಸಿ.ಟ್ರಸ್ಟ್ ತಾಲೂಕು ಯೋಜನಾಧಿಕಾರಿ ಸಂತೋಷ.ಟಿ.ಎನ್, ನಿರ್ಮಲ ನಿರ್ವಹಣೆ ಕಾರ್ಯ ನಿರ್ವಾಹಕ ಬಸವಲಿಂಗಯ್ಯ, ಶಿವಾನಂದ ಲಕಾಟಿ, ರೇಷ್ಮಾ ತಮಾಸಂಗೆ, ಲಾಯಪ್ಪ ಸಂಘ, ಪಿ.ಕೆ.ಪಲ್ಲವಿ, ಪವನ ಮೇತ್ರೆ, ಶ್ರೀಕಾಂತ ಶೇಗುಣಸಿ, ತ್ರಿವೇಣಿಕುಮಾರ ಉಪಸ್ಥಿತರಿದ್ದರು.

ಸಂತೋಷ ಸ್ವಾಗತಿಸಿದರು. ಬಸವಲಿಂಗಯ್ಯಾ ನಿರೂಪಿಸಿದರು.

# ರಾಜ್ಯದಲ್ಲಿ ಒಂದು ಲಕ್ಷ 40 ಸಾವಿರ ಜನರನ್ನು ಮದ್ಯಮುಕ್ತ ಮಾಡಿದ ಧರ್ಮಸ್ಥಳದ ಸಾಧನೆ ಪ್ರಶಂಸನೀಯ




ಮಲ್ಲಮ್ಮ ನುಡಿ ವಾರ್ತೆ

ಕಲಬುರಗಿ:ಅ:15: ಧರ್ಮಸ್ಥಳ ಗ್ರಾಮಾಭಿವೃದ್ಧಿ ಯೋಜನೆಯ ಅಖಿಲ ಕರ್ನಾಟಕ ಜನ ಜಾಗೃತಿ ವೇದಿಕೆಯ ಸಹಯೋಗದಲ್ಲಿ ಮದ್ಯ ವರ್ಜನ ಶಿಬಿರ ಹಮ್ಮಿಕೊಂಡು ರಾಜ್ಯದಲ್ಲಿ 1 ಲಕ್ಷ 40ಸಾವಿರ ಜನರನ್ನು ಮದ್ಯ ವ್ಯಸನದಿಂದ ಮುಕ್ತಗೊಳಿಸಿರುವುದು ಧರ್ಮಸ್ಥಳದ ಧರ್ಮಾಧಿಕಾರಿ ಡಾ. ಡಿ ವೀರೇಂದ್ರ ಹೆಗ್ಗಡೆಯವರ ದೊಡ್ಡ ಸಾಧನೆಯಾಗಿದ್ದು ಅಭಿನಂದನೆಯ ಕಾರ್ಯಕ್ರಮ ಎಂದು ಕರ್ನಾಟಕ ರಾಜ್ಯ ಮದ್ಯಪಾನ ಸಂಯಮ ಮಂಡಳಿ ಅಧ್ಯಕ್ಷರಾದ ಶರಣಪ್ಪ ಸಲದಾಪುರ ಅಭಿಪ್ರಾಯಪಟ್ಟರು.

ಕಲಬುರಗಿಯ ರಾಮತೀರ್ಥದ ಮಂದಾರ ಪುಷ್ಪ ಕಲ್ಯಾಣ ಮಂಟಪದಲ್ಲಿ ಅ.15ರಂದು ಬುಧವಾರ ಧರ್ಮಸ್ಥಳ ಗ್ರಾಮಾಭಿವೃದ್ಧಿ ಯೋಜನೆ, ಅಖಿಲ ಕರ್ನಾಟಕ ಜನ ಜಾಗೃತಿ ವೇದಿಕೆ ಟ್ರಸ್ಟ್ ಕಲಬುರಗಿ ಜಿಲ್ಲೆಯ ವತಿಯಿಂದ ನಡೆದ ಗಾಂಧಿ ಸ್ಮೃತಿ ಮತ್ತು ಜನಜಾಗೃತಿ ಸಮಾವೇಶದಲ್ಲಿ ಮಾತನಾಡಿದ ಅವರು ಡಾ. ಡಿ ವೀರೇಂದ್ರ ಹೆಗ್ಗಡೆಯವರ ಮಾರ್ಗದರ್ಶನದಲ್ಲಿ ಧರ್ಮಸ್ಥಳ ಗ್ರಾಮಾಭಿವೃದ್ಧಿ ಯೋಜನೆಯು ರಾಜ್ಯದಲ್ಲಿ ಗ್ರಾಮಗಳ ಅಭಿವೃದ್ಧಿ ,ಮಹಿಳೆಯರ ಸಬಲೀಕರಣ, ಪುರುಷರ ಬದುಕು ಹಸನ ಮಾಡುವಂತಹ ಕಾರ್ಯಗಳನ್ನು ನಡೆಸುತ್ತಿದ್ದು 6.50 ಲಕ್ಷ ಸ್ವಸಹಾಯ ಸಂಘಗಳ ಮೂಲಕ ಸುಮಾರು 55 ಲಕ್ಷ ಸದಸ್ಯರು ಸಮಾಜ ಪರಿವರ್ತನೆಯ ಕಾರ್ಯದಲ್ಲಿ ತೊಡಗಿಕೊಂಡಿದ್ದಾರೆ. ಮದ್ಯವರ್ಜನ ಶಿಬಿರ, ಕೆರೆಗಳ ಪುನರ್ ನಿರ್ಮಾಣ, ಶಿಕ್ಷಣಕ್ಕೆ ನೆರವು, ಆರ್ಥಿಕ ಸಬಲೀಕರಣ ಕ್ರಮಗಳು ಸಮಾಜದಲ್ಲಿ ಪ್ರಗತಿಗೆ ಕಾರಣವಾಗಿದೆ. ಬೀದರ್ ಜಿಲ್ಲೆಯಲ್ಲಿ ನಡೆಸಿದ ಕ್ಷೀರಕ್ರಾಂತಿಯಿಂದ ಗಮನಾರ್ಹ ಸಾಧನೆ ಮಾಡಲಾಗಿದೆ. ಧರ್ಮಸ್ಥಳ ಸಂಸ್ಥೆಗೆ ಅಂತರಾಷ್ಟ್ರೀಯ ಮಟ್ಟದ ಮಾನ್ಯತೆ ಲಭಿಸಿರುವುದು ಹೆಮ್ಮೆಯ ಸಂಗತಿ. ಮದ್ಯದ ವ್ಯಸನದಿಂದ ಮುಕ್ತಿಗೊಳಿಸಿ ನವ ಜೀವನ ಕಲ್ಪಿಸುವ ಪ್ರಯತ್ನ ಶ್ಲಾಘನೀಯವಾದುದು. ಈ ಎಲ್ಲ ಕಾರ್ಯಕ್ರಮಗಳು ಪ್ರಗತಿಗೆ ಶಕ್ತಿ ತುಂಬಿದೆ ಎಂದು ಹೇಳಿದರು.

ಮಹಿಳೆಯರ ಬಾಳಿಗೆ ನೆಮ್ಮದಿಯ ಬೆಳಕು: ವರ್ಷಾ ಜಾನೆ

ಧರ್ಮಸ್ಥಳ ಗ್ರಾಮಾಭಿವೃದ್ಧಿ ಯೋಜನೆಯಿಂದ ಜಾರಿ ಮಾಡಿದ ಕಾರ್ಯಕ್ರಮಗಳಿಂದ ಗ್ರಾಮಾಂತರ ಪ್ರದೇಶಗಳ ಮಹಿಳೆಯರ ಬಾಳಿನಲ್ಲಿ ನೆಮ್ಮದಿಯ ಬೆಳಕು ಮೂಡುವಂತಾಗಿದೆ ಎಂದು ಮಹಾನಗರ ಪಾಲಿಕೆಯ ಮೇಯರ್ ವರ್ಷಾ ಜಾನೆ ಹೇಳಿದರು.

ಗಾಂಧಿ ಜಯಂತಿ ಆಚರಣೆ-ಯ ಸಂದರ್ಭದಲ್ಲಿ ಪಾನಮುಕ್ತರ ಸಮಾವೇಶ ಮಾಡುವುದರ ಮೂಲಕ ಅರ್ಥಪೂರ್ಣ ಕಾರ್ಯಕ್ರಮ ಇದಾಗಿದ್ದು ಪುರುಷರು ಕುಡಿತದಿಂದ ಮುಕ್ತರಾದರೆ ಕುಟುಂಬವು ಆರೋಗ್ಯಪೂರ್ಣವಾಗಿ ಮಹಿಳೆಯರ ಬಾಳು ನೆಮ್ಮದಿಯಿಂದ ಕೂಡಿರುತ್ತದೆ. ಒಳ್ಳೆಯ ಜೀವನ ಕಂಡುಕೊಳ್ಳಲು ಸಾಧ್ಯವಾಗುತ್ತದೆ ಎಂದು ಪ್ರಶಂಶಿಸಿದರು.

ಧರ್ಮಸ್ಥಳದ ಯೋಜನೆ ಜನ ಸೇವಾ ಟ್ರಸ್ಟ್ ಆರಂಭಕ್ಕೆ ಪ್ರೇರಣೆ: ದೇವಿ ಮುತ್ಯಾ

ಧರ್ಮಸ್ಥಳದ ಧರ್ಮಾಧಿಕಾರಿ ಡಾ. ಡಿ ವೀರೇಂದ್ರ ಹೆಗ್ಗಡೆಯವರ ಧಾರ್ಮಿಕ, ಸಾಮಾಜಿಕ ಸೇವಾ ಕಾರ್ಯಗಳಿಂದ ಸಮಾಜ ಪ್ರಗತಿಯ ದಾಪುಗಾಲು ಹಾಕುತ್ತಿದ್ದು ಗ್ರಾಮೀಣ ಅಭಿವೃದ್ಧಿಯಲ್ಲಿ ದೊಡ್ಡ ಸಾಧನೆ ಮಾಡಲಾಗಿದೆ. ದೀಪದಿಂದ ದೀಪ ಬೆಳಗುವಂತೆ ಧರ್ಮಸ್ಥಳದ ಕಾರ್ಯಕ್ರಮಗಳಿಂದ ಬದುಕು ಹಸನಾಗುತ್ತಿದೆ ವ್ಯಸನ ಮುಕ್ತ ಸಮಾಜ ನಿರ್ಮಾಣದಿಂದ ಶಕ್ತಿ ಸಾಮರ್ಥ್ಯ ವರ್ಧನೆಯಾಗಿ ಮೌನ ಕ್ರಾಂತಿ ನಡೆಯುತ್ತಿದೆ. ಧರ್ಮಸ್ಥಳದ ಸೇವಾ ಕಾರ್ಯಗಳಿಂದ ನಮ್ಮ ಮಠ.ಪ್ರಭಾವಿತವಾಗಿದ್ದು "ಜನಸೇವಾ ಟ್ರಸ್ಟ್" ಆರಂಭ ಮಾಡಲು ಪ್ರೇರಣೆ ಸಿಕ್ಕಿದೆ. ಶೀಘ್ರದಲ್ಲೇ ಗ್ರಾಮಾಂತರ ಪ್ರದೇಶಕ್ಕೆ.ನಮ್ಮ ಟ್ರಸ್ಟ್.ಮೂಲಕ ಸೇವೆ ಪ್ರಾರಂಭಿಸಲಾಗುವುದು ಎಂದು ಶ್ರೀನಿವಾಸ ಸರಡಗಿ ಶಕ್ತಿ ಪೀಠದ ಡಾ. ಅಪ್ಪಾರಾವ್ ದೇವಿ ಮುತ್ಯಾ ಹೇಳಿದರು.

ಜ್ಞಾನದ ಬದುಕು ನೀಡುವ ಧರ್ಮಸ್ಥಳ: ಜಯಶ್ರೀ ಮತ್ತಿಮುಡು

ಧರ್ಮಸ್ಥಳ ಗ್ರಾಮಾಭಿವೃದ್ಧಿ ಯೋಜನೆಯ ಕಾರ್ಯಕ್ರಮಗಳಿಂದ ಮಹಿಳೆಯರಲ್ಲಿ ಸ್ವಾವಲಂಬನೆ ಹಾಗೂ ಆರ್ಥಿಕ ಪುನಶ್ಚೇತನದ ಕಾರ್ಯಕ್ರಮಗಳು ಅನುಷ್ಠಾನಗೊಳ್ಳುತ್ತಿರುವುದರಿಂದ ನಾಡಿನ ಜನತೆಗೆ ಜ್ಞಾನದ ಬದುಕನ್ನು ನೀಡಲಾಗುತ್ತಿದೆ ಎಂದು ಜಯಶ್ರೀ ಮತ್ತಿಮುಡು ಹೇಳಿದರು. ಮದ್ಯವ್ಯಸನ ಬಿಟ್ಟವರಿಗೆ ಹೊಸ ಬದುಕು ಕಲ್ಪಿಸುವ ನವ ಜೀವನ ಯೋಜನೆಯ ಫಲಾನುಭವಿಗಳಿಗೆ ಅಭಿನಂದನೆ.ಸಲ್ಲಿಸುತ್ತೇನೆ. ಧರ್ಮಸ್ಥಳ ಕ್ಷೇತ್ರವು ನಿಸ್ವಾರ್ಥಭಾವದಿಂದ ಸಮಾಜ ಸೇವೆಯನ್ನು ಮಾಡಿ ನಾಡಿನಾದ್ಯಂತ ಜನಮನ ಗೆದ್ದಿದೆ ಎಂದು ಅವರು ಹೇಳಿದರು.

ಸಮಾರಂಭದಲ್ಲಿ ಅಧ್ಯಕ್ಷತೆ ವಹಿಸಿದ ಅಖಿಲ ಕರ್ನಾಟಕ ಜನಜಾಗೃತಿ ವೇದಿಕೆಯ ಕಲಬುರ್ಗಿ ಜಿಲ್ಲಾ ಅಧ್ಯಕ್ಷರಾದ ಸಿ ಎನ್ ಬಾಬಳಗಾಂವ ಮಹಾತ್ಮ ಗಾಂಧೀಜಿಯವರ ಬದುಕು ಮತ್ತು ಸಾಧನೆ ನಮಗೆಲ್ಲಾ ಆದರ್ಶವಾಗಲಿ ಎಂದು ಹೇಳಿ ಠರಾವುಗಳನ್ನು ವಾಚನ ಮಾಡಿದರು.

ಕಾರ್ಯಕ್ರಮದಲ್ಲಿ ಜಿಲ್ಲಾ ಜನಜಾಗೃತಿ ವೇದಿಕೆಯ ಕೋಶಾಧಿಕಾರಿ ಡಾ. ಸದಾನಂದ ಪೆರ್ಲ, ಉಪಾಧ್ಯಕ್ಷರಾದ ಅನಿಲ್ ಕುಮಾರ್ ಡಾಂಗೆ, ಸದಸ್ಯರಾದ ಮಾಲತಿ ರೇಷ್ಮೆ, ಎಸ್ ಎಸ್ ಹಿರೇಮಠ, ಗಂಗಪ್ಪ ಹರಸೂರಕರ್, ಗ್ರಾಮಾಭಿವೃದ್ಧಿ ಯೋಜನೆಯ ಪ್ರಾದೇಶಿಕ ನಿರ್ದೇಶಕರಾದ ದಿನೇಶ್ ಪೂಜಾರಿ ಪ್ರಾಸ್ತಾವಿಕ ಭಾಷಣ ಮಾಡಿದರು. ನವಜೀವನ ಸಮಿತಿಯ ಸದಸ್ಯ ಆದಪ್ಪ ಭೀಮನಹಳ್ಳಿ ತಮ್ಮ ಅನಿಸಿಕೆ ಹಂಚಿಕೊಂಡರು. ಯೋಜನೆಯ ಜಿಲ್ಲಾ ನಿರ್ದೇಶಕರಾದ ಗಣಪತಿ ಮಾಳಿಂಜೆ ಸ್ವಾಗತ ಕೋರಿದರು. ಕಾರ್ಯಕ್ರಮದಲ್ಲಿ ರವಿಕುಮಾರ್ ನೀಲೂರು, ಸೂರ್ಯಕಾಂತಿ ಅವರಾದ, ಶಾಂತಪ್ಪ ಕೋರೆ, ಪ್ರಭಾವತಿ ಮೇತ್ರೆ ಮಲ್ಲಿನಾಥ ಮೈಂದರ್ಗಿ, ರಾಜಕುಮಾರ್ ರಿಯಾಜ್ ಅಕ್ತಾರ್ , ಕಲ್ಲನಗೌಡ, ರಾಜೇಶ್, ಕೃಷ್ಣಪ್ಪ, ಮಹಾಂತೇಶ ಚಿದಂಬರ ಕೊಲ್ಲಾಪುರ, ಮಮತಾ ಮತ್ತಿತರು ಉಪಸ್ಥಿತರಿದ್ದರು. ಪ್ರಶಾಂತ್ ನಿರೂಪಿಸಿದರು. ಮಂದಾರ ಪುಷ್ಪ ಪಬ್ಲಿಕ್ ಶಾಲೆಯ ವಿದ್ಯಾರ್ಥಿಗಳು ಪ್ರಾರ್ಥನೆ ಗೀತೆ ಹಾಡಿದರು. ಕಾರ್ಯಕ್ರಮದ ಪೂರ್ವಭಾವಿಯಾಗಿ ಆಳಂದ ಚೆಕ್ ಪೋಸ್ಟ್ ದೇವಿ ಮಹಾದ್ವಾರದಿಂದ ನವ ಜೀವನ ಸಮಿತಿ ಸದಸ್ಯರ ಹಾಗೂ ನಾಗರಿಕರ ಜಾಥಾ ನಡೆಯಿತು. ಕಾರ್ಯಕ್ರಮದಲ್ಲಿ ಮಹಾತ್ಮ ಗಾಂಧಿ, ರಾಣಿ ಅಬ್ಬಕ್ಕ, ಕಿತ್ತೂರು ಚೆನ್ನಮ್ಮ, ಸುಭಾಷ್ ಚಂದ್ರ ಬೋಸ್, ಭಗತ್ ಸಿಂಗ್, ಸ್ವಾಮಿ ವಿವೇಕಾನಂದ ಮುಂತಾದ ಮಹಾತ್ಮರ ವೇಷಭೂಷಣ ಧರಿಸಿದ ಮಕ್ಕಳು ಎಲ್ಲರ ಗಮನ ಸೆಳೆದರು. ಆಳಂದ ಕಮಲಾಪುರ ,ಅಫಜಲ್ಪುರ ಹಾಗೂ ಕಲಬುರಗಿ ಯೋಜನಾ ಕಚೇರಿಗಳ ವ್ಯಾಪ್ತಿಯ ನೂರಾರು ಜನರು ಕಾರ್ಯಕ್ರಮದಲ್ಲಿ ಪಾಲ್ಗೊಂಡಿದ್ದರು.

# ಅಕ್ಟೋಬರ್ 23 ರಂದು ಕಿತ್ತೂರು ರಾಣಿ ಚೆನ್ನಮ್ಮ ಜಯಂತಿಯನ್ನು ವಿಜೃಂಭಣೆಯಿಂದ ಆಚರಿಸಲು ನಿರ್ಧಾರ

ಮಲ್ಲಮ್ಮ ನುಡಿ ವಾರ್ತೆ

ಕಲಬುರಗಿ:ಅ.15-ಪ್ರತಿ ವರ್ಷದಂತೆ ಈ ವರ್ಷವೂ ಕೂಡ ಕಿತ್ತೂರು ರಾಣಿ ಚೆನ್ನಮ್ಮನವರ ಜಯಂತಿಯನ್ನು ಇದೇ ಅಕ್ಟೋಬರ್ 23 ರಂದು ವಿಜೃಂಭಣೆಯಿಂದ ಆಚರಿಸಲು ಜಿಲ್ಲಾಧಿಕಾರಿ ಕಚೇರಿಯ ಶಿಷ್ಟಾಚಾರ ತಹಶೀಲ್ದಾರರಾದ ಪಂಪಯ್ಯ. ಅವರ ಅಧ್ಯಕ್ಷತೆಯಲ್ಲಿ ಜರುಗಿದ ಸಭೆಯಲ್ಲಿ ನಿರ್ಧರಿಸಲಾಯಿತು.

ಇತ್ತೀಚಿಗೆ ಜಿಲ್ಲಾಧಿಕಾರಿಗಳ ಕಚೇರಿ ಸಭಾಂಗಣದಲ್ಲಿ ಜರುಗಿದ ಪೂರ್ವಭಾವಿ ಸಭೆಯ ಅಧ್ಯಕ್ಷತೆ ವಹಿಸಿ ಅವರು ಮಾತನಾಡಿ, ಇದೇ ಅಕ್ಟೋಬರ್ 23 ರಂದು ಕಲಬುರಗಿ ನಗರದ ಡಾ. ಎಸ್.ಎಂ ಪಂಡಿತ ರಂಗಮಂದಿರದಲ್ಲಿ ಕಿತ್ತೂರು ರಾಣಿ ಚೆನ್ನಮ್ಮ ಜಯಂತಿ ಕಾರ್ಯಕ್ರಮ ಜರುಗಲಿದ್ದು, ಈ ಕಾರ್ಯಕ್ರಮದಲ್ಲಿ ಅಧಿಕಾರಿಗಳು ಹಾಗೂ ಸಮಾಜದ ಮುಖಂಡರು ಹೆಚ್ಚಿನ ಸಂಖ್ಯೆಯಲ್ಲಿ ಭಾಗವಹಿಸಿ ಕಾರ್ಯಕ್ರಮ ಯಶಸ್ವಿಗೊಳಿಸಲು ಸೂಚಿಸಿದರು. ಅಂದು ಬೆಳಿಗ್ಗೆ 9 ಗಂಟೆಗೆ ಎಲ್ಲಾ ಜಿಲ್ಲಾ ಹಾಗೂ ತಾಲೂಕು ಮಟ್ಟದ ಸರ್ಕಾರಿ ಕಚೇರಿಗಳಲ್ಲಿ, ಶಾಲಾ-ಕಾಲೇಜುಗಳಲ್ಲಿ ಕಡ್ಡಾಯವಾಗಿ ಜಯಂತಿ ಆಚರಿಸಬೇಕು. ಸಭೆಯಲ್ಲಿ ನುರಿತ ಉಪನ್ಯಾಸಕರನ್ನು ಸಹ ಆಹ್ವಾನಿಸಲು ತೀರ್ಮಾನಿಸಲಾಯಿತು. ಕಾರ್ಯಕ್ರಮ ನಡೆಯುವ ಸ್ಥಳದಲ್ಲಿ ಕುಡಿಯುವ ನೀರು ವ್ಯವಸ್ಥೆ ಮಾಡುವುದರ ಜೊತೆಗೆ ಸ್ವಚ್ಛತೆ ಮತ್ತು ನೈರ್ಮಲ್ಯ ಕಾಪಾಡಬೇಕೆಂದು ಸಂಬಂಧಪಟ್ಟ ಅಧಿಕಾರಿಗಳಿಗೆ ಸೂಚಿಸಿದರು. ಸಭೆಯಲ್ಲಿ ಕಲಬುರಗಿ ಕನ್ನಡ ಮತ್ತು ಸಂಸ್ಕೃತಿ ಇಲಾಖೆ ಉಪನಿರ್ದೇಶಕಿ ಜಗದೀಶ್ವರಿ ನಾಶಿ ಸೇರಿದಂತೆ ಸಮಾಜದ ಮುಖಂಡರು, ವಿವಿಧ ಇಲಾಖೆಗಳ ಅಧಿಕಾರಿಗಳು ಹಾಗೂ ಸಿಬ್ಬಂದಿಗಳು ಉಪಸ್ಥಿತರಿದ್ದರು.

# ಜನನ-ಮರಣ ನೋಂದಣಿ ಕುರಿತು ತರಬೇತಿ ಕಾರ್ಯಾಗಾರ

ಮಲ್ಲಮ್ಮ ನುಡಿ ವಾರ್ತೆ



ಕಲಬುರಗಿ,ಅ.15.(ಕ.ವಾ)-ಕಲಬುರಗಿ ಜಿಲ್ಲೆಯ ಎಲ್ಲಾ ಗ್ರಾಮ ಪಂಚಾಯಿತಿಗಳ ಜನನ-ಮರಣಗಳ ಉಪನೋಂದಣಾಧಿಕಾರಿಗಳಾದ ಗ್ರಾಮ ಪಂಚಾಯತ್ ಕಾರ್ಯದರ್ಶಿಗಳಿಗೆ ನಾಗರಿಕ ನೋಂದಣಿ ಪದ್ಧತಿ ಅಡಿಯಲ್ಲಿ ಜನನ-ಮರಣ ನೋಂದಣಿಗಳ ಕುರಿತು ಮಂಗಳವಾರ ಕಲಬುರಗಿ ಜಿಲ್ಲಾ ಪಂಚಾಯತ್ ಹೊಸ ಸಭಾಂಗಣದಲ್ಲಿ ತರಬೇತಿ ಕಾರ್ಯಾಗಾರವನ್ನು ಹಮ್ಮಿಕೊಳ್ಳಲಾಯಿತು. ಕಾರ್ಯಾಗಾರದಲ್ಲಿ ಕಲಬುರಗಿ ಜಿಲ್ಲಾ ಸಂಖ್ಯಾ ಸಂಗ್ರಹಣಾಧಿಕಾರಿಗಳು ಹಾಗೂ ಅಪರ ಜಿಲ್ಲಾ ಜನನ, ಮರಣಗಳ ನೋಂದಣಾಧಿಕಾರಿ ಎಂ.ಡಿ. ಇಮ್ರಾನ್ ಅಲಿ ಅವರು ಮಾತನಾಡಿ, ಜನನ-ಮರಣ ನೋಂದಣಿಯು ಕಡ್ಡಾಯವಾಗಿದ್ದು, ತಮ್ಮ ವ್ಯಾಪ್ತಿಯಲ್ಲಿ ಜರುಗುವ ಪ್ರತಿ ಜನನ, ಮರಣ ಘಟನೆಗಳನ್ನು ತಪ್ಪದೇ 21 ದಿವಸಗಳಲ್ಲಿ ನೋಂದಣಿ ಮಾಡಿ, ಮೊದಲನೇ ಪ್ರಮಾಣ ಪತ್ರವನ್ನು ಉಚಿತವಾಗಿ ನೀಡಬೇಕು. ಜನನ-ಮರಣದ ಘಟನೆಗಳು ಯಾವುದೇ ಕಾರಣಕ್ಕೂ ಕೈಬಿಟ್ಟು ಹೋಗದಂತೆ ಎಚ್ಚರವಹಿಸಬೇಕೆಂದು ಸೂಚಿಸಿದರು. ಈ ಸಂದರ್ಭದಲ್ಲಿ ಕಲಬುರಗಿ ಜಿಲ್ಲಾ ಪಂಚಾಯತ್‌ನ ಮುಖ್ಯ ಯೋಜನಾಧಿಕಾರಿ ಶರಣಯ್ಯ ಮಠಪತಿ, ಜಿಲ್ಲಾ ಸಂಖ್ಯಾ ಸಂಗ್ರಹಣಾಧಿಕಾರಿಗಳು ಹಾಗೂ ಅಪರ ಜಿಲ್ಲಾ ಜನನ, ಮರಣಗಳ ನೋಂದಣಾಧಿಕಾರಿ ಎಂ.ಡಿ. ಇಮ್ರಾನ್ ಅಲಿ, ಜಿಲ್ಲಾ ಪಂಚಾಯತ್‌ನ ಯೋಜನಾ ಅಂದಾಜು ಮತ್ತು ಮೌಲ್ಯಮಾಪನ ಅಧಿಕಾರಿ ಮಧುಮತಿ, ಜಿಲ್ಲಾ ಸಂಖ್ಯಾ ಸಂಗ್ರಹಣಾಧಿಕಾರಿಗಳ ಕಾರ್ಯಾಲಯದ ಸಹಾಯಕ ನಿರ್ದೇಶಕ ಶರಣಬಸವ ಸೇರಿದಂತೆ ಜಿಲ್ಲಾ ಸಂಖ್ಯಾ ಸಂಗ್ರಹಣಾಧಿಕಾರಿಗಳ ಕಾರ್ಯಾಲಯದ ಸಹಾಯಕ ಸಾಂಖ್ಯಿಕ ಅಧಿಕಾರಿಗಳು, ಸಾಂಖ್ಯಿಕ ನಿರೀಕ್ಷಕರು ಮತ್ತು ಗಣತಿದಾರರು ಹಾಜರಿದ್ದರು.

# ಅಕ್ಟೋಬರ್ 27 ಮತ್ತು 30 ಹಾಗೂ ನವೆಂಬರ್ 3ಕ್ಕೆ ಮಿಂಚಿನ ನೋಂದಣಿ ಅಭಿಯಾನ-ಜಹೀರಾ ನಸೀಮ್

ಮಲ್ಲಮ್ಮ ನುಡಿ ವಾರ್ತೆ



ಕಲಬುರಗಿ,ಅ.15-ಈಶಾನ್ಯ ಶಿಕ್ಷಕರ ಕ್ಷೇತ್ರದ ಮತದಾರರ ಪಟ್ಟಿ ಪರಿಷ್ಕರಣೆ ಭಾಗವಾಗಿ ಇದೇ ಅಕ್ಟೋಬರ್ 27 ಮತ್ತು 30 ಹಾಗೂ ನವೆಂಬರ್ 3ಕ್ಕೆ ಬೆಳಿಗ್ಗೆ ರಿಂದ ಸಂಜೆ 5.30 ಗಂಟೆ ವರೆಗೆ ವಿಶೇಷ ಮಿಂಚಿನ ನೋಂದಣಿ ಅಭಿಯಾನ ಕ್ಷೇತ್ರದಾದ್ಯಂತ ಹಮ್ಮಿಕೊಳ್ಳಲಾಗಿದೆ ಎಂದು ಎಂದು ಕ್ಷೇತ್ರದ ಚುನಾವಣಾಧಿಕಾರಿಯಾಗಿರುವ ಪ್ರಾದೇಶಿಕ ಆಯುಕ್ತೆ ಜಹೀರಾ ನಸೀಮ್ ತಿಳಿಸಿದ್ದಾರೆ.

01.11.2025 ಅರ್ಹತಾ ದಿನಾಂಕಕ್ಕೆ ಅನ್ವಯಿಸುವಂತೆ ಮತದಾರರ ಪಟ್ಟಿ ಪರಿಷ್ಕರಣೆ ಕಾರ್ಯ ನಡೆದಿದ್ದು, ಅರ್ಹ ಮತದಾರರು ಪಟ್ಟಿಯಲ್ಲಿ ಹೆಸರು ಸೇರ್ಪಡೆಗೆ ನವೆಂಬರ್ 6 ಕೊನೆಯ ದಿನವಾಗಿದ್ದು, ಇದೂವರೆಗೆ ನಿರೀಕ್ಷಿತ ಮಟ್ಟದಲ್ಲಿ ಅರ್ಜಿ ಸ್ವೀಕೃತಿಯಾಗದರಿಂದ ಅರ್ಹ ಮತದಾರರು ಮತದಾರರ ಪಟ್ಟಿಯಿಂದ ಹೊರಗುಳಿಯಬಾರದು ಎಂಬ ಉದ್ದೇಶದಿಂದ ಈ ವಿಶೇಷ ನೊಂದಣಿ ಆಯೋಜಿಸಿದ್ದು, ಶಿಕ್ಷಕ ಮತದಾರರ ಇದರ ಲಾಭ ಪಡೆಯುವಂತೆ ಚುನಾವಣಾಧಿಕಾರಿಗಳು ತಿಳಿಸಿದ್ದಾರೆ.

ಕಲಬುರಗಿ ಮತ್ತು ಬಳ್ಳಾರಿ ಮಹಾನಗರ ಪಾಲಿಕೆ ಆಯುಕ್ತರು, ವಿಭಾಗದ ಎಲ್ಲಾ ಸಹಾಯಕ ಆಯುಕ್ತರು, ತಹಶೀಲ್ದಾರರು ಇದಕ್ಕಾಗಿ ತಾಲೂಕಾ ಮಟ್ಟದ ಎಲ್ಲಾ ಅಧಿಕಾರಿಗಳ ಸೇವೆ ಪಡೆಯಬೇಕು. ವಿಶೇಷವಾಗಿ ಉಪ ತಹಶೀಲ್ದಾರರು, ಪಿ.ಡಿ.ಓ., ಕಂದಾಯ ನಿರೀಕ್ಷಕರು, ಗ್ರಾಮ ಆಡಳಿತಾಧಿಕಾರಿಗಳು, ಗ್ರಾಮ ಸಹಾಯಕರು ಹಾಗೂ ಇತರ ಅಧಿಕಾರಿಗಳ ತಂಡಗಳು ಅರ್ಹ ಶಿಕ್ಷಣ ಸಂಸ್ಥೆಗಳನ್ನು ಗುರುತಿಸಿ ಇಲ್ಲಿ ನೋಂದಣಿಗಾಗಿ ಅರ್ಹರಿರುವ ಮತದಾರರನ್ನು ಕಛೇರಿ ಮುಖ್ಯಸ್ಥರ ಮುಖಾಂತರ ಸಂಪರ್ಕಿಸಬೇಕು. ಬೆಳಿಗ್ಗೆ 10-00 ಗಂಟೆಯಿಂದ ಸಾಯಂಕಾಲ 5-30 ರವರೆಗೆ ಬಿಡುಬಿಟ್ಟು ನಮೂನೆ-19 ರ ಅರ್ಜಿಯನ್ನು ಪೂರಕ ದಾಖಲೆಗಳೊಂದಿಗೆ ಸ್ವೀಕರಿಸಬೇಕೆಂದು ಮತದಾರರ ನೋಂದಣಾಧಿಕಾರಿಗಳು ತಿಳಿಸಿದ್ದಾರೆ.

ಇನ್ನು ಜಿಲ್ಲಾಧಿಕಾರಿಗಳು ಪ್ರತಿ ತಾಲೂಕಿಗೆ ಒಬ್ಬ ಜಿಲ್ಲಾ ಮಟ್ಟದ ಅಧಿಕಾರಿಯನ್ನು ವಿಶೇಷ ಮಿಂಚಿನ ನೋಂದಣಿ ಅಭಿಯಾನದ ಮೇಲುಸ್ತುವಾರಿಗೆ ನೋಡಲ್ ಅಧಿಕಾರಿಯೆಂದು ನೇಮಿಸಿ ಮಿಂಚಿನ ನೋಂದಣಿ ಅಭಿಯಾನದ ಯಶಸ್ವಿಯಾಗಿ ನೆರವೇರಿಸಬೇಕು ಎಂದು ಪ್ರಕಟಣೆಯಲ್ಲಿ ಜಹೀರಾ ನಸೀಮ್ ತಿಳಿಸಿದ್ದಾರೆ.

# ಅಕ್ಟೋಬರ್ 17 ರಂದು ಜಿಮ್ಸ್ ಆಸ್ಪತ್ರೆಯಲ್ಲಿ ವಿಶ್ವ ಟ್ರಾಮಾ ದಿನ ಕಾರ್ಯಕ್ರಮ

ಮಲ್ಲಮ್ಮ ನುಡಿ ವಾರ್ತೆ

ಕಲಬುರಗಿ:ಅ.15-ಕಲಬುರಗಿ ಜಿಮ್ಸ್ ಬೋಧನಾ ಆಸ್ಪತ್ರೆಯ ಶಸ್ತ್ರ ಚಿಕಿತ್ಸಾ ವಿಭಾಗದ ವತಿಯಿಂದ ಕೆ.ಎಸ್.ಸಿ, ಎಎಸ್‌ಐ ಕಲಬುರಗಿ ಸಿಟಿ ಬ್ರ್ಯಾಂಚ್ ಇವರ ಸಂಯುಕ್ತಾಶ್ರಯದಲ್ಲಿ ಇದೇ ಅಕ್ಟೋಬರ್ 17 ರಂದು ಬೆಳಿಗ್ಗೆ 9.30 ಗಂಟೆಗೆ ವಿಶ್ವ ಅಪಘಾತ ದಿನ (ವಿಶ್ವ ಟ್ರಾಮಾ ದಿನ) ಕಾರ್ಯಕ್ರಮವನ್ನು ಕಲಬುರಗಿ ಜಿಮ್ಸ್ ಆಸ್ಪತ್ರೆಯ 10ನೇ ಮಹಡಿಯಲ್ಲಿನ ಅಡಿಟೋರಿಯಂ ಹಾಲ್‌ದಲ್ಲಿ ಹಮ್ಮಿಕೊಳ್ಳಲಾಗಿದೆ.

ಕಲಬುರಗಿ ಜಿಮ್ಸ್ ನಿರ್ದೇಶಕ ಡಾ. ಉಮೇಶ ಎಸ್.ಆರ್. ಅವರು ಕಾರ್ಯಕ್ರಮದ ಅಧ್ಯಕ್ಷತೆ ವಹಿಸುವರು. ಕಾರ್ಯಕ್ರಮದಲ್ಲಿ ವೈದ್ಯಕೀಯ ಅಧೀಕ್ಷಕ ಡಾ. ಶಿವಕುಮಾರ್ ಸಿ.ಆರ್., ಜಿಮ್ಸ್ ಕಾಲೇಜಿನ ಪ್ರಾಂಶುಪಾಲ ಡಾ. ಅಜಯ್‌ಕುಮಾರ ಜಿ, ಜಿಲ್ಲಾ ಶಸ್ತ್ರ ಚಿಕಿತ್ಸಕ ಡಾ. ಅಸ್ನ ರಬಾ, ಟ್ರಾಮಾ ಕೇರ್ ಸೆಂಟರ್‌ನ ಸ್ಥಳೀಯ ವೈದ್ಯಾಧಿಕಾರಿ ಡಾ. ರಾಜಶೇಖರ ಮಾಲಿ, ಜನರಲ್ ಸರ್ಜರಿ ವಿಭಾಗದ ಸಹಾಯಕ ಪ್ರಾಧ್ಯಾಪಕ ಡಾ. ಸಂಗಮೇಶ, ಜನರಲ್ ಸರ್ಜರಿ ವಿಭಾಗದ ಸಹಾಯಕ ಪ್ರೊ. ಡಾ. ನಿತೀನ ಟೇಂಗಳಿ, ಕಲಬುರಗಿ ಬಿ.ಟಿ.ಹೆಚ್.ಜಿ. ಪ್ಲಾಸ್ಟಿಕ್ ಸರ್ಜರಿಯ ಹಿರಿಯ ಸಲಹೆಗಾರ ಡಾ. ಅಮರೇಶ ಬಿರಾದಾರ, ಕಲಬುರಗಿ ಎಂ.ಆರ್.ಎಂ.ಸಿ.ಯ ಜನರಲ್ ಸರ್ಜರಿ ವಿಭಾಗದ ಪ್ರಾಧ್ಯಾಪಕ ಡಾ. ರಾಜಶೇಖರ ಪಾಟೀಲ, ಅರವಳಿಕೆಶಾಸ್ತ್ರ ವಿಭಾಗದ ಸಹಾಯಕ ಪ್ರೊ. ಕೃಷ್ಣ ರಾಠೋಡ ಸೇರಿದಂತೆ ಸಂಬಂಧಪಟ್ಟ ವಿಭಾಗಗಳ ಮುಖ್ಯಸ್ಥರು ಉಪಸ್ಥಿತರಿರುವರು.

ಕಾರ್ಯಕ್ರಮದಲ್ಲಿ ವಿವಿಧ ವೈದ್ಯಕೀಯ ಕಾಲೇಜುಗಳಾದ ಜಿಮ್ಸ್, ಎಮ್.ಆರ್.ಎಂ.ಸಿ., ಇ.ಎಸ್.ಐ.ಸಿ. ಮತ್ತು ಕೆ.ಬಿ.ಎನ್. ಮತ್ತು ದಂತ ವೈದ್ಯಕೀಯ ಕಾಲೇಜುಗಳಾದ ಎಸ್. ನಿಜಲಿಂಗಪ್ಪ, ಅಲ್ ಬದರ್ ಮತ್ತು ಇ.ಎಸ್.ಐ.ಸಿ.. ಎಲ್ಲಾ ಕಾಲೇಜುಗಳ ಎಲ್ಲಾ ವಿಭಾಗಗಳ ಮುಖ್ಯಸ್ಥರು, ಬೋಧಕ-ಬೋಧಕೇತರ ಸಿಬ್ಬಂದಿಗಳು ಹಾಗೂ ವಿದ್ಯಾರ್ಥಿ-ವಿದ್ಯಾರ್ಥಿನಿಯರು ಪಾಲ್ಗೊಳ್ಳುವರು.

ಈ ಕಾರ್ಯಕ್ರಮದ ಘೋಷವಾಕ್ಯವಾದ "prevent Trauma-prepare for Trauma-Provide trauma service" ಕುರಿತು ವಿವಿಧ ವಿಭಾಗಗಳ ನುರಿತ ತಜ್ಞರಿಂದ ಉಪನ್ಯಾಸ ಕಾರ್ಯಕ್ರಮ ಜರುಗಲಿದೆ.

# ಕರ್ನಾಟಕ ರಾಜ್ಯ ಮಾಲಿನ್ಯ ನಿಯಂತ್ರಣ ಮಂಡಳಿಯ ಅಧ್ಯಕ್ಷರ ಪ್ರವಾಸ

ಮಲ್ಲಮ್ಮ ನುಡಿ ವಾರ್ತೆ

ಕಲಬುರಗಿ:ಅ.15-ಕರ್ನಾಟಕ ರಾಜ್ಯ ಮಾಲಿನ್ಯ ನಿಯಂತ್ರಣ ಮಂಡಳಿಯ ಅಧ್ಯಕ್ಷರಾದ ಪಿ.ಎಂ. ನರೇಂದ್ರಸ್ವಾಮಿ ಅವರು ಹೈದ್ರಾಬಾದ್‌ದಿಂದ ರಸ್ತೆ ಮೂಲಕ ಅಕ್ಟೋಬರ್ 18 ರಂದು ಶನಿವಾರ ಬೆಳಿಗ್ಗೆ 10 ಗಂಟೆಗೆ ಕಲಬುರಗಿಗೆ ಆಗಮಿಸುವರು. ನಂತರ ಅಂದು ಬೆಳಿಗ್ಗೆ 10 ಗಂಟೆಗೆ ಕಲಬುರಗಿಯ ಕೆ.ಸಿ.ಟಿ. ಕಾಲೇಜು ಮೈದಾನದಲ್ಲಿ ಹಮ್ಮಿಕೊಳ್ಳಲಾದ ಕಲಬುರಗಿ ಮತ್ತು ಯಾದಗಿರಿ ಜಿಲ್ಲಾ ಮಟ್ಟದ ಮಂಡಳಿಯ ಸುವರ್ಣ ಮಹೋತ್ಸವ ಕಾರ್ಯಕ್ರಮದಲ್ಲಿ ಭಾಗವಹಿಸುವರು. ನಂತರ ಮಧ್ಯಾಹ್ನ 1 ಗಂಟೆಗೆ ಕಲಬುರಗಿಯಿಂದ ರಸ್ತೆ ಮೂಲಕ ಬೀದರಿಗೆ ಪ್ರಯಾಣಿಸುವರು.

# ಅಕ್ಟೋಬರ್ 18 ರಂದು ಗ್ರಾಹಕರ ಸಂಪರ್ಕ ಸಭೆ

ಮಲ್ಲಮ್ಮ ನುಡಿ ವಾರ್ತೆ

ಕಲಬುರಗಿ,ಅ.15-ಗ್ರಾಹಕರೊಡನೆ ಉತ್ತಮ ಭಾಂದವ್ಯ ಬೆಸೆಯುವ ನಿಟ್ಟಿನಲ್ಲಿ ಗುಲಬರ್ಗಾ ವಿದ್ಯುಚ್ಛಕ್ತಿ ಸರಬರಾಜು ಕಂಪನಿ ನಿಯಮಿತ ಕಲಬುರಗಿ ಎಲ್ಲಾ ಜೆಸ್ಕಾಂ ನಗರ ಉಪ ವಿಭಾಗಗಳ ವ್ಯಾಪ್ತಿಗೆ ಬರುವ ಗ್ರಾಹಕರಿಗಾಗಿ ಇದೇ ಅಕ್ಟೋಬರ್ 18 ರಂದು ಗ್ರಾಹಕರ ಸಂಪರ್ಕ ಸಭೆಯನ್ನು ಹಮ್ಮಿಕೊಳ್ಳಲಾಗಿದೆ ಎಂದು ಕಲಬುರಗಿ ಜೆಸ್ಕಾಂ ಕಾರ್ಯ ಮತ್ತು ಪಾಲನೆ ನಗರ ವಿಭಾಗದ ಕಾರ್ಯನಿರ್ವಾಹಕ ಅಭಿಯಂತರರು ತಿಳಿಸಿದ್ದಾರೆ.

ಕಲಬುರಗಿ ಜೆಸ್ಕಾಂ ನಗರ ಉಪವಿಭಾಗ-1ಕ್ಕೆ ಸಂಬಂಧಿಸಿದಂತೆ ಅಂದು ಬೆಳಿಗ್ಗೆ 11 ರಿಂದ ಮಧ್ಯಾಹ್ನ 1.30 ಗಂಟೆಯವರೆಗೆ ಕಲಬುರಗಿ ಸುಪರ್ ಮಾರ್ಕೆಟಿನ ನಗರ ಉಪ ವಿಭಾಗ-1ರ ಕಾರ್ಯ ಮತ್ತು ಪಾಲನೆ ಸಹಾಯಕ ಕಾರ್ಯನಿರ್ವಾಹಕ ಅಭಿಯಂತರರು(ವಿ) ಕಚೇರಿಯಲ್ಲಿ ಹಾಗೂ ಕಲಬುರಗಿ ಜೆಸ್ಕಾಂ ನಗರ ಉಪ ವಿಭಾಗ-2ಕ್ಕೆ ಸಂಬಂಧಿಸಿದಂತೆ ಅಂದು ಮಧ್ಯಾಹ್ನ 3 ರಿಂದ ಸಂಜೆ 5.30 ಗಂಟೆಗೆ ನಗರ ಉಪ ವಿಭಾಗ-2ರ ಕಾರ್ಯ ಮತ್ತು ಪಾಲನೆ ಸಹಾಯಕ ಕಾರ್ಯನಿರ್ವಾಹಕ ಅಭಿಯಂತರರು(ವಿ) ಕಚೇರಿಯಲ್ಲಿ ಜರುಗಲಿದೆ.

ಕಲಬುರಗಿ ಜೆಸ್ಕಾಂ ನಗರ ಉಪ ವಿಭಾಗ-3ಕ್ಕೆ ಸಂಬಂಧಿಸಿದಂತೆ ಅಂದು ಬೆಳಿಗ್ಗೆ 11 ರಿಂದ ಮಧ್ಯಾಹ್ನ 1.30 ಗಂಟೆಯವರೆಗೆ ನಗರ ಉಪ ವಿಭಾಗ-3ರ ಕಾರ್ಯ ಮತ್ತು ಪಾಲನೆ ಸಹಾಯಕ ಕಾರ್ಯನಿರ್ವಾಹಕ ಅಭಿಯಂತರರು(ವಿ) ಕಚೇರಿಯಲ್ಲಿ ಹಾಗೂ ಕಲಬುರಗಿ ನಗರ ಉಪ ವಿಭಾಗ-4ಕ್ಕೆ ಸಂಬಂಧಿಸಿದಂತೆ ಅಂದು ಮಧ್ಯಾಹ್ನ 3 ರಿಂದ ಸಂಜೆ 5.30 ಗಂಟೆಯವರೆಗೆ ನಗರ ಉಪ ವಿಭಾಗ-4ರ ಜೆಸ್ಕಾಂ ಕಾರ್ಯ ಮತ್ತು ಪಾಲನೆ ಸಹಾಯಕ ಕಾರ್ಯನಿರ್ವಾಹಕ ಅಭಿಯಂತರರು(ವಿ) ಕಚೇರಿಯಲ್ಲಿ ಜರುಗಲಿದೆ. ಈ ಗ್ರಾಹಕರ ಸಂಪರ್ಕ ಸಭೆಯಲ್ಲಿ ಗ್ರಾಹಕರು ತಮ್ಮ ಯಾವುದೇ ತರಹದ ವಿದ್ಯುಚ್ಛಕ್ತಿಗೆ ಸಂಬಂಧಿಸಿದ ಕುಂದುಕೊರತೆಗಳನ್ನು ಸಲ್ಲಿಸಬಹುದಾಗಿದೆ. ಮೇಲ್ಕಂಡ ದಿನದಂದು ನಡೆಯುವ ಈ ಗ್ರಾಹಕರ ಕುಂದುಕೊರತೆ ಸಭೆಯಲ್ಲಿ ಗ್ರಾಹಕರು ಹೆಚ್ಚಿನ ಸಂಖ್ಯೆಯಲ್ಲಿ ಭಾಗವಹಿಸಿ ತಮ್ಮ ವಿದ್ಯುತ್‌ಗೆ ಸಂಬಂಧಿಸಿದ ಸಮಸ್ಯೆಗಳನ್ನು ಪರಿಹರಿಸಿಕೊಳ್ಳಬಹುದಾಗಿದೆ. ಎಂದು ಅವರು ತಿಳಿಸಿದ್ದಾರೆ.

# ಬಿಜೆಪಿಗೆ ಮಹಿಳಾ ಕಾಂಗ್ರೆಸ್‌ನಿಂದ ಪೋಸ್ಟರ್ ಕೌಂಟರ್

ಮಲ್ಲಮ್ಮ ನುಡಿ ವಾರ್ತೆ



ಕಲಬುರಗಿ: ಗ್ರಾಮೀಣಾಭಿವೃದ್ಧಿ ಸಚಿವ ಮತ್ತು ಪಂಚಾಯತ್ ರಾಜ್ ಪ್ರಿಯಾಂಕ್ ಖರ್ಗೆ ಅವರು ಆರ್‌ಎಸ್‌ಎಸ್‌ನ ಬ್ಯಾನ್ ಮಾಡಬೇಕಂತ ಎಲ್ಲೂ ಹೇಳಿಲ್ಲ. ಸರ್ಕಾರಿ ಮತ್ತು ಸಾರ್ವಜನಿಕ ಜಾಗಗಳಲ್ಲಿ ಮಾಡಬಾರದು ಅಂತ ಹೇಳಿದ್ದಾರೆ. ಅದಕ್ಕೆ ಕಾನೂನಿನಲ್ಲಿ ಅವಕಾಶವೂ ಇದೆ. ಹೈ ಕೋರ್ಟ್ ಆದೇಶ ಪ್ರಕಾರ ಎಲ್ಲಿ ಬೇಕೋ ಅಲ್ಲಿ ಮೆರವಣಿಗೆ ಕೂಡ ಮಾಡುವ ಹಾಗಿಲ್ಲ ಎಂದು ಕಲಬುರಗಿ ಜಿಲ್ಲಾ ಮಹಿಳಾ ಕಾಂಗ್ರೆಸ್‌ನಿಂದ ಪೋಸ್ಟರ್ ಹಚ್ಚು ಮೂಲಕ ಬಿಜೆಪಿಗೆ ಕೌಂಟರ್ ನೀಡಿದರು. ಈ ಸಂದರ್ಭದಲ್ಲಿ ಮಾತನಾಡಿದ ಮಹಿಳಾ ಕಾಂಗ್ರೆಸ್ ಜಿಲ್ಲಾಧ್ಯಕ್ಷೆ ರೇಣುಕಾ ಸಿಂಗೆ ಆರ್‌ಎಸ್‌ಎಸ್‌ಅನ್ನು ಅವರು, ಈ ಮುಂಚೆಯೇ ಹಲವಾರು ಸಲ ಬ್ಯಾನ್ ಮಾಡಲಾಗಿತ್ತು. ಆದರೆ ಈಗ ಸಚಿವರು ಆರ್‌ಎಸ್‌ಎಸ್‌ನ ಬ್ಯಾನ್ ಮಾಡೋಕು ಅಂತ ಹೇಳಿಲ್ಲ. ಸರ್ಕಾರಿ ಕ್ಷೇತ್ರಗಳಲ್ಲಿ ಸಾರ್ವಜನಿಕ ಆವರಣದಲ್ಲಿ ಅದನ್ನ ಬ್ಯಾನ್ ಮಾಡಬೇಕು ಆರ್‌ಎಸ್‌ಎಸ್ ಚಟುವಟಿಕೆಗಳನ್ನು ಅವಕಾಶ ಕೊಡಬಾರದು ಅಂತ ಹೇಳಿದ್ದಾರೆ ಎಂದು ಸಮರ್ಥಿಸಿಕೊಂಡ ಅವರು, ಇಷ್ಟೆಲ್ಲಾ ಹುಯ್ಯು ಎಬ್ಬಿಸಿರುವುದು. ಅದರ ನಾವು ಪ್ರಿಯಾಂಕ್ ಖರ್ಗೆ ಅವರ ಬೆಂಬಲಕ್ಕೆ ನಿಲುತ್ತಿದ್ದೇವೆ. ಬಿಜೆಪಿಯವರು ಯಾರನ್ನು ಆರಾಧಿಸಿ ಪೂಜಿಸುವ ಸರ್ದಾರ್ ವಲ್ಲಭಾಯಿ ಪಟೇಲ್ ಅವರು ಬ್ಯಾನ್ ಮಾಡಿದ್ದರು. ಇಂದಿರಾ ಗಾಂಧಿಯವರು ಬ್ಯಾನ್ ಮಾಡಿದ್ದರು. ನರಸಿಂಹ ರಾವ್ ಅವರು ಬ್ಯಾನ್ ಮಾಡಿದ್ದರು ಎಂದು ಹೇಳಿದರು. ಕೆಲವು ಕಿಡಿಗೇಡಿಗಳ ಭಾಷೆ ನೋಡಿದರೆ ಆರ್‌ಎಸ್‌ಎಸ್ ಸೃಷ್ಟಿಸಿರುವ ಸಂಸ್ಕೃತಿ ಮತ್ತು ಅದರ ಗುರಿನ ಏನೆಂಬುದನ್ನು ಈಗ ಸಾರ್ವಜನಿಕವಾಗಿ ಸ್ಪಷ್ಟವಾಗುತ್ತಿದೆ. ಈ ಒಟ್ಟಿನಲ್ಲಿ ಪ್ರಿಯಾಂಕ ಅವರ ಬಗ್ಗೆ ಬಳಸುತ್ತಿರುವ ಭಾಷೆಯನ್ನು ನೋಡಿದರೆ ಆರ್‌ಎಸ್‌ಎಸ್ ಸೃಷ್ಟಿಸಿರುವ ಭಾಷಿಕ ದ ಸಂಸ್ಕೃತಿ ಮತ್ತು ಅದರ ಗುರಿ ಎಂತದೆಂಬುದು ಎಲ್ಲರಿಗೂ ಜಗ ಜಾಹಿರವಾಗುತ್ತದೆ ಮತ್ತು ಅರ್ಥವಾಗುತ್ತದೆ. ಇಂಥ ನೀಚತನದ ಸಂಸ್ಕೃತಿಯನ್ನು ಅದು ಪ್ರತಿಪಾದನೆ ಮಾಡಿರುವುದು ನಮ್ಮ ದೇಶದ ವರ್ತಮಾನ ಮತ್ತು ಭವಿಷ್ಯಕ್ಕೆ ಅತ್ಯಂತ ಅಪಾಯಕಾರಿಯಾಗಿದೆ ಎಂದರು. ಪ್ರಧಾನಿ ನರೇಂದ್ರ ಮೋದಿ ಅವರಿಗೂ ಮತ್ತು ಗ್ರಹಣ ಸಚಿವ ಅಮಿತ್ ಅವರಿಗೂ ಪತ್ರ ಬರೆದು ಮನವಿ ಮಾಡಿ ಸಾಂವಿಧಾನಿಕ ಲವಲೇಶ ಎಳ್ಳಿನಷ್ಟಾದರೂ ಅವರಲ್ಲಿ ಪ್ರಜ್ಞೆ ಇದ್ದರೆ ಅವರೇ ಆರ್‌ಎಸ್‌ಎಸ್ ಅನ್ನ ಬ್ಯಾನ್ ಮಾಡಬೇಕು ಎಂದು ಆಗ್ರಹಿಸಲಾಗುವುದೆಂದರು. ಈ ಸಂದರ್ಭದಲ್ಲಿ ಮಹಿಳಾ ಕಾಂಗ್ರೆಸ್ ಮುಖಂಡರಾದ ಚಂದ್ರಿಕಾ ಪರಮೇಶ್ವರ್, ವಾಣಿಶ್ರೀ ಸಾಗರಕ್, ಬಸಮ್ಮ, ಸಂಗೀತಾ ಪಾಟೀಲ್, ಸಂವಿತಾ ಒಂಟಿ ಅವರು ಸೇರಿದಂತೆ ಅನೇಕರಿದ್ದರು.

# ಆರ್ ಎಸ್ ಎಸ್ ವಿರುದ್ಧ ಯುಥ ಕಾಂಗ್ರೆಸ್ ಕಾರ್ಯಕರ್ತರಿಂದ ಟೈರಿಗೆ ಬೆಂಕಿ ಹಚ್ಚಿ ಪ್ರತಿಭಟನೆ

ಮಲ್ಲಮ್ಮ ನುಡಿ ವಾರ್ತೆ



ಕಲಬುರಗಿ: ಸರಕಾರಿ ಪ್ರದೇಶದಲ್ಲಿ ಆರ್ ಎಸ್ ಎಸ್ ಕಾರ್ಯಕ್ರಮ ನಿಷೇಧಿಸುವಂತೆ ಮುಖ್ಯಮಂತ್ರಿ ಸಿದ್ದರಾಮಯ್ಯನವರಿಗೆ ಪತ್ರ ಬರೆದಿದ್ದ ಸಚಿವ ಪ್ರಿಯಾಂಕ್ ಖರ್ಗೆ ಅವರಿಗೆ ಅಶ್ಲೀಲ ಪದ ಬಳಿಸಿ ಸಚಿವ ಪ್ರಿಯಾಂಕ್ ಖರ್ಗೆ ಅವರಿಗೆ ಕೊಲೆ ಬೇದರಿಕೆ ಹಾಕಿದ ಹಿನ್ನೆಲೆಯಲ್ಲಿ ನಗರದ ಜಿಲ್ಲಾಧಿಕಾರಿಗಳ ಕಚೇರಿ ಎದುರುಗಡೆ ಟೈರಿಗೆ ಬೆಂಕಿ ಹಚ್ಚಿ ರಸ್ತೆ ತಡೆದು ಕಾಂಗ್ರೆಸ್ ಕಾರ್ಯಕರ್ತರಿಂದ ಆರ್ ಎಸ್ ಎಸ್ ವಿರುದ್ಧ ಘೋಷಣೆ ಕೂಗಿ ಆಕ್ರೋಶ ವ್ಯಕ್ತಪಡಿಸಿದರು.

ಸಚಿವ ಪ್ರಿಯಾಂಕ್ ಖರ್ಗೆ ಅವರಿಗೆ ಬೆದರಿಕೆ ಕರೆ ಬಂದಿರುವ ಫೋನ್ ನಂಬರ್ ಗಳನ್ನು ಪತ್ತೆ ಹಚ್ಚಿ ತಪ್ಪಿತಸ್ಥರ ವಿರುದ್ಧ ಸೂಕ್ತ ಕ್ರಮ ಕೈಗೊಳ್ಳುವಂತೆ ಕಾಂಗ್ರೆಸ್ ಪಕ್ಷದ ಯುವ ಘಟಕದ ಅಧ್ಯಕ್ಷ ಶಕೀಲ್ ಅಹಮದ್ ಸರಡಗಿ ಆಗ್ರಹಿಸಿದರು.

ಈ ಸಂದರ್ಭದಲ್ಲಿ ಕಾಂಗ್ರೆಸ್ ಮುಖಂಡರಾದ ಪ್ರವೀಣ್ ಪಾಟೀಲ್ ಹರವಾಳ, ಡಾ. ಕಿರಣ ದೇಶಮುಖ್, ಫಾರೂಕ್ ಮಾನಿಯಾಳ, ರಾಜೀವ್ ಜಾನೆ, ಶಿವಾನಂದ ಹೊನಗುಂಟಿ, ಈರಣ್ಣ ಪಾಟೀಲ್ ಝಳಕಿ, ಓವೈಸ್ ಶೇಖ್, ಕುಸರೋ ಜಾಗಿರದಾರ, ಪ್ರಕಾಶ ಕಪನೂರ್, ರೇಣುಕಾ ಸಿಂಗೆ, ದಿನೇಶ ದೊಡ್ಡಮನಿ, ದೇವೇಂದ್ರ ಸಿನ್ನೂರ್, ಅಶ್ವಿನ್ ಸಂಕಾ, ಶೇಖ ಸಮರಿನ್ ಸೇರಿದಂತೆ ಇತರರು ಉಪಸ್ಥಿತರಿದ್ದರು.

# ಉತ್ತಮ ಹವಾಮಾನ ಕ್ರಮಗಳ ಅಳವಡಿಕೆ" ಕುರಿತು ತರಬೇತಿ ಕಾರ್ಯಕ್ರಮ

ಮಲ್ಲಮ್ಮ ನುಡಿ ವಾರ್ತೆ

ಬೆಂಗಳೂರು, ಅಕ್ಟೋಬರ್ 14-ಪರಿಸರ ನಿರ್ವಹಣೆ ಮತ್ತು ನೀತಿ ಸಂಶೋಧನಾ ಸಂಸ್ಥೆಯು ಅರಣ್ಯ, ಪರಿಸರ ಮತ್ತು ಹವಾಮಾನ ಬದಲಾವಣೆ ಸಚಿವಾಲಯ ಅವರ ಅನುದಾನದಲ್ಲಿ "ಹವಾಮಾನ ಕ್ರಮವರ್ಧನೆ: ಕೃಷಿ, ಜಲಸಂಪನ್ಮೂಲ, ತೋಟಗಾರಿಕೆ ಮತ್ತು ಜಾನುವಾರು ವಲಯಗಳಲ್ಲಿ ಉತ್ತಮ ಹವಾಮಾನ ಕ್ರಮಗಳನ್ನು ಅಳವಡಿಸಿಕೊಳ್ಳುವುದರ ಕುರಿತು" ಎರಡು ದಿನಗಳ ತರಬೇತಿ ಕಾರ್ಯಕ್ರಮವನ್ನು ನ್ಯೂ ಕುಮಾರಕೃಪ ಅತಿಥಿ ಗೃಹದಲ್ಲಿ ಆಯೋಜಿಸಿದ್ದು, ರಾಯಚೂರು ಕೃಷಿ ವಿಶ್ವವಿದ್ಯಾಲಯದ ಕುಲಪತಿಗಳಾದ ಡಾ.ಹನುಮಂತಪ್ಪ ಕಾರ್ಯಕ್ರಮವನ್ನು ಉದ್ಘಾಟಿಸಿದರು. ನಂತರ ಮಾತನಾಡಿದ ಅವರು ಹವಾಮಾನ ಬದಲಾವಣೆಯಿಂದ ಕೃಷಿ, ತೋಟಗಾರಿಕೆ, ಜಲಸಂಪನ್ಮೂಲ, ಇನ್ನಿತರೆ ಚಟುವಟಿಕೆಗಳಲ್ಲಿ ಆಗುವ ತೊಂದರೆಗಳು ಮತ್ತು ಅವುಗಳಿಂದ ಹೊಂದಾಣಿಕೆ ಹಾಗೂ ಉಪಶಮನ ಮಾಡುವ ಕ್ರಮಗಳ ಕುರಿತು ತಿಳಿಸಿದರು. ಕಾರ್ಯಕ್ರಮದ ಅಧ್ಯಕ್ಷತೆಯನ್ನು ವಹಿಸಿದ್ದ ಮೌಲ್ಯಮಾಪನ, ಕಾರ್ಯಯೋಜನೆ, ಸಂಶೋಧನೆ ಹಾಗೂ ಹವಾಮಾನ ಬದಲಾವಣೆಯ ಪ್ರಧಾನ ಮುಖ್ಯ ಅರಣ್ಯ ಸಂರಕ್ಷಣಾಧಿಕಾರಿ ರವಿ. ಬಿ.ಪಿ. ಅವರು ಮಾತನಾಡಿ, ಎಂಪ್ರಿ ಸಂಸ್ಥೆಯು ಹವಾಮಾನ ಬದಲಾವಣೆ ಕಾಯಕ್ರಮದಲ್ಲಿ ರಾಜ್ಯಾದ್ಯಂತ ನಡೆಸುತ್ತಿರುವ ಕೆಲಸಗಳನ್ನು ಶ್ಲಾಘಿಸುತ್ತ ಮುಂಬರುವ ದಿನಗಳಲ್ಲಿ ಇಂತಹ ಕಾರ್ಯಕ್ರಮಗಳು ತಾಲ್ಲೂಕು ಮತ್ತು ಹೋಬಳಿ ಮಟ್ಟದಲ್ಲಿ ತಲುಪುವಂತೆ ಕ್ರಮಗಳನ್ನು ಕೈಗೊಳ್ಳಲು ಕೆಲಸ ಮಾಡಬೇಕಾದ ಅವಶ್ಯಕತೆಯಿದೆ ಎಂದು ತಿಳಿಸಿದರು. ಕಾರ್ಯಕ್ರಮದ ಪ್ರಾಸ್ತಾವಿಕ ನುಡಿಗಳು ಹಾಗೂ ಸ್ವಾಗತವನ್ನು ಸಂಸ್ಥೆಯ ನಿರ್ದೇಶಕರಾದ ಟಿ. ಮಹೇಶ್ ಅವರು ನಡೆಸಿಕೊಟ್ಟರು ಹಾಗೂ ವಂದನಾರ್ಪಣೆಯನ್ನು ಸಂಸ್ಥೆಯ ನಿರ್ದೇಶಕರು (ಸಂಶೋಧನೆ) ಡಾ.ಪ್ರಮೋದ್ ಕಟ್ಟಿ ಅವರು ನೆರವೇರಿಸಿದರು. ಕಾರ್ಯಕ್ರಮದಲ್ಲಿ ಕೃಷಿ, ತೋಟಗಾರಿಕೆ, ಜಲಸಂಪನ್ಮೂಲ, ಪಶುಸಂಗೋಪನಾ ಇಲಾಖೆಯ 30 ಅಧಿಕಾರಿಗಳು ರಾಜ್ಯದ ಎಲ್ಲಾ ವಿಭಾಗಗಳಿಂದ ಉಪಸ್ಥಿತರಿದ್ದರು.

# ನಿರಾಶ್ರಿತರು ವಸತಿ ರಹಿತರ ಆಶ್ರಯ ಕೇಂದ್ರದ ಸದ್ಬಳಕೆ ಮಾಡಿಕೊಳ್ಳಿ : ಪೌರಾಯುಕ್ತ ಜೀವನ್ ಕೆ.




ಮಲ್ಲಮ್ಮ ನುಡಿ ವಾರ್ತೆ

ಶಹಾಪುರ: ಅ, 15: ನಗರದಲ್ಲಿ ನಿರಾಶ್ರಿತ ಮತ್ತು ವಸತಿ ರಹಿತರಿಗೆ ಆಶ್ರಯ ಕೇಂದ್ರವು ಬಹಳ ಅನುಕೂಲವಾಗಿದೆ ಎಂದು ಪೌರಾಯುಕ್ತರಾದ ಜೀವನ ಕೆ. ಅವರು ಅಭಿಪ್ರಾಯಪಟ್ಟರು.

ನಗರಸಭೆ, ಜಿಲ್ಲಾ ಕೌಶಲ್ಯಾಭಿವೃದ್ಧಿ ಉದ್ಯಮಶೀಲತೆ ಹಾಗೂ ಜೀವನೋಪಾಯ ಇಲಾಖೆ,ದೀನದಯಾಳ್ ಜನ ಅಜೀವಿಕ ಯೋಜನಾ ( ಶಹರಿ) ಅಭಿಯಾನದಡಿಯಲ್ಲಿ ಭಾರತಾಂಬೆ ಶಿಕ್ಷಣ ಮತ್ತು ಗ್ರಾಮೀಣಾಭಿವೃದ್ಧಿ ಸಂಸ್ಥೆಯ ಸಂಯುಕ್ತಾಶ್ರಯದಲ್ಲಿ ನಗರದ ವಸತಿ ರಹಿತರ ಆಶ್ರಯ ಕೇಂದ್ರದಲ್ಲಿ ನಡೆದ *ವಿಶ್ವ ವಸತಿ ರಹಿತರ ದಿನಾಚರಣೆ* ಅಂಗವಾಗಿ ಸಸಿಗೆ ನೀರೆರೆದು, ನಿರಾಶ್ರಿತ ಕೇಂದ್ರದ ಮಾಹಿತಿಯುಳ್ಳ ಕರಪತ್ರ ಬಿಡುಗಡೆಗೊಳಿಸಿ, ವಸತಿ ರಹಿತರಿಗೆ ಆರೋಗ್ಯ ತಪಾಸಣೆ ಕಾರ್ಯಕ್ರಮದ ಚಾಲನೆ ನೀಡಿ ಅವರು ಮಾತನಾಡಿದರು.

ಶಹಾಪುರ ನಗರದಲ್ಲಿ ವಸತಿ ರಹಿತ ನಿರಾಶ್ರಿತರಿಗೆ ಆಶ್ರಯ ನೀಡೋ ನಿಟ್ಟಿನಲ್ಲಿ ಸರ್ಕಾರಗಳು ಅನೇಕ ಯೋಜನೆಗಳನ್ನ ಜಾರಿಗೆ ತಂದಿವೆ. ಇಂತಹ ನಿರಾಶ್ರಿತರ ರಕ್ಷಣೆ ನಮ್ಮ ಕರ್ತವ್ಯ ಆಗಿದೆ ಎಂದರು.

ಆಶ್ರಯ ಇಲ್ಲದವರು ಫುಟ್ಪಾತ್ ಮೆ?ಲೆ ರಾತ್ರಿ ಕಳೆಯ ಬಾರದು ಅಂತವರನ್ನು ಈ ಕೇಂದ್ರಕ್ಕೆ ಕಳುಹಿಸಲು ಸಾರ್ವಜನಿಕರಿಗೆ ತಿಳಿಸಿದರು.

ಕೌಶಲ್ಯಾಭಿವೃದ್ಧಿ ಇಲಾಖೆಯ ಅಭಿಯಾನ ವ್ಯವಸ್ಥಾಪಕ ಗುರುಪಾದ ತಳವಾರ ಮಾತನಾಡಿ, ವಸತಿ ಇಲ್ಲದವರಿಗೆ ತಾತ್ಕಾಲಿಕವಾಗಿ ಆಶ್ರಯ ನೀಡುವ ಉದ್ದೇಶದಿಂದ ಈ ಆಶ್ರಯ ಕೇಂದ್ರ ಸ್ಥಾಪಿಸಲಾಗಿದ್ದು, ಇಲ್ಲಿ ವಾಸ್ತವ್ಯ ಇರುವವರಿಗೆ ಸ್ವಯಂ ಉದ್ಯೋಗಿಗಳಾಗಲು ಸರ್ಕಾರದ ಹಲವು ಯೋಜನೆಗಳಿದ್ದು ಅವುಗಳ ಸದುಪಯೋಗ ಪಡೆಯಲು ಅಗತ್ಯ ಸಹಕಾರವನ್ನು ಇಲಾಖೆಯಿಂದ ನೀಡುತ್ತೇವೆ ಎಂದರು.

ಭಾರತಾಂಬೆ ಸಂಸ್ಥೆಯ ಕಾರ್ಯದರ್ಶಿ ಭೀಮಾಶಂಕರ ಬೆನಕನಹಳ್ಳಿ ಅವರು ಯೋಗ ಶಿಬಿರ ನಡೆಸಿಕೊಟ್ಟು ಮಾತನಾಡಿ, ಕೊರೊನಾದಂತಾಹ ಸಮಯದಲ್ಲಿ ಹಲವು ಸಮಸ್ಯೆಗಳನ್ನು ಸವಾಲಾಗಿ ಸ್ವೀಕರಿಸಿ ಸರ್ಕಾರದ ಮಹತ್ವದ ಕಾರ್ಯಕ್ರಮಗಳನ್ನು ಯಶಸ್ವಿಯಾಗಿ ನಡೆಸಿದ್ದೇವೆ. ಜಿಲ್ಲೆಯಲ್ಲಿ ಯಾದಗಿರಿ, ಶಹಾಪುರ ಮತ್ತು ಸುರಪುರ ನಗರದಲ್ಲಿ ಆಶ್ರಯ ಕೇಂದ್ರವಿದ್ದು 2019 ರಿಂದ ಇಲ್ಲಿಯವರೆಗೆ ಸುಮಾರು ಐದು ಸಾವಿರ ಜನರು ಇದರ ಉಪಯೋಗ ಪಡೆದಿದ್ದಾರೆ ಎಂದು ಅವರು ತಿಳಿಸಿದರು.ಈ ಸಂದರ್ಭದಲ್ಲಿ ರಿಚ್ ಸಂಸ್ಥೆಯ ಮುಖ್ಯಸ್ಥರಾದ ಮತಿವಂತ ನಗರ ಸಭೆಯ ಸಿಆರಪಿ ಆದ ಸುಧಾ ಬಿರಾದಾರ ವೈದ್ಯರಾದ ರಮೇಶ್ ಸಂಸ್ಥೆಯ ವ್ಯವಸ್ಥಾಪಕ ಭೀಮಾಶಂಕರ , ಕೇರ್ಟೇಕರ್ ಮಲ್ಲಪ್ಪ, ಮಲ್ಲಿಕಾರ್ಜುನ್ , ಮಂಜುಳಾ ಸೇರಿದಂತೆ ವಸತಿ ರಹಿತರು ಉಪಸ್ಥಿತರಿದ್ದರು.

# ಆಧ್ಯಾತ್ಮಿಕ 'ಚಿಂತಕರಾದ ಆದಪ್ಪ ಅವಂಟಿ ಲಿಂಗೈಕ್ಯ



ಮಲ್ಲಮ್ಮ ನುಡಿ ವಾರ್ತೆ

ಕೆಂಭಾವಿ:ಅ.15:ಕೆಂಭಾವಿ ಪಟ್ಟಣದ ಪ್ರಸಿದ್ಧ ಆಧ್ಯಾತ್ಮಿಕ ಚಿಂತಕರಾಗಿದ್ದು, ಶಾಸ್ತ್ರ◻ಪುರಾಣಗಳ ಅಧ್ಯಯನದಲ್ಲಿ ಅಪಾರ ಪಾಂಡಿತ್ಯ ಹೊಂದಿದ್ದ ಹಿರಿಯ ಜೀವಿ ಆದಪ್ಪ ಅವಂಟಿ ಅವರು ಲಿಂಗೈಕ್ಯ ಹೊಂದಿದ್ದಾರೆ.

ಆದಪ್ಪ ಅವಂಟಿಯವರು ಜೀವನಪೂರ್ಣವಾಗಿ ಧರ್ಮ, ನೀತಿ ಹಾಗೂ ಮಾನವೀಯ ಮೌಲ್ಯಗಳ ಪರವಾಗಿ ಬದುಕಿದ ವ್ಯಕ್ತಿತ್ವ. ಪೀಳಿಗೆಗೊಂದು ಪ್ರೇರಣೆಯಾದ ಇವರ ಉಪದೇಶಗಳು ಮತ್ತು ಪ್ರವಚನಗಳು ಕೆಂಭಾವಿ ಹಾಗೂ ಸುತ್ತಮುತ್ತಲ ಪ್ರದೇಶದ ಜನರ ಮನದಲ್ಲಿ ಆಳವಾದ ಗುರುತು ಬಿಟ್ಟಿವೆ.

ಅವರು ದೇವರ ಭಕ್ತಿಯಲ್ಲಿ ಲೀನರಾಗಿದ್ದು, ನಿತ್ಯ ಧಾರ್ಮಿಕ ಚಿಂತನೆ, ಭಜನ, ಪಾರಾಯಣಗಳಲ್ಲಿ ತೊಡಗಿಸಿಕೊಂಡಿದ್ದರು. ಅವರ ಮಾತುಗಳಲ್ಲಿ ಸದಾ "ಸತ್ಯ, ಶಾಂತಿ ಮತ್ತು ಭಕ್ತಿ"ಯ ಮರುಳು ತುಂಬಿತ್ತು.

ಜನರ ಜೀವನದಲ್ಲಿ ಧರ್ಮದ ಬೆಳಕು ಹರಿಸುವುದೇ ಅವರ ಧ್ಯೇಯವಾಗಿತ್ತು.

ಕೆಂಭಾವಿಯ ಜನತೆ, ಶಿಷ್ಯರು ಮತ್ತು ಭಕ್ತರು ಭಾವಪೂರ್ಣವಾಗಿ ಶ್ರದ್ಧಾಂಜಲಿ ಅರ್ಪಿಸುತ್ತಾ,"ವಜ್ರದ ಅವಳದಂತಿದ್ದ ಈ ಜೀವಿ ◻ ಇಂಥ ವ್ಯಕ್ತಿಯನ್ನು ಮತ್ತೆಲ್ಲಿ ತರೋದು!" ಎಂದು ಕಣ್ಣೀರಿನಿಂದ ನೆನಪಿಸಿಕೊಂಡರು.

ಆದಪ್ಪ ಅವಂಟಿಯವರ ಅಗಲಿಕೆಯಿಂದ ಕೆಂಭಾವಿಯ ಆಧ್ಯಾತ್ಮಿಕ ಕ್ಷೇತ್ರದಲ್ಲಿ ಅಪಾರ ಶೂನ್ಯ ಉಂಟಾಗಿದೆ. ಅವರ ಉಪದೇಶಗಳು ಮತ್ತು ಜೀವನದ ಸಂದೇಶಗಳು ಸದಾ ಜನರಿಗೆ ದಾರಿ ದೀಪವಾಗಿಯೇ ಉಳಿಯುವವು.

# ಬೆಳೆ ಹಾನಿಯಾದ ಪ್ರದೇಶಕ್ಕೆ ಜಿಲ್ಲಾಧಿಕಾರಿ ಭೇಟಿ



ಮಲ್ಲಮ್ಮ ನುಡಿ ವಾರ್ತೆ

ಯಾದಗಿರಿ : ಅ 15 : ಯಾದಗಿರಿ ಜಿಲ್ಲೆಯ ಯಾದಗಿರಿ ತಾಲೂಕಿನ ಮುಂಡರಗಿ ಗ್ರಾಮಕ್ಕೆ ಬೆಳೆ ಹಾನಿಯಾದ ಪ್ರದೇಶಕ್ಕೆ ಭೇಟಿನೀಡಿ ಸಂಬಂಧಪಟ್ಟ ಅಧಿಕಾರಿಗಳಿಗೆ ಬೆಳೆ ಹಾನಿಯಾದ ಬಗ್ಗೆ ಜಂಟಿ ಸಮೀಕ್ಷೆ ವರದಿ ನೀಡಬೇಕು ಎಂದು ಯಾದಗಿರಿ ಜಿಲ್ಲಾಧಿಕಾರಿ ಶ್ರೀ ಹರ್ಷಲ್ ಭೋಯರ್ ಅವರು ಹೇಳಿದರು.

ಗುರುಮಠಕಲ್ ತಾಲೂಕಿನ ಅನಪುರ ಗ್ರಾಮಗಳಲ್ಲಿ ಅತಿಯಾದ ಮಳೆಯಿಂದ ಹತ್ತಿ ಬೆಳೆ ಹಾನಿಯಾದ ಬಗ್ಗೆ ಸ್ಥಾನಿಕ ಪರಿಶೀಲನೆ ಮಾಡಿಲಾಗಿ, ತಕ್ಷಣವೆ ಸಂಬಂದಪಟ್ಟ ಅಧಿಕಾರಿಗಳು ಬೆಳೆ ಹಾನಿಯಾದ ಬಗ್ಗೆ ಜಂಟಿ ಸಮೀಕ್ಷೆ ಮಾಡಿ ವರದಿ ನೀಡಲು ತಿಳಿಸಿದರು. ಈ ಸಂದರ್ಭದಲ್ಲಿ ಜಿಲ್ಲಾ ಮಟ್ಟದ ಅಧಿಕಾರಿಗಳು ಹಾಗೂ ಇನ್ನಿತರರು ಉಪಸ್ಥಿತರಿದ್ದರು.

# ಅಹಮದಾಬಾದ್‌ನಲ್ಲಿ ನಡೆಯಲಿದೆ 2030ರ ಕಾಮನ್‌ವೆಲ್ತ್ ಗೇಮ್ಸ್

ಮಲ್ಲಮ್ಮ ನುಡಿ ವಾರ್ತೆ

ಲಂಡನ್:ಅ.15: 2030ರ ಕಾಮನ್‌ವೆಲ್ತ್ ಗೇಮ್ಸ್ ಗುಜರಾತಿನ ಅಹಮದಾಬಾದ್‌ನಲ್ಲಿ ನಡೆಯಲಿದೆ. 2030ರ ಶತಮಾನೋತ್ಸವದ ಕಾಮನ್‌ವೆಲ್ತ್ ಕ್ರೀಡಾಕೂಟ ಆಯೋಜನೆ ಮಾಡಲು ಕಾಮನ್‌ವೆಲ್ತ್ ಗೇಮ್ಸ್‌ನ ಕಾರ್ಯನಿರ್ವಾಹಕ ಮಂಡಳಿ ಅಹಮದಾಬಾದ್ ನಗರವನ್ನು ಶಿಫಾರಸು ಮಾಡಿದೆ.2030 ರ ಗೇಮ್ಸ್ ಆಯೋಜನೆಗೆ ನೈಜೀರಿಯಾ ತನ್ನ ರಾಜಧಾನಿ ಅಬುಜಾ ನಗರವನ್ನು ಬಿಡ್‌ಗೆ ಕಳುಹಿಸಿತ್ತು. ಆದರೆ ಅಬುಜಾ ನಗರದಲ್ಲಿ 2034ರ ಗೇಮ್ಸ್ ನಡೆಯುವ ಸಾಧ್ಯತೆಯಿದೆ. ಕುರಿತು ಅಂತಿಮ ನಿರ್ಧಾರವು ನವೆಂಬರ್ 26 ರಂದು ಗ್ಲಾಸ್ಗೋದಲ್ಲಿ ನಡೆಯಲಿರುವ ಕಾಮನ್‌ವೆಲ್ತ್ ಕ್ರೀಡಾಕೂಟಡ ಮಹಾಸಭೆಯಲ್ಲಿ ಪ್ರಕಟವಾಗಲಿದೆ.

ಕಾಮನ್‌ವೆಲ್ತ್ ಗೇಮ್ಸ್‌ನ ಮಧ್ಯಂತರ ಅಧ್ಯಕ್ಷರಾದ ಡಾ. ಡೊನಾಲ್ಡ್ ರುಕರೆ ಮಾತನಾಡಿ, 2030 ರ ಕಾಮನ್‌ವೆಲ್ತ್ ಕ್ರೀಡಾಕೂಟವನ್ನು ಆಯೋಜಿಸಲು ಭಾರತ ಮತ್ತು ನೈಜೀರಿಯಾಗಳು ತೋರಿದ ಪ್ರಸ್ತಾಪಕ್ಕೆ ನಾವು ಕೃತಜ್ಞರಾಗಿದ್ದೇವೆ. ಎರಡೂ ನಗರಗಳ ಪ್ರಸ್ತಾಪಗಳು ಸ್ಪೂರ್ತಿದಾಯಕವಾಗಿದ್ದವು. ನಮ್ಮ ಶತಮಾನೋತ್ಸವ ಕ್ರೀಡಾಕೂಟವನ್ನು ನಾವು ಎದುರು ನೋಡುತ್ತಿದ್ದು, ಗ್ಲಾಸ್ಗೋದಲ್ಲಿ ನಡೆಯುವ ಸಾಮಾನ್ಯ ಸಭೆಯಲ್ಲಿ ನಮ್ಮ ಸದಸ್ಯರು ಅಂತಿಮ ನಿರ್ಧಾರ ತೆಗೆದುಕೊಳ್ಳಲಿದ್ದಾರೆ ಎಂದು ತಿಳಿಸಿದ್ದಾರೆ.

ಈ ಹಿಂದೆ 2010 ರಲ್ಲಿ ಭಾರತ ದೆಹಲಿಯಲ್ಲಿ ಕಾಮನ್‌ವೆಲ್ತ್ ಕ್ರೀಡಾಕೂಟವನ್ನು ಆಯೋಜನೆ ಮಾಡಿತ್ತು. 2036 ರ ಒಲಿಂಪಿಕ್ಸ್ ಆಯೋಜನೆಗೆ ಭಾರತ ಈಗಾಗಲೇ ಬಿಡ್ ಸಲ್ಲಿಸಿದೆ.

# ಬ್ಯಾಂಕ್ ಹಾಗೂ ಎಟಿಎಮ್ ಗಳ ಭದ್ರತೆಗೆ ಅವಶ್ಯಕ ಮುನ್ನೆಚ್ಚರಿಕಾ ಕ್ರಮ ಕೈಗೊಳ್ಳಿ



ಮಲ್ಲಮ್ಮ ನುಡಿ ವಾರ್ತೆ

ಯಾದಗಿರಿ: ಅ:14:ಜಿಲ್ಲೆಯ ಬ್ಯಾಂಕ್ ಹಾಗೂ ಎಂ.ಟಿ.ಎಂ ಗಳ ಸಮಗ್ರ ಭದ್ರತೆಗೆ ಅವಶ್ಯಕ ಕ್ರಮ ಕೈಗೊಳ್ಳುವಂತೆ ಜಿಲ್ಲಾಧಿಕಾರಿ ಶ್ರೀ ಹರ್ಷಲ್ ಭೋಯರ್ ಅವರು ಸಂಬಂಧಿಸಿದ ಅಧಿಕಾರಿಗಳಿಗೆ ಸೂಚಿಸಿದರು.

ಜಿಲ್ಲಾ ಪೋಲಿಸ್ ಕಾರ್ಯಾಲಯ ಸಭಾಂಗಣದಲ್ಲಿ ಇಂದು ವಿವಿಧ ಬ್ಯಾಂಕ್ ಅಧಿಕಾರಿಗಳು ಹಾಗೂ ಪೋಲಿಸ್ ಅಧಿಕಾರಿಗಳೊಂದಿಗೆ ಸಭೆ ನಡೆಸಿ ಅವರು ಮಾತನಾಡಿದರು.

ಜಿಲ್ಲೆಯ ಬ್ಯಾಂಕ್ ಹಾಗೂ ಎಟಿಎಮ್ ಗಳ ಭದ್ರತೆ ಹಾಗೂ ಸುರಕ್ಷತೆಗಾಗಿ ಆರ್ ಬಿಐ ಐ ನಿರ್ದೇಶನಗಳನ್ನು ಕಟ್ಟುನಿಟ್ಟಾಗಿ ಪಾಲಿಸಬೇಕು.

ಪ್ರತಿ ಬ್ಯಾಂಕ್ ಹಾಗೂ ಎಟಿಎಮ್ ವ್ಯಾಪ್ತಿಯಲ್ಲಿ ಸಿಸಿಟಿವಿ ಕ್ಯಾಮರಾ ಹಾಗೂ ಭದ್ರತಾ ಸಿಬ್ಬಂದಿಗಳನ್ನು ತಪ್ಪದೇ ನಿಯೋಜಿಸುವಂತೆ ಬ್ಯಾಂಕ್ಗಳ ವ್ಯವಸ್ಥಾಪಕರಿಗೆ ಕಟ್ಟುನಿಟ್ಟಿನ ಸೂಚನೆ ನೀಡಿದರು.

ಸಭೆಯಲ್ಲಿ ಜಿಲ್ಲಾ ಪೋಲಿಸ್ ವರಿಷ್ಠಾಧಿಕಾರಿ ಪೃಥ್ವಿಕ್ ಶಂಕರ್, ಲೀಡ್ ಬ್ಯಾಂಕ್ ವ್ಯವಸ್ಥಾಪಕರು,ಎಲ್ಲ ಬ್ಯಾಂಕ್ಗಳ ವ್ಯವಸ್ಥಾಪಕರು,ಸಿಬ್ಬಂದಿಗಳು, ಸಹಕಾರ ಸಂಘಗಳ ಉಪ ನಿಬಂಧಕರು ಪವನ್ ಕುಮಾರ್ ಸೇರಿದಂತೆ ಪೋಲಿಸ್ ಹಾಗೂ ಇತರೆ ಇಲಾಖೆ ಅಧಿಕಾರಿಗಳು ಉಪಸ್ಥಿತರಿದ್ದರು.

# ಕಲಬುರ್ಗಿಯಲ್ಲಿ ಸ್ಯಾಟಲೈಟ್ ಬಸ್ ನಿಲ್ದಾಣ ನಿರ್ಮಾಣ: ಸಚಿವ ಪ್ರಿಯಾಂಕ್ ಖರ್ಗೆ ಸಭೆ



ಕಲಬುರಗಿ: ಅ.15: ನಗರದಲ್ಲಿ ಸುಸಜ್ಜಿತ ಹಾಗೂ ಅತ್ಯಾಧುನಿಕ ರೀತಿಯ ಸ್ಯಾಟಲೈಟ್ ಬಸ್ ನಿಲ್ದಾಣ ನಿರ್ಮಾಣ ಮಾಡುವ ಉದ್ದೇಶದೊಂದಿಗೆ ಜಿಲ್ಲಾ ಉಸ್ತುವಾರಿ ಸಚಿವರೂ ಆದ ಗ್ರಾಮೀಣಾಭಿವೃದ್ಧಿ ಹಾಗೂ ಪಂಚಾಯಿತಿ ರಾಜ್ ಮತ್ತು ಐಟಿ, ಬಿಟಿ ಸಚಿವ ಪ್ರಿಯಾಂಕ್ ಖರ್ಗೆ ಅವರು ಬೆಂಗಳೂರಿನಲ್ಲಿ ಅಧಿಕಾರಿಗಳೊಂದಿಗೆ ಸಭೆ ನಡೆಸಿದರು.

ಈಗಾಗಲೇ ಎರಡು ಮೂರು ಸ್ಥಳಗಳಲ್ಲಿ ಸ್ಯಾಟಲೈಟ್ ಬಸ್ ನಿಲ್ದಾಣಕ್ಕೆ ಅಗತ್ಯವಿರುವ ಸ್ಥಳವನ್ನು ಗುರುತಿಸಲಾಗಿದ್ದು, ಸೂಕ್ತವೆನಿಸುವ ಜಾಗದಲ್ಲಿ ಉದ್ದೇಶಿತ ಬಸ್ ನಿಲ್ದಾಣ ನಿರ್ಮಿಸಲು ಸಂಬಂಧಪಟ್ಟ ಇಲಾಖೆಗಳಿಗೆ ಪ್ರಸ್ತಾವನೆ ಸಲ್ಲಿಸಲು ಅಧಿಕಾರಿಗಳಿಗೆ ಸಚಿವರು ನಿರ್ದೇಶಿಸಿದರು. ಪ್ರಗತಿಯತ್ತ ದಾಪುಗಾಲು ಇಡುತ್ತಿರುವ ನಗರ-ಕ್ಕೆ ಉದ್ದೇಶಿತ ಸ್ಯಾಟಲೈಟ್ ಬಸ್ ನಿಲ್ದಾಣವು ಅಭಿವೃದ್ಧಿಗೆ ವೇಗ ನೀಡಲಿದೆ ಎಂದು ಸಚಿವರು ಅಭಿಪ್ರಾಯಪಟ್ಟರು.

ಸಭೆಯಲ್ಲಿ ದಕ್ಷಿಣ ಕ್ಷೇತ್ರದ ಶಾಸಕ ಅಲ್ಲಮಪ್ರಭು ಪಾಟೀಲ್, ಉನ್ನತ ಶಿಕ್ಷಣ ಇಲಾಖೆಯ ಕಾರ್ಯದರ್ಶಿ ಖುಷ್ಬು ಘೋಯಲ್ ಚೌಧರಿ, ಕೃಷಿ, ಪಶುಸಂಗೋಪನೆ, ಕಲ್ಯಾಣ ಕರ್ನಾಟಕ ರಸ್ತೆ ಸಾರಿಗೆ ನಿಗಮದ ಅಧಿಕಾರಿಗಳು ಭಾಗವಹಿಸಿದ್ದರು.

# ವಿದ್ಯಾರ್ಥಿ ಫೆಡರೇಶನ್ ವತಿಯಿಂದ ಶೈಕ್ಷಣಿಕ ಜಾಥಾ



ಮಲ್ಲಮ್ಮ ನುಡಿ ವಾರ್ತೆ

ಶಹಾಪುರ :ಅ.15: ಎಸ್ ಎಫ್ ಐ ರಾಜ್ಯಮಟ್ಟದ ಶೈಕ್ಷಣಿಕ ಜಾತ ಬಹಿರಂಗ ಜಾಥಾ ನಾಳೆ ನಡೆಯಲಿದ್ದು.

ಸಾರ್ವಜನಿ ಶಿಕ್ಷಣ ಉಳಿವಿಗಾಗಿ ಹಾಗೂ ಹಾಸ್ಟಲ್ ಬಲವರ್ಧನೆಗಾಗಿ ರಾಜ್ಯಮಟ್ಟದ ಬಹಿರಂಗ ಸಭೆ ನಡೆಯಲಿದ್ದು ರಾಜ್ಯಮಟ್ಟದ ಪದಾಧಿಕಾರಿಗಳು ಆಗಮಿಸುತ್ತ ಸ್ಥಳ ಆದಿತ್ಯ ಸ್ಕೂಲ್ ಕೋರ್ಟ್ ಹತ್ತಿರ ಸಮಯ 3 ಗಂಟೆಗೆ ಕಾರ್ಯಕ್ರಮ ನಡೆಯಲಿದ್ದು.ಎಲ್ಲಾ ವಿದ್ಯಾರ್ಥಿನಿಯರಲ್ಲಿ ಈ ಬಹಿರಂಗ ಸಭೆಗೆ ಹಾಜರಾಗಿ ಕಾರ್ಯಕ್ರಮವನ್ನು ಯಶಸ್ವಿಗೊಳಿಸುವಂತೆ ಆರ್ ಭೀಮರಾಯ ಪೂಜಾರಿ ಪತ್ರಿಕೆಗೆ ತಿಳಿಸಿದ್ದಾರೆ.



ಬೀದರ: ಅರಣ್ಯ ಜೀವಿಶಾಸ್ತ್ರ ಮತ್ತು ಪರಿಸರ ಸಚಿವ ಹಾಗೂ ಬೀದರ್ ಜಿಲ್ಲಾ ಉಸ್ತುವಾರಿ ಸಚಿವರಾದ ಈಶ್ವರ ಬಿ. ಖಂಡ್ರೆ ಹಾಗೂ ಪೌರಾಡಳಿತ ಸಚಿವ ರಹೀಂಖಾನ್ ಅವರಿಂದು ಜಿಲ್ಲಾಧಿಕಾರಿಗಳ ಕಚೇರಿ ಆವರಣದಲ್ಲಿ ಕಂದಾಯ ಇಲಾಖೆಯ ನೂತನ ವಾಹನಗಳಿಗೆ ಪೂಜೆ ಸಲ್ಲಿಸಿ, ಹಸಿರು ನಿಶಾನೆ ತೋರಿಸಿ ಚಾಲನೆ ನೀಡಿದರು. ಈ ಸಂದರ್ಭದಲ್ಲಿ ಜಿಲ್ಲಾಧಿಕಾರಿ ಶಿಲ್ಪಾ ಶರ್ಮಾ, ಸಹಾಯಕ ಆಯುಕ್ತರಾದ ಮಹಮ್ಮದ ಶಕೀಲ ಸೇರಿದಂತೆ ಇತರರು ಉಪಸ್ಥಿತರಿದ್ದರು.

# ನೂತನ ಮಹಾನಗರ ಪಾಲಿಕೆಗೆ ಸೇರಿದ ಗ್ರಾಮಗಳಿಗಿಲ್ಲ ಅನುದಾನ, ಶೀಘ್ರ : ಬೆಲ್ದಾಳೆ

ಬೀದರ:ಅ.15:ಗ್ರಾಮಗಳ ಆರ್ಥಿಕ ಮತ್ತು ಸಾಮಾಜಿಕ ಅಭಿವೃದ್ಧಿಗೆ ಅಗತ್ಯವಿರುವ ಭೌತಿಕ ಮತ್ತು ಇತರ ಸೌಲಭ್ಯಗಳು ಗ್ರಾಮೀಣ ಪ್ರದೇಶದಲ್ಲಿ ಒದಗಿಸಬೇಕು ಅಂದಾಗ ಮಾತ್ರ ಗ್ರಾಮೀಣ ಪ್ರದೇಶದಲ್ಲಿ ಅಭಿವೃದ್ಧಿಯಾಗಲು ಸಾಧ್ಯ ಎಂದು ಬೀದರ್ ದಕ್ಷಿಣ ಕ್ಷೇತ್ರದ ಶಾಸಕರಾದ ಡಾ. ಶೈಲೇಂದ್ರ ಬೆಲ್ದಾಳೆ ಹೇಳಿದರು.

ಬೀದರ್ ದಕ್ಷಿಣ ಕ್ಷೇತ್ರದ ಕಮಲಪುರ, ಹಜ್ಜರಗಿ ಗ್ರಾಮಕ್ಕೆ ಶಾಸಕರು ಭೇಟಿ ನೀಡಿ ಸಮಸ್ಯೆಗಳನ್ನು ಪರಿಶೀಲನೆ ಮಾಡಿ ಅವರು ಜನರ ಅಹವಾಲು ಸ್ವೀಕರಿಸಿ ಮೇಲಧಿಕಾರಿಗಳ ಗಮನಕ್ಕೆ ತಂದು ಪರಿಹಾರ ಒದಗಿಸುವದಾಗಿ ಭರವಸೆ ನೀಡಿದರು.

ಬಳಿಕ ಜಿಲ್ಲಾಧಿಕಾರಿ ಕಚೇರಿಯಲ್ಲಿ ಜಿಲ್ಲಾ ಉಸ್ತುವಾರಿ ಸಚಿವರ ನೇತೃತ್ವದಲ್ಲಿ ನಡೆದ ಸಭೆಯಲ್ಲಿ ಪಾಲ್ಗೊಂಡು ಮಾತನಾಡಿದ ಶಾಸಕರು ನಮ್ಮ ಬೀದರ್ ದಕ್ಷಿಣ ಕ್ಷೇತ್ರದ ಅಮಲಾಪುರ, ಗೋರನಳ್ಳಿ, ಚೊಂಡಿ, ಚೌಳಿ, ಕೋಳಾರ(ಕೆ), ಹಜ್ಜರಗಿ, ಕಮಲಪುರ, ನಿಜಾಂಪುರ ಗ್ರಾಮಗಳು ಗ್ರಾಮಪಂಚಾಯಿತಿ ಇಂದ ಮಹಾನಗರ ಪಾಲಿಕೆಗೆ ಹೋಸದಾಗಿ ಸೇರಿಸಿದ್ದಾರೆ ಆದರೆ ಇಲ್ಲಿಯವರೆಗೆ ಯಾವುದೇ ಅಭಿವೃದ್ಧಿಗಾಗಿ ಹಣ ಬಿಡುಗಡೆ ಆಗದ ಹಿನ್ನೆಲೆಯಲ್ಲಿ ಜನರು ಮೂಲ ಸೌಕರ್ಯಕ್ಕಾಗಿ ಪರದಾಡುವ ಸ್ಥಿತಿ ನಿರ್ಮಾಣವಾಗಿದೆ ಎಂದು ಬೇಸರ ವ್ಯಕ್ತಪಡಿಸಿದರು.

ಇಂದು ವಿವಿಧ ಗ್ರಾಮದಲ್ಲಿ ಮೂಲಭೂತ ಸೌಕರ್ಯ ಕೊರತೆ ಕಂಡುಬಂದ ಹಿನ್ನೆಲೆಯಲ್ಲಿ ಗ್ರಾಮಕ್ಕೆ ಎಲ್ಲಾ ಇಲಾಖೆಗಳ ಅಧಿಕಾರಿಗಳೊಂದಿಗೆ ಭೇಟಿ ನೀಡಿ ಪರಿಶೀಲನೆ ನಡೆಸಿ ಗ್ರಾಮಸ್ಥರ ಅಹವಾಲು ಸ್ವೀಕರಿಸಿ ಹತ್ತು ದಿನಗಳಲ್ಲಿ ಎಲ್ಲಾ ಸಮಸ್ಯೆಗಳನ್ನು ಪರಿಹರಿಸಲು ಸ್ಥಳದಲ್ಲಿದ್ದ ಅಧಿಕಾರಿಗಳಿಗೆ ಸೂಚನೆ ನೀಡಿದ್ದೇನೆ.

ಗ್ರಾಮೀಣ ಮೂಲಸೌಕರ್ಯವು ಗ್ರಾಮೀಣ ರಸ್ತೆಗಳು, ಕುಡಿಯುವ ನೀರು ಮತ್ತು ಒಳಚರಂಡಿಗಾಗಿ ಕಾಲುವೆ ಕೆಲಸಗಳು, ಗ್ರಾಮೀಣ ವಸತಿ, ಗ್ರಾಮೀಣ ನೀರು ಸರಬರಾಜು, ಗ್ರಾಮೀಣ ವಿದ್ಯುದೀಕರಣ ಮತ್ತು ಗ್ರಾಮೀಣ ದೂರಸಂಪರ್ಕ ಸಂಪರ್ಕವನ್ನು ಒದಗಿಸುವುದು ಅತ್ಯಂತ ಅವಶ್ಯಕವಾಗಿದೆ ಎಂದು ತಿಳಿಸಿದ ಶಾಸಕರು ಈ ಕುರಿತು ಕೂಡಲೇ ಕ್ರಮ ಕೈಗೊಳ್ಳಬೇಕು ಎಂದು ಸಭೆಯಲ್ಲಿ ಆಗ್ರಹಿಸಿಸಿದರು.


ಉಸ್ತುವಾರಿ ಸಚಿವರಾದ ಈಶ್ವರ ಖಂಡ್ರೆ ಮಾತನಾಡಿ ಕೂಡಲೇ ಪರಿಶೀಲನೆ ನಡೆಸಿ ಅಗತ್ಯ ಮೂಲಭೂತ ಸೌಲಭ್ಯಗಳನ್ನು ಒದಗಿಸಲು ಅಧಿಕಾರಿಗಳಿಗೆ ಸೂಚಿಸಿದರು.

# ಅರ್ಜಿ ಆಹ್ವಾನ

ಬೀದರ, ಅ.15: ತೋಟಗಾರಿಕೆ ವಿಜ್ಞಾನಗಳ ವಿಶ್ವವಿದ್ಯಾಲಯ ಬಾಲಗಕೋಟವು ಮೌಲ್ಯವರ್ಧನೆ ಮತ್ತು ರಫ್ತು ಅವಕಾಶಗಳಿಗಾಗಿ ನಿಖರ ತೋಟಗಾರಿಕೆ ಎಂಬ ಧ್ಯೇಯದೊಂದಿಗೆ ತೋಟಗಾರಿಕೆ ಮೇಳ-2025-26 ನ್ನು ಆಚರಿಸಲು ನಿರ್ಧರಿಸಿರುವುದರಿಂದ ತೋಟಗಾರಿಕೆ ವಿಭಾಗದಲ್ಲಿ ಗಣನೀಯ ಸಾಧನೆಗೈದ ಬಾಗಲಕೋಟೆ ತೋಟಗಾರಿಕೆ ವಿಶ್ವವಿದ್ಯಾಲಯದ ವ್ಯಾಪ್ತಿಗೆ ಬರುವ ಬೀದರ, ಕಲಬುರಗಿ ಹಾಗೂ ಯಾದಗಿರಿ ಜಿಲ್ಲೆಗಳಿಗೊಂದರಂತೆ ಶ್ರೇಷ್ಠ ರೈತ/ರೈತ ಮಹಿಳೆ ಪ್ರಶಸ್ತಿಗಾಗಿ ಅರ್ಜಿ ಆಹ್ವಾನಿಸಲಾಗಿದೆ ಎಂದು ಬೀದರ ತೋಟಗಾರಿಕೆ ಮಹಾವಿದ್ಯಾಲಯದ ಡೀನ್ ಅವರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

ಆಯ್ಕೆಯಾದ ವಿಜೇತರಿಗೆ ಬಹುಮಾನ ಮತ್ತು ಪ್ರಶಸ್ತಿಯೊಂದಿಗೆ ಡಿಸೆಂಬರ್. 21 ರಿಂದ 23 ರವರೆಗೆ ಬಾಗಲಕೋಟೆಯಲ್ಲಿ ಜರುಗಲಿರುವ ತೋಟಗಾರಿಕೆ ಮೇಳದಲ್ಲಿ ಸನ್ಮಾನಿಸಲಾಗುವುದು. ಈ ಪ್ರಶಸ್ತಿಗಾಗಿ ಅರ್ಜಿ ಸಲ್ಲಿಸಲು ಬಯಸುವ ತೋಟಗಾರಿಕೆ ರೈತ/ರೈತ ಮಹಿಳೆಯರು ನಿಗದಿತ ಅರ್ಜಿ ನಮೂನೆಯನ್ನು ತೋಟಗಾರಿಕೆ ಮಹಾವಿದ್ಯಾಲಯ, ಬೀದರಗೆ ಸಂಪರ್ಕಿಸಿ ಅಥವಾ ತೋವಿವಿಯ ವೆಬ್‌ಸೈಟ್: ತಿತಿತಿ. ಚಿಚಿಟಇಣ.ಇಚಿಡಿಟಿಚಿಣಚಿಇಚಿ..ಟಿ ಮೂಲಕ ಕೂಡ ಪಡೆದುಕೊಂಡು ದಿನಾಂಕ: 05-11-2025 ರೊಳಗಾಗಿ ತೋಟಗಾರಿಕೆ ಮಹಾವಿದ್ಯಾಲಯ ಹಳ್ಳದಕೇರಿ ಫಾರ್ಮ್, ಹೈದ್ರಾಬಾದ ರಸ್ತೆ ಬೀದರ ಇಲ್ಲಿಗೆ ಖುದ್ದಾಗಿ ಅಥವಾ ಅಂಚೆ ಮೂಲಕ ಸಲ್ಲಿಸಬೇಕು. ಹೆಚ್ಚಿನ ಮಾಹಿತಿಗಾಗಿ ತೋಟಗಾರಿಕೆ ಮಹಾವಿದ್ಯಾಲಯ, ಬೀದರ ಅಥವಾ ಆಯಾ ಜಿಲ್ಲೆಗಳ ತೋಟಗಾರಿಕೆ ಉಪನಿರ್ದೇಶಕರುಗಳ ಕಛೇರಿಗೆ ಸಂಪರ್ಕಿಸಬಹುದಾಗಿದೆ ಎಂದು ಅವರು ತಿಳಿಸಿದ್ದಾರೆ.

# ಸಿಜೆಐ ಬಿ.ಆರ್.ಗವಾಯಿ ಮೇಲೆ ಶೂ ಎಸೆತ: ವಿಲಾಸ ಮೋರೆ ಖಂಡನೆ



ಮಲ್ಲಮ್ಮ ನುಡಿ ವಾರ್ತೆ

ಭಾಲ್ಕಿ: ಅ.15: ಸುಪ್ರೀಮ್ ಕೋರ್ಟ್ ನ್ಯಾಯಮೂರ್ತಿ ಬಿ.ಆರ್.ಗವಾಯಿ ಮೇಲೆ ಶೂ ಎಸೆತ ಪ್ರಕರಣ ಅತ್ಯಂತ ಖಂಡನೀಯವಾಗಿದೆ ಎಂದು ದಲಿತಪರ ಒಕ್ಕೂಟ ಅಧ್ಯಕ್ಷ ವಿಲಾಸ ಮೋರೆ ತಿಳಿಸಿದ್ದಾರೆ.ಈ ಕುರಿತು ಪ್ರಕಟಣೆ ಹೊರಡಿಸಿರುವ ಅವರು, ಶೂ ಎಸೆದ ಆರೋಪಿ ವಕೀಲ್ ರಾಕೇಶ ಕಿಶೋರ ಅವರನ್ನು ಬಂಧಿಸಿ ಕಠೀಣ ಶಿಕ್ಷೆಗೊಳಪಡಿಸಬೇಕು.ಅವನು ಮಾಡಿದ ಹ್ಯೇ ಕೃತ್ಯ ಭಾರತದ ನ್ಯಾಯಾಂಗ ವ್ಯವಸ್ಥೆಯಲ್ಲಿ ಒಂದು ಅಕ್ಷಮ್ಯ ಅಪರಾಧವಾಗಿದೆ.ದೇಶದ ಸಂವಿಧಾನಕ್ಕೆ ಮಾಡಿದ ಅವಮಾನವಾಗಿದೆ.ಕಾರಣ ಹೀನ ಮನಸ್ಸಿನ ಆರೋಪಿಯನ್ನು ಕೂಡಲೇ ಬಂಧಿಸಿ ಕಠೀಣ ಕಾನೂನು ಕ್ರಮ ಕೈಗೊಳ್ಳಬೇಕು ಎಂದು ದಲಿತ ಒಕ್ಕೂಟ ಅಧ್ಯಕ್ಷ ವಿಲಾಸ ಮೋರೆ ಒತ್ತಾಯಿಸಿದ್ದಾರೆ.

# ಬಿಜೆಪಿಗೆ ಆರ್‌ಎಸ್‌ಎಸ್ ಕುರಿತು ಮಹಿಳಾ ಕಾಂಗ್ರೆಸ್‌ನಿಂದ ಪೋಸ್ಟರ್ ಕೌಂಟರ್



ಮಲ್ಲಮ್ಮ ನುಡಿ ವಾರ್ತೆ

ಕಲಬುರಗಿ: ಅ.15: ರಾಜ್ಯದ ಗ್ರಾಮೀಣಾಭಿವೃದ್ಧಿ ಸಚಿವ ಮತ್ತು ಪಂಚಾಯಿತಿ ರಾಜ್, ಐಟಿಬಿಟಿ ಮತ್ತು ಜಿಲ್ಲಾ ಉಸ್ತುವಾರಿ ಸಚಿವ ಪ್ರಿಯಾಂಕ್ ಖರ್ಗೆ ಅವರು ಆರ್‌ಎಸ್‌ಎಸ್ ನಿಷೇಧಿಸಬೇಕು ಎಂದು ಎಲ್ಲೂ ಹೇಳಿಲ್ಲ. ಸರ್ಕಾರಿ ಮತ್ತು ಸಾರ್ವಜನಿಕ ಜಾಗಗಳಲ್ಲಿ ಮಾಡಬಾರದು ಅಂತ ಹೇಳಿದ್ದಾರೆ. ಅದಕ್ಕೆ ಕಾನೂನಿನಲ್ಲಿ ಅವಕಾಶವೂ ಇದೆ. ಹೈಕೋರ್ಟ್ ಆದೇಶ ಪ್ರಕಾರ ಎಲ್ಲಿ ಬೇಕೋ ಅಲ್ಲಿ ಮೆರವಣಿಗೆ ಕೂಡ ಮಾಡುವ ಹಾಗಿಲ್ಲ ಎಂದು ಜಿಲ್ಲಾ ಮಹಿಳಾ ಕಾಂಗ್ರೆಸ್‌ನಿಂದ ಬುಧವಾರ ಪೋಸ್ಟರ್ ಹಚ್ಚು ಮೂಲಕ ಬಿಜೆಪಿಗೆ ಕೌಂಟರ್ ನೀಡಿದರು.

ಈ ಸಂದರ್ಭದಲ್ಲಿ ಮಹಿಳಾ ಕಾಂಗ್ರೆಸ್ ಜಿಲ್ಲಾಧ್ಯಕ್ಷೆ ರೇಣುಕಾ ಸಿಂಗೆ ಅವರು ಮಾತನಾಡಿ, ಆರ್‌ಎಸ್‌ಎಸ್‌ಅನ್ನು ಅವರು, ಈ ಮುಂಚೆಯೇ ಹಲವಾರು ಸಲ ನಿಷೇಧ ಮಾಡಲಾಗಿತ್ತು. ಆದರೆ ಈಗ ಸಚಿವರು ಆರ್‌ಎಸ್‌ಎಸ್‌ನ ನಿಷೇಧ ಮಾಡೋಕು ಅಂತ ಹೇಳಿಲ್ಲ. ಸರ್ಕಾರಿ ಕ್ಷೇತ್ರಗಳಲ್ಲಿ ಸಾರ್ವಜನಿಕ ಆವರಣದಲ್ಲಿ ಅದನ್ನು ನಿಷೇಧ ಮಾಡಬೇಕು ಆರ್‌ಎಸ್‌ಎಸ್ ಚಟುವಟಿಕೆಗಳನ್ನು ಅವಕಾಶ ಕೊಡಬಾರದು ಅಂತ ಹೇಳಿದ್ದಾರೆ ಎಂದರು.

ಇಷ್ಟೆಲ್ಲ ಹುಯ್ಲು ಎಬ್ಬಿಸಿರುವುದು. ಅದರ ನಾವು ಪ್ರಿಯಾಂಕ್ ಖರ್ಗೆ ಅವರ ಬೆಂಬಲಕ್ಕೆ ನಿಲುತ್ತಿದ್ದೇವೆ. ಬಿಜೆಪಿಯವರು ಯಾರನ್ನು ಆರಾಧಿಸಿ ಪೂಜಿಸುವ ಸರ್ದಾರ್ ವಲ್ಲಭಾಯಿ ಪಟೇಲ್ ಅವರು ನಿಷೇಧ ಮಾಡಿದ್ದರು. ಇಂದಿರಾ ಗಾಂಧಿಯವರು ನಿಷೇಧ ಮಾಡಿದ್ದರು. ನರಸಿಂಹರಾವ್ ಅವರು ನಿಷೇಧ ಮಾಡಿದ್ದರು ಎಂದು ಅವರು ಹೇಳಿದರು.

ಕೆಲವು ಕಿಡಿಗೇಡಿಗಳ ಭಾಷೆ ನೋಡಿದರೆ ಆರ್‌ಎಸ್‌ಎಸ್ ಸೃಷ್ಟಿಸಿರುವ ಸಂಸ್ಕೃತಿ ಮತ್ತು ಅದರ ಗುರಿನ ಏನೆಂಬುದನ್ನು ಈಗ ಸಾರ್ವಜನಿಕವಾಗಿ ಸ್ಪಷ್ಟವಾಗುತ್ತಿದೆ. ಈ ಒಟ್ಟಿನಲ್ಲಿ

ಪ್ರಿಯಾಂಕ ಅವರ ಬಗ್ಗೆ ಬಳಸುತ್ತಿರುವ ಭಾಷೆಯನ್ನು ನೋಡಿದರೆ ಆರ್‌ಎಸ್‌ಎಸ್ ಸೃಷ್ಟಿಸಿರುವ ಭಾಷಿಕ ದ ಸಂಸ್ಕೃತಿ ಮತ್ತು ಅದರ ಗುರಿ ಎಂತದೆಂಬುದು ಎಲ್ಲರಿಗೂ ಜಗ ಜಾಹಿರವಾಗುತ್ತದೆ ಮತ್ತು ಅರ್ಥವಾಗುತ್ತದೆ. ಇಂಥ ನೀಚತನದ ಸಂಸ್ಕೃತಿಯನ್ನು ಅದು ಪ್ರತಿಪಾದನೆ ಮಾಡಿರುವುದು ನಮ್ಮ ದೇಶದ ವರ್ತಮಾನ ಮತ್ತು ಭವಿಷ್ಯಕ್ಕೆ ಅತ್ಯಂತ ಅಪಾಯಕಾರಿಯಾಗಿದೆ ಎಂದು ಅವರು ಕಳವಳ ವ್ಯಕ್ತಪಡಿಸಿದರು.

ಪ್ರಧಾನಿ ನರೇಂದ್ರ ಮೋದಿ ಅವರಿಗೂ ಮತ್ತು ಗ್ರಹಣ ಸಚಿವ ಅಮಿತ್ ಅವರಿಗೂ ಪತ್ರ ಬರೆದು ಮನವಿ ಮಾಡಿ ಸಾಂವಿಧಾನಿಕ ಲವಲೇಶ ಎಳ್ಳಿನಷ್ಟಾದರೂ ಅವರಲ್ಲಿ ಪ್ರಜ್ಞೆ ಇದ್ದರೆ ಅವರೇ ಆರ್‌ಎಸ್‌ಎಸ್‌ನ್ನು ನಿಷೇಧ ಮಾಡಬೇಕು ಎಂದು ಆಗ್ರಹಿಸಲಾಗುವುದು ಎಂದು ಅವರು ಹೇಳಿದರು. ಈ ಸಂದರ್ಭದಲ್ಲಿ ಮಹಿಳಾ ಕಾಂಗ್ರೆಸ್ ಮುಖಂಡರಾದ ಚಂದ್ರಿಕಾ ಪರಮೇಶ್ವರ್, ವಾಣಿಶ್ರೀ ಸಾಗರಕ್, ಬಸಮ್ಮ, ಸಂಗೀತಾ ಪಾಟೀಲ್, ಸಂವಿತಾ ಒಂಟಿ ಮುಂತಾದವರು ಪಾಲ್ಗೊಂಡಿದ್ದರು.

# ಇಲಾಖೆ ಯೋಜನೆಗಳ ಅರ್ಜಿ ಸಲ್ಲಿಕೆಗೆ ಅವಧಿ ವಿಸ್ತರಣೆ

ಮಲ್ಲಮ್ಮ ನುಡಿ ವಾರ್ತೆ

ರಾಯಚೂರು ಅಕ್ಟೋಬರ್ 15– 2025–26 ನೇ ಸಾಲಿಗೆ ವಿಕಲಚೇತನರ ಹಾಗೂ ಹಿರಿಯ ನಾಗರೀಕರ ಸಬಲೀಕರಣ ಇಲಾಖೆಯಲ್ಲಿ ಜಾರಿಯಲ್ಲಿರುವ ವಿವಿಧ ಯೋಜನೆಯಗಳಡಿ ಸೇವಾ–ಸೌಲಭ್ಯ ಪಡೆಯಲು ಅರ್ಜಿ ಸಲ್ಲಿಕೆ ಅವಧಿಯನ್ನು ಅಕ್ಟೋಬರ್ 31ರವರೆಗೆ ವಿಸ್ತರಣೆ ಮಾಡಲಾಗಿದೆ.

ಆಧಾರ್ ಯೋಜನೆ, ವೈದ್ಯಕೀಯ ಪರಿಹಾರ ನಿಧಿ ಯೋಜನೆ, ಪ್ರತಿಭಾವಂತ ವಿಕಲಚೇತನ ವಿದ್ಯಾರ್ಥಿಗಳಿಗೆ ಪ್ರೋತ್ಸಾಹಧನ ಯೋಜನೆ, ನಿರುದ್ಯೋಗ ಭತ್ಯೆ ಯೋಜನೆ, ಶಿಶುಪಾಲನೆ ಭತ್ಯೆ ಯೋಜನೆ, ಮರಣ ಪರಿಹಾರ ನಿಧಿ ಯೋಜನೆ, ಪ್ರತಿಭೆ ಯೋಜನೆ, ಅಂಧ ವಿದ್ಯಾರ್ಥಿಗಳಿಗೆ ಟಾಕಿಂಗ್ ಲ್ಯಾಪ್‌ಟಾಪ್ ಯೋಜನೆ, ದೃಷ್ಟಿದೋಷ ಹೊಂದಿದ ವಿಕಲಚೇತನರಿಗೆ ಬ್ರೈಲ್ ಕಿಟ್ ಯೋಜನೆ, ದೈಹಿಕ ವಿಕಲಚೇತನರಿಗೆ ಯಂತ್ರಚಾಲಿತ ದ್ವಿಚಕ್ರವಾಹನ ಯೋಜನೆ, ಶ್ರವಣದೋಷವುಳ್ಳವ್ಯಕ್ತಿಗಳಿಗೆ ಸ್ವಯಂ ಉದ್ಯೋಗಕ್ಕಾಗಿ ಹೊಲಿಗೆ ಯಂತ್ರ ಯೋಜನೆ, ಸಾಧನೆ–ಸಲಕರಣೆ ಯೋಜನೆ ಮತ್ತು ವಿಕಲಚೇತನರಿಗೆ ಬ್ಯಾಟರಿ ಚಾಲಿತ ವ್ಹೀಲ್‌ಚೇರ್ ಯೋಜನೆಗಳಿಗಾಗಿ ರಾಯಚೂರು ಜಿಲ್ಲಾ ವ್ಯಾಪ್ತಿಯ ಅರ್ಹ ವಿಕಲಚೇತನ ಫಲಾನುಭವಿಗಳು ಆನ್‌ಲೈನ್ ಸೇವಾ–ಸಿಂಧು ತಂತ್ರಾಂಶದಡಿ (ಪೋರ್ಟಲ್) ಮೂಲಕ ಗ್ರಾಮ–ಒನ್, ಕರ್ನಾಟಕ–ಒನ್, ಬೆಂಗಳೂರು–ಒನ್ ಹಾಗೂ https//sevasindhanur.karnataka.gov.insevasindhu/Kannada) ಮುಖಾಂತರ 31–10–2025ರೊಳಗೆ ಅರ್ಜಿಗಳನ್ನು ದಾಖಲಾತಿಗಳೊಂದಿಗೆ ಆನ್‌ಲೈನ್ ಮುಖಾಂತರ ಸಲ್ಲಿಸಲು ತಿಳಿಸಲಾಗಿದೆ.

ಫಲಾನುಭವಿಗಳು ಆನ್‌ಲೈನ್ ತಂತ್ರಾಂಶದಲ್ಲಿ ಸಲ್ಲಿಸಿದ ಅರ್ಜಿಯನ್ನು ಸಂಬಂಧಪಟ್ಟ ದಾಖಲೆಗಳೊಂದಿಗೆ ಹಾರ್ಡ್ ಪ್ರತಿಯೊಂದಿಗೆ ಅರ್ಜಿ ಸಲ್ಲಿಸಬೇಕು. ಹೆಚ್ಚಿನ ಮಾಹಿತಿಗಾಗಿ ಜಿಲ್ಲಾ ಅಂಗವಿಕಲರ ಕಲ್ಯಾಣಾಧಿಕಾರಿಗಳ ಕಚೇರಿ, ಜಿಲ್ಲಾ ವಿಕಲಚೇತನರ ಹಾಗೂ ಹಿರಿಯ ನಾಗರೀಕರ ಸಬಲೀಕರಣ ಇಲಾಖೆ, ಮಾವಿನ ಕೆರೆ ರಸ್ತೆ, ಆಜಾದ ನಗರ, ರಾಯಚೂರು ಜಿಲ್ಲಾ ಕಚೇರಿಗೆ ಕಚೇರಿ ಕೆಲಸದ ಸಮಯದಲ್ಲಿ ಸಲ್ಲಿಸಲು ತಿಳಿಸಲಾಗಿದೆ. ಇಲಾಖೆಯ ಯೋಜನೆಗಳಿಗೆ ಸಂಬಂಧಿಸಿದಂತೆ ಸಂಪೂರ್ಣವಾದ ಮಾರ್ಗದರ್ಶನವನ್ನು ಈ ಇಲಾಖೆಯ ಗ್ರಾಮ ಪಂಚಾಯಿತಿ ಮಟ್ಟದಲ್ಲಿ ಗ್ರಾಮೀಣ ಪುನರ್ವಸತಿ ಕಾರ್ಯಕರ್ತರನ್ನು, ನಗರ ಪ್ರದೇಶದಲ್ಲಿ ನಗರ ಪುನರ್ವಸತಿ ಕಾರ್ಯಕರ್ತರನ್ನು ಹಾಗೂ ತಾಲ್ಲೂಕು ವಿವಿದೋದ್ದೇಶ ಪುನರ್ವಸತಿ ಕಾರ್ಯಕರ್ತರಿಂದ ಮಾಹಿತಿ ಪಡೆದು ಅರ್ಜಿಗಳನ್ನು ಸಲ್ಲಿಸಬಹುದು. ಮುಂದುವರೆದು ಸದರಿ ಪ್ರಕಟಣೆಯನ್ನು ಎಲ್ಲಾ ಕನ್ನಡ ಪತ್ರಿಕೆಗಳಲ್ಲಿ ಉಚಿತವಾಗಿ ಪ್ರಕಟಿಸಲು ಮಾನ್ಯರಲ್ಲಿ ಈ ಮೂಲಕ ಕೋರಿದೆ.

ಕಾರ್ಯಕರ್ತರ ವಿವರ: ರಾಯಚೂರು ತಾಲೂಕಿಗೆ ಅಮರೇಶ ಯಾದವ್ ಮೊ:9972237508, ಮಾನವಿ–ಸಿರವಾರ ತಾಲೂಕಿಗೆ ರಾಘವೇಂದ್ರ ಮೊ:9740203769, ದೇವದುರ್ಗ ತಾಲೂಕಿಗೆ ಲೋಕಪ್ಪನೂರುನಾಯ್ಕೆ ಮೊ:9945207693, ಸಿಂಧನೂರು ತಾಲೂಕಿಗೆ ಬಸವರಾಜ ಸಾಸಲಮರಿ ಮೊ:9900298217, ಲಿಂಗಸ್ಗೂರು–ಮಸ್ಕಿ ತಾಲೂಕಿಗೆ ನಾಗರಾಜ ಮೊ:9901668380ಗೆ ಸಂಪರ್ಕಿಸಿ ಮಾಹಿತಿ ಪಡೆಯಬಹುದಾಗಿದೆ ಎಂದು ಜಿಲ್ಲಾ ಅಂಗವಿಕಲರ ಕಲ್ಯಾಣಾಧಿಕಾರಿಗಳು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

## ಹಾರ್ವೆಸ್ಟರ್ ಹಬ್ ಸ್ಥಾಪನೆಗಾಗಿ ಕೃಷಿ ಇಲಾಖೆಯಿಂದ ಅರ್ಜಿ ಆಹ್ವಾನ

ಮಲ್ಲಮ್ಮ ನುಡಿ ವಾರ್ತೆ

ರಾಯಚೂರು ಅಕ್ಟೋಬರ್ 15 –: 2025–26ನೇ ಸಾಲಿನಲ್ಲಿ ರಾಜ್ಯ ವಲಯಯಾಂತ್ರೀಕರಣಯೋಜನೆಯಡಿ ಹಾರ್ವೆಸ್ಟರ್ ಹಬ್ ಸ್ಥಾಪನೆಗಾಗಿ ಅರ್ಹರಿಂದ ಅರ್ಜಿ ಆಹ್ವಾನಿಸಲಾಗಿದೆ.

ರಾಯಚೂರು ಜಿಲ್ಲೆಗೆ ಸಾಮಾನ್ಯ ವರ್ಗದ ವೈಯಕ್ತಿಕ ಫಲಾನುಭವಿಗಳಿಗೆ ಎರಡು ಘಟಕ, ಪರಿಶಿಷ್ಟ ಪಂಗಡ ವರ್ಗ ವೈಯಕ್ತಿಕ ಫಲಾನುಭವಿಗಳಿಗೆ ಒಂದು ಘಟಕ ಹಾಗೂ ಸಂಘ–ಸಂಸ್ಥೆಗಳಿಗೆ ಒಂದು ಘಟಕ ಗುರಿ ಹೊಂದಿದ್ದು, ಆಸಕ್ತಿಯುಳ್ಳ ಫಲಾನುಭವಿಗಳು ಹಾಗೂ ಸಂಘ–ಸಂಸ್ಥೆಗಳು ಹಾರ್ವೆಸ್ಟರ್ ಹಬ್ ಸ್ಥಾಪಿಸಲು ಅರ್ಜಿ ಸಲ್ಲಿಸಬಹುದಾಗಿದೆ.

ಅರ್ಜಿ, ಪಹಣಿ, ಎಫ್‌ಐಡಿ ಹೊಂದಿದ ಜಾತಿ ಪ್ರಮಾಣ ಪತ್ರ, ಗುರುತಿನ ಪತ್ರ, ಬ್ಯಾಂಕ್ ಖಾತೆಯ ವಿವರ, ಸಂಸ್ಥೆಯಾಗಿದ್ದರೆ ನೋಂದಾಯಿಸಿದ ಪ್ರಮಾಣ ಪತ್ರ ಮತ್ತು ಕಳೆದ 3 ಸಾಲಿನ ವಾಹಿವಾಟು ವರದಿ ಮತ್ತು ತಾತ್ವಿಕ ಸಾಲ ಮಂಜುರಾತಿ ಪತ್ರ (ಇನ್ ಪ್ರಿನ್ಸಿಪಲ್ ಲೋನ್ ಸೆಕ್ಷನ್ ಲೇಟರ್) ದಾಖಲಾತಿಗಳನ್ನು ಆಯಾ ತಾಲೂಕಿನ ಸಹಾಯಕ ಕೃಷಿ ನಿರ್ದೇಶಕರ ಕಚೇರಿಗೆ ಅಕ್ಟೋಬರ್ 24ರೊಳಗೆ ಸಲ್ಲಿಸಬಹುದಾಗಿದೆ ಎಂದು ಜಂಟಿ ಕೃಷಿ ನಿರ್ದೇಶಕರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ಗಾಂಧಿ ಜಯಂತ್ಯುತ್ಸವ, ಜನಜಾಗೃತಿ ಜಾಥಾ, ಸಮಾವೇಶ



ಮಲ್ಲಮ್ಮ ನುಡಿ ವಾರ್ತೆ

ರಾಯಚೂರು ಅಕ್ಟೋಬರ್ 15 –ಕರ್ನಾಟಕ ಸರ್ಕಾರದ ಕರ್ನಾಟಕ ರಾಜ್ಯ ಮದ್ಯಪಾನ ಸಂಯಮ ಮಂಡಳಿ ಬೆಂಗಳೂರು, ಶ್ರೀಕ್ಷೇತ್ರ ಧರ್ಮಸ್ಥಳ ಗ್ರಾಮಾಭಿವೃದ್ಧಿ ಯೋಜನೆ ಬಿ.ಸಿ ಟ್ರಸ್ಟ್ ಹಾಗೂ ಅಖಿಲ ಕರ್ನಾಟಕ ಜಿಲ್ಲಾ ಜನಜಾಗೃತಿ ವೇದಿಕೆ ಮತ್ತು ಜಿಲ್ಲಾ ಪ್ರಗತಿ ಬಂಧು, ಸ್ವ ಸಹಾಯ ಸಂಘಗಳ ಒಕ್ಕೂಟ ಸಹಯೋಗದಲ್ಲಿ ಗಾಂಧಿ ಜಯಂತಿ ಪ್ರಯುಕ್ತ ಜನಜಾಗೃತಿ ಜಾಥಾ ಮತ್ತು ಸಮಾವೇಶ ಕಾರ್ಯಕ್ರಮವು ಅಕ್ಟೋಬರ್ 14ರಂದು ನಡೆಯಿತು.

ನಗರದ ಪಂಡಿತ ಸಿದ್ಧರಾಮ ಜಂಬಲದಿನ್ನಿ ರಂಗಮಂದಿರದಲ್ಲಿ ನಡೆದ ಕಾರ್ಯಕ್ರಮದಲ್ಲಿ ಮಹಾಪೌರರಾದ ನರಸಮ್ಮ ನರಸಿಂಹಲು ಮಾಡಿಗಿರಿ ಅವರು ಗಾಂಧೀಜಿಯವರ ಭಾವಚಿತ್ರಕ್ಕೆ ಪುಷ್ಪನಮನ ಸಲ್ಲಿಸಿ ಜ್ಯೋತಿ ಬೆಳಗಿಸಿ ಕಾರ್ಯಕ್ರಮ ಚಾಲನೆ ನೀಡಿದರು. ಈ ಸಂದರ್ಭದಲ್ಲಿ ಸೋಮವಾರಪೇಟೆ ಹಿರೇಮಠದ ಪೂಜ್ಯರು, ಜಿಲ್ಲೆಯ ವಿವಿಧ ಅಧಿಕಾರಿಗಳು, ಗಣ್ಯಮಾನ್ಯರು, ಶ್ರೀಕ್ಷೇತ್ರ ಧರ್ಮಸ್ಥಳ ಗ್ರಾಮಾಭಿವೃದ್ಧಿ ಯೋಜನೆ ಬಿ.ಸಿ. ಟ್ರಸ್ಟ್, ಕರ್ನಾಟಕ ಜಿಲ್ಲಾ ಜನಜಾಗೃತಿ ವೇದಿಕೆ ಮತ್ತು ಜಿಲ್ಲಾ ಪ್ರಗತಿ ಬಂಧು ಸ್ವ–ಸಹಾಯ ಸಂಘಗಳ ಒಕ್ಕೂಟದ ಅಧ್ಯಕ್ಷರು, ಪದಾಧಿಕಾರಿಗಳು ಉಪಸ್ಥಿತರಿದ್ದರು.

## ವಿದ್ಯುತ್ ಗ್ರಾಹಕರ ಸಭೆ 18ಕ್ಕೆ

ಮಲ್ಲಮ್ಮ ನುಡಿ ವಾರ್ತೆ

ರಾಯಚೂರು ಅಕ್ಟೋಬರ್ 15–ಜೆಸ್ಕಾಂ ಗ್ರಾಹಕರ ಸಭೆಯು ಅಕ್ಟೋಬರ್ 18ರ ಬೆಳಿಗ್ಗೆ 11 ಗಂಟೆಯಿಂದ ಮಧ್ಯಾಹ್ನ 1ರವರೆಗೆ ರಾಯಚೂರು ನಗರದಲ್ಲಿನ ಲಿಂಗಸಗೂರು ರಸ್ತೆಯಲ್ಲಿರುವ ಜಿಲ್ಲಾಧಿಕಾರಿಗಳ ಮನೆಯ ಹತ್ತಿರದ ಜೆಸ್ಕಾಂ ಕಚೇರಿಯ ಕಾರ್ಯ ಮತ್ತು ಪಾಲನೆ ಉಪ ವಿಭಾಗ–1ರಲ್ಲಿ ಏರ್ಪಡಿಸಲಾಗಿದೆ. ವಿದ್ಯುತ್ ಗ್ರಾಹಕರು ವಿದ್ಯುತ್ ದೂರುಗಳ ಬಗ್ಗೆ ಸಭೆಗೆ ಹಾಜರಾಗಿ ದೂರನ್ನು ಇತ್ಯರ್ಥಪಡಿಸಿಕೊಳ್ಳಬಹುದಾಗಿದೆ ಎಂದು ಜೆಸ್ಕಾಂ ಕಚೇರಿಯ ಪ್ರಕಟಣೆ ತಿಳಿಸಿದೆ.

# ಅ.16ರಂದು ವಿದ್ಯುತ್ ವ್ಯತ್ಯಯ

ಮಲ್ಲಮ್ಮ ನುಡಿ ವಾರ್ತೆ

ರಾಯಚೂರು ಅಕ್ಟೋಬರ್ 15 – ಶಕ್ತಿನಗರ ಉಪ–ವಿಭಾಗ ಜೆಸ್ಕಾಂ ವ್ಯಾಪ್ತಿಗೆ ಬರುವ 11 ಕೆವಿ ಸಿ–10 ಸಿಎಂಸಿ ಮಾರ್ಗದ ಕೆಳಗೆ ಜಂಗಲ್ ಕಟಿಂಗ್ ಕೆಲಸದ ನಿಮಿತ್ತ ರಾಯಚೂರು ನಗರಕ್ಕೆ ನೀರು ಸರಬರಾಜು ಆಗುವ 11 ಕೆವಿ ಸಿ–10 ಸಿಎಂಸಿ ಮಾರ್ಗಕ್ಕೆ ಅ.16ರ ಬೆಳಗ್ಗೆ 10 ಗಂಟೆಯಿಂದ ಸಂಜೆ 05 ಗಂಟೆವರೆಗೆ ವಿದ್ಯುತ್ ಪೂರೈಕೆಯಲ್ಲಿ ವ್ಯತ್ಯಯವಾಗಲಿದೆ. ಸಾರ್ವಜನಿಕರು ಸಹಕರಿಸಬೇಕು ಎಂದು ಜೆಸ್ಕಾಂ ಶಕ್ತಿನಗರದ ಕಾರ್ಯ ಮತ್ತು ಪಾಲನೆ ಉಪ– ವಿಭಾಗದ ಸಹಾಯಕ ಕಾರ್ಯನಿರ್ವಾಹಕ ಅಭಿಯಂತರರು ತಿಳಿಸಿದ್ದಾರೆ.

## ನೂತನ ನಿರ್ದೇಶಕ ಮಲ್ಲನಗೌಡ ಬಿರಾದಾರಗೆ ಸನ್ಮಾನ

ಮಲ್ಲಮ್ಮ ನುಡಿ ವಾರ್ತೆ

ತಾಳಿಕೋಟಿ: ಮುದ್ದೇಬಿಹಾಳ ತಾಲೂಕ ಹುಟ್ಟುವಳಿ ಮಾರಾಟ ಸಹಕಾರ ಸಂಘದ ನಿರ್ದೇಶಕ ಮಂಡಳಿಗೆ ನಡೆದ ಚುನಾವಣೆಯಲ್ಲಿ ಕೊಡಗಾನೂರ ಗ್ರಾಮದ ಮಲ್ಲನಗೌಡ ನಿಂಗನಗೌಡ ಬಿರಾದಾರ ಇವರು ನಿರ್ದೇಶಕರಾಗಿ ಅವಿರೋಧವಾಗಿ ಆಯ್ಕೆಯಾದ ಹಿನ್ನೆಲೆಯಲ್ಲಿ ಅವರನ್ನು ಗೆಳೆಯರ ಬಳಗದ ವತಿಯಿಂದ ಸೋಮವಾರ ಸನ್ಮಾನಿಸಲಾಯಿತು. ಸನ್ಮಾನ ಸ್ವೀಕರಿಸಿ ಈ ಸಂದರ್ಭದಲ್ಲಿ ಮಾತನಾಡಿದ ಮಲ್ಲನಗೌಡ ಬಿರಾದಾರ ಅವರು ಎಲ್ಲರ ಸಹಕಾರದೊಂದಿಗೆ ನಾನು ಅವಿರೋಧವಾಗಿ ಆಯ್ಕೆಯಾಗಲು ಸಾಧ್ಯವಾಗಿದೆ ನನಗೆ ಬೆಂಬಲಿಸಿದ ಎಲ್ಲರನ್ನು ಹಾಗೂ ಪ್ರೀತಿಯಿಂದ ನನ್ನನ್ನು ಸನ್ಮಾನಿಸಿದ ನಿಮ್ಮನ್ನು ಅಭಿನಂದಿಸುತ್ತೇನೆ ಎಂದರು. ಈ ಸಮಯದಲ್ಲಿ ಮಿತ್ರ ಬಳಗದವರಾದ ಶಂಕರಗೌಡ ಕಂತಲಗಾಂವಿ, ಸಂಗನಗೌಡ ಹೆಗರೆಡ್ಡಿ, ಪ್ರಭುಗೌಡ ನಾಡಗೌಡ, ಸಂಗನಗೌಡ ಅಸ್ಕಿ, ಬಸನಗೌಡ ನಾಡಗೌಡ ಮಲ್ಲನಗೌಡ ಬಿರಾದಾರ ಶಾಂತಗೌಡ ಬಿರಾದಾರ, ಮಲ್ಲನಗೌಡ ಯಾದಗಿರಿ, ಬಸನಗೌಡ ನಾಡಗೌಡ, ಪ್ರವೀಣ ರೆಡ್ಡಿ, ಎಚ್.ಬಿ.ಬಿರಾದಾರ, ಅಪ್ಪು ಆನೇಸೂರ, ತಿಪ್ಪಣ್ಣ ಅದೋನಿ ಮತ್ತಿತರರು ಇದ್ದರು.

## ರಾಜ್ಯಾದ್ಯಂತ ಎಲ್ಲಾ ತಾಲೂಕು ಕೇಂದ್ರಗಳಲ್ಲಿರುವ ಮಿನಿ ವಿಧಾನಸೌಧದಲ್ಲಿ ನಾಡದೇವತೆ ಕನ್ನಡ ತಾಯಿ ಭುವನೇಶ್ವರಿಯ ಭಾವಚಿತ್ರವನ್ನು ಅಳವಡಿಸಬೇಕೆಂದು ಕರವೇ ಆಗ್ರಹ




ಮಲ್ಲಮ್ಮ ನುಡಿ ವಾರ್ತೆ

ಲಿಂಗಸಗೂರು: ಅ16–ಭುವನೇಶ್ವರಿ ದೇವಿಯನ್ನು ನಾಡಿನ ಒಳತಿಗಾಗಿ ಒಗ್ಗೂಡಿ ಪ್ರಾರ್ಥಿಸುವ ರೂಢಿ ಆರಂಭಿಸಲಾಯಿತು. ಇದನ್ನು ಮುಂದೆ ವಿಜಯನಗರದ ಅರಸರು ಮುಂದುವರಿಸಿದರು ಯಾವುದೇ ಒಳ್ಳೆಯ ಕೆಲಸಕ್ಕೆ, ಯುದ್ಧಕ್ಕೆ ತೆರಳುವ ಮುನ್ನ, ನಾಡಹಬ್ಬಕ್ಕೆ ಮುನ್ನ ಭುವನೇಶ್ವರಿ ದೇವಿಯ ಪೂಜೆ ಮಾಡಿ ತೆರಳತೊಡಗಿದರು. ಇದು ಪರಂಪರೆಯಾಗಿ ಬೆಳೆಯಿತು. ಕಾರಣ ರಾಜ್ಯಾದ್ಯಂತ ಎಲ್ಲಾ ತಾಲೂಕು ಕೇಂದ್ರಗಳಲ್ಲಿರುವ ಮಿನಿ ವಿಧಾನಸೌಧದಲ್ಲಿ ನಾಡದೇವತೆ ಕನ್ನಡ ತಾಯಿ ಭುವನೇಶ್ವರಿಯ ಭಾವಚಿತ್ರವನ್ನು ಅಳವಡಿಸಬೇಕೆಂದು ಕರವೇ ( ಪ್ರವೀಣ್ ಶೆಟ್ಟಿ ಬಣ ) ದ ತಾಲೂಕ ಅಧ್ಯಕ್ಷ ಆಂಜನೇಯ ಹೆಚ್ ಭಂಡಾರಿ ಸಹಾಯಕ ಆಯುಕ್ತರ ಮೂಲಕ ಮುಖ್ಯಮಂತ್ರಿ ಹಾಗೂ ಉಪ ಮುಖ್ಯಮಂತ್ರಿಯವರಿಗೆ ಮನವಿಯನ್ನು ಸಲ್ಲಿಸಿ ನಂತರ ಮಾತನಾಡಿದ ಅವರು ಕಾಲಕ್ರಮೇಣ ಕನ್ನಡ ನಾಡು–ನುಡಿ ಹಾಗೂ ತಾಯಿ ಭುವನೇಶ್ವರಿ ಅವಿನಾಭಾವ ಎನಿಸಿದರು . ಭುವನಕ್ಕೆ ಈಶ್ವರಿಯಾದವಳು ಯಾರೋ ಅವಳು ಭುವನೇಶ್ವರಿ, ಅಂದರೆ ಈಕೆ ಬರೀ ನಮ್ಮ ನಾಡಿಗಲ್ಲ, ಇಡೀ ಭೂಮಮಡಲಕ್ಕೆ ತಾಯಿ ಎಂಬ ಭಕ್ತಿ. ಇಂತಹ ತಾಯಿಯ ಭಾವಚಿತ್ರವನ್ನು ರಾಜ್ಯದ ಎಲ್ಲಾ ತಾಲೂಕು ಕೇಂದ್ರಗಳಲ್ಲಿರುವ ಮಿನಿ ವಿಧಾನಸೌಧದಲ್ಲಿ ಅಳವಡಿಸುವುದು ಸೂಕ್ತವಾಗಿದೆ ಕಾರಣ ರಾಜ್ಯಾದ್ಯಂತ ಎಲ್ಲಾ ತಾಲೂಕು ಕೇಂದ್ರಗಳಲ್ಲಿರುವ ಮಿನಿ ವಿಧಾನಸೌಧದಲ್ಲಿ ನಾಡದೇವತೆ ಕನ್ನಡ ತಾಯಿ ಭುವನೇಶ್ವರಿಯ ಭಾವಚಿತ್ರವನ್ನು ಅಳವಡಿಸಬೇಕೆಂದು ಒತ್ತಾಯಿಸಿದರು. ಈ ಸಂದರ್ಭದಲ್ಲಿ ಶಿವು ಪತ್ತಾರ್ , ವೆಂಕಟೇಶ್ ಪತ್ತಾರ್ , ಸಲೀಮ್ ಖಾನ್ , ಮೌನೇಶ್ , ಅಶೋಕ್ ನಾಯಕ್, ವಿಜಯ ಕುಮಾರ್ , ದುರ್ಗಪ್ಪ ಹೊಸಮನಿ , ಸಿದ್ದು ಚಲುವಾದಿ , ಯಮನೂರ್ ಭೋವಿ , ರವಿ ಜೋಗೇರ್ ಸೇರಿದಂತೆ ಹಲವರು ಇದ್ದರು.

# ಬಾಲಕ–ಬಾಲಕಿಯರ ಖೋ–ಖೋ ಪಂದ್ಯಾವಳಿ

ಮಲ್ಲಮ್ಮ ನುಡಿ ವಾರ್ತೆ

ತಾಳಿಕೋಟಿ: ಜಿಲ್ಲಾ ಪಂಚಾಯತ, ಶಾಲಾ ಶಿಕ್ಷಣ ಮತ್ತು ಸಾಕ್ಷರತಾ ಇಲಾಖೆ, ವಿಜಯಪುರ ಕ್ಷೇತ್ರ ಶಿಕ್ಷಣಾಧಿಕಾರಿಗಳ ಹಾಗೂ ಕ್ಷೇತ್ರ ಸಮನ್ವಯಾಧಿಕಾರಿಗಳ ಕಾರ್ಯಾಲಯ, ಮುದ್ದೇಬಿಹಾಳ ಹಾಗೂ ಬ್ರಿಲಿಯಂಟ್ ಕನ್ನಡ ಮತ್ತು ಆಂಗ್ಲ ಮಾಧ್ಯಮ ಪ್ರಾಥಮಿಕ ಹಾಗೂ ಪ್ರೌಢಶಾಲೆ ಮೈಲೇಶ್ವರ(ತಾಳಿಕೋಟಿ) ಇವರ ಸಹಯೋಗದಲ್ಲಿ ಜಿಲ್ಲಾ ಮಟ್ಟದ ಪ್ರಾಥಮಿಕ ಹಾಗೂ ಪ್ರೌಢಶಾಲೆಗಳ ಬಾಲಕ–ಬಾಲಕಿಯರ ಖೋ–ಖೋ ಪಂದ್ಯಾವಳಿ ನಾಳೆ (ಅ.17)ರಂದು ನಡೆಯಲಿದೆ. ಅಂದು ಬೆಳಿಗ್ಗೆ 8.30 ಘಂಟೆಗೆ ಮೈಲೇಶ್ವರದ ಬ್ರಿಲಿಯಂಟ್ ಶಾಲಾ ಆವರಣದಲ್ಲಿ ನಡೆಯಲಿರುವ ಈ ಪಂದ್ಯಾವಳಿಯ ಉದ್ಘಾಟನಾ ಕಾರ್ಯಕ್ರಮದಲ್ಲಿ ಜಿಲ್ಲಾ ದೈಹಿಕ ಶಿಕ್ಷಣ ಪರಿವೀಕ್ಷಕರು ಹಾಗೂ ಜಿಲ್ಲಾ ಮಟ್ಟದ ಅಧಿಕಾರಿಗಳು ಮತ್ತು ಮುದ್ದೇಬಿಹಾಳ ತಾಲೂಕಿನ ಕ್ಷೇತ್ರ ಶಿಕ್ಷಣಾಧಿಕಾರಿಗಳು, ದೈಹಿಕ ಶಿಕ್ಷಣ ಪರಿವೀಕ್ಷಕರು ಹಾಗೂ ಜಿಲ್ಲೆಯ ಎಲ್ಲಾ ತಾಲೂಕುಗಳ ದೈಹಿಕ ಶಿಕ್ಷಣ ಪರಿವೀಕ್ಷಕರು, ಕರ್ನಾಟಕ ರಾಜ್ಯ ದೈಹಿಕ ಶಿಕ್ಷಣ ಶಿಕ್ಷಕರ ಸಂಘದ ಜಿಲ್ಲಾಧ್ಯಕ್ಷರು ಹಾಗೂ ಸರ್ವ ಸದಸ್ಯರು, ಎಲ್ಲಾ ತಾಲೂಕಿನ ದೈಹಿಕ ಶಿಕ್ಷಣ ಶಿಕ್ಷಕರ ಸಂಘದ ಅಧ್ಯಕ್ಷರು ಹಾಗೂ ಸರ್ವ ಸದಸ್ಯರು, ವಿವಿಧ ಸಂಘ ಸಂಸ್ಥೆಗಳ ಅಧ್ಯಕ್ಷರು, ಶ್ರೀ ಮಾರುತಿ ಶಿಕ್ಷಣ ಸಂಸ್ಥೆಯ ಅಧ್ಯಕ್ಷರು ಹಾಗೂ ಆಡಳಿತ ಮಂಡಳಿಯ ಸದಸ್ಯರು, ಶಾಲೆಯ ಮುಖ್ಯೋಪಾಧ್ಯಾಯರು ಸಿಬ್ಬಂದಿ ವರ್ಗ, ಕ್ರೀಡಾಪಟುಗಳು ಹಾಗೂ ತರಬೇತುದಾರರು ಉಪಸ್ಥಿತರಿರುವರು.

## ಅಧಿಕಾರಿಗಳ ನಿರ್ಲಕ್ಷ್ಯ

### ರೈತರ ವಿತರಣೆಗೆ ತಂದು ರೈತ ಸಂಪರ್ಕ ಕೇಂದ್ರದ ಉಗ್ರಾಣದಲ್ಲಿ ಶೇಖರಿಸಿಟ್ಟಿದ್ದ ಕಡ್ಲೆ ಬೀಜ ಕಳ್ಳತನ



ಮಲ್ಲಮ್ಮ ನುಡಿ ವಾರ್ತೆ

ಲಿಂಗಸುಗೂರು: ಪಟ್ಟಣದ ರೈತರ ಜೀವನಾಡಿಯಂತೆ ಕರೆಯಲ್ಪಡುವ ರೈತ ಸಂಪರ್ಕ ಕೇಂದ್ರದಲ್ಲಿ ಇಂದು ಬೆಳಗಿನ ಜಾವ ಉಗ್ರಾಣದಲ್ಲಿದ್ದ ಸುಮಾರು 20 ಕೇಜಿ ತೂಕದ 72 ಪಾಕೆಟಗಳು ಕಡ್ಲೆ ಬೀಜ ಕಳ್ಳತನವಾಗಿದ್ದು.

ಕದ್ದವರು ಯಾರು ರೈತರ ಗೋಳು ಕೇಳುವರು ಯಾರು, ಅಧಿಕಾರಿಗಳ ಈ ದಿವ್ಯ ನಿರ್ಲಕ್ಷ–ಕ್ಕೆ ರೈತರು ಕಂಗಲಾಗಿರುವುದು ಬೆಳಕಿಗೆ ಬಂದಿದೆ,

ಲಿಂಗಸುಗೂರಿನ ರೈತ ಸಂಪರ್ಕ ಕೇಂದ್ರಕ್ಕೆ ನಿನ್ನೆ ಬೆಳಗಿನ ಜಾವ. ಶ್ರೀ ಸಾಯಿ ಅಗ್ರೋಸಿಡ್ಸ್ ಮುದ್ದೇಬಿಹಾಳ ಏಜೆನ್ಸಿಯಿಂದ 999 ಪ್ಯಾಕೆಟ್ ಕಡ್ಲೆ ಬೀಜ ವಿತರಣೆಯಾಗಿದ್ದು,

ಸೋಮವಾರ ಒಂದೇ ದಿನಕ್ಕೆ ರೈತರಿಗೆ ಸುಮಾರು 301 ಪಾಕೆಟ್ ಮರಟವಾಗಿದ್ದು, ಉಳಿದಿರುವ ಕಡ್ಲೆ ಬೀಜದ ಉಗ್ರಾಣವನ್ನು ಬೀಗ ಹಾಕಿದ್ದು, ಇಂದು ಬೆಳಗಿನ ಜಾವ 8–10 ನಿಮಿಷಕ್ಕೆ ರೈತ ಸಂಪರ್ಕಕ್ಕೆ ಎ ಡಿ ಸತೀಶ್ ಕುಮಾರ್ ರೈತಸಂಪರ್ಕ ಕೇಂದ್ರ ತೆರೆಯಲು ಹೋದಾಗ ಕಾರ್ಯಾಲಯದ ಮುಂದೆ ಸುಮಾರು 17 ಪಾಕೆಟ್‌ಗಳನ್ನು ನೋಡಿ ಬೆಚ್ಚಿಬಿದ್ದಿದ್ದಾರೆ, ಉಗ್ರಾಣದ ಬಿಗ ಒಡೆದು ಕಳ್ಳತನ ಮಾಡಿರೋದು ಆಶ್ಚರ್ಯವಾಗಿ ಪೊಲೀಸ್ ಠಾಣೆಗೆ ಮಾಹಿತಿ ನೀಡಿದ್ದಾರೆ,

ಆದರೆ ರೈತರಿಗೆ ವಿತರಿಸಬೇಕಾದ ಕಡ್ಲೆ ಬೀಜವನ್ನು ಕದ್ದವರು ಯಾರು ಅಧಿಕಾರಿಗಳು ರೈತರ ಬೇಡಿಕೆ–ಯಂತೆ ಇಷ್ಟೊಂದು ಪ್ರಮಾಣದ ಕಡ್ಲೆ ಬೀಜ ಇರುವ ಉಗ್ರಾಣ–ಕ್ಕೆ ಸಿಸಿ ಕ್ಯಾಮರಾ ಹಾಕಿಸದೆ, ಕಾವಲುಗಾರನನ್ನು ನೇಮಿಸದೆ ಕಳ್ಳತನಕ್ಕೆ ಅಧಿಕಾರಿಗಳು ಕೈಜೋಡಿಸಿದ್ದಾರೆ ಎನ್ನುವರು ಮೇಲ್ನೋಟಕ್ಕೆ ತಿಳಿಯುತ್ತಿದೆ,

ಈ ಸಂಬಂಧ ಲಿಂಗಸುಗೂರು ಪೊಲೀಸ್ ಠಾಣೆಯಲ್ಲಿ ಕಂಪ್ಲೀಟ್ ದಾಖಲಾಗಿದ್ದು ಏನೇ ಆಗಲಿ ಕಳ್ಳತನದ ಪ್ರಕರಣಕ್ಕೆ ತನಿಖೆಯಿಂದಷ್ಟೇ ತಿಳಿಯಬೇಕಾಗಿದೆ, ಇಂತಹ ಅವಗಡಕ್ಕೆ ಕಾರಣ–ರಾದ ರೈತ ಸಂಪರ್ಕ ಕೇಂದ್ರದ ಅಧಿಕಾರಿಗಳ ವಿರುದ್ಧ ರೈತರು ಚಿಮಾರಿ ಹಾಕುತ್ತಿದ್ದಾರೆ. ಇನ್ನಾದರೂ ಕಳ್ಳತನಕ್ಕೆ ಕರಿವಣ ಹಾಕಲು ಸೂಕ್ತ ಪದ್ರತೆ ಒದಗಿಸುತ್ತಾರ ರೈತ ಸಂಪರ್ಕ ಕೇಂದ್ರದ ಅಧಿಕಾರಿಗಳು ಎಂದು ಕಾದು ನೋಡಬೇಕಾಗಿದೆ,

# ಜಾನುವಾರು ಆರೋಗ್ಯ ತಪಾಸಣೆ ಶಿಬಿರ – ಲಸಿಕಾ ಕಾರ್ಯಕ್ರಮ



ಮಲ್ಲಮ್ಮ ನುಡಿ ವಾರ್ತೆ

ಲಿಂಗಸುಗೂರು : ತಾಲ್ಲೂಕಿನ ತೊರಲಬೆಂಚಿ ಗ್ರಾಮದಲ್ಲಿ ಲಯನ್ಸ್ ಕ್ಲಬ್ ಹಾಗೂ ಪಶುಸಂಗೋಪನ ಮತ್ತು ಪಶು ವೈದ್ಯಕೀಯ ಇಲಾಖೆ ಇವರ ಸಂಯುಕ್ತಾಶ್ರಯದಲ್ಲಿ ಜಾನುವಾರು ಆರೋಗ್ಯ ತಪಾಸಣೆ ಶಿಬಿರ ಹಾಗೂ ಲಸಿಕೆ ಕಾರ್ಯಕ್ರಮ ಯಶಸ್ವಿಯಾಗಿ ನಡೆಯಿತು.

ಈ ಕಾರ್ಯಕ್ರಮದ ಉದ್ದೇಶ ಕುರಿತು ಪ್ರಾಸ್ತಾವಿಕವಾಗಿ ಪಶುವೈದ್ಯ ಡಾ. ಅಮರೇಗೌಡ ಪಾಟೀಲ ಮಾತನಾಡಿ

ಲಯನ್ಸ್ ಕ್ಲಬ್ ವತಿಯಿಂದ ಇಂದಿನ ಜಾನುವಾರು ಲಸಿಕಾ ಕಾರ್ಯಕ್ರಮವು ಯಾವುದೇ ಇಲಾಖೆಯ ಆರ್ಥಿಕ ಅನುದಾನದಿಂದ ಜರುಗುತ್ತಿಲ್ಲ, ಈ ಶಿಬಿರದ ವೆಚ್ಚವನ್ನು ಲಯನ್ಸ್ ಕ್ಲಬ್ ಲಿಂಗಸೂಗೂರಿನ ಸದಸ್ಯರಿಂದ ಮಾತ್ರ ಸಂಗ್ರಹಿಸಲಾದ ನಿಧಿಯಿಂದ ಔಷಧ ಖರೀದಿಸಿ ರೈತರ ಸಂಗಾತಿ ಜಾನುವಾರುಗಳಿಗೆ ಉಚಿತವಾಗಿ ಪಶು ಸಂಗೋಪನ ಇಲಾಖೆಯ ಸೇವಾ ಸಹಾಯದೊಂದಿಗೆ ನೆರವೇರಿಸಲಾಗುತ್ತಿದೆ ಎಂದು ಹೇಳಿದರು.

ಲಾಭ ಪಡೆದ ಸಮಸ್ತ ರೈತಬಾಂಧವರಿಗೂ ಇಲಾಖೆಯ ಅಧಿಕಾರಿಗಳಿಗೂ ವಂದಿಸಿದರು.

ಜಾನುವಾರು ಆರೋಗ್ಯ ಶಿಬಿರ, ಲಸಿಕಾ ಕಾರ್ಯಕ್ರಮದಲ್ಲಿ, ಲಯನ್ಸ್ ಕ್ಲಬ್ ಲಿಂಗಸೂಗೂರಿನ ಅಧ್ಯಕ್ಷರಾದ ಸಿದ್ರಾಮಪ್ಪ ಕಡ್ಲೂರು, ಲಯನ್ ಶರಣಬಸವರಾಜ ನಾಡಗೌಡ, ಪಶುಸಂಗೋಪನ ಇಲಾಖೆ ಸಹಾಯಕ ನಿರ್ದೇಶಕರಾದ ಡಾ. ಅಮರೇಗೌಡ ಪಾಟೀಲ, ಜಾನುವಾರು ಅಧಿಕಾರಿಗಳಾಗಿರುವ ಡಾ. ದೇವರಾಜ ಉಪ್ಪಾರ, ಡಾ. ಮಹೇಶ ನೀರಲಕೇರಿ, ಶೆಟ್ಟೆಪ್ಪ ನಾಯಕ, ಪಶು ವೈದ್ಯಕೀಯ ಪರೀಕ್ಷಕರಾಮರಡ್ಡಿ ಎಲ್.ಪಾಟೀಲ, ಸಿಬ್ಬಂದಿಯವರು ಹಾಜರಿದ್ದರು ಅಲ್ಲದೇ, ಗ್ರಾಮ ಪಂಚಾಯತ ಯುಕೆಪಿ ರೋಡಲಬಂಡಾ ಅಧ್ಯ–ಕ್ಷೆ ಸೋಮಮ್ಮ ಸಂಗನಗೌಡ, ಕೆ.ಎಮ್.ಎಫ್. ನಿರ್ದೇಶಕರು ತೋರಲಬೆಂಚಿ ಗ್ರಾಮಸ್ಥರು ಸೇರಿದಂತೆ ಲವು ಗ್ರಾಮಸ್ಥರು ಉಪಸ್ಥಿತರಿದ್ದರು.

## ಜಾತ್ರೆಗಳು ಜಾತಿಯಿಂದ ಮುಕ್ತವಾಗಲಿ–ಮುದಿಯಪ್ಪ

ಮಲ್ಲಮ್ಮ ನುಡಿವಾರ್ತೆ

ಕುಕನೂರ: ಜಾತ್ರೆಗಳು ಜಾತಿಯಿಂದ ಮುಕ್ತವಾಗಿ ಸರ್ವರನ್ನು ಪ್ರೀತಿಸುವ ಜಾತ್ರೆ ನಾವು ಮಾಡಬೇಕು ಎಂದು ತಳಕಳ ಗ್ರಾಮದ ಮುಖಂಡ ಮುದಿಯಪ್ಪ ಯೋಗೆಮ್ಮನವರ ಹೇಳಿದರು. ಅವರು ಕುಕನೂರ ತಾಲ್ಲೂಕಿನ ತಳಕಲ್ ಗ್ರಾಮದ ಮುಂಡರಗಿ ಅನ್ನದಾನೀಶ್ವರ ಶಾಖಾಮಠದಲ್ಲಿ ನಡೆದ ಶ್ರೀ ಮಠದ ಜಾತ್ರಮಹೋತ್ಸವದ ಪೂರ್ವಭಾವಿ ಸಭೆಯಲ್ಲಿ ಮಾತನಾಡುತ್ತಾ ನಮ್ಮ ಗ್ರಾಮದ ಸದ್ಭಕ್ತರು ವಿಶೇಷವಾಗಿ ಸರ್ವರನ್ನು ಪ್ರೀತಿಸುವ ಗುಣವಳ್ಳವರು ಇಲ್ಲಿ ಯಾವುದೇ ಜಾತಿ, ಮತ ಪಂಥವೆನ್ನದೆ ಎಲ್ಲರೂ ಒಗ್ಗೂಡಿ ಜಾತ್ರೆಗೆ ತನು ಮನ ಧನದಿಂದ ಸೇವೆ ಮಾಡಬೇಕು ಅಂದಾಗ ಮಾತ್ರ ಜಾತ್ರೆಗಳು ಯಶಸ್ವಿಯಾಗಲು ಸಾಧ್ಯ ಕೇವಲ ಒಂದು ಜಾತಿಯವರು ಮಾತ್ರ ದುಡಿದರೆ ಜಾತ್ರೆಗಳು ಯಶಸ್ವಿಯಾಗುವುದಿಲ್ಲ ಎಂದರು.

ಮುಖಂಡ ಮಲ್ಲಪ್ಪ ಬಂಗಾರಿ ಮಾತನಾಡಿ ಅನ್ನದಾನೀಶ್ವರ ಮಹಾಸ್ವಾಮಿ ಈ ಕ್ಷೇತ್ರವನ್ನ ಪಾವನ ಮಾಡಿ ನಾಡಿನದ್ದಕ್ಕೂ ಅಪಾರ ಭಕ್ತರನ್ನು ಹೊಂದಿರುವಂತಹ ಒಬ್ಬ ಮಹಾತಪಸ್ವಿ ಅಂತವರ ಜಾತ್ರೆಯನ ನಮ್ಮ ಗ್ರಾಮದಲ್ಲಿ ಆಚರಣೆ ಮಾಡಿಕೊಂಡು ಬರುತ್ತಿರುವುದನ್ನು ನಮ್ಮೆಲ್ಲರಿಗೂ ಹೆಮ್ಮೆಯಿದೆ ಎಂದರು.

ನಂತರ ಸೋಮಪ್ಪ ಖರ್ಜಗಿ ಮಾತನಾಡಿ ಇದೇ ನವೆಂಬರ್ 01ರಿಂದ ಶ್ರೀ ಶರಣಬಸವೇಶ್ವರರ ಪುರಾಣ ಪ್ರಾರಂಭವಾಗಿ ನವೆಂಬರ್ 21 ರಂದು ಮಂಗಳಗೊಳ್ಳುವುದು ಅಂದು ಸಂಜೆ ಅನ್ನದಾನೀಶ್ವರ ಲಘು ರಥೋತ್ಸವ ಜರುಗಲಿದೆ, ಜಾತ್ರ ನಿಮಿತ್ಯ ಹಲವಾರು ಧಾರ್ಮಿಕ ಕಾರ್ಯಕ್ರಮಗಳನ್ನ ಹಮ್ಮಿಕೊಳ್ಳಲಾಗಿದೆ ಇಂತಹ ಕಾರ್ಯಕ್ಕೆ ಯುವಕರ ಸಹಕಾರ ಅವಶ್ಯ ಎಂದರು.

ಈ ಸಂದರ್ಭದಲ್ಲಿ ಪೂಜ್ಯ ಮಹಾದೇವ ಸ್ವಾಮೀಜಿ, ಮಲ್ಲಪ್ಪ ಗೋರಿ, ಪಕ್ಕಪ್ಪ ಮುರಿಗಿ, ಶಿವಪ್ಪ ಬ್ಯಾಳಿ, ಅಬ್ಬಸಲಿ, ಕಲ್ಲಯ್ಯ ತಿರುಗುಣೇಶ, ಶರಣಪ್ಪ, ಬಸಯ್ಯ ಚಂಡೂರು, ರಾಮಣ್ಣ ನಿಟ್ಟಲಿ, ಸುರೇಶ ನಿಟ್ಟಲಿ, ಗೋಣೇಪ್ಪ ವಾಲ್ಮಿಕಿ, ಮುಡಿಯಪ್ಪ, ವೀರಪ್ಪ ಕರ್ಜಗಿ, ಬಾಳಪ್ಪ ಮುಸ್ಲಿ, ಪರಸಪ್ಪ ಅಳವಂಡಿ ಮತ್ತು ಇತರರು ಇದ್ದರು.

# ಕೃಷಿ ಸಂಸ್ಕರಣೆಗಾಗಿ ರೈತರ ತರಬೇತಿ ಕೇಂದ್ರ ಉದ್ಘಾಟನೆ

ಮಲ್ಲಮ್ಮ ನುಡಿ ವಾರ್ತೆ



ಕೊಪ್ಪಳ: ಲೋಕಸಭಾ ಕ್ಷೇತ್ರದ ಮೆತ್ತಗಲ್ ಗ್ರಾಮದಲ್ಲಿ, ಮಾನ್ಯ ಕೇಂದ್ರ ಹಣಕಾಸು ಮತ್ತು ಕಾರ್ಪೊರೇಟ್ ವ್ಯವಹಾರಗಳ ಸಚಿವರಾದ ನಿರ್ಮಲಾ ಸೀತಾರಾಮನ್ ಅವರು ಒಕಐಂಆಖ ಅನುದಾನದಡಿ ನಿರ್ಮಿಸಲಾಗಿರುವ "ಕೃಷಿ ಸಂಸ್ಕರಣೆಗಾಗಿ ರೈತರ ತರಬೇತಿ ಮತ್ತು ಸಾಮಾನ್ಯ ಸೌಲಭ್ಯ ಕೇಂದ್ರವನ್ನು( ಈಖ–ಅಈಅ)" ಅವರ ನೇತೃತ್ವದಲ್ಲಿ ಉದ್ಘಾಟಿಸಿದರು. ನಂತರ ಮಾತನಾಡಿದ ನಿರ್ಮಲ ಸೀತಾರಾಮನ್ ಅವರು ಈ ಘಟಕದಲ್ಲಿ ಹಣ್ಣು ಮತ್ತು ಇತರ ಸ್ಥಳೀಯ ಬೆಳೆಗಳ ಸಂಸ್ಕರಣೆಗೆ ಸಹಾಯಕವಾಗಲಿದ್ದು, ರೈತರ ಆದಾಯ ವೃದ್ಧಿಗೆ ಸಹಕಾರಿಯಾಗಲಿದೆ ಎಂದು ಹೇಳಿದರು. ಈ ಸಂದರ್ಭದಲ್ಲಿ ವಿಧಾನ ಪರಿಷತ್ ಸದಸ್ಯರಾದ ಹೇಮಲತಾ ನಾಯಕ್, ಶಾಸಕರಾದ ಜನಾರ್ಧನ ರೆಡ್ಡಿ, ರಾಜ್ಯ ಹಣಕಾಸು ಇಲಾಖೆಯ ಕಾರ್ಯದರ್ಶಿ ಡಾ.ಆರ್.ವಿಶಾಲ್, ನಬಾರ್ಡ್ (NABARD) ಅಧ್ಯಕ್ಷ ಶಾಜಿ ಕೆ.ವಿ, ನಬಾರ್ಡ್ ಉಪವ್ಯವಸ್ಥಾಪಕ ನಿರ್ದೇಶಕ ಎ.ಕೆ.ಸೂದ್, ಜಿಲ್ಲಾಧಿಕಾರಿ ಸುರೇಶ್ ಬಿ. ಇಟ್ನಾಳ್ ಹಾಗೂ ನಬಾರ್ಡ್ ಅಧಿಕಾರಿಗಳು, ಮಾಜಿ ಶಾಸಕರು ಮತ್ತು ಬಿಜೆಪಿ ಜಿಲ್ಲಾಧ್ಯಕ್ಷರಾದ ಬಸವರಾಜ ದಡೇಸೂಗೂರು, ಮಾಜಿ ಶಾಸಕರಾದ ಪರಣ್ಣ ಮುನವಳ್ಳಿ, ಡಾ. ಬಸವರಾಜ ಕ್ಯಾವಟರ, ಪಕ್ಷದ ವಿವಿಧ ಮೋರ್ಚ ಅಧ್ಯಕ್ಷರು ಹಾಗೂ ಪದಾಧಿಕಾರಿಗಳು, ಸಾವಿರಾರು ರೈತರು ಮತ್ತು ಕಾರ್ಯಕರ್ತರು ಉಪಸ್ಥಿತರಿದ್ದರು.

## ಅವಧಿ ವಿಸ್ತರಣೆ

ಮಲ್ಲಮ್ಮ ನುಡಿವಾರ್ತೆ

ಬೀದರ, ಅಕ್ಟೋಬರ್.15– ಬಸವಕಲ್ಯಾಣ ತಾಲ್ಲೂಕಿನ ನಾರಾಯಣಪುರ ಪಿ.ಎಂ.ಶ್ರೀ ಸ್ಕೂಲ್ ಜವಾಹರ್ ನವೋದಯ ವಿದ್ಯಾಲಯದಲ್ಲಿ 2026–27ನೇ ಶೈಕ್ಷಣಿಕ ವರ್ಷಕ್ಕೆ ಖಫಿ ತರಗತಿ ಮತ್ತು ಫಿಖ ತರಗತಿಗಳಿಗೆ ಆನ್‌ಲೈನ್ ನೋಂದಣಿಗೆ ಅರ್ಜಿ ಸಲ್ಲಿಸುವ ಅವಧಿಯನ್ನು ದಿನಾಂಕ: 21–10–2025 ರವರೆಗೆ ವಿಸ್ತರಿಸಲಾಗಿದೆ. ಅರ್ಹ ಗಿಖಖಖ ತರಗತಿ ವಿದ್ಯಾರ್ಥಿಗಳು ಮತ್ತು ಫಿ ತರಗತಿ ವಿದ್ಯಾರ್ಥಿಗಳು ಆಯಾ ಲಿಂಕ್ ಮೂಲಕ ಅರ್ಜಿ ಸಲ್ಲಿಸಬಹುದಾಗಿದೆ. ಹೆಚ್ಚಿನ ಮಾಹಿತಿಗಾಗಿ ಮೊಬೈಲ್ ಸಂಖ್ಯೆ: 9985672286 ಗೆ ಸಂಪರ್ಕಿಸಬಹುದಾಗಿದೆ ಎಂದು ಬಸವಕಲ್ಯಾಣ ತಾಲ್ಲೂಕಿನ ನಾರಾಯಣಪುರ ಪಿ.ಎಂ.ಶ್ರೀ ಸ್ಕೂಲ್ ಜವಾಹರ್ ನವೋದಯ ವಿದ್ಯಾಲಯದ ಪ್ರಾಂಶುಪಾಲರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.



ಕಲಬುರಗಿ: ಕರ್ನಾಟಕ ದಲಿತ ಸಂಘರ್ಷ ಸಮಿತಿಯ (ದಾದಾ ಸಾಹೇಬ್ ಡಾ.ಎನ್. ಮೂರ್ತಿ ಸ್ಥಾಪಿತ) ರಾಜ್ಯಾಧ್ಯಕ್ಷರಾದ ಡಾ.ಎನ್. ಮೂರ್ತಿ ಅವರು ಮಂಜುನಾಥ ಮಾಳಗೆ ಅವರನ್ನು ಕಲಬುರಗಿ ಕರ್ನಾಟಕ ದಲಿತ ಸಂಘರ್ಷ ಸಮಿತಿಯ (ದಾದಾ ಸಾಹೇಬ್ ಡಾ.ಎನ್. ಮೂರ್ತಿ ಸ್ಥಾಪಿತ) ಜಿಲ್ಲಾಧ್ಯಕ್ಷರನ್ನಾಗಿ ನೇಮಕ ಮಾಡಿದರು. ಈ ಸಂದರ್ಭದಲ್ಲಿ ಕಲ್ಯಾಣ ಕರ್ನಾಟಕ ವಿಭಾಗೀಯ ಅಧ್ಯಕ್ಷರಾದ ಶ್ರೀನಿವಾಸ ರಾಮನಾಳ್ಕರ್, ಮುಖಂಡರಾದ ನಾಗೇಶ್ ಹಲಗಿ, ಸೂರ್ಯಕಾಂತ ಕಾಂಬ್ಳೆ ಮತ್ತು ಅಶ್ವಥಮ ಬೆಳಗುಂದಿ ಇದ್ದರು.

# ಡಿಸೆಂಬರ್ ತಿಂಗಳಲ್ಲಿ ಬಳ್ಳಾರಿ ಸೂಪರ್ ಸ್ಪೆಷಾಲಿಟಿ ಆಸ್ಪತ್ರೆ ಉದ್ಘಾಟನೆ: ಸಚಿವ ಡಾ.ಶರಣ ಪ್ರಕಾಶ್ ಆರ್.ಪಾಟೀಲ

ಮಲ್ಲಮ್ಮ ನುಡಿ ವಾರ್ತೆ

ಬಳ್ಳಾರಿ,ಅ.15–ಬರುವ ಡಿಸೆಂಬರ್ ತಿಂಗಳಲ್ಲಿ ಬಳ್ಳಾರಿ ಸೂಪರ್ ಸ್ಪೆಷಾಲಿಟಿ ಆಸ್ಪತ್ರೆ ಉದ್ಘಾಟನೆಗೊಳಿಸಿ, ಸಾರ್ವಜನಿಕರಿಗೆ ಅನುಕೂಲ ಮಾಡಿಕೊಡಲಾಗುವುದು ಎಂದು ವೈದ್ಯಕೀಯ ಶಿಕ್ಷಣ, ಕೌಶಲ್ಯಾಭಿವೃದ್ಧಿ, ಉದ್ಯಮಶೀಲತೆ ಮತ್ತು ಜೀವನೋಪಾಯ ಸಚಿವರಾದ ಡಾ.ಶರಣ ಪ್ರಕಾಶ ಆರ್.ಪಾಟೀಲ ಅವರು ಹೇಳಿದರು.

ನಗರದ ಸುಧಾಕ್ರಾಸ್ ಬಳಿಯ ಬಳ್ಳಾರಿ ಸೂಪರ್ ಸ್ಪೆಷಾಲಿಟಿ ಆಸ್ಪತ್ರೆಗೆ ಬುಧವಾರ ಭೇಟಿ ನೀಡಿ, ಬಾಕಿ ಕಾಮಗಾರಿಗಳ ಕುರಿತು ವೈದ್ಯಾಧಿಕಾರಿಗಳೊಂದಿಗೆ ಸಭೆ ಜರುಗಿಸಿ ಅವರು ಮಾತನಾಡಿದರು.

450 ಹಾಸಿಗೆಯುಳ್ಳ ಈ ಆಸ್ಪತ್ರೆಯು 2008 ರಲ್ಲಿ ಮಂಜೂರಾಗಿತ್ತು. ವಿವಿಧ ಕಾರಣಗಳಿಂದ ನೆನೆಗುದಿಗೆ ಬಿದ್ದಿದ್ದ ಆಸ್ಪತ್ರೆಯನ್ನು 2018 ರಲ್ಲಿ ಮರು ಟೆಂಡರ್ ಕರೆಯಲಾಗಿತ್ತು. ಈಗ ನಮ್ಮ ಸರ್ಕಾರಾವಧಿಯಲ್ಲೇ ಪೂರ್ಣಗೊಳಿಸಿ ಡಿಸೆಂಬರ್ ತಿಂಗಳಲ್ಲಿ ಉದ್ಘಾಟನೆಗೊಳಿಸಿ ಸಾರ್ವಜನಿಕರಿಗೆ ಅರ್ಪಿಸಲಾಗುವುದು ಎಂದರು.

11,204 ಲಕ್ಷ ಮೊತ್ತದ ಮೊದಲ ಹಂತ–1ದ ಕಾಮಗಾರಿ ಶೇ.97 ರಷ್ಟು ಪೂರ್ಣಗೊಂಡಿದೆ. 2,438 ಲಕ್ಷದ ಎರಡನೇ ಹಂತದ ಕಾಮಗಾರಿಗಳೂ ಸಹ ಶೇ.96 ರಷ್ಟು ಮುಗಿದಿದ್ದು, ಈ ತಿಂಗಳ ಕೊನೆಯ ಹಂತದಲ್ಲಿ ವಿದ್ಯುತ್ ಕಾಮಗಾರಿ ಸೇರಿದಂತೆ ಬಾಕಿ ಎಲ್ಲಾ ಕಾಮಗಾರಿಗಳನ್ನು ಪೂರ್ಣಗೊಳಿಸಬೇಕು ಎಂದು ಗುತ್ತಿಗೆದಾರರಿಗೆ ತಾಕೀತು ಮಾಡಿದರು.

ಕಾರ್ಡಿಯಾಲಜಿ, ಪ್ಲಾಸ್ಟಿಕ್ ಸರ್ಜರಿ, ಡಯಾಲಿಸಿಸ್ ಯಂತ್ರ, ಆರ್‌ಒ ಪ್ಲಾಂಟ್, ಬೆಡ್ ವ್ಯವಸ್ಥೆ ಹಾಗೂ ಇತರೆ ಸಾಮಾಗ್ರಿ ಅಳವಡಿಕೆ ಕಾರ್ಯ ಪೂರ್ಣಗೊಳಿಸಿ ಜನರಿಗೆ ಉಪಯುಕ್ತ ಆರೋಗ್ಯ ಸೇವೆ ನೀಡಲು ಮುಂದಾಗಬೇಕು ಎಂದು ಸಚಿವರು ನಿರ್ದೇಶನ ನೀಡಿದರು.

ನ್ಯೂರಾಲಜಿ ಸೇರಿದಂತೆ ಆಸ್ಪತ್ರೆಯಲ್ಲಿ ಖಾಲಿಯಿರುವ ವಿವಿಧ ವಿಭಾಗಗಳ ವೈದ್ಯರು ಮತ್ತು ಗ್ರೂಪ್–ಬಿ, ಸಿ ಹುದ್ದೆಗಳನ್ನು ಗುತ್ತಿಗೆ ಆಧಾರದಡಿ ಪಡೆಯಲು ಕೂಡಲೇ ಕ್ರಮವಹಿಸಬೇಕು ಎಂದು ನಿರ್ದೇಶಕರಿಗೆ ಸೂಚನೆ ನೀಡಿದರು.

ಸರ್ಕಾರದ ಅನುದಾನದಲ್ಲಿ ನಿರ್ಮಾಣಗೊಳ್ಳುತ್ತಿರುವ ಈ



ಆಸ್ಪತ್ರೆಯು, ಅನುದಾನದ ಕೊರತೆಯಾದಲ್ಲಿ ಡಿಎಂಎಫ್, ಕೆಎಂಇಆರ್‌ಸಿ ಹಾಗೂ ಸಿಎಸ್‌ಆರ್ ಅನುದಾನಕ್ಕಾಗಿ ಜಿಲ್ಲಾಧಿಕಾರಿ ಗಮನಕ್ಕೆ ತರಬೇಕು ಎಂದರು.

ಕಳೆದ 2 ತಿಂಗಳುಗಳಿಂದ ಸೂಪರ್ ಸ್ಪೆಷಾಲಿಟಿ ಆಸ್ಪತ್ರೆಯಲ್ಲಿ ಹೊರರೋಗಿ ವಿಭಾಗ ಕಾರ್ಯನಿರ್ವಹಿಸುತ್ತಿದೆ. ಇನ್ನೊಂದು ತಿಂಗಳಲ್ಲಿ ಒಳರೋಗಿ ವಿಭಾಗ ಆರಂಭಿಸಲಾಗುವುದು ಎಂದು ಬಿಎಂಸಿಆರ್‌ಸಿ ನಿರ್ದೇಶಕ ಡಾ.ಗಂಗಾಧರ ಗೌಡ ಅವರು ಸಚಿವರ ಗಮನಕ್ಕೆ ತಂದರು.

ವಿದ್ಯುತ್ ಪೂರೈಕೆಯ ಪರಿವರ್ತಕ ಅಳವಡಿಕೆ ಕಾರ್ಯ, ವಿವಿಧ ಅಗತ್ಯ ಸಾಮಾಗ್ರಿ–ಸಲಕರಣೆ ಪೂರೈಕೆ ಬಾಕಿ ಇದ್ದು, ಉಳಿದಂತೆ ಎಲ್ಲಾ ಕಾರ್ಯ ಮುಗಿದಿದ್ದು, ನವೆಂಬರ್ ತಿಂಗಳ ಅಂತ್ಯಕ್ಕೆ ಎಲ್ಲಾ ಕಾಮಗಾರಿ ಪೂರ್ಣಗೊಳಿಸಿ ಸಾರ್ವಜನಿಕರ ಅಗತ್ಯ ಸೌಲಭ್ಯಕ್ಕೆ ಪೂರ್ಣ ಪ್ರಮಾಣದಲ್ಲಿ ಲಭ್ಯವಾಗಲಿದೆ ಎಂದು ಸಭೆಗೆ ತಿಳಿದರು. ಸಭೆಯಲ್ಲಿ ಬಿಎಂಸಿಆರ್‌ಸಿ, ಟಿಬಿ ಆಸ್ಪತ್ರೆಗಳಲ್ಲಿ ಕೆಎಂಇಆರ್‌ಸಿ ಯೋಜನೆಯಡಿ ಕೈಗೊಂಡ ವಿವಿಧ ಕಾಮಗಾರಿಗಳ ಕುರಿತು ಸುದೀರ್ಘ ಚರ್ಚೆ ನಡೆಸಿ ಮಾಹಿತಿ ಪಡೆದುಕೊಂಡರಲ್ಲದೇ, ಇದೇ ವೇಳೆ ಅಗತ್ಯ ಸಲಹೆ ಸೂಚನೆ ನೀಡಿದರು.

*26 ಎಕರೆ ಪ್ರದೇಶದಲ್ಲಿ ಕ್ಯಾನ್ಸರ್ ಆಸ್ಪತ್ರೆ ನಿರ್ಮಾಣ:*

ಸೂಪರ್ ಸ್ಪೆಷಾಲಿಟಿ ಆಸ್ಪತ್ರೆ ಆವರಣದಲ್ಲಿ ಗುರುತಿಸಿದ 26 ಎಕರೆ ಪ್ರದೇಶದಲ್ಲಿ ಕ್ಯಾನ್ಸರ್ ಆಸ್ಪತ್ರೆ ನಿರ್ಮಾಣಕ್ಕೆ ಡಿಪಿಆರ್ ಸಿದ್ಧವಿದ್ದು, ಸಮಿತಿಯಲ್ಲಿ ಅನುಮೋದನೆಗೊಂಡರೆ ಟೆಂಡರ್ ಕರೆದು ಕಾಮಗಾರಿ ಆರಂಭಿಸಲಾಗುವುದು ಎಂದು ಮಾಧ್ಯಮದವರಿಗೆ ತಿಳಿಸಿದರು.

ಬಳಿಕ ಸೂಪರ್ ಸ್ಪೆಷಾಲಿಟಿ ಆಸ್ಪತ್ರೆಯ ವಿವಿಧ ವಿಭಾಗಗಳಿಗೆ ಭೇಟಿ ನೀಡಿ ಪರಿಶೀಲನೆ ನಡೆಸಿದರು.

ಈ ಸಂದರ್ಭದಲ್ಲಿ ವೈದ್ಯಕೀಯ ಶಿಕ್ಷಣ ಇಲಾಖೆಯ ಪ್ರಧಾನ ಕಾರ್ಯದರ್ಶಿ ಮಹಮ್ಮದ್ ಮುಸೇನ್, ಬೆಂಗಳೂರು ವೈದ್ಯಕೀಯ ನಿರ್ದೇಶನಾಲಯದ ನಿರ್ದೇಶಕಿ ಸುಜಾತ ರಾಠೋಡ್, ಜಿಲ್ಲಾಧಿಕಾರಿ ನಾಗೇಂದ್ರಪ್ರಸಾದ್.ಕೆ., ಜಿಪಂ ಮುಖ್ಯಕಾರ್ಯನಿರ್ವಾಹಕ ಅಧಿಕಾರಿ ಮಹಮ್ಮದ್ ಹ್ಯಾರೀಸ್ ಸುಮೇರ್ ಸೇರಿದಂತೆ ಸೂಪರ್ ಸ್ಪೆಷಾಲಿಟಿ ಆಸ್ಪತ್ರೆಯ ಮುಖ್ಯಸ್ಥರು, ಪ್ರಾಂಶುಪಾಲರು, ವೈದ್ಯಾಧಿಕಾರಿಗಳು ಹಾಗೂ ಇತರರು ಉಪಸ್ಥಿತರಿದ್ದರು.

## ಪಠ್ಯದ ಜೊತೆಯಲ್ಲಿ ಕೌಶಲ್ಯವೂ ಅಗತ್ಯವಿದೆ: ಸಚಿವ ಡಾ.ಶರಣ ಪ್ರಕಾಶ್ ಆರ್.ಪಾಟೀಲ



ಮಲ್ಲಮ್ಮ ನುಡಿ ವಾರ್ತೆ

ಬಳ್ಳಾರಿ,ಅ.15–ಇಂದಿನ ವಿದ್ಯಾರ್ಥಿಗಳಿಗೆ ಪಠ್ಯದ ಕಲಿಕೆಯ ಜೊತೆಗೆ ಬಹು ಕೌಶಲ್ಯ ಕಲಿಸುವ ಅಗತ್ಯವಿದೆ ಎಂದು ವೈದ್ಯಕೀಯ ಶಿಕ್ಷಣ, ಕೌಶಲ್ಯ ಅಭಿವೃದ್ಧಿ ಮತ್ತು ಜೀವನೋಪಾಯ ಇಲಾಖೆಯ ಸಚಿವ ಡಾ.ಶರಣ ಪ್ರಕಾಶ್ ಆರ್.ಪಾಟೀಲ ಅವರು ಹೇಳಿದರು.

ಜಿಲ್ಲಾ ವಾಣಿಜ್ಯ ಮತ್ತು ಕೈಗಾರಿಕಾ ಸಂಸ್ಥೆಯ ನೂತನ 'ಇಂಕ್ಯುಬೇಷನ್ ಹಾಗೂ ಜಾಬ್ ಪೋರ್ಟಲ್'ಅನ್ನು ಬುಧವಾರ ಲೋಕಾರ್ಪಣೆ ಮಾಡಿ ಅವರು ಮಾತನಾಡಿದರು.

ಸ್ಪರ್ಧಾತ್ಮಕ ಯುಗದಲ್ಲಿ ವಿದ್ಯಾರ್ಥಿಗಳ ಡಿಗ್ರಿಗಳು ಸಾಲುತ್ತಿಲ್ಲ. ಪಠ್ಯದ ಜೊತೆಯಲ್ಲಿ ಕೌಶಲ್ಯ, ಜ್ಞಾನ, ಸಂವಹನ ಮತ್ತು ಸಾಮಾನ್ಯ ಜ್ಞಾನವೂ ಪ್ರತಿಯೊಬ್ಬರಿಗೆ ಅಗತ್ಯ. ಈ ನಿಟ್ಟಿನಲ್ಲಿ ಎಐಸಿಟಿಸಿಯ ಜೊತೆಯಲ್ಲಿ ಸರ್ಕಾರ 'ಕಲಿಕೆಯ ಜೊತೆಯಲ್ಲಿ ಕೌಶಲ್ಯ'ಕ್ಕೆ ಆದ್ಯತೆ ನೀಡುವ ಪಠ್ಯವನ್ನು ರಚಿಸಲು ಕೋರಿದೆ ಎಂದರು.

ಇದು 'ಆವಿಷ್ಕಾರಗಳ ಯುಗ'. ಹೊಸ ಆವಿಷ್ಕಾರಗಳಿಗೆ – ಹೊಸ ತಂತ್ರಜ್ಞಾನಗಳಿಗೆ ಪ್ರತಿಯೊಂದು ಕ್ಷೇತ್ರ, ಪ್ರತಿಯೊಬ್ಬರೂ ಕೌಶಲ್ಯವಂತರಾಗಿ ಜ್ಞಾನವನ್ನು ಹೆಚ್ಚಿಸಿಕೊಳ್ಳಬೇಕು. ಉದ್ಯೋಗಮೇಳಗಳಲ್ಲಿ ನೋಂದಣಿ ಆಗುವವರಿಗೆ ಅಗತ್ಯವಿರುವ ಕೌಶಲ್ಯ, ಸಂವಹನ, ಜ್ಞಾನ ಇನ್ನಿತರೆಗಳ ಜೊತೆಯಲ್ಲಿ ಎಐ–ಮೆಷಿನ್ ಲರ್ನಿಂಗ್ ತಂತ್ರಜ್ಞಾನದ ಬಳಕೆಯ ಜ್ಞಾನವನ್ನು ನೀಡಲಾಗುತ್ತಿದೆ ಎಂದರು.

ಎಫ್‌ಕೆಸಿಸಿಐನ ಅಧ್ಯಕ್ಷರಾದ ಉಮಾರೆಡ್ಡಿ ಅವರು, ಬಳ್ಳಾರಿ ಜಿಲ್ಲಾ ವಾಣಿಜ್ಯ ಮತ್ತು ಕೈಗಾರಿಕಾ ಸಂಸ್ಥೆಯ ಜಾಬ್ ಪೋರ್ಟಲ್ ಉದ್ಘಾಟಿಸಿ, ಸ್ಕಿಲ್ ಡೆವಲಪ್‌ಮೆಂಟ್ ಮತ್ತು ಇಂಕ್ಯುಬೇಷನ್ ಸೆಂಟರ್ ಆಧುನಿಕ ಡಿಟಿಟಲ್ ತಂತ್ರಜ್ಞಾನವನ್ನು ಹೊಂದಿದ್ದು, ಉದ್ಯಮಶೀಲತೆಯ ಕೇಂದ್ರವಾಗಿದೆ. ಎಫ್‌ಕೆಸಿಸಿಐ ಬಿಡಿಸಿಸಿಐ ಜೊತೆ ಸ್ಟಾರ್ಟ್‌ಆಫ್ ಮಾರ್ಗದರ್ಶನ, ತರಬೇತಿ ಮತ್ತು ಹೂಡಿಕೆಯ ಸಂಪರ್ಕ ನೀಡಲಿದೆ. ಬಿಡಿಸಿಸಿಐ ಹೊಸ ಅವಕಾಶಗಳನ್ನು ನೀಡಲಿ, ಕರ್ನಾಟಕದ ಪ್ರಗತಿಗೆ ಕೈಜೋಡಿಸಲಿ ಎಂದು ಹಾರೈಸಿದರು.

ಬಳ್ಳಾರಿ ಜಿಲ್ಲಾ ವಾಣಿಜ್ಯ ಮತ್ತು ಕೈಗಾರಿಕಾ ಸಂಸ್ಥೆಯ ಅಧ್ಯಕ್ಷ ಯಶವಂತರಾಜ್ ನಾಗಿರೆಡ್ಡಿ ಅವರು ಮಾತನಾಡಿ, ಇಂಕ್ಯುಬೇಷನ್ ಸೆಂಟರ್ ಯುವಶಕ್ತಿಗೆ – ನವ ಉದ್ಯಮಿಗಳಿಗೆ ಆಶಾಕಿರಣವಾಗಿ ಸೇವೆ ಸಲ್ಲಿಸುವ ಜವಾಬ್ದಾರಿಗಳನ್ನು ನಿರ್ವಹಿಸಲಿದೆ. ಇಂಕ್ಯುಬೇಷನ್ ಸೆಂಟರ್ ಮುಂಬೈನ ವಿಕಸಿತ ಮ್ಯಾನೇಜ್ ಮೆಂಟ್ ಕನ್ಸಲ್ಟೆನ್ಸಿ ಪ್ರೈವೇಟ್ ಲಿಮಿಟೆಡ್ ಮತ್ತು ಲಾರ್ವನ್ ಹೋಲ್ಡಿಂಗ್ ಜೊತೆ–ಯ ಒಪ್ಪಂದ ಮಾಡಿಕೊಂಡಿದ್ದು, ಉದ್ಯಮಿಗಳಿಗೆ ಬಂಡವಾಳ ಮತ್ತು ಜ್ಞಾನದ ಮಾರ್ಗದರ್ಶನ ನೀಡಲಿದೆ ಎಂದರು. ಬಳ್ಳಾರಿ ಜಿಲ್ಲಾ ವಾಣಿಜ್ಯ ಮತ್ತು ಕೈಗಾರಿಕಾ ಸಂಸ್ಥೆಯ ಜಂಟಿ ಕಾರ್ಯದರ್ಶಿ ಡಾ.ಮರ್ಚೆಡ್ ಮಲ್ಲಿಕಾರ್ಜುನಗೌಡ ಅವರು, ಜಾಬ್ ಪೋರ್ಟಲ್ ಕುರಿತು ಸಮಗ್ರ ಮಾಹಿತಿ ನೀಡಿ, ಉದ್ಯಮಿಗಳು ಮತ್ತು ಉದ್ಯೋಗಾಸಕ್ತರು ಈ ಪೋರ್ಟಲ್ ನ ಸದುಪಯೋಗ ಪಡೆದುಕೊಳ್ಳಬೇಕು ಎಂದರು.

ಈ ಸಂದರ್ಭದಲ್ಲಿ ಮೇಯರ್ ಮುಲ್ಲಂಗಿ ನಂದೀಶ್, ಬಳ್ಳಾರಿ ಜಿಲ್ಲಾ ವಾಣಿಜ್ಯ ಮತ್ತು ಕೈಗಾರಿಕಾ ಸಂಸ್ಥೆಯ ಪದಾಧಿಕಾರಿಗಳು, ವಿವಿಧ ಕಾಲೇಜುಗಳ ವಿದ್ಯಾರ್ಥಿಗಳು ಕಾರ್ಯಕ್ರಮದಲ್ಲಿ ಪಾಲ್ಗೊಂಡಿದ್ದರು.

## ಹೃದಯ ಶ್ವಾಸಕೋಶ ಪುನರುಜ್ಜೀವನ ಕುರಿತು ಹೆಚ್ಚಿನ ಜಾಗೃತಿ ಮೂಡಿಸಿ: ಡಾ.ಯಲ್ಲಾ ರಮೇಶ್ ಬಾಬು



ಮಲ್ಲಮ್ಮ ನುಡಿ ವಾರ್ತೆ

ಬಳ್ಳಾರಿ,ಅ.15–ಇತ್ತೀಚಿನ ದಿನಗಳಲ್ಲಿ ವಯಸ್ಸಿನ ಮಿತಿಗಳಿಲ್ಲದೇ ಹೃದಯಾಘಾತಗಳು ಸಂಭವಿಸುತ್ತಿರುವ ಹಿನ್ನಲೆಯಲ್ಲಿ ವೈದ್ಯಾಧಿಕಾರಿಗಳು ಆರೋಗ್ಯ ಸಿಬ್ಬಂದಿ ವರ್ಗದವರಿಗೆ ಹಾಗೂ ಸಾರ್ವಜನಿಕರಿಗೆ ಎಲ್ಲಾ ಆರೋಗ್ಯ ಕೇಂದ್ರಗಳ ವ್ಯಾಪ್ತಿಯಲ್ಲಿ ಹೃದಯ ಶ್ವಾಸಕೋಶ ಪುನರುಜ್ಜೀವನ (ಸಿಆರ್‌ಪಿ) ಕುರಿತು ಪ್ರಾತ್ಯಕ್ಷತೆ ಮೂಲಕ ಹೆಚ್ಚಿನ ಜಾಗೃತಿ ಮೂಡಿಸಿ ಎಂದು ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಅಧಿಕಾರಿ ಡಾ.ಯಲ್ಲಾ ರಮೇಶ್ ಬಾಬು ಅವರು ಹೇಳಿದರು.

ಬುಧವಾರ ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಅಧಿಕಾರಿಗಳ ಸಭಾಂಗಣದಲ್ಲಿ ಹೃದಯ–ಶ್ವಾಸಕೋಶ ಪುನರುಜ್ಜೀವನ (ಸಿಆರ್‌ಸಿ) ಕುರಿತು ಅಕ್ಟೋಬರ್ 13 ರಿಂದ 17 ರವರೆಗೆ ಜಾಗೃತಿ ವಾರ ಹಿನ್ನಲೆಯಲ್ಲಿ ಜಾಗೃತಿ ಮತ್ತು ಪ್ರತಿಜ್ಞಾ ವಿಧಿ ಸ್ವೀಕರಿಸುವ ಮೂಲಕ ಮಾತನಾಡಿದರು.

ಆರೋಗ್ಯ ತುರ್ತು ಪರಿಸ್ಥಿತಿಯಲ್ಲಿ ವ್ಯಕ್ತಿಗಳಿಗೆ ಸಹಾಯ ಮಾಡಲು ಮತ್ತು ವೃತ್ತಿಪರ ವೈದ್ಯಕೀಯ ಸಹಾಯ ಬರುವವರಿಗೆ ಧೈರ್ಯ, ಸಹಾನುಭೂತಿ ಮತ್ತು ಜವಾಬ್ದಾರಿಯೊಂದಿಗೆ ಸಹಾಯವಾಗುವ ಹಿನ್ನಲೆಯಲ್ಲಿ ಹೃದಯ–ಶ್ವಾಸಕೋಶ ಪುನರುಜ್ಜೀವನ ಕುರಿತು ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಅಧಿಕಾರಿಗಳ ಕಚೇರಿಯ ವಿವಿಧ ವಿಭಾಗಗಳ ಅಧಿಕಾರಿ ಹಾಗೂ ಸಿಬ್ಬಂದಿ ವರ್ಗದವರಿಗೆ ಮಾಹಿತಿ ನೀಡಿದರು.

ಎಲ್ಲಾ ಆರೋಗ್ಯ ಕೇಂದ್ರಗಳಲ್ಲಿನ ಪ್ರಾಥಮಿಕ ಆರೋಗ್ಯ ಸುರಕ್ಷಣಾಧಿಕಾರಿಗಳಿಗೆ, ಆರೋಗ್ಯ ನಿರೀಕ್ಷಣಾಧಿಕಾರಿಗಳಿಗೆ, ಆಶಾ ಕಾರ್ಯಕರ್ತೆಯರಿಗೆ ತರಬೇತಿ ನೀಡಲು ಹಾಗೂ ಆರೋಗ್ಯ ಅಧಿಕಾರಿಗಳು, ಸಿಬ್ಬಂದಿ ವರ್ಗದವರು ಮತ್ತು ಸಾರ್ವಜನಿಕರಿಗೂ ಸಹ ಜಾಗೃತಿ ಮೂಡಿಸಲು ಸಂಬಂಧಪಟ್ಟ ಜಿಲ್ಲೆಯ ಎಲ್ಲಾ ವೈದ್ಯಾಧಿಕಾರಿಗಳು ಜಾಗೃತಿ ಮೂಡಿಸಿ ಪ್ರತಿಜ್ಞಾ ವಿಧಿ ಸ್ವೀಕರಿಸಬೇಕು ಎಂದು ಸೂಚಿಸಿದರು.

ಈ ಸಂದರ್ಭದಲ್ಲಿ ಜಿಲ್ಲಾ ರೋಗವಾಹಕ ಆಶ್ರೀತ ರೋಗಗಳ ನಿಯಂತ್ರಣ ಅಧಿಕಾರಿ ಡಾ.ಆರ್.ಅಬ್ದುಲ್ಲಾ, ಜಿಲ್ಲಾ ಕುಟುಂಬ ಕಲ್ಯಾಣ ಅಧಿಕಾರಿ ಡಾ.ಪೂರ್ಣಿಮ ಕಟ್ಟಿಮನಿ, ಜಿಲ್ಲಾ ಕುಷ್ಟರೋಗ ನಿರ್ಮೂಲನಾ ಅಧಿಕಾರಿ ಡಾ.ವೀರೇಂದ್ರಕುಮಾರ್, ಪ್ರಭಾರಿ ಜಿಲ್ಲಾ ಆರೋಗ್ಯ ಶಿಕ್ಷಣಾಧಿಕಾರಿ ಖುರ್ಶಿದ್ ಬೇಗಮ್, ಕಚೇರಿ ಅಧೀಕ್ಷಕರು ಬಸವರಾಜ, ಡಾ. ಸುರೇಶ್, ಪ್ರತಾಪ್ ಎನ್.ವಿ.ಬಿ.ಡಿ.ಸಿ.ಪಿ ಸಲಹೆಗಾರರು, ವಿವಿಧ ವಿಭಾಗದ ಅಧಿಕಾರಿಗಳು ಸೇರಿದಂತೆ ಸಿಬ್ಬಂದಿ ವರ್ಗದವರು ಉಪಸ್ಥಿತರಿದ್ದರು.

## ಬಳ್ಳಾರಿ ಜಿಟಿಟಿಸಿ ಕೇಂದ್ರಕ್ಕೆ ಸಚಿವ ಡಾ.ಶರಣ ಪ್ರಕಾಶ್ ಆರ್.ಪಾಟೀಲ ಭೇಟಿ ಪರಿಶೀಲನೆ

ಮಲ್ಲಮ್ಮ ನುಡಿ ವಾರ್ತೆ

ಬಳ್ಳಾರಿ,ಅ.15–ನಗರದ ರೇಡಿಯೋ ಪಾರ್ಕ್ ಬಳಿಯ ಸರ್ಕಾರಿ ಉಪಕರಣಾಗಾರ ಮತ್ತು ತರಬೇತಿ ಕೇಂದ್ರ(ಜಿಟಿಟಿಸಿ)ಕ್ಕೆ ವೈದ್ಯಕೀಯ ಶಿಕ್ಷಣ, ಕೌಶಲ್ಯಾಭಿವೃದ್ಧಿ, ಉದ್ಯಮಶೀಲತೆ ಮತ್ತು ಜೀವನೋಪಾಯ ಸಚಿವರಾದ ಡಾ.ಶರಣ ಪ್ರಕಾಶ ಆರ್.ಪಾಟೀಲ ಅವರು ಬುಧವಾರ ಭೇಟಿ ನೀಡಿ ಪರಿಶೀಲನೆ ನಡೆಸಿದರು.



ಕೇಂದ್ರದ ಉಪಕರಣಗಾರ ಕೊಠಡಿ, ಸ್ಮಾರ್ಟ್ ಕ್ಲಾಸ್ ರೂಮ್ ಸೇರಿದಂತೆ ಸಭಾಂಗಣ ಕೊಠಡಿ ವೀಕ್ಷಣೆ ಮಾಡಿದ ಸಚಿವರು ಸೂಕ್ತ ನಿರ್ವಹಣೆ ಕೈಗೊಳ್ಳಬೇಕು. ಜಿಲ್ಲೆಯಲ್ಲಿ ಅತ್ಯಾಧುನಿಕವಾಗಿ ನಿರ್ಮಾಣಗೊಂಡ ಜಿಟಿಟಿಸಿ ಕೇಂದ್ರವು ಯುವ ಪೀಳಿಗೆಗೆ ಉಪಯುಕ್ತವಾಗಬೇಕು ಎಂದು ತಿಳಿಸಿದರು.

ಇದೇ ವೇಳೆ ಜಿಲ್ಲಾಧಿಕಾರಿಯವರು, ಸಂಡೂರಿನಲ್ಲಿ 25 ಎಕರೆ ಪ್ರದೇಶದಲ್ಲಿ ನಿರ್ಮಿಸಲು ಉದ್ದೇಶಿಸಿರುವ ಸ್ಕಿಲ್ ಪಾರ್ಕ್ ಬಗ್ಗೆ ಸಚಿವರ ಗಮನಕ್ಕೆ ತಂದರು.

ಈ ವೇಳೆ ಜಿಲ್ಲಾಧಿಕಾರಿ ನಾಗೇಂದ್ರ ಪ್ರಸಾದ್.ಕೆ., ಜಿಲ್ಲಾ ಪಂಚಾಯತ್ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ ಮಹಮ್ಮದ್ ಹ್ಯಾರೀಸ್ ಸುಮೇರ್, ಜಿಲ್ಲಾ ಉದ್ಯೋಗ ವಿನಿಮಯ ಕೇಂದ್ರದ ಉದ್ಯೋಗಾಧಿಕಾರಿ ಹಟ್ಟಪ್ಪ, ಜಿಲ್ಲಾ ಕೌಶಲ್ಯಾಭಿವೃದ್ಧಿ ಇಲಾಖೆಯ ಸಹಾಯಕ ನಿರ್ದೇಶಕ ವಿಶ್ವನಾಥ, ಜಿಟಿಟಿಸಿ ಕೇಂದ್ರದ ಪ್ರಾಚಾರ್ಯ ಮುತ್ತಣ್ಣ ಸೇರಿದಂತೆ ಸಿಬ್ಬಂದಿ ವರ್ಗ, ವಿದ್ಯಾರ್ಥಿಗಳು ಉಪಸ್ಥಿತರಿದ್ದರು.

## ಕಂಪ್ಲಿ: ಬಾಡಿಗೆ ಕಟ್ಟಡ ಬೇಕಾಗಿದೆ

ಮಲ್ಲಮ್ಮ ನುಡಿ ವಾರ್ತೆ

ಬಳ್ಳಾರಿ,ಅ.15–ಪರಿಶಿಷ್ಟವರ್ಗಗಳ ಕಲ್ಯಾಣ ಇಲಾಖೆ ವ್ಯಾಪ್ತಿಯ ಪ್ರಸಕ್ತ ಸಾಲಿನ ಕಂಪ್ಲಿ ಪಟ್ಟಣದಲ್ಲಿ ಹೊಸದಾಗಿ ಸರ್ಕಾರಿ ಮೆಟ್ರಿಕ್ ನಂತರದ ಬಾಲಕೀಯರ ವಿದ್ಯಾರ್ಥಿ ನಿಲಯ ಪ್ರಾರಂಭಿಸಲು 100 ವಿದ್ಯಾರ್ಥಿಗಳ ವಾಸಕ್ಕೆ ಕಂಪ್ಲಿ ನಗರ ವ್ಯಾಪ್ತಿಯಲ್ಲಿ ಕಟ್ಟಡವನ್ನು ಬಾಡಿಗೆಗೆ ನೀಡಲು ಇಚ್ಛಿಸುವ ಕಟ್ಟಡಗಳ ಮಾಲೀಕರು ಸಂಪರ್ಕಿಸಬಹುದು.

ಆಸಕ್ತ ಕಟ್ಟಡ ಮಾಲೀಕರು ಅಕ್ಟೋಬರ್ 30 ರೊಳಗೆ ಅಗತ್ಯ ದಾಖಲೆಗಳೊಂದಿಗೆ ನಗರದ ನಲ್ಲಚೆರುವು ಪ್ರದೇಶದ ವಾಲ್ಮೀಕಿ ಭವನದ ತಾಲ್ಲೂಕು ಪರಿಶಿಷ್ಟ ವರ್ಗಗಳ ಕಲ್ಯಾಣಾಧಿಕಾರಿಗಳ ಕಚೇರಿಗೆ ಸಲ್ಲಿಸಬೇಕು.

ಹೆಚ್ಚಿನ ಮಾಹಿತಿಗಾಗಿ ಮೊ.9141004607 ಗೆ ಸಂಪರ್ಕಿಸಬಹುದು ಎಂದು ತಾಲ್ಲೂಕು ಪರಿಶಿಷ್ಟ ವರ್ಗಗಳ ಕಲ್ಯಾಣಾಧಿಕಾರಿ ತಿಳಿಸಿದ್ದಾರೆ.

## ಕಂಪ್ಲಿ: 5 ಅಡಿ ಎತ್ತರದಲ್ಲಿ ವಿದ್ಯುತ್ ಮಾಪಕ ಅಳವಡಿಸಿಕೊಳ್ಳಲು ಸೂಚನೆ

ಮಲ್ಲಮ್ಮ ನುಡಿ ವಾರ್ತೆ

ಬಳ್ಳಾರಿ,ಅ.15–ಕಂಪ್ಲಿ ಜೆಸ್ಕಾಂ ವ್ಯಾಪ್ತಿಯಲ್ಲಿ ಕಂಪನಿಯ ನಿಯಮಾನುಸಾರ ಎಲ್ಲಾ ಸ್ಥಾವರದಲ್ಲಿರುವ ಮೀಟರ್‌ಗಳನ್ನು ಆಪ್ಟಿಕಲ್ ಪ್ರೋಬ್ ಡಿವೈಸ್ ಮೂಲಕವೇ ರೀಡಿಂಗ್ ಮಾಡಬೇಕಾಗಿದ್ದು, ವಿದ್ಯುತ್ ಗ್ರಾಹಕರು ತಮ್ಮ ಸ್ಥಾವರದ ವಿದ್ಯುತ್ ಮಾಪಕವನ್ನು ಕಡ್ಡಾಯವಾಗಿ ನೆಲದಿಂದ 5 ಅಡಿ ಎತ್ತರದಲ್ಲಿ ಅಳವಡಿಸಿಕೊಳ್ಳಬೇಕು. ವಿದ್ಯುತ್ ಮಾಪಕಗಳು ಗೋಚರಿಸುವ ಹಾಗೂ ಓದಲು ಅನುಕೂಲವಾಗುವ ಸ್ಥಳದಲ್ಲಿ ಇರಬೇಕು. ಈಗಾಗಲೇ ಮನೆ ಒಳಗೆ ಇರುವ ಮೀಟರ್‌ಗಳನ್ನು ಹೊರಗೆ ಹಾಕಿಸಿಕೊಳ್ಳಬೇಕು.

ಮೀಟರ್ ಓದುವವರಿಗೆ ಸ್ಥಳವಿಲ್ಲದಿದ್ದಲ್ಲಿ ಸ್ಥಳ ಒದಗಿಸುವ ಹಾಗೆ ಅಳವಡಿಸಿಕೊಳ್ಳಬೇಕು.

ಈ ನಿಯಮ ಪಾಲನೆ ಮಾಡದಿದ್ದಲ್ಲಿ ಯಾವುದೇ ಮುನ್ಸೂಚನೆ ಇಲ್ಲದೆ ವಿದ್ಯುತ್ ಸಂಪರ್ಕ ಕಡಿತಗೊಳಿಸಲಾಗುವುದು. ಸಾರ್ವಜನಿಕರು ಮತ್ತು ವಿದ್ಯುತ್ ಗ್ರಾಹಕರು ಸಹಕರಿಸಬೇಕು ಎಂದು ಸಹಾಯಕ ಕಾರ್ಯನಿರ್ವಾಹಕ ಅಭಿಯಂತರರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

## ಜಿಲ್ಲಾ ಕ್ರೀಡಾ ವಸತಿ ನಿಲಯದ ಕ್ರೀಡಾಪಟುಗಳು ರಾಜ್ಯಮಟ್ಟದ ಸ್ಪರ್ಧೆಗೆ ಆಯ್ಕೆ



ಮಲ್ಲಮ್ಮ ನುಡಿ ವಾರ್ತೆ

ಕೊಪ್ಪಳ : ಯುವ ಸಬಲೀಕರಣ ಮತ್ತು ಕ್ರೀಡಾ ಇಲಾಖೆಯ ಅಧೀನದಲ್ಲಿರುವ ಕ್ರೀಡಾ ವಸತಿ ನಿಲಯದ ಕ್ರೀಡಾಪಟುಗಳು ಬೀದರ್‌ನಲ್ಲಿ ಜರುಗಿದ ಕಲಬುರಗಿ ವಿಭಾಗ ಮಟ್ಟದ ವಾಲಿಬಾಲ್ ಪಂದ್ಯಾವಳಿಯಲ್ಲಿ ಪ್ರಥಮ ಸ್ಥಾನ ಪಡೆದು ರಾಜ್ಯಮಟ್ಟದ ಪಂದ್ಯಾವಳಿಗೆ ಆಯ್ಕೆಯಾಗಿದ್ದಾರೆ.

ಇತ್ತೀಚೆಗೆ ಬೀದರ್‌ನಲ್ಲಿ ಜರುಗಿದ ಕಲಬುರಗಿ ವಿಭಾಗ ಮಟ್ಟದ ವಾಲಿಬಾಲ್ ಪಂದ್ಯಾವಳಿಯಲ್ಲಿ 14 ವರ್ಷ ವಯೋಮಿತಿಯ ಬಾಲಕಿಯರ ವಿಭಾಗದಲ್ಲಿ ಅನಿತಾ, ಶಾರದಾ, ಸ್ಫೂರ್ತಿ, ಸಿಂಧು, ಅರ್ಚನಾ, ಮಾನಸ ಮತ್ತು ಭೂಮಿಕಾ ಅವರನ್ನೊಳಗೊಂಡ ತಂಡ, 17 ವರ್ಷ ವಯೋಮಿತಿಯ ಬಾಲಕಿಯರ ವಿಭಾಗದಲ್ಲಿ ದೀಕ್ಷಿತಾ, ಕಾವೇರಿ, ಲತಾ, ಸ್ಫೂರ್ತಿ, ಪ್ರಿಯಾಂಕ, ಪಾರ್ವತಿ ಹಾಗೂ ಯಲ್ಲಮ್ಮ ಅವರನ್ನೊಳಗೊಂಡ ತಂಡ ಮತ್ತು 17 ವರ್ಷ ವಯೋಮಿತಿಯ ಬಾಲಕರ ವಿಭಾಗದಲ್ಲಿ ನಿಖಿಲ್, ರಿಷಿನಾಯಕ್, ಅಭಿಲಾಶ್, ಎಂ.ಡಿ.ಇಮ್‌ದಾದ್ ಶೇಖ್, ಶ್ರೀಶೈಲ್, ಚೇತನ್ ಹಾಗೂ ಪೂಜಿತ್ ಸಿಧು ಅವರನ್ನೊಳಗೊಂಡ ತಂಡಗಳು ಪ್ರಥಮ ಸ್ಥಾನ ಗಳಿಸಿ, ಅ.16 ರಂದು ಚಿಕ್ಕಮಂಗಳೂರು ಜಿಲ್ಲೆಯ ತರೀಕೆರೆಯಲ್ಲಿ ನಡೆಯಲಿರುವ ರಾಜ್ಯಮಟ್ಟದ ವಾಲಿಬಾಲ್ ಪಂದ್ಯಾವಳಿಗೆ ಆಯ್ಕೆಯಾಗಿದ್ದಾರೆ.

ಕ್ರೀಡಾಪಟುಗಳಿಗೆ ಇಲಾಖೆಯ ಸಹಾಯಕ ನಿರ್ದೇಶಕರಾದ ವಿಠ್ಠಲ್ ಜಾಬಗೌಡರ್, ವಾಲಿಬಾಲ್ ತರಬೇತುದಾರ ಸುರೇಶ, ಖೇಲೋ ಇಂಡಿಯಾ ವಾಲಿಬಾಲ್ ತರಬೇತುದಾರರಾದ ದೀಪಾ ಹಾಗೂ ಸಿಬ್ಬಂದಿ ವರ್ಗದವರು ಅಭಿನಂದನೆ ಸಲ್ಲಿಸಿದ್ದಾರೆ.

ಜಾಹೀರಾತಿಗಾಗಿ ಸಂಪರ್ಕಿಸಿರಿ:
9449732000

## ಅ.18 ರಂದು ಹೆಣ್ಣುಮಕ್ಕಳ ಜನ್ಮೋತ್ಸವ ಕಾರ್ಯಕ್ರಮ

ಮಲ್ಲಮ್ಮ ನುಡಿ ವಾರ್ತೆ

ಬಳ್ಳಾರಿ,ಅ.15–ಜಿಲ್ಲಾಡಳಿತ, ಜಿಲ್ಲಾ ಪಂಚಾಯತ್, ಜಿಲ್ಲಾ ಕಾನೂನು ಸೇವೆಗಳ ಪ್ರಾಧಿಕಾರ, ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆ, ಶಾಲಾ ಶಿಕ್ಷಣ ಇಲಾಖೆ, ಪೊಲೀಸ್ ಇಲಾಖೆ ಹಾಗೂ ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆ ಇವರ ಸಂಯುಕ್ತಾಶ್ರಯದಲ್ಲಿ ಬೇಟಿ ಬಚಾವೋ ಬೇಟಿ ಪಡಾವೋ ಅಭಿಯಾನದಡಿ ಅ.18 ರಂದು ಬೆಳಿಗ್ಗೆ 10.30 ಗಂಟೆಗೆ ನಗರದ ಜಿಲ್ಲಾ ಆಸ್ಪತ್ರೆ ಆವರಣದಲ್ಲಿ ಅಂತರಾಷ್ಟ್ರೀಯ ಹೆಣ್ಣುಮಕ್ಕಳ ಜನ್ಮೋತ್ಸವ ಕಾರ್ಯಕ್ರಮ ಏರ್ಪಡಿಸಲಾಗಿದೆ.

ಜಿಲ್ಲಾಧಿಕಾರಿ ನಾಗೇಂದ್ರ ಪ್ರಸಾದ್. ಕೆ ಅವರು ಕಾರ್ಯಕ್ರಮ ಉದ್ಘಾಟಿಸುವರು.

ಜಿಲ್ಲಾ ಕಾನೂನು ಸೇವೆಗಳ ಪ್ರಾಧಿಕಾರದ ಸದಸ್ಯ ಕಾರ್ಯದರ್ಶಿ ಹಾಗೂ ಹಿರಿಯ ಸಿವಿಲ್ ನ್ಯಾಯಾಧೀಶರಾದ ರಾಜೇಶ್ ಎನ್.ಹೊಸಮನೆ ಅವರು ಕಾರ್ಯಕ್ರಮದ ಅಧ್ಯಕ್ಷತೆ ವಹಿಸುವರು.

ಜಿಲ್ಲಾ ಪಂಚಾಯತ್‌ನ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ ಮಹಮ್ಮದ್ ಹಾರಿಸ್ ಸುಮೇರ್, ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ ಡಾ.ಶೋಭಾರಾಣಿ ವಿ.ಜೆ., ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣಾಧಿಕಾರಿ ಡಾ.ಯಲ್ಲಾ ರಮೇಶ್ ಬಾಬು, ಶಾಲಾ ಶಿಕ್ಷಣ ಇಲಾಖೆ ಉಪನಿರ್ದೇಶಕರಾದ ಉಮಾದೇವಿ ಸೇರಿದಂತೆ ಇತರರು ಮುಖ್ಯ ಅಥಿತಿಗಳಾಗಿ ಭಾಗವಹಿಸಿವರು.

ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆ ಉಪನಿರ್ದೇಶ ರಾಮಕೃಷ್ಣ ನಾಯಕ.ಎಂ ಸೇರಿದಂತೆ ಕಚೇರಿಯ ಅಧಿಕಾರಿಗಳು ಮತ್ತ ಸಿಬ್ಬಂದಿ ವರ್ಗದವರು ಇತರರು ಉಪಸ್ಥಿತರಿರುವರು

## ಅ.16 ರಂದು ವಿದ್ಯುತ್ ವ್ಯತ್ಯಯ

ಮಲ್ಲಮ್ಮ ನುಡಿ ವಾರ್ತೆ

ಬಳ್ಳಾರಿ,ಅ.15–ಬಳ್ಳಾರಿ ನಗರ ಜೆಸ್ಕಾಂ ಉಪವಿಭಾಗ–2 ರ ವ್ಯಾಪ್ತಿಗೆ ಬರುವ 11ಕೆವಿ ಫೀಡರ್‌ನಿಂದ ವಿದ್ಯುತ್ ಸರಬರಾಜಾಗುವ ಎಫ್–07 ರ ವಿದ್ಯುತ್ ಲೈನುಗಳ ನಿರ್ವಹಣೆ ಕಾಮಗಾರಿ ಕೈಗೊಳ್ಳುತ್ತಿರುವುದರಿಂದ ಅ.16 ರಂದು ಬೆಳಿಗ್ಗೆ 10 ಗಂಟೆಯಿಂದ ಸಂಜೆ 05 ಗಂಟೆಯವರೆಗೆ ನಗರದ ವಿವಿಧೆಡೆ ವಿದ್ಯುತ್ ವ್ಯತ್ಯಯವಾಗಲಿದೆ.

*ವಿದ್ಯುತ್ ವ್ಯತ್ಯಯವಾಗುವ ಪ್ರದೇಶಗಳು:* ಸಂಗನಕಲ್ಲು ರಸ್ತೆ, ಎಸ್.ಎನ್.ಪೇಟೆ 3ನೇ ಕ್ರಾಸ್, ಜಿಲ್ಲಾ ಆಸ್ಪತ್ರೆ, ರಾಘವ ಕಲಾ ಮಂದಿರ, ಅನಂತಪುರ ರಸ್ತೆ, ವಡ್ಡರಬಂಡೆ, ಅಗಡಿ ಮಾರೆಪ್ಪ ಕಾಂಪೌಂಡ್, ರೂಪನಗುಡಿ ರಸ್ತೆ, ಮುಬರಕ್ ಟಾಕೀಸ್, ಬಾಲಾಜಿರಾವ್ ರಸ್ತೆ, ಕೆ.ಸಿ. ರೋಡ್, ಮೀನಾಕ್ಷಿ ಸರ್ಕಲ್, ಬೆಂಗಳೂರು ರಸ್ತೆ, ದುಗ್ಗಪ್ಪ ಬೀದಿ, ರೆಡ್ಡಿ ಬೀದಿ, ಅಲ್ಲಂ ಬೀದಿ, ಮುಲ್ಲಂಗಿ ಸಂಜೀವಪ್ಪ ಬೀದಿ, ರೂಪನಗುಡಿ ನರಪ್ಪ ಬೀದಿ, ತಾಯಮ್ಮಕಟ್ಟೆ ಸೇರಿದಂತೆ ಇನ್ನೂ ಮುಂತಾದ ಏರಿಯಾಗಳಲ್ಲಿ ವಿದ್ಯುತ್ ವ್ಯತ್ಯಯವಾಗಲಿದೆ.

ಸಾರ್ವಜನಿಕರು ಮತ್ತು ವಿದ್ಯುತ್ ಗ್ರಾಹಕರು ಸಹಕರಿಸಬೇಕು ಎಂದು ಕಾರ್ಯನಿರ್ವಾಹಕ ಅಭಿಯಂತರರು ಸಹಕರಿಸಬೇಕು ಎಂದು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

## ರಾಜ್ಯ ರಾಜಕಾರಣದಲ್ಲಿ ಯಾವುದೇ ಕ್ರಾಂತಿ ಇಲ್ಲಾ,,! ಸಂಸದ ಹಿಟ್ನಾಳ ಸ್ಪಷ್ಟನೆ

ಮಲ್ಲಮ್ಮ ನುಡಿವಾರ್ತೆ

ಕೊಪ್ಪಳ : ನಗರದಲ್ಲಿ ಕಾರ್ಯಕ್ರಮವೊಂದರಲ್ಲಿ ಪಾಲ್ಗೋಂಡಿದ್ದ ಸಂಸದ ರಾಜಶೇಖರ್ ಹಿಟ್ನಾಳ ಅವರನ್ನು ನಮ್ಮ ಮಾಧ್ಯಮ ನವೆಂಬರ್ ತಿಂಗಳಲ್ಲಿ ರಾಜ್ಯ ರಾಜಕಾರಣದಲ್ಲಿ ಕ್ರಾಂತಿ ಉಂಟಾಗಲಿದೆ ಎಂದು ಕೇಲವೊಂದಿಷ್ಟು ಜನಗಳಿಂದ ಕೇಳಿಬರುತ್ತಿದೆ ಇದಕ್ಕೆ ನಿಮ್ಮ ಅಭಿಪ್ರಾಯವೇನು ಎಂದು ಪ್ರಶ್ನೆಯೊಂದನ್ನು ಹಾಕಲಾಯಿತು.

ಬಳಿಕ ಸಂಸದರಾದ ರಾಜಶೇಖರ್ ಹಿಟ್ನಾಳ ಉತ್ತರಿಸಿ ರಾಜ್ಯ ರಾಜಕಾರಣದಲ್ಲಿ ಯಾವುದೇ ಕ್ರಾಂತಿ ಇಲ್ಲಾ, ಬರಿ ಭ್ರಾಂತಿಯಿಂದ ಕೂಡಿದೆ ಎಂದರು.



ಮುಖ್ಯಮಂತ್ರಿಗಳು ಇಲ್ಲವೇ ಉಪ ಮುಖ್ಯಮಂತ್ರಿಗಳು ಸೇರಿದಂತೆ ಪಕ್ಷದ ಹೈಕಮಾಂಡ್ ಇಂತಹ ಹೇಳಿಕೆಗಳನ್ನು ಇದುವರೆಗೆ ನೀಡಿಲ್ಲಾ ಹೀಗಾಗಿ ಇಂತಹ ವದಂತಿಗಳಿಗೆ ಯಾರು ಕಿವಿಗೊಡಬಾರದು ಎಂದು ಸ್ಪಷ್ಟಿಕರಿಸಿದರು.

ಹುಲಗೆಮ್ಮ ದೇವಿ ಕ್ಷೇತ್ರದಲ್ಲಿ ಕಳೆದ ಹುಣ್ಣಿಮೆಯಂದು ಅಪಾರ ಸಂಖ್ಯೆಯಲ್ಲಿ ಭಕ್ತಾಧಿಗಳು ಆಗಮಿಸಿದ್ದರಿಂದ ನೂಕು–ನೂಗ್ಗಲು ಉಂಟಾಗಿತ್ತು, ಸಾಕಷ್ಟು ಸಂಖ್ಯೆಯಲ್ಲಿ ಭಕ್ತರ ಆಗಮಿಸಿದ್ದರಿಂದ ತೊಂದರೆ ಉಂಟಾಗಿತ್ತು, ಶ್ರೀದೇವಿ ಅನುಗ್ರಹದಿಂದ ಯಾವುದೇ ಅವಘಡ ಆಗದೇ ಎಲ್ಲಾ ಭಕ್ತಾಧಿಗಳು ಸುರಕ್ಷಿತರಾಗಿದ್ದಾರೆ

ಈ ಹಿನ್ನೆಲೆಯಿಂದ ಹುಲಿಗೆಮ್ಮ ದೇವಸ್ಥಾನದ ಆವರಣದಲ್ಲಿ ರಸ್ತೆಗಳನ್ನು ಅಗಲಿಕರಣಗೊಳಿಸಿ ಭಕ್ತಾಧಿಗಳ ಹಿತದೃಷ್ಠಿಯಿಂದ ತೆರವು ಕಾರ್ಯಾಚರಣೆ ಕೈಗೆತ್ತಿಕೊಳ್ಳಲಾಗಿದೆ ಎಂದು ಹೇಳಿದರು.

# ಬೇವೂರಿನ ಸಂಗಮೇಶ ಯೂನಿವರ್ಸಿಟಿ ಬ್ಲ್ಯೂ

ಮಲ್ಲಮ್ಮ ನುಡಿ ವಾರ್ತೆ

ಬಾಗಲಕೋಟೆ,ಅ.15–ತಾಲೂಕಿನ ಬೇವೂರಗ್ರಾಮದ ಆದರ್ಶ ವಿದ್ಯಾವರ್ಧಕ ಸಂಘದ ಪರಪ್ಪ ಸಂಗಪ್ಪ ಸಜ್ಜನ ಕಲಾ ಮಹಾವಿದ್ಯಾಲಯದ ಪ್ರಥಮ ವರ್ಷದ ವಿದ್ಯಾರ್ಥಿ ಸಂಗಮೇಶ ಕರಿಯಪ್ಪ ಹಾಲವರ ಮಲ್ಲಕಂಬ ಕ್ರೀಡೆಯಲ್ಲಿ ಬಾಗಲಕೋಟೆ ವಿಶ್ವವಿದ್ಯಾಲಯದ ಬ್ಲ್ಯೂ ಆಗಿ ಆಯ್ಕೆಯಾಗಿದ್ದಾರೆ.

ಅ.13 ರಂದು ಬಾಗಲಕೋಟೆಯ ಬಸವೇಶ್ವರ ದೈಹಿಕ ಶಿಕ್ಷಣ ಮಹಾವಿದ್ಯಾಲಯದಲ್ಲಿ ಜರುಗಿದ



ಮಲ್ಲಕಂಬ ಸ್ಪರ್ಧೆಯಲ್ಲಿ ಯೂನಿವರ್ಸಿಟಿ ಬ್ಲ್ಯೂ ಆಗಿ ಆಯ್ಕೆಯಾದ 6 ಜನ ವಿದ್ಯಾರ್ಥಿಗಳ ಪೈಕಿ ಸಂಗಮೇಶ ಹಾಲವರ ಒಬ್ಬರು.

ಅ.24 ರಿಂದ 27ರವರೆಗೆ ಚೆನ್ನೈನ ವಿನಾಯಕ ಮಿಸ್ಸೆನ್ಸ್ ರಿಸರ್ಚ ಫೌಂಡೇಶನ್ ಯುನಿವರ್ಸಿಟಿಯಲ್ಲಿ ನಡೆಯವ ಅಖಿಲ ಭಾರತ ಅಂತರ ವಿವಿ ಮಲ್ಲಕಂಬ ಸ್ಪರ್ಧೆಯಲ್ಲಿ ಸಂಗಮೇಶ ಬಾಗಲಕೋಟೆ ವಿಶ್ವವಿದ್ಯಾಲಯ ತಂಡವನ್ನು ಪ್ರತಿನಿಧಿಸಲಿದ್ದಾರೆ ಎಂದು ಆದರ್ಶ ವಿದ್ಯಾವರ್ಧಕ ಸಂಘದ ಅಧ್ಯಕ್ಷ ನ್ಯಾಯವಾದಿ ಜಿ.ಜಿ.ಮಾಗನೂರ ಹಾಗೂ ಪ್ರಾಚಾರ್ಯ ಜಗದೀಶ ಭೈರಮಟ್ಟಿ ತಿಳಿಸಿದ್ದಾರೆ.

# ಜಿಲ್ಲಾ ಮಟ್ಟದ ಯುವಜನೋತ್ಸವಕ್ಕೆ ಶಾಸಕ ಮೇಟಿ ಚಾಲನೆ ಯುವಜನೋತ್ಸವದಿಂದ ಪ್ರತಿಭೆ ಗುರುತಿಸಲು ಸಾಧ್ಯ



ಮಲ್ಲಮ್ಮ ನುಡಿ ವಾರ್ತೆ

ಬಾಗಲಕೋಟೆ,ಅ.15–ಪ್ರಾದೇಶಿಕಪರಿಸರದ ಸಂಸ್ಕೃತಿ ಪರಂಪರೆಯಿಂದ ಬಂದಿರುವ ನಮ್ಮ ಜನಪದ ಕಲೆಗಳನ್ನು ಉಳಿಸಿ ಬೆಳೆಸುವಲ್ಲಿ ಯುವ ಸಮೂಹದ ಪಾತ್ರ ಮುಖ್ಯವಾಗಿದೆ. ಯುವಜನೋತ್ಸವದಿಂದ ಯುವ ಪ್ರತಿಭೆಗಳನ್ನು ಗುರುತಿಸಲು ಸಾಧ್ಯವಾಗುತ್ತದೆ ಎಂದು ಶಾಸಕ ಎಚ್.ವೈ.ಮೇಟಿ ಹೇಳಿದರು

ಜಿಲ್ಲಾಡಳಿತ, ಜಿಲ್ಲಾ ಪಂಚಾಯತಿ, ಯುವ ಸಬಲೀಕರಣ ಮತ್ತು ಕ್ರೀಡಾ ಇಲಾಖೆ ಹಾಗೂ ನವನಗರ ಸರ್ಕಾರಿ ಪ್ರಥಮ ದರ್ಜೆ ಕಾಲೇಜಿನ ಸಂಯುಕ್ತ ಆಶ್ರಯದಲ್ಲಿ ಬುಧವಾರ ನಡೆದ ಜಿಲ್ಲಾ ಮಟ್ಟದ ಯುವಜನೋತ್ಸವ ಉದ್ಘಾಟನಾ ಸಮಾರಂಭದ ಅಧ್ಯಕ್ಷತೆ ವಹಿಸಿ ಅವರು ಮಾತನಾಡಿದರು.

ಯುವಕರು ನಾಡಿನ ಶ್ರೀಮಂತ ಸಾಂಸ್ಕೃತಿಕ ಕಲೆಗಳ ಮಹತ್ವವನ್ನು ತಿಳಿದುಕೊಳ್ಳಬೇಕು. ನಮ್ಮ ನೆಲದ ಸಂಪ್ರದಾಯ, ಸಂಸ್ಕಾರ, ಪರಂಪರೆಯ ಉಳಿಸುವ ಪ್ರತಿಭಾವಂತರಾಗಬೇಕು. ಉತ್ತಮ ಶಿಕ್ಷಣ ಪಡೆದು ಐ.ಎ.ಎಸ್,ಐ.ಪಿ.ಎಸ್ ಅಧಿಕಾರಿಗಳಾಗಿ ಸಮಾಜದಲ್ಲಿ ಆದರ್ಶ ಪ್ರಜೆಗಳಾಗಬೇಕು ಎಂದು ಮೇಟಿ ಹೇಳಿದರು.

ಮುಖ್ಯ ಅತಿಥಿ ರಾಜ್ಯಸಭಾ ಸದಸ್ಯರಾದ ನಾರಾಯಣಸಾ ಬಾಂಢಗೆ ಮಾತನಾಡಿ, ಯುವ ಪೀಳಿಗೆಯಲ್ಲಿ ನಾಡು, ದೇಶದ ಸಾಂಸ್ಕೃತಿಕ ಕಲೆಗಳನ್ನು ತಿಳಿಯುವುದಕ್ಕೆ ಉತ್ತೇಜಿಸುವಲ್ಲಿ ಯುವಜನೋತ್ಸವ ಅಗತ್ಯವಾಗಿದೆ. ಇದರಲ್ಲಿ ಉತ್ತಮ ಸ್ಪರ್ಧಾತ್ಮಕ ಮನೋಭಾವ ಬೆಳೆಸಿಕೊಳ್ಳಲು ಅವಕಾಶ ಇರುತ್ತದೆ ಎಂದರು.

ಇನ್ನೋರ್ವ ಮುಖ್ಯ ಅತಿಥಿ ಜಿಲ್ಲಾಧಿಕಾರಿ ಸಂಗಪ್ಪ ಮಾತನಾಡಿ, ಯುವಕರು ಯುವಜನೋತ್ಸವದಲ್ಲಿ ಪಾಲ್ಗೊಳ್ಳುವ ಆಸಕ್ತಿ, ಅಭಿರುಚಿಯನ್ನು ಬೆಳೆಸಿಕೊಂಡು ಉತ್ತಮ ಸಾಂಸ್ಕೃತಿಕ ಯುವಕರಾಗಿ ಬೆಳೆಯಬೇಕು ಎಂದು ಹೇಳಿದರು. ಜಿಲ್ಲಾ ಪಂಚಾಯತ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ ಶಶಿಧರ ಕುರೇರ ಮಾತನಾಡಿ, ಇಂದಿನ ಸ್ಪರ್ಧಾತ್ಮಕ ಯುಗದಲ್ಲಿ ಪ್ರತಿಯೊಬ್ಬರು ತಮ್ಮಲ್ಲಿರುವ ಪ್ರತಿಭೆ ಅನಾವರಣ ಮಾಡಿಕೊಳ್ಳಲು ಯುವಜನೋತ್ಸವದಲ್ಲಿ ಪಾಲ್ಗೊಳ್ಳಬೇಕು. ಇದರಿಂದ ಯುವ ಸಮೂಹದವರಲ್ಲಿ ಆತ್ಮ ಸಾಮರ್ಥ್ಯ, ಮನೋಬಲ ಹೆಚ್ಚುತ್ತದೆ ಎಂದು ಹೇಳಿದರು.

ನಗರಸಭೆ ಅಧ್ಯಕ್ಷೆ ಸವಿತಾ ಲೆಂಕೆಣ್ಣವರ ಹಾಗೂ ಜಿಲ್ಲಾ ಯುವ ಸಬಲೀಕರಣ ಮತ್ತು ಕ್ರೀಡಾ ಇಲಾಖೆಯ ಸಹಾಯಕ ನಿರ್ದೇಶಕ ಗುರುಪಾದ ಡೂಗನವರ ವೇದಿಕೆಯಲ್ಲಿದ್ದರು. ಕಾಲೇಜಿನ ಪ್ರಾಂಶುಪಾಲ ಡಾ.ಅರುಣಕುಮಾರ ಗಾಳಿ ಪ್ರಾಸ್ತಾವಿಕವಾಗಿ ಮಾತನಾಡಿದರು. ಡಾ.ಚಂದ್ರಶೇಖರ ಕಾಳನ್ನವರ ನಿರೂಪಿಸಿ, ವಂದಿಸಿದರು. ಎನ್.ಎಸ್.ಎಸ್.ನೋಡಲ್ ಅಧಿಕಾರಿ ಡಾ.ಮಾರುತಿ ಪಾಟೋಳಿ ಸೇರಿದಂತೆ 20 ಜನರು ನಿರ್ಣಾಯಕರಾಗಿ ಪಾಲ್ಗೊಂಡಿದರು.

ಜಿಲ್ಲಾ ಮಟ್ಟದ ಯುವಜನೋತ್ಸವದಲ್ಲಿ ಯುವ ಕಲಾವಿದರು, ವಿವಿಧ ಕಾಲೇಜುಗಳ ವಿದ್ಯಾರ್ಥಿಗಳು, ಬೋಧಕರು, ಬೋಧ–ಕೇತರ ಸಿಬ್ಬಂದಿ ವರ್ಗದವರು ಪಾಲ್ಗೊಂಡಿದ್ದರು.

# ಗರ್ಭಿಣಿಯರು ಪೌಷ್ಠಿಕ ಆಹಾರ ಸೇವಿಸಬೇಕು–ಕವಟೇಕರ



ಮಲ್ಲಮ್ಮ ನುಡಿ ವಾರ್ತೆ

ಬಾಗಲಕೋಟೆ,ಅ.15–ಗರ್ಭಿಣಿಯರಿಗೆ ಪೌಷ್ಟಿಕ ಆಹಾರ ನೀಡಬೇಕು. ತಾಯಿಯ ಉದರದಲ್ಲಿ ಮಗು ಸದೃಢವಾಗಿ ಬೆಳೆಯಬೇಕಾದರೆ ತಾಯಿಯ ಆರೋಗ್ಯ ಸದೃಢವಾಗಿರಬೇಕು. ಪೌಷ್ಟಿಕ ಆಹಾರ ಸೇವಿಸಿ ಉತ್ತಮ ಜೀವನ ಶೈಲಿ ಅಳವಡಿಸಿಕೊಂಡು ಗರ್ಭಿಣಿಯರು ಆರೋಗ್ಯಕರ ಮಗುವಿಗೆ ಜನ್ಮ ನೀಡಬೇಕು ಎಂದು ಬೀಳಗಿ ಸಿಡಿಪಿಒ ಬಿ.ಜಿ.ಕವಟೇಕರ ಹೇಳಿದರು.

ಜಿಲ್ಲೆಯ ಬೀಳಗಿ ತಾಲೂಕಿನ ಅರಕೇರಿ ಗ್ರಾಮದ ಎಚ್‌ಪಿಎಸ್ ಶಾಲೆ ಆವರಣದಲ್ಲಿ ಮಹಿಳಾ ಮತ್ತು ಮಕ್ಕಳ ಕಲ್ಯಾಣ ಇಲಾಖೆ ವತಿಯಿಂದ ಹಮ್ಮಿಕೊಂಡ ರಾಷ್ಟ್ರೀಯ ಪೋಷಣ ಅಭಿಯಾನ ಮಾಸಾಚರಣೆ, ಐಸಿಡಿಎಸ್ ಯೋಜನೆಯ ಸುವರ್ಣ ಮಹೋತ್ಸವ ಕಾರ್ಯಕ್ರಮ ಉದ್ಘಾಟಿಸಿ ಮಾತನಾಡಿದ ಅವರು, ಸ್ವಾಸ್ಥ್ಯ ನಾರಿ, ಸಶಕ್ತ ಕುಟುಂಬ ಧ್ಯೇಯದೊಂದಿಗೆ ಸೀಮಂತ, ನಾಮಕರಣ, ಹುಟ್ಟು ಹಬ್ಬ ಹಾಗೂ ಮಕ್ಕಳಿಗೆ ಅನ್ನಪ್ರಾಶನ, ಅಕ್ಷರಭ್ಯಾಸವನ್ನು ಮಾಡಿಸಲಾಗುತ್ತದೆ ಎಂದರು.

ಕನ್ನಡ ಜಾನಪದ ಪರಿಷತ್ ಜಿಲ್ಲಾಧ್ಯಕ್ಷ ಡಿ.ಎಂ.ಸಾವಕಾರ ಪೌಷ್ಟಿಕ ಆಹಾರ ಮೇಳ ಉದ್ಘಾಟಿಸಿ ಮಾತನಾಡಿ, ಸದೃಢ ಕುಟುಂಬ ನಿರ್ಮಾಣದಲ್ಲಿ ಮಹಿಳೆಯರ ಪಾತ್ರ ಹಿರಿದಾಗಿದೆ. ತಾವು ತಯಾರಿಸುವ ಆಹಾರವೇ ಔಷಧಿಯಾಗಿರಬೇಕು. ಜಂಕ್‌ಫುಡ್‌ಗಳಿಂದ ದೂರವಿದ್ದು ಜಾನಪದ ಶೈಲಿಯ ಆಹಾರಗಳನ್ನು ಹೆಚ್ಚೆಚ್ಚು ತಯಾರಿಸಿ ಸೇವಿಸಬೇಕು. ಸೊಪ್ಪು, ತರಕಾರಿಗಳು, ಹಣ್ಣು ಹಂಪಲಗಳನ್ನು ಸೇವಿಸಬೇಕು ಎಂದು ಹೇಳಿದರು.

ಕುಂದರಗಿ ಬಿ ವಲಯದಲ್ಲಿ ಬರುವ ಅರಕೇರಿ, ಚಿಕ್ಕಾಲಗುಂಡಿ, ಕೊಪ್ಪ (ಎಸ್.ಕೆ.), ಕಾತರಕಿ, ಲಿಂಗಾಪೂರ (ಎಸ್.ಕೆ.), ಶಿರಗುಪ್ಪಿ, ದುರ್ಗಾಪೂರದ ಅಂಗನವಾಡಿ ಕಾರ್ಯಕರ್ತೆಯರು, ಸಹಾಯಕರು, ಶಿಶು ಅಭಿವೃದ್ಧಿ ಇಲಾಖೆಯ ಅಧಿಕಾರಿಗಳು ಸಮ್ಮಿಳಿತಗೊಂಡು ಈ ಕಾರ್ಯಕ್ರಮ ಹಮ್ಮಿಕೊಂಡಿದ್ದರು. ಗ್ರಾಪಂ ಅಧ್ಯಕ್ಷೆ ಮಹಾದೇವಿ ಕಮ್ಮನ್ನವರ, ಲಕ್ಷ್ಮೀ ಪೂಜಾರಿ, ವಿಠ್ಠಲ ನಡಗೇರಿ, ಭರಮಪ್ಪ ಬಿಸನಾಳ, ರಂಗವ್ವ ಮಲ್ಲಾರ, ಕಾಶವ್ವ ಆಗೋಜಿ, ಪಿಡಿಒ ಜಿ.ಎಸ್. ಅಳ್ಳಿಕಟ್ಟಿ, ಶಿವಾನಂದ ಕುಂದರಗಿ, ಬಿ.ಎಸ್. ಭೂಷಣ್ಣವರ, ಗಿರಿಜಾ ಚಿಗರಿ, ಸುಜಾತಾ ರಜಪೂತ, ಗೀತಾ ನಾಯ್ಕರ, ಮಂಜುಳಾ ಇದ್ದಲಗಿ, ಸುಶೀಲಾ ಹಂಚಿನಾಳ, ಶಶಿಕಲಾ ಲಮಾಣಿ, ಚಂದ್ರಕಲಾ ಚನ್ನಾಳ, ರೇಣುಕಾ ಹೆರಕಲ್, ಈರಮ್ಮ ಮಿರ್ಜಿ, ಶೋಭಾ ಸೊನ್ನದ, ಮೇಘಾ ಬೂದಿ, ಯಶೋಧಾ ನಡಗೇರಿ, ಜಯಶ್ರೀ ಮುರನಾಳ ಸೇರಿದಂತೆ ಮತ್ತಿತರಿದ್ದರು.

## ಜಿಲ್ಲಾ ಮಹಿಳಾ ಕಾಂಗ್ರೆಸ್ ಅಧ್ಯಕ್ಷರಾಗಿ ಸುಮಿತ್ರಾ ಗುಳಬಾಳ ನೇಮಕ


ಮಲ್ಲಮ್ಮ ನುಡಿ ವಾರ್ತೆ

ಬಾಗಲಕೋಟೆ,ಅ.15–ಜಿಲ್ಲಾ ಮಹಿಳಾ ಕಾಂಗ್ರೆಸ್ ನೂತನ ಅಧ್ಯಕ್ಷರಾಗಿ ಸುಮಿತ್ರಾ ಗುಳಬಾಳ ನೇಮಕಗೊಂಡಿದ್ದಾರೆ.

ರಾಜ್ಯ ಮಹಿಳಾ ಕಾಂಗ್ರೆಸ್ ಅಧ್ಯಕ್ಷೆ ಮಾಜಿ ಶಾಸಕಿ ಸೌಮ್ಯಾ ರೆಡ್ಡಿ ಸುಮಿತ್ರಾಗುಳಬಾಳ ಅವರನ್ನು ನೇಮಕ ಮಾಡಿ ಆದೇಶ ಹೊರಡಿಸಿದ್ದಾರೆ. ಈತನಕ ಬಾಗಲಕೋಟೆ ಜಿಲ್ಲಾ ಮಹಿಳಾ ಕಾಂಗ್ರೆಸ್ ಅಧ್ಯಕ್ಷರಾಗಿ ರಕ್ಷಿತಾ ಈಟಿ ಕಾರ್ಯ ನಿರ್ವಹಿಸಿದ್ದರು.



# ಮಾಧ್ಯಮಗಳ ಪ್ರಾಮಾಣಿಕತೆ–ಬದ್ಧತೆಯಿಂದ ಸಾಮಾಜಿಕ ಏಳಿಗೆ ಸಾಧ್ಯ : ಡಾ. ಪ್ರಹ್ಲಾದ ಚೆಂಗಟಿ.



ಮಲ್ಲಮ್ಮ ನುಡಿ ವಾರ್ತೆ

ಬಸವಕಲ್ಯಾಣ:– ಅ 15 ಸಮೂಹ ಮಾಧ್ಯಮಗಳು ಸಂವಿಧಾನದ ನಾಲ್ಕನೇ ಅಂಗ. ಅವುಗಳ ಪ್ರಾಮಾಣಿಕತೆ ಮತ್ತು ಬದ್ಧತೆಯಿಂದಲೆ ಸಮಾಜದ ಏಳಿಗೆ ಸಾಧ್ಯ ಎಂದು ಸರ್ಕಾರಿ ಪ್ರಥಮ ದರ್ಜೆ ಕಾಲೇಜು ಪ್ರಾಚಾರ್ಯರಾದ ಡಾ. ಪ್ರಹ್ಲಾದ ಚೆಂಗಟಿ ಹೇಳಿದರು.

ನಗರದ ಸರ್ಕಾರಿ ಪ್ರಥಮ ದರ್ಜೆ ಕಾಲೇಜಿನಲ್ಲಿ ಐಕ್ಯುಎಸಿ ಹಾಗೂ ಕನ್ನಡ ವಿಭಾಗದ ವತಿಯಿಂದ ಈ ದಿನ ಡಾಟ್ ಕಾಮ್ ಸಹಯೋಗದಲ್ಲಿ ಆಯೋಜಿಸಿದ್ದ 'ಮಾಧ್ಯಮ ಮತ್ತು ಯುವಜನತೆ' ಕುರಿತ ವಿಶೇಷ ಉಪನ್ಯಾಸ ಸಮಾರಂಭದ ಅಧ್ಯಕ್ಷತೆ ವಹಿಸಿ ಮಾತನಾಡಿದ ಅವರು, ಮಾಧ್ಯಮದವರಲ್ಲಿ ಇರುವ ಸಾಮಾಜಿಕ ಕಳಕಳಿ, ಕಾಳಜಿಗಳಿಂದ ಜಗತ್ತಿನ ಆತಂಕ, ಸಮಸ್ಯೆ ಕಳೆಯಲು ಸಾಧ್ಯ ಎಂದರು.

ಬೀದರಿನ ಪತ್ರಕರ್ತ ಬಾಲಾಜಿ ಕುಂಬಾರ ಅವರು

ವಿಶೇಷ ಉಪನ್ಯಾಸ ನೀಡಿ, ಈ ಕಾಲದಲ್ಲಿ ತಂತ್ರಜ್ಞಾನದ ಮೂಲಕ ಜಗತ್ತಿನ್ನು ನೋಡಲು ಕಲಿತಿದ್ದೇವೆ ಆದರೆ, ಗ್ರಾಮೀಣ ಭಾರತದ ಹಲವಾರು ಸಮಸ್ಯೆ ಮತ್ತು ಸವಾಲುಗಳನ್ನು ಬಗೆಹರಿಸಲು ಸಾಧ್ಯವಾಗಿಲ್ಲ. ಹಳ್ಳಿಗಳು ಮತ್ತು ನಗರಗಳು ಎದುರಿಸುವ ವಿಭಿನ್ನ ಸಮಸ್ಯೆಗಳಿಗೆ ಪರಿಹರಿಸು ಕೆಲಸ ಮಾಧ್ಯಮಗಳಿಂದ ಸಾಧ್ಯ ಎಂದರು.

ಮಾಧ್ಯಮ ಎಲ್ಲವೂ, ಎಲ್ಲರನ್ನೂ ಒಳಗೊಳ್ಳುವ ಮೂಲಕ ಚಲನಶೀಲತೆ ಪಡೆದಿದೆ. ಅದು ಏಕ ಕಾಲದಲ್ಲಿ ಓದುಗ ಮತ್ತು ಬರಹಗಾರರನ್ನು ಸೃಷ್ಟಿಸುವ ಕೆಲಸ ಮಾಡುತ್ತದೆ. ಹಲವು ಬರಹಗಾರರು ಪತ್ರಿಕೆಗಳಲ್ಲಿ ಬರೆಯುವ ಮೂಲಕ ಸಮಾಜವನ್ನು ಕಟ್ಟಿದ್ದಾರೆ ಎಂದರು.

ಬಸವೇಶ್ವರ ಪದವಿ ಕಾಲೇಜಿನ ಪ್ರಾಚಾರ್ಯರಾದ ಡಾ. ಭೀಮಾಶಂಕರ ಬಿರಾದಾರ ಮಾತನಾಡಿ, ಲೋಕದ ಹಲವು ಬಿಕ್ಕಟ್ಟುಗಳಿಂದ ಬಿಡುಗಡೆಯಾಗಲು ಸಾಹಿತ್ಯಕೃತಿಗಳು ಮತ್ತು ಮಾಧ್ಯಮಗಳು ಪ್ರಮಾಣುಗಳಾಗಿವೆ. ಬೌದ್ಧಿಕ ಮತ್ತು ವೈಚಾರಿಕ ನಿಲುವುಗಳನ್ನು ಮಂಡಿಸುವ ಮೂಲಕ ಮಾಧ್ಯಮಗಳಿಂದ ಹೊಸ ಜಗತ್ತು ಕಟ್ಟಲು ಸಾಧ್ಯ. ಲೋಕದ ಗ್ರಹಿಕೆಗೆ, ಸಮಾಜವನ್ನು ನೋಡುವ ನೋಟಕ್ರಮ ನೀಡುವ ಸಾಧನ ಮಾಧ್ಯಮಗಳಾಗಿವೆ ಎಂದರು.

ಚರಿತ್ರೆ ಅರಿಯುವಲ್ಲಿ, ವರ್ತಮಾನ ಗ್ರಹಿಸುವಲ್ಲಿ, ಭವಿಷ್ಯತ್ತನ್ನು ರೂಪಿಸುವಲ್ಲಿ ಮಾಧ್ಯಮಗಳು ಮಹತ್ವದ ಪಾತ್ರ ವಹಿಸುತ್ತದೆ. ಮಾಧ್ಯಮ ಸತ್ಯ ಶೋಧನೆಗೆ ದಾರಿಯಾಗಬೇಕು. ಕೃಷಿಕರು, ಶ್ರಮಿಕರು ಎದುರಿಸುವ ಬಿಕ್ಕಟ್ಟಗಳು ಅಧಿಕಾರದಲ್ಲಿ ಇದ್ದವರಿಗೆ ತೋರಿಸಿ, ಪರಿಹಾರ ಕಂಡುಕೊಳ್ಳುವ ದಾರಿಯಾಗಿ ಮಾಧ್ಯಮ ಕಾರ್ಯನಿರ್ವಹಿಸುತ್ತಿವೆ ಎಂದರು.

ಈ ಸಂದರ್ಭದಲ್ಲಿ

ಶರಣಬಸಪ್ಪ ಜನ್ನಾ, ಸುಭಾಷ ಮಚಕುರಿ, ಡಾ. ಪೀರಪ್ಪ ಸಜ್ಜನ್, ಬಸವರಾಜ ಬಿರಾದಾರ, ಚೆನ್ನಮ್ಮ, ಮಹೇಶ ಮಂಠಾಳೆ, ಫರೀದ್, ಅನಿಲ ಚಾಂದೆ, ಅಂಜಲಿ ಗಜರೆ, ಭಾಗ್ಯಶ್ರೀ, ನರೇಂದ್ರ, ಸುಸ್ಮಿತಾ ಸೇರಿದಂತೆ ಅನೇಕರು ಉಪಸ್ಥಿತರಿದ್ದರು.

ಐಕ್ಯುಎಸಿ ಸಂಯೋಜಕ ಡಾ. ಚಂದ್ರಕಾಂತ ಗಾಯಕವಾಡ ಸ್ವಾಗತಿಸಿದರು. ಪ್ರೊ. ಮೀನಾಕ್ಷಿ ಬಿರಾದಾರ ನಿರೂಪಿಸಿದರು. ಡಾ. ಶ್ರೀಕಾಂತ ಚೌಹಾಣ್ ವಂದಿಸಿದರು.

# ಭಾಗ್ಯವಂತಿ ದೇವಿಯ ಕಳಸಾರೋಹಣ 18 ರಂದು



ಮಲ್ಲಮ್ಮ ನುಡಿ ವಾರ್ತೆ

ಬಸವಕಲ್ಯಾಣ :– ಅ 15 ತಾಲೂಕಿನ ಕೌಡಿಯಾಳ (ಆರ್) ಗ್ರಾಮದಲ್ಲಿ ಭಾಗ್ಯ ವಂತಿದೇವಿಯ 22 ನೇಯ ಜಾತ್ರಾ ಮಹೋತ್ಸವ ಹಾಗೂ ದೇವಸ್ಥಾನದ ಕಳಸಾರೋಹಣ ಕಾರ್ಯಕ್ರಮ ಇದೇ ದಿನಾಂಕ 18 ರಿಂದ 22 ರ ವರೆಗೆ ನಡೆಯಲಿದೆ ಎಂದು ಭಾಗ್ಯವಂತಿ ತಾಯಿ ತಿಳಿಸಿದರು. ಮಂಗಳವಾರ ಆಮಂತ್ರಣ ಪತ್ರಿಕೆ ಬಿಡುಗಡೆ ಮಾಡಿ ಪತ್ರಿಕಾಗೋಷ್ಠಿಯಲ್ಲಿ ಮಾತನಾಡಿದರು. ಈ ಕಾರ್ಯಕ್ರಮಕ್ಕೆ ನರಸಿಪುರದ ಅಂಬಿಗರ ಚೌಡಯ್ಯ ಗುರು ಪೀಠದ ಪೀಠಾಧ್ಯಕ್ಷರಾದ ಪೂಜ್ಯಶ್ರೀ ಶಾಂತಭೀಷಮ್ಮ ಸ್ವಾಮಿಜಿ. ಸಾನಿಧ್ಯ ನಿರಗುಡಿ ಪೂಜ್ಯ ಶ್ರೀ ಹವಾ ಮಲ್ಲಿನಾಥ ಮಹಾರಾಜರು ವಹಿಸಲಿದ್ದಾರೆ. ಪೂಜ್ಯ ಶ್ರೀ ಭಾಗ್ಯವಂತಿ ದೇವಿಯ ಕೌಡಿಯಾಳ ನೇತೃತ್ವದಲ್ಲಿ ನಡೆಯಲಿದೆ. ಎಳು ನೀರಿನ ಕೊಡಗಳು ಒಂದರ ಮೇಲೊಂದರಂತೆ ತಲೆಯ ಮೇಲೆ ಹೊತ್ತು ಕೂಂಡು ಹರಕೆ ತೀರಿಸುವ ಕಾರ್ಯಕ್ರಮ ನಡೆಯಲಿದೆ. ಐದು ದಿನಗಳವರೆಗೆ ಕುಂಬ ಕಳಸ ಮೆರವಣಿಗೆ ನಡೆಯಲಿದೆ ಹವನ. ರುದ್ರಾಭಿಷೇಕ ಹಾಗೂ ಪಲ್ಲಕಿ ಮೆರವಣಿಗೆ. ಉಡಿ ತುಂಬುವುದು. ಭಜನೆ. ತುಲಾಭಾರ ನಡೆಯಲಿದೆ ಎಂದರು ಹೇಳಿದರು. ಜಿಲ್ಲಾ ಉಸ್ತುವಾರಿ ಸಚಿವರಾದ ಈಶ್ವರ ಖಂಡ್ರೆ ಉದ್ಘಾಟಿಸುವರು. ಸಸ್ತಾಪುರದ ಪೂಜ್ಯ ಶ್ರೀ ಮಹಾದೇವ ತಾಯಿ. ಅಂಬಿಗರ ಚೌಡಯ್ಯ ಜಾಗೃತಿ ಆಶ್ರಮದ ರತ್ನಕಾಂತ ಸ್ವಾಮಿಜಿ. ವಾಲ್ಮೀಕಿ ರಾಮ ಮಹಾರಾಜ ಸಮ್ಮುಖ ವಹಿಸುವರು. ಮೀನುಗಾರಿಕೆ ಅಭಿವೃದ್ಧಿ ನಿಗಮದ ಅಧ್ಯಕ್ಷೆ ಮಾಲಾ ಬಿ ನಾರಾಯಣರಾವ. ಶಾಸಕರಾದ ಶರಣು ಸಲಗರ್. ಹುಮನಾಬಾದ ಶಾಸಕರಾದ ಡಾ ಸಿದ್ದಲಿಂಗಪ ಪಾಟೀಲ. ಮಾಜಿ ಸಚಿವರಾದ ರಾಜಶೇಖರ ಪಾಟೀಲ. ಬಾಬುರಾವ ಚಿಂಚನಸೂರ. ಮಾಜಿ ವಿಧಾನ ಪರಿಷತ್ ಸದಸ್ಯ ವಿಜಯಸಿಂಗ. ಗುಂಡುರಡ್ಡಿ ಕಮಲಾಪುರೆ. ಸಂಜುಕುಮಾರ ವಾಡೇಕರ್. ಧನರಾಜ ತಾಡಂಪ್ಪಳ್ಳಿ. ಸೇರಿದಂತೆ ಅನೇಕರು ಪಾಲ್ಗೊಳ್ಳಲಿದ್ದಾರೆ ಎಂದು ತಿಳಿಸಿದರು. ಈ ಸಂದರ್ಭದಲ್ಲಿ ರಾಜೇಶ್ವರ್ ಗ್ರಾಮದ ಬ್ರಾಹ್ಮಣ ಸಮಾಜದ ಹುಮನಾಬಾದ ತಾಲೂಕಿನ ಉಪಾಧ್ಯಕ್ಷರಾದ ಮಿಲಿಂದ್ ಮುರಳಿಧರ್ ರಾವ್ ಕುಲಕರ್ಣಿ. ಪತ್ರಕರ್ತರಾದ ಮಾಣಿಕ ಭುರೆ. ಧನರಾಜ ರಾಜೋಳೆ. ಹಾಗೂ ಮಾರುತಿ ಪುಲೆ ಕಿಟ್ಟಾ ಸೇರಿದಂತೆ ಅನೇಕರು ಉಪಸ್ಥಿತರಿದ್ದರು.

# ದೀಪಾವಳಿ ಹಬ್ಬದ ಪ್ರಯುಕ್ತ ಕೆ.ಕೆ.ಆರ್.ಟಿ.ಸಿ. ಸಂಸ್ಥೆಯಿಂದ 600 ಹೆಚ್ಚುವರಿ ಬಸ್ ಕಾರ್ಯಾಚರಣೆ–ಡಾ.ಬಿ.ಸುಶೀಲಾ

ಮಲ್ಲಮ್ಮ ನುಡಿ ವಾರ್ತೆ

ಕಲಬುರಗಿ,ಅ.15–ದೀಪಾವಳಿ ಹಬ್ಬ ಹಾಗೂ ಹುಲಿಜಂತಿ ಶ್ರೀ ಮಾಳಿಂಗರಾಯ ಜಾತ್ರಾ ಹಿನ್ನೆಲೆಯಲ್ಲಿ ಕಲ್ಯಾಣ ಕರ್ನಾಟಕ ರಸ್ತೆ ಸಾರಿಗೆ ಸಂಸ್ಥೆಯು ಜಿಲ್ಲಾ ಮತ್ತು ತಾಲೂಕು ಕೇಂದ್ರದಿಂದ ಬೆಂಗಳೂರು, ಹುಲಿಜಂತಿ ಹಾಗೂ ಇತರೆ ಸ್ಥಳಗಳಿಗೆ ಹೋಗಿ ಬರಲು ಪ್ರಯಾಣಿಕರ ಅನುಕೂಲಕ್ಕಾಗಿ 600 ಹೆಚ್ಚುವರಿ ಬಸ್ ಕಾರ್ಯಾಚರಣೆ ಮಾಡಲಾಗುತ್ತಿದ್ದು, ಸಾರ್ವಜನಿಕರು ಮತ್ತು ಪ್ರಯಾಣಿಕರು ಇದರ ಸೌಲಭ್ಯ ಪಡೆಯಬೇಕು ಎಂದು ಸಂಸ್ಥೆಯ ವ್ಯವಸ್ಥಾಪಕ ನಿರ್ದೇಶಕಿ ಡಾ.ಬಿ.ಸುಶೀಲಾ ತಿಳಿಸಿದ್ದಾರೆ.

ಈ ಕುರಿತು ಪತ್ರಿಕಾ ಹೇಳಿಕೆ ಬಿಡುಗಡೆ ಮಾಡಿರುವ ಅವರು, ಅಕ್ಟೋಬರ್ 16, 17 ಮತ್ತು 18 ರಂದು ಸಂಸ್ಥೆ ವ್ಯಾಪ್ತಿಯ ಜಿಲ್ಲಾ ಮತ್ತು ತಾಲೂಕು ಕೇಂದ್ರದಿಂದ ಬೆಂಗಳೂರು ಮತ್ತು ಇತರೆ ಪ್ರಮುಖ ಸ್ಥಳಗಳಿಗೆ ಹಾಗೂ ಅಕ್ಟೋಬರ್ 17, 18, ಮತ್ತು 19 ರಂದು ಬೆಂಗಳೂರಿನಿಂದ ಇತರೆ ಸ್ಥಳಗಳಿಗೆ ಹೆಚ್ಚುವರಿ ವಾಹನಗಳನ್ನು ಕಾರ್ಯಾಚರಣೆ ಮಾಡಲಾಗುತ್ತಿದೆ. ಹುಲಿಜಂತಿ ಶ್ರೀ ಮಾಳಿಂಗರಾಯ ಜಾತ್ರಾ ಪ್ರಮುಖ ದಿನಗಳಾದ ಅಕ್ಟೋಬರ್ 20, 21 ಮತ್ತು 22 ರಂದು ಜಾತ್ರಾ ಸಾರಿಗೆಗಳ ಭಕ್ತಾದಿಗಳು ಪ್ರಯೋಜನ ಪಡೆಯಬಹುದಾಗಿದೆ. ಇನ್ನು ಹಬ್ಬ ಮತ್ತು ರಜೆ ಮುಗಿದ ನಂತರ ಅಕ್ಟೋಬರ್ 22 ರಿಂದ 26ರವರೆಗೆ ಸಹ ಸಂಚಾರ ದಟ್ಟಣೆಗನುಗುಣವಾಗಿ ವಾಹನಗಳ ಕಾರ್ಯಾಚರಣೆ ನಡೆಯಲಿದೆ ಎಂದಿದ್ದಾರೆ.

ಸಾರ್ವಜನಿಕ ಪ್ರಯಾಣಿಕರ ಅನುಕೂಲಕ್ಕಾಗಿ ಸಾರಿಗೆ ಬಸ್‌ನಲ್ಲಿ ಮುಂಗಡವಾಗಿ ಆಸನಗಳನ್ನು ಕಾಯ್ದಿರಿಸುವ ಅವಕಾಶವಿದ್ದು, ಪ್ರಯಾಣಿಕರು ಕರ್ನಾಟಕ ಹಾಗೂ ಅಂತರ ರಾಜ್ಯದಲ್ಲಿರುವ 18 ಗಣಕೀಕೃತ ಬುಕ್ಕಿಂಗ್ ಕೌಂಟರ್‌ಗಳ ಮುಖಾಂತರ ಆಸನ ಕಾಯ್ದಿರಿಸಬಹುದಾಗಿದೆ. 4 ಅಥವಾ ಹೆಚ್ಚು ಪ್ರಯಾಣಿಕರು ಒಟ್ಟಾಗಿ ಮುಂಗಡ ಟಿಕೆಟ್ ಕಾಯ್ದಿರಿಸಿದಲ್ಲಿ ಶೇ.5ರಷ್ಟು ಹಾಗೂ ಹೋಗುವ ಮತ್ತು ಬರುವ ಪ್ರಯಾಣದ ಟಿಕೇಟನ್ನು ಒಟ್ಟಿಗೆ ಕಾಯ್ದಿರಿಸಿದಲ್ಲಿ ಪ್ರಯಾಣ ದರದಲ್ಲಿ ಶೇ.10 ರಷ್ಟು ರಿಯಾಯಿತಿ ನೀಡಲಾಗುತ್ತಿದೆ. ಪ್ರಯಾಣಿಕರು ಬಸ್ ನಿಲ್ದಾಣಗಳಿಗೆ ತೆರಳುವ ಮುನ್ನ ಮುಂಗಡ ಟಿಕೇಟುಗಳ ಮೇಲೆ ನಮೂದಿಸಲಾಗಿರುವ ಬಸ್ ನಿಲ್ದಾಣ, ಪಿಕ್ ಅಪ್ ಪಾಯಿಂಟ್ ಸ್ಥಳ ಮತ್ತು ಹೆಸರು ಗಮನಿಸಬೇಕೆಂದು ಅವರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ಪರಿಸರ ಸಂರಕ್ಷಣೆ ಮತ್ತು ಪರಿಸರ ವ್ಯವಸ್ಥಾಪನೆಗಾಗಿ ಗಣನೀಯ ಸೇವೆ ಸಲ್ಲಿಸಿದ ವ್ಯಕ್ತಿ/ಸಂಸ್ಥೆಗಳಿಗೆ ಪ್ರಶಸ್ತಿ ನೀಡಲು ನಾಮನಿರ್ದೇಶನ ಅರ್ಜಿ ಆಹ್ವಾನ

ಮಲ್ಲಮ್ಮ ನುಡಿ ವಾರ್ತೆ

ಕಲಬುರಗಿ:ಅ.15–ಕರ್ನಾಟಕ ರಾಜ್ಯ ಮಾಲಿನ್ಯ ನಿಯಂತ್ರಣ ಮಂಡಳಿ ಸ್ಥಾಪನೆಯಾಗಿ 50 ವರ್ಷ ಪೂರೈಸಿದ ಹಿನ್ನಲೆಯಲ್ಲಿ ಸುವರ್ಣ ಮಹೋತ್ಸವ ಆಚರಿಸುತ್ತಿರುವ ಹಿನ್ನೆಲೆಯಲ್ಲಿ ಕಲಬುರಗಿ ಜಿಲ್ಲೆಯ ವ್ಯಾಪ್ತಿಯಲ್ಲಿ ಬರುವ ಪರಿಸರ ಸಂರಕ್ಷಣೆ ಮತ್ತು ಪರಿಸರ ವ್ಯವಸ್ಥಾಪನೆಗಾಗಿ ಗಣನೀಯ ಸೇವೆ ಸಲ್ಲಿಸಿದ ವ್ಯಕ್ತಿ/ಸಂಸ್ಥೆಗಳನ್ನು ಸನ್ಮಾನಿಸಲು ಮತ್ತು ಪ್ರಶಸ್ತಿ ನೀಡಲು ನಾಮನಿರ್ದೇಶನ ಮಾಡಲು ಇದಕ್ಕಾಗಿ ಅರ್ಜಿ ಆಹ್ವಾನಿಸಲಾಗಿದೆ ಎಂದು ಕರ್ನಾಟಕ ರಾಜ್ಯ ಮಾಲಿನ್ಯ ನಿಯಂತ್ರಣ ಮಂಡಳಿಯ ಕಲಬುರಗಿ ಪರಿಸರ ಅಧಿಕಾರಿಗಳು ತಿಳಿಸಿದ್ದಾರೆ.

ಆದ್ದರಿಂದ ಅರ್ಹ ವ್ಯಕ್ತಿ/ಸಂಸ್ಥೆಗಳು ಅರ್ಜಿಯೊಂದಿಗೆ ವ್ಯಕ್ತಿ/ ಸಂಸ್ಥೆಯ ಹೆಸರು, ವಿಳಾಸ ಹಾಗೂ ಮತ್ತಿತರ ದಾಖಲೆಗಳನ್ನು ಲಗತ್ತಿಸಿ 2025ರ ಅಕ್ಟೋಬರ್ 16 ರೊಳಗಾಗಿ ಪ್ರಾದೇಶಿಕ ಕಚೇರಿ, ಕರ್ನಾಟಕ ರಾಜ್ಯ ಮಾಲಿನ್ಯ ನಿಯಂತ್ರಣ ಮಂಡಳಿ, ಪ್ಲಾಟ್ ನಂ.12/2, ಸರ್ವೆ ನಂ.19/ಪಿ, ಮನ್ಸಫದಾರ್ ಲೇಔಟ್, ಎಂ.ಜಿ.ರಸ್ತೆ, ಸಂತ್ರಾಸವಾಡಿ, ಕಲಬುರಗಿ–585101 ವಿಳಾಸಕ್ಕೆ ಸಲ್ಲಿಸಬೇಕು.

ಅರ್ಜಿಯೊಂದಿಗೆ ಲಗತ್ತಿಸಬೇಕಾದ ದಾಖಲೆಗಳು, ಮತ್ತಿತರ ಹೆಚ್ಚಿನ ಮಾಹಿತಿಗಾಗಿ ಕಲಬುರಗಿ ಕರ್ನಾಟಕ ರಾಜ್ಯ ಮಾಲಿನ್ಯ ನಿಯಂತ್ರಣ ಮಂಡಳಿಯ ಕಚೇರಿಯನ್ನು ಹಾಗೂ ಮೊಬೈಲ್ ಸಂಖ್ಯೆ 9902956183, 8095520348 ಹಾಗೂ 9945497095 ಗಳಿಗೆ ಸಂಪರ್ಕಿಸಲು ಕೋರಲಾಗಿದೆ.

# ಪರಿಶಿಷ್ಟ ವರ್ಗಗಳ ಕಲ್ಯಾಣ ಇಲಾಖೆ; ವಸತಿ ನಿಲಯ ಕಟ್ಟಡ ಬಾಡಿಗೆಗೆ ಬೇಕಾಗಿದೆ

ಮಲ್ಲಮ್ಮ ನುಡಿ ವಾರ್ತೆ

ಬಳ್ಳಾರಿ,ಅ.15–ಪರಿಶಿಷ್ಟ ವರ್ಗಗಳ ಕಲ್ಯಾಣ ಇಲಾಖೆಯ ವ್ಯಾಪ್ತಿಯ ಬಳ್ಳಾರಿ ನಗರದ ಸರ್ಕಾರಿ ಮೆಟ್ರಿಕ್ ನಂತರದ ಬಾಲಕರ ವಸತಿ ನಿಲಯ ನಂ–4 ನಿಲಯದಲ್ಲಿನ 100 ಮಕ್ಕಳ ವಾಸಕ್ಕೆ, ಸರ್ಕಾರಿ ಬಾಲಕೀಯರ ವಸತಿ ನಿಲಯ ನಂ–2 ನಿಲಯದಲ್ಲಿನ 100 ಮಕ್ಕಳ ವಾಸಕ್ಕೆ ಹಾಗೂ ಕಂಪ್ಲಿ ಪಟ್ಟಣದ ಸರ್ಕಾರಿ ಬಾಲಕೀಯರ ವಸತಿ ನಿಲಯದಲ್ಲಿನ 100 ಮಕ್ಕಳ ವಾಸಕ್ಕೆ ಅನುಕೂಲಕರವಾಗಿರುವ ಕಟ್ಟಡವಿದ್ದಲ್ಲಿ ಬಾಡಿಗೆ ನೀಡಲು ಆಸಕ್ತ ಮಾಲೀಕರು ಸಂಪರ್ಕಿಸಬಹುದು ಎಂದು ಜಿಲ್ಲಾ ಪರಿಶಿಷ್ಟ ವರ್ಗಗಳ ಕಲ್ಯಾಣಾಧಿಕಾರಿ ಶಾಷು ಮೋದಿನ್ ತಿಳಿಸಿದ್ದಾರೆ. ವಿಶಾಲವಾದ ಕೊಠಡಿಗಳು (ಒಂದು ಕೊಠಡಿಗೆ 5 ವಿದ್ಯಾರ್ಥಿಗಳಂತೆ 20 ಕೊಠಡಿಗಳು) ಅಡುಗೆ ಕೋಣೆ, ಡಾರ್ಮೆಟರಿ, ಕುಡಿಯುವ ನೀರು, ಬಳಸುವ ನೀರು ಹಾಗೂ ಶೌಚಾಲಯ ಮತ್ತು ಸ್ನಾನಗೃಹ ಇರುವ ಬಾಡಿಗೆ ಕಟ್ಟಡ ಬಳ್ಳಾರಿ ಮತ್ತು ಕಂಪ್ಲಿ ನಗರದಲ್ಲಿ ಬೇಕಾಗಿರುತ್ತದೆ. ಆಸಕ್ತ ಕಟ್ಟಡ ಮಾಲೀಕರು ಕಟ್ಟಡದ ಸೂಕ್ತ ದಾಖಲಾತಿಗಳೊಂದಿಗೆ ನಗರದ ನಲ್ಲಚೆರವು ಪ್ರದೇಶದ ವಾಲ್ಮೀಕಿ ಭವನದ ಪರಿಶಿಷ್ಟವರ್ಗಗಳ ಕಲ್ಯಾಣಾಧಿಕಾರಿಗಳ ಕಚೇರಿಗೆ ಅರ್ಜಿ ಸಲ್ಲಿಸಬಹುದು. ಹೆಚ್ಚಿನ ಮಾಹಿತಿಗಾಗಿ ದೂ.08392–242453 ಅಥವಾ ಮೊ.9972451535 ಗೆ ಸಂಪರ್ಕಿಸಬಹುದು ಎಂದು ಅವರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ಈಶಾನ್ಯ ಶಿಕ್ಷಕರ ಕ್ಷೇತ್ರದ ಮತದಾರರ ಪಟ್ಟಿ ಸಿದ್ಧತೆಗಾಗಿ ಮತದಾರರ ಮಾಹಿತಿ ಸೌಲಭ್ಯ ಕೇಂದ್ರ ಸ್ಥಾಪನೆ

ಮಲ್ಲಮ್ಮ ನುಡಿ ವಾರ್ತೆ

ರಾಯಚೂರು ಅಕ್ಟೋಬರ್ 15–: ಕರ್ನಾಟಕ ವಿಧಾನ ಪರಿಷತ್ ಈಶಾನ್ಯ ಶಿಕ್ಷಕರ ಕ್ಷೇತ್ರ ಮತದಾರರ ಪಟ್ಟಿಯನ್ನು ಸಿದ್ದಪಡಿಸುವ ಸಂಬಂಧ ಮತದಾರರ ಮಾಹಿತಿ ಸೌಲಭ್ಯ ಕೇಂದ್ರ ಸ್ಥಾಪಿಸಲಾಗಿದೆ ಜಿಲ್ಲಾ ಚುನಾವಣಾಧಿಕಾರಿಗಳು ಆಗಿರುವ ಜಿಲ್ಲಾಧಿಕಾರಿಗಳಾದ ನಿತೀಶ್ ಕೆ ಅವರು ತಿಳಿಸಿದ್ದಾರೆ.

ಮತದಾರರು ತಮ್ಮ ನೋಂದಣಿ, ಮತಗಟ್ಟೆ ಹಾಗೂ ಇತರೆ ಮಾಹಿತಿ ಸಂಬಂಧ ಈ ಮುಂದಿನ ದೂರವಾಣಿ ಸಂಖ್ಯೆಗಳಿಗೆ ಕರೆ ಮಾಡಿ ಮಾಹಿತಿ ಪಡೆದುಕೊಳ್ಳಬಹುದಾಗಿದೆ.

ರಾಯಚೂರು ಜಿಲ್ಲೆಗೆ ಸಂಬಂಧಿಸಿದ ಮಾಹಿತಿ ಸೌಲಭ್ಯ ಕೇಂದ್ರವನ್ನು ಜಿಲ್ಲಾಧಿಕಾರಿಗಳ ಕಾರ್ಯಾಲಯ ರಾಯಚೂರು 08532–228551, ರಾಯಚೂರು ತಾಲೂಕಿನ ಮಾಹಿತಿ ಸೌಲಭ್ಯ ಕೇಂದ್ರವನ್ನು ತಹಸೀಲ್ದಾರ ಕಚೇರಿ ದೂ. 08532–200772, ಮಾನವಿ ಹಾಗೂ ಸಿರವಾರ ತಾಲೂಕು ವ್ಯಾಪ್ತಿಯ ಮಾಹಿತಿ ಸೌಲಭ್ಯ ಕೇಂದ್ರವನ್ನು ಮಾನವಿ ತಹಸೀಲ್ ಕಚೇರಿಯಲ್ಲಿ ದೂ:08538–220239, ದೇವದುರ್ಗ ಹಾಗೂ ಅರಕೇರಾ ತಾಲೂಕು ವ್ಯಾಪ್ತಿಯ ಮಾಹಿತಿ ಸೌಲಭ್ಯ ಕೇಂದ್ರವನ್ನು ದೇವದುರ್ಗ ತಹಸೀಲ್ ಕಚೇರಿಯಲ್ಲಿ ದೂ. 08531–200117, ಲಿಂಗಸೂಗೂರು ತಾಲೂಕು ವ್ಯಾಪ್ತಿಯ ಮಾಹಿತಿ ಸೌಲಭ್ಯ ಕೇಂದ್ರವನ್ನು ದೇವದುರ್ಗ ತಹಸೀಲ್ ಕಚೇರಿಯಲ್ಲಿ ದೂ:08537–275247, ಸಿಂಧನೂರು ತಾಲೂಕು ವ್ಯಾಪ್ತಿಯ ಮಾಹಿತಿ ಸೌಲಭ್ಯ ಕೇಂದ್ರವನ್ನು ಸಿಂಧನೂರ ತಹಸೀಲ್ ಕಚೇರಿಯಲ್ಲಿ ದೂ: 08535–220151 ಮತ್ತು ಮಸ್ಕಿ ತಾಲೂಕು ವ್ಯಾಪ್ತಿಯ ಮಾಹಿತಿ ಸೌಲಭ್ಯ ಕೇಂದ್ರವನ್ನು ಮಸ್ಕಿ ತಹಸೀಲ್ ಕಚೇರಿಯಲ್ಲಿ ದೂ: 08537–295504 ಸ್ಥಾಪನೆ ಮಾಡಲಾಗಿದೆ ಎಂದು ಜಿಲ್ಲಾ ಚುನಾವಣಾಧಿಕಾರಿಗಳು ಹಾಗೂ ಜಿಲ್ಲಾಧಿಕಾರಿಗಳು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

ಭಾರತ ಚುನಾವಣಾ ಆಯೋಗವು ದಿನಾಂಕ 12.09.2025ರ ಪತ್ರದನ್ವಯ ದಿನಾಂಕ:11.11.2026ಕ್ಕೆ ಕರ್ನಾಟಕ ವಿಧಾನ ಪರಿಷತ್ ಈಶಾನ್ಯ ಶಿಕ್ಷಕರ ಕ್ಷೇತ್ರದ ಸದಸ್ಯರ ಪದಾವಧಿಯು ಮುಕ್ತಾಗೊಳ್ಳಲಿದ್ದು ದಿನಾಂಕ 01.11.2025ಕ್ಕೆ ಅನ್ವಯಿಸುವಂತೆ ಮತದಾರರ ಪಟ್ಟಿಯನ್ನು ಸಿದ್ದಪಡಿಸಲು ವೇಳಾಪಟ್ಟಿಯನ್ನು ಹೊರಡಿಸಿರುತ್ತದೆ. ಅದರನ್ವಯ ದಿನಾಂಕ 25.11.2025ರಂದು ಕರಡು ಮತದಾರರ ಪಟ್ಟಿ ಪ್ರಚುರಪಡಿಸಿ ದಿನಾಂಕ 25.11.2025 ರಿಂದ 10.12.2025ರವರೆಗೆ ಆಕ್ಷೇಪಣೆಗಳನ್ನು ಆಹ್ವಾನಿಸಿ ದಿನಾಂಕ 30.12.2025ರಂದು ಅಂತಿಮ ಮತದಾರರ ಪಟ್ಟಿಯನ್ನು ಪ್ರಚೂರಪಡಿಸಲು ವೇಳಾಪಟ್ಟಿಯನ್ನು ಹೊರಡಿಸಿ ನಿರ್ದೇಶಿಸಿರುತ್ತಾರೆ ಎಂದು ಅವರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ಹಗರಿ: ಕೃಷಿ ಪರಿಕರಗಳ ಮಾರಾಟಗಾರರಿಗೆ ಡಿಪ್ಲೋಮಾ

ಮಲ್ಲಮ್ಮ ನುಡಿ ವಾರ್ತೆ

ಬಳ್ಳಾರಿ,ಅ.15–ಕೃಷಿ ಕ್ಷೇತ್ರದಲ್ಲಿ ಕೃಷಿ ಪರಿಕರ ಮಾರಾಟಗಾರರು ರೈತರ ಕೈಹಿಡಿದ ಸಲಹೆಗಾರರಾಗಿ ಬೆಳೆದು, ರೈತರ ಆದಾಯ ವೃದ್ಧಿಗೆ ಪ್ರಮುಖ ಪಾತ್ರವಹಿಸಬೇಕು ಎಂದು ಧಾರವಾಡ ಕೃಷಿ ವಿಶ್ವವಿದ್ಯಾಲಯದ ವಿಸ್ತರಣಾ ನಿರ್ದೇಶಕ ಡಾ.ಮಂಜುನಾಥ್ ಎಂ.ವಿ ಅವರು ಹೇಳಿದರು. ಬುಧವಾರ ಹಗರಿ ಕೃಷಿ ವಿಜ್ಞಾನ ಕೇಂದ್ರದಲ್ಲಿ ಕೃಷಿ ವಿಜ್ಞಾನಗಳ ವಿಶ್ವವಿದ್ಯಾಲಯ ರಾಯಚೂರು, ಮ್ಯಾನೇಜ್ ಮೆಂಟ್ ಹೈದರಾಬಾದ್, ಸಮೇತಿ (ಉತ್ತರ) ಕೃಷಿ ವಿಶ್ವವಿದ್ಯಾಲಯ ಧಾರವಾಡ, ಕೃಷಿ ಇಲಾಖೆ, ಬಳ್ಳಾರಿ, ಕೃಷಿ ತಂತ್ರಜ್ಞಾನ ಸಂಸ್ಥೆ ಬಳ್ಳಾರಿ ಘಟಕ ಮತ್ತು ಐ.ಸಿ.ಎ.ಆರ್ ಕೃಷಿ ವಿಜ್ಞಾನ ಕೇಂದ್ರ, ಹಗರಿ ಇವರ ಸಂಯುಕ್ತಾಶ್ರಯದಲ್ಲಿ ಏರ್ಪಡಿಸಿದ್ದ ಕೃಷಿ ಪರಿಕರಗಳ ಮಾರಾಟಗಾರರಿಗೆ ಒಂದು ವರ್ಷದ "ಕೃಷಿ ವಿಸ್ತರಣಾ ಸೇವೆಗಳ ಡಿಪ್ಲೋಮೋ" ಕೋರ್ಸ್‌ನ ಉದ್ಘಾಟನಾ ಸಮಾರಂಭದಲ್ಲಿ ಭಾಗವಹಿಸಿ ಅವರು ಮಾತನಾಡಿದರು.

ರಾಯಚೂರು ಕೃಷಿ ವಿಜ್ಞಾನಗಳ ವಿಶ್ವವಿದ್ಯಾಲಯಜ ವಿಸ್ತರಣಾ ನಿರ್ದೇಶಕ ಡಾ.ಅಮರೇಗೌಡ.ಎ ಅವರು ಮಾತನಾಡಿ, ಕೃಷಿ ಪರಿಕರಗಳ ವ್ಯಾಪಾರಿಗಳು ತಾಂತ್ರಿಕ ಜ್ಞಾನ ಪಡೆದು ರೈತರಿಗೆ ವಿಶ್ವಾಸಾರ್ಹ ಸಲಹೆಗಾರರಾಗಿ ಪರಿಣತಿಗೊಳ್ಳಬೇಕು ಎಂದು ಹೇಳಿದರು. ಜಂಟಿ ಕೃಷಿ ನಿರ್ದೇಶಕ ಸೋಮಸುಂದರ್ ಕೆ.ಎಮ್ ಅವರು ಮಾತನಾಡಿ ಕೃಷಿ ಪರಿಕರ ಮಾರಾಟಗಾರರು ರೈತರಿಗೆ ತಾಂತ್ರಿಕ ಮಾರ್ಗದರ್ಶನ ನೀಡುವ ಮೂಲಕ ಕೃಷಿ ಉತ್ಪಾದಕತೆ ಹೆಚ್ಚಿಸಲು ಸಹಕರಿಸಬೇಕು. ಕೋರ್ಸಿನ್ಂದ ಸ್ಥಳೀಯ ಮಟ್ಟದಲ್ಲಿ ನೈಪುಣ್ಯಯುತ ಸೇವೆಗಳು ಬೆಳೆಯಲಿವೆ ಎಂದು ಅಭಿಪ್ರಾಯಪಟ್ಟರು. ಈ ಕಾರ್ಯಕ್ರಮದಲ್ಲಿ ಜಿಲ್ಲೆಯ ವಿವಿಧ ಭಾಗಗಳಿಂದ ಒಟ್ಟು 80 ಕೃಷಿ ಪರಿಕರ ಮಾರಾಟಗಾರರು ಭಾಗವಹಿಸಿ ಕೋರ್ಸ್ನ ಉದ್ದೇಶ ಮತ್ತು ಪ್ರಯೋಜನಗಳ ಕುರಿತು ಮಾಹಿತಿ ಪಡೆದರು. ಈ ಸಂದರ್ಭದಲ್ಲಿ ಸಮೇತಿ (ಉತ್ತರ) ಧಾರವಾಡ ಡಿಎಇಎಸ್ಐ ನ ರಾಜ್ಯ ನೋಡೆಲ್ ಅಧಿಕಾರಿ ಡಾ.ಜಾಧವಎಸ್.ಎನ್., ಹಗರಿಯ ಐ.ಸಿ.ಎ.ಆರ್–ಕೃಷಿ ವಿಜ್ಞಾನ ಕೇಂದ್ರದ ಮುಖ್ಯಸ್ಥರಾದ ಹಿರಿಯ ವಿಜ್ಞಾನಿ ಡಾ.ಪಾಲಯ್ಯ.ಪಿ., ಹಗರಿ ಕೃಷಿ ಮಹಾವಿದ್ಯಾಲಯದ ಪ್ರಭಾರಿ ಅಧಿಕಾರಿ ಡಾ.ರವಿಶಂಕರ್.ಜಿ, ಪ್ರಾಧ್ಯಾಪಕ (ಪಶು ವಿಜ್ಞಾನ) ಡಾ.ರಮೇಶ್ ಬಿ.ಕೆ., ಹಿರಿಯ ವಿಜ್ಞಾನಿ (ಮಣ್ಣು ವಿಜ್ಞಾನ) ಡಾ.ರವಿ.ಎಸ್., ವಿಜ್ಞಾನಿ (ಗೃಹ ವಿಜ್ಞಾನ) ಡಾ.ರಾಜೇಶ್ವರಿ ಆರ್., ಬಸವರಾಜ್‌ಟಿ.ಎಮ್ ಸೇರಿದಂತೆ ಇತರರು ಭಾಗವಹಿಸಿದ್ದರು.

